ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಅಕ್ಟೋಬರ್ 3 ಮಂಗಳವಾರ 2023

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 44 | ಸಂಚಿಕೆ: 168 | ಪುಟಗಳು: 12

ಸುದ್ದಿ ಮತ್ತು ಫೋಟೋಗೆ: news@mysurumithra.com ಜಾಹೀರಾತು: ad@mysurumithra.com

ಮೈಸೂರು ಮಿತ್ರ ಮಂಗಳವಾರ 3 ಅಕ್ಟೋಬರ್ 2023

ಮೈಸೂರಿನ ಲಿಂಗಾಂಬುದಿ ಪಾಳ್ಯದ ಶಕ್ತಿ ಬಡಾವಣೆಯಲ್ಲಿ ನಿರ್ಮಿಸಿರುವ ಶ್ರೀ ಕಾವೇರಿ ಕೊಡಗು ಮಹಿಳಾ ಸಂಘದ ವೃದ್ಧಾಶ್ರಮ ಲೋಕಾರ್ಪಣೆ

ಮಕ್ಕಳು ಬರೀ ವಿದ್ಯಾವಂತರಾದರೆ ಸಾಲದು; ಸಂಸ್ಕಾರ ಕಲಿಯಬೇಕು

●ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ ಕಿವಿಮಾತು ●ವೃದ್ಧಾಶ್ರಮಗಳ ಸಂಖ್ಯೆ ಹೆಚ್ಚಾಗಬಾರದು; ವೃದ್ಧರು ದೇವರ ಸಮಾನ ●ದೇಶ ರಕ್ಷಣೆಗೆ ಕೊಡಗಿನ ಜನರ ಕೊಡುಗೆ ಸ್ಮರಣೀಯ; ಇವರು ಶಿಸ್ತಿಗೆ ಮಾದರಿ





ಮೈಸೂರಿನ ಲಿಂಗಾಂಬುದಿಪಾಳ್ಯದ ಶಕ್ತಿ ಬಡಾವಣೆಯಲ್ಲಿ ಶ್ರೀ ಕಾವೇರಿ ಕೊಡಗು ಮಹಿಳಾ ಸಂಘ ನೂತನವಾಗಿ ನಿರ್ಮಿಸಿರುವ ವೃದ್ಧಾಶ್ರಮವನ್ನು ಶಾಸಕ ಜಿ.ಟಿ.ದೇವೇಗೌಡರು ಉದ್ಘಾಟಿಸಿದರು. ಮಾಜಿ ಶಾಸಕ ಎಲ್.ನಾಗೇಂದ್ರ, ಕಾರ್ಪೊರೇಟರ್ ಎಂ.ಯು.ಸುಬ್ಬಯ್ಯ, ಸಂಘದ ಅಧ್ಯಕ್ಷೆ ಪೊಂಜಾಂಡ ಲಿಲ್ಲಿ ಅಪ್ಪಯ್ಯ, ಗೌರವ ಕಾರ್ಯದರ್ಶಿ ಚೊಂಡಂಡ ನಿರ್ಮಲ ಸುಬ್ರಮಣಿ ಸೇರಿದಂತೆ ಇತರರು (ಎಡಚಿತ್ರ) ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಸಭಿಕರನ್ನು (ಬಲಚಿತ್ರ) ಕಾಣಬಹುದು.

ಮೈಸೂರು,ಅ.2(ಬಿಎಲ್‌ಯು)– ಮೈಸೂರಿನ ಶ್ರೀ ಕಾವೇರಿ ಕೊಡಗು ಮಹಿಳಾ ಸಂಘವು ನಗರದ ಲಿಂಗಾಂಬುದಿ ಪಾಳ್ಯದ ಶಕ್ತಿ ಬಡಾವಣೆಯಲ್ಲಿ ನೂತನವಾಗಿ ನಿರ್ಮಿಸಿರುವ ವೃದ್ಧಾಶ್ರಮವನ್ನು ಇಂದು ಲೋಕಾರ್ಪಣೆಗೊಳಿಸಲಾಯಿತು.

ಅತ್ಯಾಧುನಿಕವಾಗಿ ಎಲ್ಲಾ ಸೌಕರ್ಯದೊಂದಿಗೆ ನಿರ್ಮಾಣ ಮಾಡಿರುವ ವೃದ್ಧಾಶ್ರಮವನ್ನು ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರು ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಗೌಡರು, ವೃದ್ಧಾಶ್ರಮಗಳ ಸಂಖ್ಯೆ ಹೆಚ್ಚುತ್ತಿರುವುದು ಒಳ್ಳೆಯ ಬೆಳವಣಿಗೆಯಲ್ಲ. ಆದರೆ ಆಶ್ರಯವಿಲ್ಲದ ವೃದ್ಧರಿಗೆ ವೃದ್ಧಾಶ್ರಮಗಳು ಅತ್ಯವಶ್ಯಕ. ದೇವರ ಪೂಜಿಸುವ ಮೊದಲು ಮಕ್ಕಳು ತಂದೆ–ತಾಯಿಯೇ ಮೊದಲ ದೇವರೆಂದು ಪೂಜಿಸಬೇಕು. ಮಕ್ಕಳು ಕೇವಲ ವಿದ್ಯಾವಂತರಾದರೆ ಸಾಲದು, ವಿದ್ಯೆಯ ಜೊತೆಗೆ ಸಂಸ್ಕಾರ ಕಲಿಯಬೇಕು. ತಂದೆ ತಾಯಿಯ ಸೇವೆ ಮಾಡುವ ಮೂಲಕ ಮೋಕ್ಷ ಸಾಧನೆ ಮಾಡಬೇಕು. ವೃದ್ಧರು ದೇವರಿಗೆ ಸಮಾನ. ವೃದ್ಧರ ಸೇವೆ ಮಾಡಿದರೆ ಅದು ಪುಣ್ಯದ ಕೆಲಸ ಎಂದು ಅರಿಯಬೇಕು ಎಂದು ಕಿವಿಮಾತು ಹೇಳಿದರು.

ಈ ವೃದ್ಧಾಶ್ರಮ ನಿರ್ಮಾಣದಲ್ಲಿ ಪಾರ್ವತಿ ಕಾರ್ಯಪ್ಪ ಅವರ ಶ್ರಮ ಸ್ಮರಣೀಯವಾಗಿದೆ. ವೃದ್ಧಾಶ್ರಮ ನಿರ್ಮಾಣ ಮಾಡಿರುವ ಈ ಜಾಗವನ್ನು ಮುಡಾ ನೀಡಿದೆ. ಈ ನಿವೇಶನದ ಹಂಚಿಕೆಯ ತರುವಾಯ ಮುಡಾ ವತಿಯಿಂದ ಒಂದೇ ಒಂದು ಜಾಗ ಹಂಚಿಕೆಯಾಗಿಲ್ಲ. ಈಗ ನಿರ್ಮಾಣವಾಗಿರುವ ವೃದ್ಧಾಶ್ರಮವನ್ನು ಅಚ್ಚುಕಟ್ಟಾಗಿ ನಿರ್ವಹಣೆ ಮಾಡಿಕೊಂಡು ಹೋಗುವಂತೆ ಜಿ.ಟಿ.ದೇವೇಗೌಡರು ಸಲಹೆ ನೀಡಿದರು.

ಶಾಸಕರ ನಿಧಿಯಿಂದ ಈ ವೃದ್ಧಾಶ್ರಮ ನಿರ್ಮಾಣಕ್ಕೆ 8 ಲಕ್ಷ ರೂಪಾಯಿ ನೀಡಿದ್ದು, ಅವಶ್ಯವಿದ್ದರೆ ಇದರ ಅಭಿವೃದ್ಧಿಗೆ ಇನ್ನು ನನ್ನ ಕೈಲಾದ ಸಹಾಯ ಮಾಡುತ್ತೇನೆ ಎಂದು ಜಿಟಿಡಿ ಭರವಸೆ ನೀಡಿದರು.

ಕೊಡಗಿನ ಜನರಲ್ಲಿ ಸಂಸ್ಕಾರವಿದೆ: ಕೊಡಗಿನ ಜನರಲ್ಲಿ ಸಂಸ್ಕಾರವಿದೆ. ಹಿರಿಯರನ್ನು ಕಂಡರೆ ಕಾಲಿಗೆ ನಮಸ್ಕಾರ ಮಾಡುವ ಸಂಸ್ಕೃತಿಯನ್ನು ಮೈಗೂಡಿಸಿಕೊಂಡು ಮಾದರಿಯಾಗಿದ್ದಾರೆ. ಕೊಡಗಿನ ಜನರ ಶಿಸ್ತು, ಒಗ್ಗಟ್ಟು ಹಾಗೂ ಅಭಿಮಾನ ಪ್ರಶಂಸನೀಯ ಎಂದು ಹೇಳಿದರು.

ದೇಶ ರಕ್ಷಣೆಯಲ್ಲಿ ಕೊಡಗಿನವರ ಪಾತ್ರ ಬಹುಮುಖ್ಯವಾಗಿದೆ. ದೇಶಕ್ಕೆ ವೀರ ಯೋಧರನ್ನು ಕೊಡುಗೆಯಾಗಿ ನೀಡಿದ್ದಾರೆ ಎಂದರು.

ತರುವಾಯ ಮಾತನಾಡಿದ ಚಾಮರಾಜ ಕ್ಷೇತ್ರದ ಮಾಜಿ ಶಾಸಕ ಎಲ್.ನಾಗೇಂದ್ರ, ವೃದ್ಧಾಶ್ರಮ ಸೇರಿದಂತೆ ಹಲವು ರೀತಿಯ ಸಮಾಜಮುಖಿ ಕೆಲಸ ಮಾಡಿದಾಗ ಎಲ್ಲರೂ ಒತ್ತಾಸೆಯಾಗಿ ನಿಲ್ಲಬೇಕು. ನಾನು ಬಹಳಷ್ಟು ವೃದ್ಧಾಶ್ರಮ ನೋಡಿದ್ದೇನೆ. ಆದರೆ ಇಂತಹ ಅತ್ಯಾಧುನಿಕವಾದ ಹೈಟೆಕ್ ವೃದ್ಧಾಶ್ರಮ ನೋಡುತ್ತಿರುವುದು ಇದೇ ಮೊದಲು ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ವೃದ್ಧಾಶ್ರಮ ನಿರ್ಮಾಣಕ್ಕೆ ನನ್ನ ಕೈಲಾದ ಸಹಾಯ ಮಾಡಿದ್ದೇನೆ. ಈಗ ಈ ವೃದ್ಧಾಶ್ರಮದ ನಿರ್ವಹಣೆಗೆ ಮತ್ತೆ ಎರಡು ಲಕ್ಷ ರೂಪಾಯಿ ನೀಡುತ್ತೇನೆ ಎಂದು ಭರವಸೆ ನೀಡಿದರು.

ದೇಶದ ರಕ್ಷಣೆಯಲ್ಲಿ ಕೊಡಗಿನ ಜನರ ಕೊಡುಗೆಯನ್ನು ಯಾರೂ ಮರೆಯುವಂತಿಲ್ಲ. ಮನೆಗೆ ಒಬ್ಬರಂತೆ ದೇಶ ರಕ್ಷಣೆಗೆ ಕೊಡಗಿನ ಜನರು ನಿಂತಿದ್ದಾರೆ. ದೇಶ ಸೇವೆ ಮಾಡುವ ಶಿಸ್ತಿಗೆ ಮಾದರಿಯಾದ ಕೊಡಗಿನ ಜನರು ದೇಶದ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸುತ್ತಾರೆ ಎಂದು ನಾಗೇಂದ್ರ ಹೇಳಿದರು.

ಇದೇ ವೇಳೆ ಮಾತನಾಡಿದ ಮೈಸೂರಿನ ವಿಜಯನಗರದ ಕಾರ್ಪೊರೇಟರ್ ಎಂ.ಯು.ಸುಬ್ಬಯ್ಯ, ವೃದ್ಧಾಶ್ರಮಗಳ ಸಂಖ್ಯೆ ಹೆಚ್ಚಾಗಬಾರದು. ಆದರೆ ಅನಿವಾರ್ಯವಾಗಿ ವೃದ್ಧಾಶ್ರಮ ನಿರ್ಮಾಣ ಮಾಡುವ ಪರಿಸ್ಥಿತಿ ಬಂದಿದೆ. ವೃದ್ಧಾಶ್ರಮಗಳ ಸಂಖ್ಯೆ ಹೆಚ್ಚಾಗಬಾರದೆಂದರೆ ಮಕ್ಕಳು ತಂದೆ–ತಾಯಿಯನ್ನು ಪ್ರೀತಿಯಿಂದ ನೋಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಈ ವೃದ್ಧಾಶ್ರಮವನ್ನು ಯೋಜನಾ ಬದ್ಧವಾಗಿ ನಿರ್ಮಿಸಲಾಗಿದೆ. ಇದರ ನಿರ್ಮಾಣ ಕಾರ್ಯದಲ್ಲಿ ಶ್ರೀ ಕಾವೇರಿ ಕೊಡಗು ಮಹಿಳಾ ಸಂಘದ ಬಹಳಷ್ಟು ಮಹಿಳೆಯರು ನಿಸ್ವಾರ್ಥ ಸೇವೆ ಮಾಡಿದ್ದಾರೆ ಎಂದು ಕಟ್ಟಡದ ಇಂಜಿನಿಯರ್ ದಿಲೀಪ್ ತಿಳಿಸಿದರು.

ತರುವಾಯ ಮಾತನಾಡಿದ ಶ್ರೀ ಕಾವೇರಿ ಕೊಡಗು ಮಹಿಳಾ ಸಂಘದ ಅಧ್ಯಕ್ಷೆ ಪೊಂಜಾಂಡ ಲಿಲ್ಲಿ ಅಪ್ಪಯ್ಯ, ವೃದ್ಧಾಶ್ರಮ ನಿರ್ಮಾಣಕ್ಕೆ ಧನ ಸಹಾಯ ಮಾಡಿದ ದಾನಿಗಳ ಕೊಡುಗೆಯನ್ನು ಸ್ಮರಿಸಿದರು. ಸಂಘದ ಉಪಾಧ್ಯಕ್ಷೆ ಕೊಲ್ಲಿರ ಬೊಳ್ಳಮ್ಮ ಕುಟ್ಟಪ್ಪ, ಗೌರವ ಕಾರ್ಯದರ್ಶಿ ಚೆಂಡಂಡ ನಿರ್ಮಲ ಸುಬ್ರಮಣಿ, ಕಾವ್ಯ ಕುಟ್ಟಪ್ಪ, ಸರಸು ನಾಣಯ್ಯ ಸೇರಿದಂತೆ ಹಲವರು ಉದ್ಘಾಟನೆ ವೇಳೆ ಉಪಸ್ಥಿತರಿದ್ದರು.

ಕೆಬಿಜಿಯವರ ಬರವಣಿಗೆಯಲ್ಲಿ ಅಭಿವೃದ್ಧಿಯ ಮುನ್ನೋಟವಿದೆ

ಮೂಲತಃ ಕೊಡಗಿನವರೇ ಆದ 'ಮೈಸೂರು ಮಿತ್ರ' ಹಾಗೂ 'ಸ್ಟಾರ್ ಆಫ್ ಮೈಸೂರ್' ಪತ್ರಿಕೆ ಸಂಸ್ಥಾಪಕ ಸಂಪಾದಕ ಕೆ.ಬಿ. ಗಣಪತಿ ಅವರು ತಮ್ಮದೇ ಆದ ವಿಶಿಷ್ಟ ಬರವಣಿಗೆ ಮೂಲಕ ಪತ್ರಿಕಾರಂಗದಲ್ಲಿ ವಿಶಿಷ್ಟ ಛಾಪು ಮೂಡಿಸಿದ್ದಾರೆ. ಅವರ ವಿದ್ವತ್ ವರ್ಣನೆಗೂ ಮೀರಿದೆ. ಕೆ.ಬಿ.ಗಣಪತಿಯವರ ಬರವಣಿಗೆಯಲ್ಲಿ ಅಭಿವೃದ್ಧಿಯ ಮುನ್ನೋಟವಿರುತ್ತದೆ. ದೇಶ ಹಾಗೂ ರಾಜ್ಯದ ಅಭಿವೃದ್ಧಿಗೆ ಪೂರಕವಾದ ಬರವಣಿಗೆ ಮೂಲಕ ಸಮಾಜವನ್ನು ಜಾಗೃತಗೊಳಿಸುತ್ತಾರೆ. ಈ ಮೂಲಕ ಅವರು ಮೇರು ವ್ಯಕ್ತಿತ್ವ ಹೊಂದಿದ್ದಾರೆ ಎಂದು ಇದೇ ವೇಳೆ ಜಿ.ಟಿ.ದೇವೇಗೌಡರು ಕೆ.ಬಿ.ಗಣಪತಿ ಅವರ ಬಗ್ಗೆ ತುಂಬು ಹೃದಯದ ಮಾತುಗಳನ್ನಾಡಿದರು.

ಯೋಗಾಸನದಿಂದ ದೈಹಿಕ, ಮಾನಸಿಕ ಆರೋಗ್ಯ ಪ್ರಾಪ್ತಿ

ವಿಧಾನಪರಿಷತ್ ಸದಸ್ಯ ಡಾ.ತಿಮ್ಮಯ್ಯ ಅಭಿಮತ



ಮೈಸೂರು, ಅ. 2–ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಹಾಗೂ ಹಿಮಾಲಯ ಪ್ರತಿಷ್ಠಾನ ಸಂಯುಕ್ತ ಆಶ್ರಯದಲ್ಲಿ ಮಹಾಯೋಗಿ ಶ್ರೀನಿವಾಸ ಅರ್ಕ ಅವರ ಜನ್ಮದಿನಾಚರಣೆ ಹಾಗೂ ದಸರಾ ಅಂಗವಾಗಿ ರಾಜ್ಯ ಮಟ್ಟದ ಮುಕ್ತ ಯೋಗಾಸನ ಸ್ಪರ್ಧೆಯನ್ನು ಕನ್ನಡ ಸಾಹಿತ್ಯ ಭವನದಲ್ಲಿ ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ವಿಧಾನಪರಿಷತ್ ಸದಸ್ಯ ಡಾ. ಡಿ.ತಿಮ್ಮಯ್ಯ, ಯೋಗ ಎಂಬ ಪದಕ್ಕೆ ವಿಶಾಲವಾದ ಅರ್ಥವಿದೆ. ಯೋಗ್ಯತೆ, ಸುಯೋಗ, ಯೋಗಾ ಯೋಗ ಇವೆಲ್ಲವೂ ಯೋಗ ಪದದ ವ್ಯಾಪ್ತಿಯಲ್ಲಿಯೇ ಬರುತ್ತದೆ. ನಿತ್ಯ ಯೋಗ ಮಾಡುವುದರಿಂದ ಉತ್ತಮ ಆರೋಗ್ಯವನ್ನು ಸಾಧಿಸಬಹುದು ಎಂದರು.

ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಮಹಾಯೋಗಿ ಶ್ರೀನಿವಾಸ ಅರ್ಕ ಅವರು, ಪ್ರತಿಯೊಬ್ಬ ಮನುಷ್ಯನು ಯೋಗಭ್ಯಾಸ ಮಾಡಲು ಅರ್ಹ ಎಂದರಲ್ಲದೆ ನಮ್ಮ ಮೇಲೆಯೇ ನಾವು ಪ್ರಯೋಗ ಮಾಡುವುದರಿಂದ ಅದ್ಭುತ ರಹಸ್ಯಗಳು ಪ್ರಾಪ್ತವಾಗುತ್ತವೆ. ಮಾನಸಿಕ ಶಕ್ತಿ, ಏಕಾಗ್ರತೆಯ ಸಾಧನೆಯ ರಹಸ್ಯಗಳ ಬಗ್ಗೆ ತಿಳಿಸಿಕೊಟ್ಟರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್ ಅಧ್ಯಕ್ಷತೆ ವಹಿಸಿದ್ದರು. ಇದೇ ಸಂದರ್ಭ ರಾಜ್ಯ ರೈತ ಕಲ್ಯಾಣ ಸಂಘದ ಅಧ್ಯಕ್ಷ ಭೂಮಿಪುತ್ರ ಚಂದನ್‌ಗೌಡ ಅವರಿಗೆ ಮಣ್ಣಿನ ಮಗ ಪ್ರಶಸ್ತಿ ನೀಡಿ, ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಮಾಜಿ ಸಂಸದ ಸಿ.ಎಚ್.ವಿಜಯಶಂಕರ್, ಹಿರಿಯ ಸಮಾಜಸೇವಕ ಡಾ.ಕೆ.ರಘುರಾಮ ವಾಜಪೇಯಿ, ಹಿರಿಯ ಸಂಸ್ಕೃತ ವಿದುಷಿ ಡಾ. ಕೆ.ಲೀಲಾ ಪ್ರಕಾಶ್, ಮೈಸೂರು ಯೋಗ ಸಂಸ್ಥೆಗಳ ಅಧ್ಯಕ್ಷರಾದ ಯೋಗ ಪ್ರಕಾಶ್ ಹಾಗೂ ಬಿಪಿಮೂರ್ತಿ, ಹಿಮಾಲಯ ಪ್ರತಿಷ್ಠಾನದ ಅಧ್ಯಕ್ಷ ಎನ್.ಅನಂತ, ಸಂಚಾಲಕ ಎಂ.ವಿ.ನಾಗೇಂದ್ರಬಾಬು, ಹರ್ಷವರ್ಧನ ಉಪಸ್ಥಿತರಿದ್ದರು. ನಂತರ ನಡೆದ ಮುಕ್ತ ಯೋಗಾಸನ ಸ್ಪರ್ಧೆಯಲ್ಲಿ ಹಿರಿಯಕ್ಕೂ ಹೆಚ್ಚಿನ ಸ್ಪರ್ಧಿಗಳು ಪಾಲ್ಗೊಂಡಿದ್ದರು.

ಜಿಲ್ಲಾ ಕಾಂಗ್ರೆಸ್ ಭವನದಲ್ಲಿ ಮಹಾತ್ಮ ಗಾಂಧಿ, ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿ ಆಚರಣೆ

ಮೈಸೂರು, ಅ.2(ಬಿಎಲ್‌ಯು)– ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಮಹಾತ್ಮ ಗಾಂಧಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿ ಕಾರ್ಯಕ್ರಮ ಅರ್ಥಪೂರ್ಣವಾಗಿ ನಡೆಯಿತು.

ವಿಧಾನಪರಿಷತ್ ಮಾಜಿ ಸಭಾಪತಿ ಸುದರ್ಶನ್, ಶಾಸಕ ಕೆ.ಹರೀಶ್‌ಗೌಡ, ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಜಿಲ್ಲಾಧ್ಯಕ್ಷ ಡಾ.ವಿಜಯಕುಮಾರ್ ಸೇರಿದಂತೆ ಇತರರು ಮಹಾತ್ಮ ಗಾಂಧಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು. ಮಹಾತ್ಮ ಗಾಂಧಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಪ್ರಾಮಾಣಿಕತೆ ಹಾಗೂ ತತ್ವಾದರ್ಶವನ್ನು ಎಲ್ಲರೂ ಅನುಸರಿಸಬೇಕು ಎಂದು ಸುದರ್ಶನ್ ಸಲಹೆ ನೀಡಿದರು. ಈ ವೇಳೆ ಭಕ್ತಿ ಗೀತೆ, ಭಜನೆ ಸೇರಿದಂತೆ ಇತರೆ ಕಾರ್ಯಕ್ರಮಗಳು ನಡೆ ಯಿತು. ಮಾಜಿ ಮೇಯರ್‌ಗಳು, ನಗರಪಾಲಿಕೆ ಸದಸ್ಯರು ಸೇರಿದಂತೆ ನೂರಾರು ಕಾಂಗ್ರೆಸ್ ಕಾರ್ಯಕರ್ತರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಡಾ. ಶ್ರೀ ಪ್ರಣವಾನಂದ ಸ್ವಾಮೀಜಿ ಬಗ್ಗೆ ಅವಹೇಳನಕಾರಿ ಹೇಳಿಕೆ

ಸಚಿವ ಮಧು ಬಂಗಾರಪ್ಪ, ತಿಮ್ಮೇಗೌಡರ ವಿರುದ್ಧ ಪ್ರತಿಭಟನೆ

ಮೈಸೂರು,ಅ.2(ಎಂಟಿವೈ)–ಈಡಿಗ ಸಮುದಾಯದ ಸ್ವಾಮೀಜಿ ಡಾ. ಶ್ರೀ ಪ್ರಣವಾನಂದ ಸ್ವಾಮೀಜಿ ಅವರ ವಿರುದ್ಧ ಸಚಿವ ಮಧು ಬಂಗಾರಪ್ಪ ಹಾಗೂ ಪ್ರದೇಶ ಆರ್ಯ ಈಡಿಗ ಸಂಘದ ಅಧ್ಯಕ್ಷ ತಿಮ್ಮೇಗೌಡ ಅಸಂಬದ್ಧ ಹೇಳಿಕೆ ನೀಡಿದ್ದಾರೆ ಎಂದು ಆರೋಪಿಸಿ, ರಾಷ್ಟ್ರೀಯ ಈಡಿಗ ಮಹಾಮಂಡಳಿ ಮೈಸೂರು ಜಿಲ್ಲಾ ಸಮಿತಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ಮೈಸೂರು ಅರಮನೆಯ ಕೋಟೆ ಆಂಜನೇಯಸ್ವಾಮಿ ದೇವಾಲಯದ ಮುಂಭಾಗ ಸೋಮವಾರ ನಡೆದ ಪ್ರತಿಭಟನೆಯಲ್ಲಿ ಈಡಿಗ ಸಮುದಾಯದ ಕಾರ್ಯಕರ್ತರು, ಶಿಕ್ಷಣ ಸಚಿವ ಮಧು ಬಂಗಾರಪ್ಪ ಹಾಗೂ ಪ್ರದೇಶ ಆರ್ಯ ಈಡಿಗ ಸಂಘದ ಕರ್ನಾಟಕ ಅಧ್ಯಕ್ಷ ತಿಮ್ಮೇಗೌಡ, ಸಮುದಾಯದ ಸ್ವಾಮೀಜಿ ಶ್ರೀ ಪ್ರಣವಾನಂದ ಸ್ವಾಮೀಜಿ ಅವರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ್ದಾರೆ. ನಮ್ಮ ಸಮುದಾಯಕ್ಕೆ ಸೇರಿದ ಸ್ವಾಮೀಜಿಯೇ ಅಲ್ಲ ಎಂದು ಸಮಾಜದ ದಿಕ್ಕುತಪ್ಪಿಸುತ್ತಿದ್ದಾರೆ. ಕೂಡಲೇ ಸಚಿವರು ಹಾಗೂ ಸಂಘದ ಅಧ್ಯಕ್ಷರು ಕ್ಷಮೆಯಾಚಿಸಬೇಕು. ಇಲ್ಲದಿದ್ದರೆ ಹೋರಾಟ ಮುಂದುವರೆಸುವುದಾಗಿ ಎಚ್ಚರಿಕೆ ನೀಡಿದರು. ಪ್ರತಿಭಟನೆಯಲ್ಲಿ ಸಮುದಾಯದ ಮುಖಂಡ ವಸಂತ್‌ಕುಮಾರ್ ಸೇರಿದಂತೆ ಹಲವು ಮಂದಿ ಪಾಲ್ಗೊಂಡಿದ್ದರು.

ತಮಿಳುನಾಡಿಗೆ ನೀರು ಬಿಡುಗಡೆ ವಿರೋಧಿಸಿ ಕಾವೇರಿ ಕ್ರಿಯಾ ಸಮಿತಿಯಿಂದ ಪ್ರತಿಭಟನೆ

ಮೇಕೆದಾಟು ಯೋಜನೆಯೇ ವಿವಾದಕ್ಕೆ ಪರಿಹಾರ: ಪ್ರಸಾದ್



ಮೈಸೂರು, ಅ.2(ಬಿಎಲ್‌ಯು)– ತಮಿಳುನಾಡಿಗೆ ಕಾವೇರಿ ನೀರು ಬಿಡುತ್ತಿರುವುದನ್ನು ವಿರೋಧಿಸಿ ಕಾವೇರಿ ಕ್ರಿಯಾ ಸಮಿತಿ ನೇತೃತ್ವದಲ್ಲಿ ಮೈಸೂರಿನ ಪುರಭವನದ ಬಳಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದ ಸಂಸದ ವಿ.ಶ್ರೀನಿವಾಸಪ್ರಸಾದ್ ಮಾತನಾಡಿ, ಮೇಕೆದಾಟು ಯೋಜನೆ ಅನುಷ್ಠಾನಗೊಂಡರೆ ಕಾವೇರಿ ಸಮಸ್ಯೆಗೆ ಪರಿಹಾರ ಸಿಗುತ್ತದೆ. ತಮಿಳುನಾಡಿಗೆ ಯಥೇಚ್ಛವಾಗಿ ಹರಿದು ಹೋಗುತ್ತಿರುವ ನೀರು ನಮ್ಮಲ್ಲಿ ಶೇಖರಣೆಯಾಗುತ್ತದೆ ಎಂದರು.

ಕಾವೇರಿ ವಿಚಾರದಲ್ಲಿ ಮಾಜಿ ಸಿಎಂ ಯಡಿಯೂರಪ್ಪ ಬಸವರಾಜ ಬೊಮ್ಮಾಯಿ ನೇತೃತ್ವದಲ್ಲಿ ನಾವೆಲ್ಲಾ ಹೋರಾಟ ಮಾಡಿದ್ದೇವೆ. ಹೀಗಿರುವಾಗ ಕರ್ನಾಟಕದ ಸಂಸದರು ಧ್ವನಿ ಎತ್ತುತ್ತಿಲ್ಲ ಎಂಬ ಟೀಕೆ ಸರಿಯಲ್ಲ. ರಾಜ್ಯದ ಹಿತರಕ್ಷಣೆ ವಿಚಾರದಲ್ಲಿ ಸಿದ್ದರಾಮಯ್ಯ ಅವರಿಂದ ಪಾಠ ಕಲಿಯುವ ಅವಶ್ಯಕತೆ ಇಲ್ಲ ಎಂದು ಶ್ರೀನಿವಾಸಪ್ರಸಾದ್ ತಿರುಗೇಟು ನೀಡಿದರು.

ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿಯನ್ನು ಈ ವೇಳೆ ಸಮರ್ಥನೆ ಮಾಡಿಕೊಂಡ ಶ್ರೀನಿವಾಸ ಪ್ರಸಾದ್, ಕಾಂಗ್ರೆಸ್‌ನವರು ದೇಶದಲ್ಲಿ 30 ಪಕ್ಷಗಳ ಜೊತೆ ಮೈತ್ರಿ ಮಾಡಿಕೊಂಡಿದ್ದಾರೆ. ಹೀಗಿರುವಾಗ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿಯಾದರೆ ತಪ್ಪೇನು ಎಂದು ಪ್ರಶ್ನಿಸಿದರು.

ಕಾಂಗ್ರೆಸ್ ಸರ್ಕಾರದಲ್ಲಿ ಲಿಂಗಾಯಿತರ ಕಡೆಗಣನೆ ಆಗುತ್ತಿದೆ ಎಂಬ ಶಾಮನೂರು ಶಿವಶಂಕರಪ್ಪ ಅವರ ಆರೋಪ ಗಂಭೀರವಾಗಿದೆ. ಹಿರಿಯರಾದ ಶಾಮನೂರು ಶಿವಶಂಕರಪ್ಪ ಅವರ ಈ ಮಾತು ಆಘಾತಕಾರಿಯಾಗಿದೆ ಎಂದು ಅಭಿಪ್ರಾಯಪಟ್ಟರು.

ಕಾವೇರಿ ಕ್ರಿಯಾ ಸಮಿತಿ ಗೌರವಾಧ್ಯಕ್ಷರೂ ಆದ ಶಾಸಕ ಸಿ.ಎನ್.ಮಂಜೇಗೌಡ, ಕರ್ನಾಟಕ ಕಾವಲು ಪಡೆ ಅಧ್ಯಕ್ಷ ಮೋಹನ್‌ಕುಮಾರ್‌ಗೌಡ, ಕನ್ನಡಪರ ಹೋರಾಟಗಾರರಾದ ಮೂಗೂರು ನಂಜುಂಡಸ್ವಾಮಿ, ಎಸ್.ಬಾಲಕೃಷ್ಣ ಸೇರಿದಂತೆ ಇತರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ನೀರಿನ ಮಟ್ಟ

ಕೆಆರ್‌ಎಸ್ ಅಣೆಕಟ್ಟು	ಕಬಿನಿ ಅಣೆಕಟ್ಟು	ಹಾರಂಗಿ ಅಣೆಕಟ್ಟು
ಗರಿಷ್ಠ ಮಟ್ಟ 124.80 ಅಡಿ	ಗರಿಷ್ಠ ಮಟ್ಟ 2,284.00 ಅಡಿ	ಗರಿಷ್ಠ ಮಟ್ಟ 2,859.00 ಅಡಿ
ಇಂದಿನ ಮಟ್ಟ 98.40 ಅಡಿ	ಇಂದಿನ ಮಟ್ಟ 2,275.00 ಅಡಿ	ಇಂದಿನ ಮಟ್ಟ 2,854.88 ಅಡಿ
ಹಿಂದಿನ ವರ್ಷದ ಮಟ್ಟ 123.56 ಅಡಿ	ಹಿಂದಿನ ವರ್ಷದ ಮಟ್ಟ 2,282.58 ಅಡಿ	ಹಿಂದಿನ ವರ್ಷದ ಮಟ್ಟ 2,855.69 ಅಡಿ
ನಿನ್ನೆಯ ಮಟ್ಟ 98.00 ಅಡಿ	ನಿನ್ನೆಯ ಮಟ್ಟ 2,273.85 ಅಡಿ	ನಿನ್ನೆಯ ಮಟ್ಟ 2,854.46 ಅಡಿ
ಇಂದಿನ ಒಳಹರಿವು 5,811 ಕ್ಯುಸೆಕ್	ಇಂದಿನ ಒಳಹರಿವು 8,300 ಕ್ಯುಸೆಕ್	ಇಂದಿನ ಒಳಹರಿವು 3,077 ಕ್ಯುಸೆಕ್
ಇಂದಿನ ಹೊರಹರಿವು 2,183 ಕ್ಯುಸೆಕ್	ಇಂದಿನ ಹೊರಹರಿವು 1,000 ಕ್ಯುಸೆಕ್	ಇಂದಿನ ಹೊರಹರಿವು 1,400 ಕ್ಯುಸೆಕ್

ಅ.8, ಶ್ರೀ ಕಾವೇರಿ ಕೊಡವ ಅಸೋಸಿಯೇಷನ್ ಮೈಸೂರು ಪೂರ್ವದ ವಾರ್ಷಿಕ ಮಹಾಸಭೆ

ಮೈಸೂರು, ಅ. 2–ಮೈಸೂರಿನ ವಿದ್ಯಾಶಂಕರ ಬಡಾವಣೆಯಲ್ಲಿರುವ ಶ್ರೀ ಕಾವೇರಿ ಕೊಡವ ಅಸೋಸಿಯೇಷನ್, ಮೈಸೂರು ಪೂರ್ವದ ವಾರ್ಷಿಕ ಮಹಾಸಭೆ ಅ.8ರಂದು ಬೆಳಗ್ಗೆ 9 ಗಂಟೆಗೆ ನಡೆಯಲಿದೆ. ವಿದ್ಯಾಶಂಕರ ಬಡಾವಣೆಯ ಸಿಎ ನಂ.4ರಲ್ಲಿ ನಡೆಯಲಿರುವ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ಪುಲಿಯಂಡ ಎಸ್.ದೇವಯ್ಯ ವಹಿಸಲಿದ್ದಾರೆ ಎಂದು ಸಂಘದ ಗೌರವ ಕಾರ್ಯದರ್ಶಿ ಕಡೇಮಾಡ ಎಂ.ಬೆಳ್ಯಪ್ಪ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಮೈಸೂರಿನ ಹಿನಕಲ್‌ನಲ್ಲಿರುವ ಹಿರಿಯ ಜೀವಿಗಳ ಆಶ್ರಯ ತಾಣ ವಾತ್ಸಲ್ಯ ಸೇವಾಶ್ರಮದಲ್ಲಿ ವಿಶ್ವ ಹಿರಿಯ ನಾಗರಿಕರ ದಿನದ ಅಂಗವಾಗಿ ಹಿರಿಯ ಜೀವಿಗಳಿಗೆ ಉಚಿತ ಆರೋಗ್ಯ ತಪಾಸಣೆ, ನಂತರ ಸಿಹಿ ವಿತರಿಸಲಾಯಿತು. ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ಎ.ಸಿ.ರವಿಕುಮಾರ್, ಶಶಿಕಲಾ, ಜಯಕುಮಾರಿ, ವಿಜಯಲಕ್ಷ್ಮಿ, ಜಯಲಕ್ಷ್ಮಿ, ಮಂಜುಳ ಅವರನ್ನು ಚಿತ್ರದಲ್ಲಿ ಕಾಣಬಹುದು.

ನಿಧನ

ದೀಪಕ್‌ರಾಜ್



ಮೈಸೂರು,ಅ.2–ಮೈಸೂರಿನ ದಟ್ಟಗಳ್ಳಿ ನಿವಾಸಿ, ಜಿಲ್ಲಾ ಕಾಂಗ್ರೆಸ್‌ನ ಮಾಜಿ ಪ್ರಧಾನ ಕಾರ್ಯದರ್ಶಿ ದೀಪಕ್ ರಾಜ್(50) ಇಂದು ನಿಧನರಾದರು. ಮೃತರು ಪತ್ನಿ, ಪುತ್ರ, ಪುತ್ರಿ ಹಾಗೂ ಅಪಾರ ಬಂಧುವರ್ಗ ಅಗಲಿದ್ದು, ವಿಜಯನಗರ 4ನೇ ಹಂತದಲ್ಲಿರುವ ಮುಕ್ತಿಧಾಮದಲ್ಲಿ ಇಂದು ಸಂಜೆ ಅಂತ್ಯಕ್ರಿಯೆ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ. ಇವರ ನಿಧನಕ್ಕೆ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಶಾಸಕ ಕೆ.ಹರೀಶ್‌ಗೌಡ, ಮಾಜಿ ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್ ಸಂತಾಪ ಸೂಚಿಸಿದ್ದಾರೆ. ನಗರ ಕಾಂಗ್ರೆಸ್ ಕಚೇರಿಯಲ್ಲಿ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

3.10.2023 ಮಂಗಳವಾರ, ಮಳೆ ನಕ್ಷತ್ರ: ಹಸ್ತ, 28.09.2023 ರಿಂದ 10.10.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ದಕ್ಷಿಣಾಯನ, ವರ್ಷ ಋತು, ಭಾದ್ರಪದ ಮಾಸ, ಕೃಷ್ಣ ಪಕ್ಷ,
ತಿಥಿ: ಚೌತಿ, ನಕ್ಷತ್ರ: ಕೃತ್ತಿಕ, ರಾಹುಕಾಲ: ಮಧ್ಯಾಹ್ನ 3 ರಿಂದ 4.30ರವರೆಗೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಶ್ರದ್ಧೆಯಶಿಲ್ಪ, ಲೇಖನ ಮತ್ತು ಪ್ರಸ್ತುತಿ– ಟಿ.ಎಸ್. ಗೋಪಾಲ್, 6.40 ಪದಸಂಸ್ಕೃತಿ, ಪ್ರಸ್ತುತಿ–ಡಾ. ಟಿ.ವಿ. ಸತ್ಯನಾರಾಯಣ,7.15 ಕಾದಂಬರಿ ವಿಹಾರ–ನಾ ಕಸ್ತೂರಿ ಅವರ ರಂಗನಾಯಕಿ ಕಾದಂಬರಿಯ ಬಾನುಲಿ ಓದು, ಪ್ರಸ್ತುತಿ– ಉಮೇಶ್ ಎಸ್.ಎಸ್., 10.00 ಹಂಸಿನಿ ನಾಗೇಂದ್ರ –ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ

ಮಧ್ಯಾಹ್ನ: 12.05ವನಿತಾ ವಿಹಾರ, 12.30 ದೇವರನಾಮ, 12.45 ಭಾರತೀಯ ಕಾನೂನುಗಳ ಮರುವೀಕ್ಷಣೆ, ಮಾತನಾಡುತ್ತಾರೆ ಹಿರಿಯ ವಕೀಲರಾದ ಸಿ.ವಿ. ಕೇಶವಮೂರ್ತಿ, 1.20 ಭಾವಗೀತೆಗಳು, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 3.00 ಟಿ.ಎನ್.ಅಶೋಕ್–ಹಾಡುಗಾರಿಕೆ, 4.00ಕಥಾಕಾಲಕ್ಷೇಪ "ವೀರ ಬಭ್ರುವಾಹನ", ವಿದ್ವಾನ್ ಆರ್.ಗುರುರಾಜುಲು ನಾಯ್ಡು, 6.50 ಕೃಷಿರಂಗ–ಸಮಗ್ರ ಕೃಷಿಯ ಪ್ರಾಮುಖ್ಯತೆ ಕುರಿತು ಹೆಚ್.ವಿ. ಪ್ರಕಾಶ್ ಅವರೊಂದಿಗೆ ಸಂದರ್ಶನ, 9.30 ಚೀನಾದಲ್ಲಿ ನಡೆಯುತ್ತಿರುವ 19ನೇ ಏಷ್ಯನ್ ಕ್ರೀಡಾಕೂಟದ ದಿನದಾಟದ ವರದಿ, 10.00 ಗಮಕ ವ್ಯಾಖ್ಯಾನ, 10.30 ಸವಿನೆನಪು

■ **ಅಭಿವೃದ್ಧಿ ಆಯುಕ್ತರು (ಕೈಮಗ್ಗ), ಜವಳಿ ಮಂತ್ರಾಲಯ, ಕೈಮಗ್ಗ ಮತ್ತು ಜವಳಿ ಇಲಾಖೆ, ಕರ್ನಾಟಕ ರಾಜ್ಯ ಸಹಕಾರಿ ಕೈಮಗ್ಗ ನೇಕಾರರ ಮಹಾ ಮಂಡಳಿ ನಿಯಮಿತ, ಜೆಎಸ್‌ಎಸ್ ಮೈಸೂರು ಅರ್ಬನ್ ಹಾತ್** : ವಿಶೇಷ ಕೈಮಗ್ಗ ಮೇಳ, ಸಂಸ್ಕೃತಿ–ಹತ್‌ಕರ್ಗ್–2023, ಕೈಮಗ್ಗ ಉತ್ಪನ್ನಗಳ ಬೃಹತ್ ಪ್ರದರ್ಶನ ಮತ್ತು ಮಾರಾಟ, ಸ್ಥಳ: ಜೆಎಸ್‌ಎಸ್ ಮೈಸೂರು ಅರ್ಬನ್ ಹಾತ್, ಹೆಬ್ಬಾಳು ಕೈಗಾರಿಕಾ ಪ್ರದೇಶ, ರಿಂಗ್ ರೋಡ್, ಬೆಳಗ್ಗೆಯಿಂದ.

■ **ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕಣ್ಣಿನ ಶಸ್ತ್ರ ಚಿಕಿತ್ಸೆ ಸಂಚಾರಿ ವಿಭಾಗ, ಪ್ರಾಥಮಿಕ ಆರೋಗ್ಯ ಕೇಂದ್ರ, ಜಿ.ಬಿ. ಪಾಳ್ಯ** : ಶಾಸಕ ತನ್ವೀರ್ ಸೇಠ್ ಅವರ 56ನೇ ವರ್ಷದ ಹುಟ್ಟುಹಬ್ಬದ ಅಂಗವಾಗಿ ಉಚಿತ ಆರೋಗ್ಯ ಶಿಬಿರ ಮತ್ತು ವೃದ್ಧ ಮಹಿಳೆಯರಿಗೆ ಸೀರೆ ವಿತರಣೆ, ಅಧ್ಯಕ್ಷತೆ : ಸಾಹುಕಾರ್ ಚನ್ನಯ್ಯ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಎನ್. ಮಂಜುನಾಥ್, ಉದ್ಘಾಟನೆ : ಕೆ.ಆರ್. ಆಸ್ಪತ್ರೆ ಸರ್ಜನ್ ಡಾ. ಚೇತನ್, ಉಪಸ್ಥಿತರು : ಡಾ. ಮಂಜುಪ್ರಸಾದ್, ಡಾ. ಮುತ್ತುರಾಜ್, ಡಾ. ಡ್ಯಾನಿಯಲ್, ಡಾ. ಸ್ನೇಹ, ವಿದ್ಯಾ ಗಣೇಶ್, ಸ್ಥಳ: ಸಹೃದಯ ಶಾಲೆ ಆವರಣ, ವಿದ್ಯಾನಗರ, ಬೆಳಗ್ಗೆ 8ಕ್ಕೆ.

■ **ರಾಮ್‌ಸನ್ಸ್ ಬೊಂಬೆ ಮನೆ:** ಬೊಂಬೆ ಮನೆ ದಸರಾ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ ಸಂಜೆ 7ರವರೆಗೆ.

■ **ಶಾರದಾ ವಿಲಾಸ ಫಾರ್ಮಸಿ ಕಾಲೇಜು** : ಕ್ವಾಲಿಟಿ ಮಾನೋಗ್ರಾಫ್ಸ್ ಫಾರ್ ಆಯುರ್ವೇದಿಕ್ ಹರ್ಬ್ಸ್ ಕುರಿತು ಕಾರ್ಯಾಗಾರ, ಉದ್ಘಾಟನೆ: ಬೆಂಗಳೂರು ಆಯುರ್ವೇದ ಟ್ರಸ್ಟ್‌ನ ಡಾ.ಡಿ.ಬಿ.ಅನಂತನಾರಾಯಣ, ಮುಖ್ಯ ಅತಿಥಿಗಳು: ಶಾರದಾ ವಿಲಾಸ ಶಿಕ್ಷಣ ಸಂಸ್ಥೆ ಸದಸ್ಯ ಡಾ.ಟಿ.ಕೆ.ಉಮೇಶ್, ಗೌರವ ಅತಿಥಿಗಳು: ಸಿಎಫ್‌ಟಿಆರ್‌ಐ ಮಾಜಿ ಮುಖ್ಯ ವಿಜ್ಞಾನಿಗಳಾದ ಡಾ.ಮುರಳೀಧರ, ಡಾ. ಪದ್ಮನಾಭನ್‌ಎಸ್.ರಜಿನಿ, ಶಾರದಾ ವಿಲಾಸ ಫಾರ್ಮಸಿ ಕಾಲೇಜು ಪ್ರಿನ್ಸಿಪಾಲ್ ಡಾ.ಹನುಮಂತಾಚಾರ್ ಜೋಶಿ, ಅಧ್ಯಕ್ಷತೆ : ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರದ ಸಹಾಯಕ ನಿರ್ದೇಶಕ ಡಾ. ಎಲ್.ಎನ್.ಶೆಣೈ, ಸ್ಥಳ: ಪ್ರೊ.ಚಿನ್ನಸ್ವಾಮಿ ಶೆಟ್ಟಿ ಕಾನ್ಫರೆನ್ಸ್ ಹಾಲ್, ಬೆಳಗ್ಗೆ 10ಕ್ಕೆ.

■ **ಶ್ರೀ ರಾಘವೇಂದ್ರ ಸ್ವಾಮಿಗಳ ಮಠ** : ಪಂಡಿತ್ ಶ್ರೀ ಬಾದರಾಯಣಾಚಾರ್ಯ ಅವರಿಂದ 'ಭಗವದ್ಗೀತೆ 11ನೇ ಅಧ್ಯಯನ'ದ ಪ್ರವಚನ, ಸ್ಥಳ: ಮಠದ ಆವರಣ, ಜಯಲಕ್ಷ್ಮೀಪುರಂ, ಸಂಜೆ 5 ಗಂಟೆಗೆ.

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಅಕ್ಟೋಬರ್ 3 ಮಂಗಳವಾರ 2023

ಸಂಪುಟ: 44 | ಸಂಚಿಕೆ: 169 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ರಾಷ್ಟ್ರಪಿತನಿಗೆ ಗೌರವ ಸಮರ್ಪಣೆ...



ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ ಜಯಂತಿ ಹಿನ್ನೆಲೆಯಲ್ಲಿ ಮೈಸೂರಿನ ಗಾಂಧಿ ವೃತ್ತದಲ್ಲಿನ ಮಹಾತ್ಮ ಗಾಂಧೀಜಿ ಪ್ರತಿಮೆಗೆ ಜಿಲ್ಲಾಧಿಕಾರಿ ಡಾ. ಕೆ.ವಿ. ರಾಜೇಂದ್ರ ಹಾರ ಹಾಕುವ ಮೂಲಕ ಜಿಲ್ಲಾಡಳಿತದಿಂದ ಗೌರವ ನಮನ ಸಲ್ಲಿಸಿದರು. ಈ ವೇಳೆ ಮೇಯರ್ ಶಿವಕುಮಾರ್, ಪೊಲೀಸ್ ಆಯುಕ್ತ ಬಿ. ರಮೇಶ್, ಶಾಸಕ ಟಿ.ಎಸ್. ಶ್ರೀವತ್ಸ, ಎಸ್ಪಿ ಸೀಮಾ ಲಾಟ್ಕರ್, ಜಿಪಂ ಸಿಇಓ ಕೆ.ಎಂ. ಗಾಯಿತ್ರಿ, ಎಂಸಿಸಿ ಸ್ವಚ್ಛ ಸರ್ವೇಕ್ಷಣ ಬ್ರ್ಯಾಂಡ್ ಅಂಬಾಸಿಡರ್ ಫಾಲ್ಕಿಯಾ ಖಾನ್ ಇತರರು ಉಪಸ್ಥಿತರಿದ್ದಾರೆ.

ಧಾರ್ಮಿಕ ಕಾರ್ಯಕ್ರಮಕ್ಕೆ ಧಕ್ಕೆ ತರುವುದು, ಕಲ್ಲು ತೂರುವುದನ್ನು ನಮ್ಮ ಸರ್ಕಾರ ಸಹಿಸಲ್ಲ...

ಬೆಂಗಳೂರು, ಅ.2(ಕೆಎಂಶಿ)– ಯಾವುದೇ ಧಾರ್ಮಿಕ ಕಾರ್ಯಕ್ರಮಕ್ಕೆ



ಧಕ್ಕೆ ತರುವುದು, ಕಲ್ಲು ತೂರುವುದು ಕಾನೂನುಬಾಹಿರ. ಇಂಥ ಚಟುವಟಿಕೆಗಳನ್ನು ನಮ್ಮ ಸರ್ಕಾರ ಸಹಿಸುವುದಿಲ್ಲ ಅದನ್ನು ಹತ್ತಿಕ್ಕುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಿವಮೊಗ್ಗದ ರಾಗಿಗುಡ್ಡದಲ್ಲಿ ಈದ್ ಮಿಲಾದ್ ಮೆರವಣಿಗೆಯಲ್ಲಿ ದುಷ್ಕರ್ಮಿಗಳು ಕಲ್ಲು ಹೊಡೆದಿದ್ದಾರೆ. ಪೊಲೀಸರ ಮೇಲೂ ಕಲ್ಲು ಎಸೆದಿದ್ದು, ಅನಿವಾರ್ಯವಾಗಿ ● 9ನೇ ಪುಟಕ್ಕೆ

ರಾಜ್ಯ ಕಾಂಗ್ರೆಸ್ ಸರ್ಕಾರ ಸಂಕ್ರಾಂತಿ ವೇಳೆಗೆ ಪತನ!?

● ಆಪರೇಷನ್ ಕಮಲದ ರೂವಾರಿ ಸಿ.ಪಿ. ಯೋಗೇಶ್ವರ್ ಭವಿಷ್ಯ
● ಸಿದ್ದರಾಮಯ್ಯ–ಡಿ.ಕೆ.ಶಿವಕುಮಾರ್ ಸಂಘರ್ಷದಿಂದ ಬೇಸತ್ತ ತಟಸ್ಥ ಶಾಸಕರಿಂದ ಮಹತ್ತರ ನಿರ್ಧಾರದ ನಿರೀಕ್ಷೆ

ಬೆಂಗಳೂರು, ಅ.2(ಕೆಎಂಶಿ)– ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಮುಂಬರುವ ಸಂಕ್ರಾಂತಿ ವೇಳೆಗೆ ಪತನಗೊಳ್ಳಲಿದೆ ಎಂದು ಆಪರೇಷನ್ ಕಮಲದ ರೂವಾರಿ ಮಾಜಿ ಸಚಿವ ಸಿ.ಪಿ.ಯೋಗೇಶ್ವರ್ ಭವಿಷ್ಯ ನುಡಿದಿದ್ದಾರೆ.

ಹೆಚ್.ಡಿ.ಕುಮಾರಸ್ವಾಮಿ ನೇತೃತ್ವದ ಜೆಡಿಎಸ್–ಕಾಂಗ್ರೆಸ್ ಮೈತ್ರಿ ಸರ್ಕಾರ ಪತನದ ರೂವಾರಿಯೂ ಆಗಿದ್ದ ಯೋಗೇಶ್ವರ್, ನಂತರ ಯಡಿಯೂರಪ್ಪ ಅವರನ್ನು ಅಧಿಕಾರದಿಂದ ಕೆಳಗಿಳಿಸಲು ತಮ್ಮ ಪಕ್ಷದ ವರಿಷ್ಠರ ಮುಂದೆ ದೊಡ್ಡ ಅಸ್ತ್ರವನ್ನೇ ಪ್ರಯೋಗಿಸಿದ್ದರು. ಅದು ಯಶಸ್ವಿಯೂ ಆಗಿತ್ತು.

ಇದೀಗ ಸಿದ್ದರಾಮಯ್ಯ ಸರ್ಕಾರವನ್ನು ಮುಂಬರುವ ಲೋಕಸಭಾ ಚುನಾವಣಾ ವೇಳೆಗೆ ಅಂದರೆ ಮಕರ ಸಂಕ್ರಾಂತಿ ಸಮಯಕ್ಕೆ ಬೀಳಿಸುವ ಹುನ್ನಾರ ನಡೆದಿದೆ.

ಇದರ ಸುಳಿವರಿತೇ ಯೋಗೇಶ್ವರ್, ಸಿದ್ದರಾಮಯ್ಯ ಸರ್ಕಾರ ಸ್ವಯಂಪ್ರೇರಿತವಾಗಿ ಪತನಗೊಳ್ಳಲಿದೆ ಎಂದು ಬಹಿರಂಗವಾಗಿ ಹೇಳಿಕೆ ನೀಡಿದ್ದಾರೆ. ನಾವು ಆಪರೇಷನ್ ಕಮಲ ಮಾಡುವುದಿಲ್ಲ. ಆ ಪಕ್ಷದಲ್ಲಿನ ಆಂತರಿಕ ಕಚ್ಚಾಟದಿಂದ ಸಿದ್ದರಾಮಯ್ಯ ಅಧಿಕಾರ ಕಳೆದುಕೊಳ್ಳಲಿದ್ದಾರೆ.

ಕಾಂಗ್ರೆಸ್ ಬಹುಮತದಿಂದ ಅಧಿಕಾರ ಹಿಡಿದಿದ್ದರೂ ಕೇವಲ ನಾಲ್ಕು ತಿಂಗಳಲ್ಲೇ ಆಂತರಿಕ ಕಚ್ಚಾಟ ನಡೆದಿದೆ. ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವ



ಕುಮಾರ್ ನಡುವಿನ ಬಿರುಕು ದೊಡ್ಡ ಪ್ರಮಾಣದಲ್ಲಿ ಬೆಳೆದಿದೆ. ಇದು ತಟಸ್ಥ ಶಾಸಕರಲ್ಲಿ ಬೇಸರ ತಂದಿದೆ. ಅಧಿಕಾರ ದೊರೆಯದವರಲ್ಲಿ ಅಸಮಾಧಾನ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ● 9ನೇ ಪುಟಕ್ಕೆ

ಮೋದಿ ಪ್ರಧಾನಿ ಆಗುವುದು ಎಷ್ಟು ಸತ್ಯವೋ, ಕಾಂಗ್ರೆಸ್ ದಿವಾಳಿಯಾಗುವುದು ಅಷ್ಟೇ ಸತ್ಯ

■ ಕಾಂಗ್ರೆಸ್ ಮುಕ್ತ ಮಾಡಲು ಬಿಜೆಪಿ ಜೊತೆ ಜೆಡಿಎಸ್ ಮೈತ್ರಿ
■ ಹೆಚ್.ಡಿ.ದೇವೇಗೌಡರ ಬಗ್ಗೆ ಮೋದಿಗೆ ಅಪಾರ ಗೌರವ
■ "ಹೇ ಮೋದಿ" ಎಂಬ ಸಿದ್ದರಾಮಯ್ಯ ಪದ ಬಳಕೆ ಸರಿಯಲ್ಲ
■ ಗ್ಯಾರಂಟಿಗಳ ಯೋಜನೆಯಿಂದ ರಾಜ್ಯದ ಅಭಿವೃದ್ಧಿ ಶೂನ್ಯ

ಶಾಸಕ ಜಿಟಿಡಿ ಭವಿಷ್ಯ



ಮೈಸೂರು, ಅ.2(ಬಿಎಲ್‌ಯು)–ಮುಂದಿನ ಲೋಕಸಭಾ ಚುನಾವಣೆಯಲ್ಲಿ ದೇಶಾದ್ಯಂತ ಅಭೂತಪೂರ್ವ ಬೆಂಬಲದೊಂದಿಗೆ ನರೇಂದ್ರ ಮೋದಿ ಮತ್ತೊಮ್ಮೆ ದೇಶದ ಪ್ರಧಾನಮಂತ್ರಿ ಆಗುವುದು ಎಷ್ಟು ಸತ್ಯವೋ, ಕಾಂಗ್ರೆಸ್ ದಿವಾಳಿ ಆಗುವುದು ಅಷ್ಟೇ ಸತ್ಯ ಎಂದು ಶಾಸಕ ಜಿ.ಟಿ.ದೇವೇಗೌಡ ಭವಿಷ್ಯ ನುಡಿದಿದ್ದಾರೆ. ಮೈಸೂರಿನ ಲಿಂಗಾಂಬುದಿ ಪಾಳ್ಯದ ಶಕ್ತಿ ಬಡಾವಣೆಯಲ್ಲಿ ಶ್ರೀ ಕಾವೇರಿ ಕೊಡಗು ಮಹಿಳಾ ಸಂಘದ ವತಿಯಿಂದ ನೂತನವಾಗಿ ನಿರ್ಮಾಣ ಮಾಡಿರುವ ವೃದ್ಧಾಶ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕಾಂಗ್ರೆಸ್ ಮುಕ್ತ ಮಾಡುವ ದೃಷ್ಟಿಯಿಂದ ಜೆಡಿಎಸ್ ಪಕ್ಷ ಬಿಜೆಪಿ ಜೊತೆ ಮೈತ್ರಿ ಮಾಡಿಕೊಂಡಿದೆ ಎಂದು ಹೇಳಿದರು.

ಕಾಂಗ್ರೆಸ್ ನೇತೃತ್ವದ ಇಂಡಿಯಾ ಮೈತ್ರಿಕೂಟದ ವಿರುದ್ಧ ದನಿ ಎತ್ತಲು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಬಿಜೆಪಿ ಜೊತೆ ಮೈತ್ರಿ ಮಾಡಿಕೊಳ್ಳಲು ಸಮ್ಮತಿಸಿದರು. ಈ ಮೈತ್ರಿಯ ಮಹತ್ವವನ್ನು ಹೆಚ್.ಡಿ.ದೇವೇಗೌಡರಿಗೆ ಮನವರಿಕೆ ಮಾಡಿ ● 9ನೇ ಪುಟಕ್ಕೆ

ಕಳೆದ ಸಲವೂ ಪ್ರತಾಪ್ ಸಿಂಹನ ಬೆಂಬಲಿಸಿದ್ದೆ...!

ಕಳೆದ ಬಾರಿ ಪ್ರತಾಪ್ ಸಿಂಹ ಸಂಸದನಾಗಲು ನಾನು ಬೆಂಬಲಿಸಿದ್ದೆ ಎಂದು ಜಿ.ಟಿ.ದೇವೇಗೌಡರು ತಿಳಿಸಿದರು. ನಾನು ಎಂದೂ ಸ್ವಾರ್ಥ ರಾಜಕಾರಣ ಮಾಡಿಲ್ಲ. ಅಭಿವೃದ್ಧಿ ಮಾಡಿದವರು ಯಾರೇ ಆಗಿರಲಿ ನಾನು ಪಕ್ಷಾತೀತವಾಗಿ ಬೆಂಬಲ ನೀಡುತ್ತೇನೆ. ಬಿಜೆಪಿಯವರು ಮೇಯರ್ ಆಗಲು ಬೆಂಬಲ ನೀಡಿದ್ದೇನೆ ಎಂದು ಜಿ.ಟಿ.ದೇವೇಗೌಡರು ತಿಳಿಸಿದರು.


ನಾಗೇಂದ್ರ ಶಾಸಕನಾಗುವ ಮೊದಲು ನಗರ ಪಾಲಿಕೆಯಲ್ಲಿ ಸ್ಥಾಯಿ ಸಮಿತಿ ಅಧ್ಯಕ್ಷನಾಗಲು ನಾನು ಬೆಂಬಲ ನೀಡಿದ್ದೆ. ಇಂತಹ ವಿಚಾರಗಳು ಬಂದಾಗ ನಾನು ಜನತಾ ದಳದವನು ಎಂದು ತಾರತಮ್ಯ ಮಾಡಿಲ್ಲ, ರಾಜಕಾರಣ ಮಾಡಿಲ್ಲ ಎಂದು ಜಿ.ಟಿ.ದೇವೇಗೌಡರು ಸ್ಪಷ್ಟಪಡಿಸಿದರು.

ಹನಗೋಡು ಬಳಿ ಹುಲಿ ದಾಳಿಗೆ ವ್ಯಕ್ತಿ ಬಲಿ

ದನಗಳು ಮನೆಗೆ ಬಂದರೂ ಅವುಗಳ ಕಾಯಲು ಹೋಗಿದ್ದ ಗಣೇಶ್ ಮರಳಿ ಬರಲಿಲ್ಲ...

ಹುಣಸೂರು/ಹನಗೋಡು, ಅ.2– ನಾಗರಹೊಳೆ ರಾಷ್ಟ್ರೀಯ ಉದ್ಯಾನವನ ಸಮೀಪದ ಅಯ್ಯನಕೆರೆ ಗ್ರಾಮದಲ್ಲಿ ಸೋಮವಾರ ಸಂಜೆ ಹುಲಿ ದಾಳಿಗೆ ವ್ಯಕ್ತಿ ಬಲಿಯಾಗಿದ್ದಾರೆ.

ಉಡುವೆಪುರ ಗ್ರಾಮದ ಗಣೇಶ್(58) ಅವರನ್ನು ಹುಲಿ ಬಲಿ ಪಡೆದಿದ್ದು, ಇವರು ಎಂದಿನಂತೆ ಸೋಮವಾರ ದನಗಳನ್ನು ಮೇಯಿಸಲು ಹೋದ ವೇಳೆ ಹುಲಿ ದಾಳಿ ನಡೆಸಿ, ಎಳೆದೊಯ್ದಿದೆ. ದನಗಳು ಸಂಜೆ ಮನೆಗೆ ಬಂದಿದ್ದು, ಗಣೇಶ್ ಬಾರದಿರುವುದರಿಂದ ಆತಂಕಗೊಂಡ ಮನೆಯವರು ಸ್ಥಳಕ್ಕೆ ತೆರಳಿ ಪರಿಶೀಲಿಸಿದರು. ಈ ವೇಳೆ



ಗಣೇಶ್

ಹುಲಿ ಗಣೇಶ್‌ನನ್ನು ಕಾಡಿನೊಳಗೆ ಎಳೆದೊಯ್ದಿರುವ ಗುರುತು ಪತ್ತೆಯಾಗಿದೆ. ಜಾಡು ಹಿಡಿದು ಹೋಗಿ ನೋಡಲಾಗಿ ಪ್ರಕರಣ ಬೆಳಕಿಗೆ ಬಂದಿದೆ. ಈ ವೇಳೆ ಗಣೇಶ್ ಕುಟುಂಬದವರು ಅರಣ್ಯಾಧಿಕಾರಿಗಳಿಗೆ ವಿಷಯ ಮುಟ್ಟಿಸಿದರು.

ಸ್ಥಳಕ್ಕೆ ಡಿಎಫ್‌ಓ ಹರ್ಷಕುಮಾರ್, ಆರ್‌ಎಫ್‌ಓ ಸುಬ್ರಮಣಿ, ಗ್ರಾಮಾಂತರ ಠಾಣೆ ಇನ್ಸ್‌ಪೆಕ್ಟರ್ ರವಿಕುಮಾರ್ ಹಾಗೂ ಸಿಬ್ಬಂದಿ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಪ್ರತಿಭಟನೆ: ಈ ಭಾಗದಲ್ಲಿ ಹುಲಿ ಸೇರಿದಂತೆ ಕಾಡುಪ್ರಾಣಿಗಳ ಹಾವಳಿ ಹೆಚ್ಚಾಗಿದೆ. ಆಗಿಂದಾಗ್ಗೆ ಕಾಡುಪ್ರಾಣಿಗಳು ಸಾಕುಪ್ರಾಣಿಗಳು ಸೇರಿದಂತೆ ಮನುಷ್ಯರ ಮೇಲೆ ದಾಳಿ ನಡೆಸಿ, ಬಲಿ ಪಡೆಯುತ್ತಿವೆ ಎಂದು ಆರೋಪಿಸಿ ಉಡುವೆಪುರ ಸೇರಿದಂತೆ ಅಕ್ಕಪಕ್ಕದ ನೂರಾರು ಗ್ರಾಮಸ್ಥರು ಪ್ರತಿಭಟನೆ ನಡೆಸಿದರು. ಅಲ್ಲದೇ ಬೋನಿಟ್ಟು ಹುಲಿ ಸೆರೆ ಹಿಡಿದು, ಈ ಭಾಗದ ರೈತರು, ಸಾರ್ವಜನಿಕರು ● 9ನೇ ಪುಟಕ್ಕೆ

ಸಿಎಂ ಸಿದ್ದರಾಮಯ್ಯ ವಿರುದ್ಧ ಮತ್ತೆ ಗುಡುಗಿದ ಶಾಮನೂರು

ಎಚ್.ವಿಶ್ವನಾಥ್‌ನನ್ನು ಹುಚ್ಚಾಸ್ಪತ್ರೆಗೆ ಕಳುಹಿಸಿ

ದಾವಣಗೆರೆ: ಮುಖ್ಯಮಂತ್ರಿ ಸಿದ್ದ



ರಾಮಯ್ಯ ನೇತೃತ್ವದ ಸರ್ಕಾರದಲ್ಲಿ ಲಿಂಗಾಯತ ಅಧಿಕಾರಿಗಳಿಗೆ ಸೂಕ್ತ ಸ್ಥಾನಮಾನ ಸಿಗುತ್ತಿಲ್ಲ ಎಂದು ಅಖಿಲ ಭಾರತ ವೀರಶೈವ ಮಹಾಸಭೆ ಅಧ್ಯಕ್ಷ ಹಾಗೂ ಕಾಂಗ್ರೆಸ್ ಶಾಸಕ ಶಾಮನೂರು ಶಿವಶಂಕರಪ್ಪ ನೀಡಿದ್ದ ಹೇಳಿಕೆ ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದೆ.

ಶಾಸಕ ಶಾಮನೂರು ಶಿವಶಂಕರಪ್ಪ ಅವರು ತಮ್ಮದೇ ಸರ್ಕಾರದ ವಿರುದ್ಧ ಮಾಡಿರುವ ಆರೋಪಕ್ಕೆ ಪ್ರತಿಕ್ರಿಯಿಸಿದ್ದ ಸಿಎಂ ಸಿದ್ದರಾಮಯ್ಯ, ನಮ್ಮ ಸರ್ಕಾರದಲ್ಲಿ 7 ಮಂದಿ ಲಿಂಗಾಯತರೇ ಸಚಿವರಿದ್ದಾರೆ. ನಮ್ಮ ಸರ್ಕಾರ ಯಾವ ಸಮುದಾಯಕ್ಕೂ ಅನ್ಯಾಯ ಮಾಡಿಲ್ಲ. ನನ್ನ ಬಳಿ ಅಂಕಿಅಂಶಗಳಿವೆ ಎಂದು ತಿರುಗೇಟು ನೀಡಿದ್ದರು. ಈ ಬಗ್ಗೆ ಪ್ರತಿಕ್ರಿಯಿಸಿರುವ ಶಾಮನೂರು ಅವರು, ಲಿಂಗಾಯತ ಅಧಿಕಾರಿಗಳಿಗೆ ಅನ್ಯಾಯ ಆಗಿದ್ದು ಸತ್ಯ. ಒಂದು ಡಿಸಿ ಕೊಟ್ಟಿಲ್ಲ. ಈ ಬಗ್ಗೆ ಸಿಎಂ ಜೊತೆ ಮಾತಾಡುತ್ತೇನೆ. ಯಾರಿಗೆ ಎಲ್ಲಿ ತೊಂದರೆ ಆಗಿದೆ ಎಂದು ಹೇಳುತ್ತೇನೆ ಎಂದು ಸಿಎಂ ಸಿದ್ದರಾಮಯ್ಯ ವಿರುದ್ಧ ಮತ್ತೆ ಗುಡುಗಿದ್ದಾರೆ.

ಸಂಪುಟದಲ್ಲಿ ಏಳು ಮಂದಿ ಲಿಂಗಾಯಿತ ಸಚಿವರು ಇರಬಹುದು. ಅದರ ಬಗ್ಗೆ ಪ್ರಶ್ನೆ ಇಲ್ಲ. ನಮ್ಮ ಲಿಂಗಾಯತ ಸಮಾಜದ ಐಎಎಸ್, ಐಪಿಎಸ್, ಕೆಎಎಸ್ ಅಧಿಕಾರಿಗಳ ಬಗ್ಗೆ ನಾನು ಹೇಳುತ್ತಿದ್ದೇನೆ. ಇದಕ್ಕಾಗಿಯೇ ಈ ವಿಚಾರ ರಾಜ್ಯಾದ್ಯಂತ ಚರ್ಚೆ ಆಗುತ್ತಿದೆ. ಇದರ ನಡುವೆ, ಎಂಎಲ್‌ಸಿ ● 9ನೇ ಪುಟಕ್ಕೆ



ಎಕ್ಸ್‌ಪ್ರೆಸ್ ವೇ ಬದಿಯಲ್ಲೇ ಕಾಡಾನೆಗಳ ಹಿಂಡು ಬಿಡಾರ

■ ಮಂಡ್ಯ ಅನತಿ ದೂರದ ಚಿಕ್ಕಮಂಡ್ಯ ಬಳಿ ಬೀಡುಬಿಟ್ಟ ಆನೆಗಳು
■ ನಗರ ಪ್ರವೇಶಿಸದಂತೆ ತಡೆಯಲು ಅರಣ್ಯ ಇಲಾಖೆ ಹರಸಾಹಸ
■ ಆತಂಕದಲ್ಲಿ ಮಂಡ್ಯ ನಗರ ಜನತೆ, ಹಲವು ಕಡೆ ಬೆಳೆ ನಾಶ

ಮಂಡ್ಯ, ಅ.2(ಮೋಹನ್‌ರಾಜ್)– ನಿನ್ನೆ ಮಂಡ್ಯ ನಗರದಿಂದ 2 ಕಿಲೋ ಮೀಟರ್ ದೂರದಲ್ಲಿರುವ ಬೂದನೂರು ಗ್ರಾಮದಲ್ಲಿ ಕಾಣಿಸಿಕೊಂಡಿದ್ದ ಐದು ಕಾಡಾನೆಗಳ ಗುಂಪು ಸೋಮವಾರ ನಗರ ವ್ಯಾಪ್ತಿಯ ಕೃಷಿ ಜಮೀನಿನವರೆಗೂ ಬಂದಿದ್ದು, ಬೆಂಗಳೂರು– ಮೈಸೂರು ನೂತನ ಎಕ್ಸ್‌ಪ್ರೆಸ್ ವೇ ಪಕ್ಕದಲ್ಲೇ ಬೀಡುಬಿಟ್ಟಿವೆ. ಇದರಿಂದ ಜನ ಆತಂಕಗೊಂಡಿದ್ದು, ಅರಣ್ಯ ಸಿಬ್ಬಂದಿ ಆನೆಗಳ ಹಿಂಡು ನಗರ ಪ್ರವೇಶಿಸದಂತೆ ತಡೆಯಲು ಹರಸಾಹಸ ಪಡುತ್ತಿದ್ದಾರೆ.

ನಿನ್ನೆ ಬೂದನೂರಿನ ಕೃಷಿ ಜಮೀನಿನಲ್ಲಿ ಬೀಡು ಬಿಟ್ಟಿದ್ದ ಆನೆಗಳ ಹಿಂಡು ಕಳೆದ ರಾತ್ರಿ ಚಿಕ್ಕಮಂಡ್ಯವರೆಗೂ ಬಂದಿವೆ. ಬೆಳ್ಳಂಬೆಳಿಗ್ಗೆ ಗ್ರಾಮಸ್ಥರು ಗಮನಿಸಿದಾಗ ಆನೆಗಳ ಹಿಂಡು ಮಂಡ್ಯ ನಗರ ವ್ಯಾಪ್ತಿಯ ಚಿಕ್ಕಮಂಡ್ಯ ಕೆರೆ ಅಂಗಳದ ಮುಂಭಾಗದಲ್ಲಿರುವ ಹಿಂದಿನ ರಾಮಕೃಷ್ಣ ಚಿತ್ರಮಂದಿರದ ಕಟ್ಟಡದ ಹಿಂಭಾಗ ಬೀಡು ಬಿಟ್ಟಿವೆ. ಬೆಳಗ್ಗೆ ಆನೆಗಳನ್ನು ನೋಡಲು ಸುತ್ತಮುತ್ತ ಗ್ರಾಮಸ್ಥರು ರಾಮಕೃಷ್ಣ ಚಿತ್ರಮಂದಿರದ ಕಟ್ಟಡ ಹಾಗೂ ಎಕ್ಸ್‌ಪ್ರೆಸ್ ವೇನ ಬೈಪಾಸ್ ಬಳಿ ಸಾವಿರಾರು ಮಂದಿ ನೆರೆದಿದ್ದರು. ಆನೆಗಳು ಜನರನ್ನು ನೋಡಿ ದಿಕ್ಕಾಪಾಲಾಗಿ ನುಗ್ಗಿದರೆ ಸಮಸ್ಯೆಯಾಗಬಹುದೆಂಬ ಕಾರಣಕ್ಕೆ ಪೊಲೀಸರು ಸಾರ್ವಜನಿಕರನ್ನು ಅಲ್ಲಿಂದ ಕಳುಹಿಸಿದರು. ಸದ್ಯ ನಗರ ಪ್ರದೇಶದ ವ್ಯಾಪ್ತಿಯಲ್ಲೇ ಆನೆಗಳು ಬೀಡು ಬಿಟ್ಟಿರುವುದರಿಂದ ಅರಣ್ಯ ಇಲಾಖೆ ಹಾಗೂ ಪೊಲೀಸರು ತೀವ್ರ ಕಟ್ಟೆಚ್ಚರ ವಹಿಸಿದ್ದು, ಒಂದು ವೇಳೆ ಆನೆಗಳು ಮಂಡ್ಯ ನಗರ ಪ್ರವೇಶಿಸಿದರೆ, ಚಿಕ್ಕಮಂಡ್ಯ ಮಾರ್ಗದಲ್ಲಿರುವುದರಿಂದ ನಗರ ವ್ಯಾಪ್ತಿಯ ಆರಂಭದಲ್ಲಿ ಪೇಟೆ ಬೀದಿ, ವಾಣಿಜ್ಯ ಮಳಿಗೆಗಳಿರುವ ಕಾರಣ ಸಾರ್ವಜನಿಕರ ಸಂಚಾರ ಹೆಚ್ಚಿನ ಪ್ರಮಾಣದಲ್ಲಿದ್ದು, ಅಲ್ಲಿನ ರಸ್ತೆಗಳು ಬಹಳ ಕಿರಿದಾಗಿರುವುದರಿಂದ ಸಮಸ್ಯೆಯುಂಟಾಗಬಹುದೆಂದು ಆನೆಗಳ ಹಿಂಡಿರುವ ಕೃಷಿ ಜಮೀನುಗಳ ಬಳಿ ಬ್ಯಾರಿಕೇಡ್‌ಗಳನ್ನು ಅಪಾಯದಿಂದ ಪಾರಾಗುವ ● 6ನೇ ಪುಟಕ್ಕೆ

ನಾಳೆ ಬೀದರ್‌ಗೆ ಪ್ರಧಾನಿ ಮೋದಿ: ಡ್ರೋಣ್ ಹಾರಾಟ ನಿಷೇಧ

ಬೀದರ್: ಪ್ರಧಾನಿ ನರೇಂದ್ರ ಮೋದಿ



ಯವರು ಮಂಗಳವಾರ (ಅ.3) ನಗರದ ವಾಯುಸೇನೆ ತರಬೇತಿ ಕೇಂದ್ರಕ್ಕೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಡ್ರೋಣ್ ಹಾರಾಟ ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಗೋವಿಂದ ರೆಡ್ಡಿ ತಿಳಿಸಿದ್ದಾರೆ.

ಪ್ರಧಾನಿ ಭದ್ರತೆ ಹಿನ್ನೆಲೆಯಲ್ಲಿ ನಗರದ ವಾಯುಸೇನೆ ತರಬೇತಿ ಕೇಂದ್ರ ಹಾಗೂ ಬೀದರ್ ನಗರದ ಸುತ್ತಮುತ್ತಲಿನ 3 ಕಿ.ಮೀ ವ್ಯಾಪ್ತಿಯಲ್ಲಿ ಅ.3ರಂದು ಬೆಳಿಗ್ಗೆ 6ರಿಂದ ರಾತ್ರಿ 10ರವರೆಗೆ ಸಾರ್ವಜನಿಕರು ಡ್ರೋಣ್ ಹಾರಿಸದಂತೆ ನಿಷೇಧಿಸಿ ಆದೇಶ ಹೊರಡಿಸಿದ್ದಾರೆ. ಮೋದಿ ಅವರು ತೆಲಂಗಾಣದ ನಿಜಾಮಾಬಾದ್‌ಗೆ ತೆರಳುವ ಮಾರ್ಗ ಮಧ್ಯದಲ್ಲಿ ನಗರದ ವಾಯುಸೇನೆ ತರಬೇತಿ ಕೇಂದ್ರಕ್ಕೆ ಭೇಟಿ ನೀಡುವರು. ಮಧ್ಯಾಹ್ನ 1ಕ್ಕೆ ಛತ್ತೀಸಗಢದ ಜಗದಾಲಪುರ ವಿಮಾನ ನಿಲ್ದಾಣದಿಂದ ವಿಶೇಷ ● 9ನೇ ಪುಟಕ್ಕೆ

ತಮಿಳುನಾಡು ತನ್ನ ನೀರು ಸಮುದ್ರಕ್ಕೆ ಹರಿಸಿ, ನಮ್ಮ ನೀರಲ್ಲಿ ಬೆಳೆ ಬೆಳೆದಿದೆ

● ಹಿತರಕ್ಷಣಾ ಸಮಿತಿ ಹೋರಾಟದಲ್ಲಿ ಪಾಲ್ಗೊಂಡು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಕಿಡಿ ನುಡಿ
● ಕಾವೇರಿ ಹೋರಾಟದಲ್ಲಿ ಬೆಂಗಳೂರಿನ ಬಿಜೆಪಿ ಶಾಸಕರು, ಬಿಬಿಎಂಪಿ ಕಾರ್ಪೋರೇಟರ್‌ಗಳು ಭಾಗಿ

ಮಂಡ್ಯ, ಅ.2(ಮೋಹನ್‌ರಾಜ್)–ತಮಿಳುನಾಡು ಕೆಆರ್‌ಎಸ್‌ನಿಂದ ಅಕ್ರಮವಾಗಿ ನೀರು ಪಡೆದು ಬೆಳೆ ಬೆಳೆದಿದೆ ಎಂದು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಕಿಡಿಕಾರಿದರು.

ನಗರದ ಸರ್‌ಎಂವಿ ಪ್ರತಿಮೆ ಬಳಿ ಕಾವೇರಿ ಹಿತರಕ್ಷಣಾ ಸಮಿತಿ ನಡೆಸುತ್ತಿರುವ ಧರಣಿ ಸ್ಥಳಕ್ಕೆ ಸೋಮವಾರ ಬೆಂಗಳೂರಿನ ಬಿಜೆಪಿ ಶಾಸಕರು ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸದಸ್ಯರೊಂದಿಗೆ ಭೇಟಿ ನೀಡಿ, ಪ್ರತಿಭಟನೆಗೆ ಬೆಂಬಲ ನೀಡಿ, ಅವರು ಮಾತನಾಡಿದರು. ತಮಿಳುನಾಡು ಸರ್ಕಾರ ತನ್ನಲ್ಲಿರುವ ನೀರನ್ನು ಸಮುದ್ರಕ್ಕೆ ಹರಿಸಿದೆ. ಜೊತೆಗೆ ಅಲ್ಲಿ ನವೆಂಬರ್‌ವರೆಗೂ ಮಳೆಯಾಗಲಿದ್ದು, ನಮ್ಮ ರಾಜ್ಯದಲ್ಲಿ ಮಳೆ ಕೊರತೆಯಿಂದ ಡ್ಯಾಂ ತುಂಬಿಲ್ಲ. ಕೃಷಿ ಪ್ರದೇಶಕ್ಕೆ ನೀರಿಲ್ಲದೇ ಕುಡಿಯುವ ನೀರಿಗೂ ಹಾಹಾಕಾರವಾಗಿದೆ. ನಮ್ಮ ಪರಿಸ್ಥಿತಿ ಹೀಗಿರುವಾಗ ತಮಿಳುನಾಡು ಅಕ್ರಮವಾಗಿ ಕಾವೇರಿ ನೀರನ್ನು ಪಡೆದು ಅಕ್ರಮವಾಗಿಯೇ ಕೃಷಿ ಬೆಳೆಗಳನ್ನು ಬೆಳೆದುಕೊಂಡಿದೆ. ಇದನ್ನು ನಮ್ಮ ರಾಜ್ಯದ ವಕೀಲರ ಮೂಲಕ ಸುಪ್ರೀಂಕೋರ್ಟ್‌ಗೆ ಹಾಗೂ ಕಾವೇರಿ ನೀರು ನಿರ್ವಹಣಾ ಸಮಿತಿ ಹಾಗೂ ಪ್ರಾಧಿಕಾರಕ್ಕೆ ಮನವರಿಕೆ ಮಾಡಿಕೊಡುವಲ್ಲಿ ರಾಜ್ಯ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಕಿಡಿಕಾರಿದರು.

ನನ್ನ ದಿಟ್ಟತನವನ್ನು ನೀವೂ ಪ್ರಯೋಗಿಸಿ: ನಾನು ಸಿಎಂ ಆಗಿದ್ದಾಗ ಇದೇ ರೀತಿ ಹೆಚ್ಚಿನ ನೀರು ಬಿಡುವಂತೆ ಪ್ರಾಧಿಕಾರದಿಂದ ಒತ್ತಡ ಇತ್ತು. ಆ ಸಂದರ್ಭ ಡ್ಯಾಂನಲ್ಲಿ ನೀರಿದ್ದರೂ



ಒಂದು ದಿನವೂ ತಮಿಳುನಾಡಿಗೆ ಹೆಚ್ಚುವರಿ ನೀರು ಬಿಡಲಿಲ್ಲ. ಆಗ ರಾಜ್ಯದ ಪರ ವಕೀಲರು ತಮಿಳುನಾಡು ಕ್ಯಾತೆಗೆ ಸುಪ್ರೀಂ ಕೋರ್ಟ್‌ನಲ್ಲಿ ವಾದ ಮಾಡಲು ಮೊದಲು ನೀರು ಬಿಡಿ ನಂತರ ವಾದ ಮಾಡುತ್ತೇವೆ ಎಂದಿದ್ದರು. ಆದರೆ ನಾನು ನೀರು ಬಿಟ್ಟ ಮೇಲೆ ನೀವು ವಾದ ಮಾಡಿ ಏನು ಪ್ರಯೋಜನ ಎಂದು ಪ್ರಶ್ನಿಸಿದ್ದೆ. ನನ್ನ ಆ ದಿಟ್ಟತನದ ಕ್ರಮವನ್ನು ● 6ನೇ ಪುಟಕ್ಕೆ

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ: ಬೊಮ್ಮಾಯಿ

ಮಂಡ್ಯ: ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಅಕ್ರಮ ದಂಧೆ ನಡೆಸುವ ಶಕ್ತಿಗಳೇ ಕೋಮು ಗಲಭೆಗೆ ಕುಮ್ಮಕ್ಕು ನೀಡುತ್ತಿವೆ. ಗೃಹ ಸಚಿವ ಡಾ.ಜಿ.ಪರಮೇಶ್ವರ್‌ಗೆ ಇದ್ಯಾವುದು ಕಾಣುತ್ತಿಲ್ಲ. ಅದಕ್ಕೆ ಶಿವಮೊಗ್ಗ ಘಟನೆ ಸಣ್ಣ ಘಟನೆ ಅಂತ ಹೇಳಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅಸಮಾಧಾನ ವ್ಯಕ್ತಪಡಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗೃಹ ಸಚಿವ ಡಾ.ಜಿ.ಪರಮೇಶ್ವರ್ ಈ ರೀತಿ ಮೊದಲನೇ ಬಾರಿಗೆ ಹೇಳಿಕೆ ನೀಡುತ್ತಿಲ್ಲ. ಗಂಭೀರವಾದ ಘಟನೆ ನಡೆದರೂ ಸಣ್ಣ ಘಟನೆ ಎಂದು ಹೇಳುವ ಪ್ರವೃತ್ತಿ ಇದೆ. ಕೋಮು ಗಲಭೆ ಸೃಷ್ಟಿ ಮಾಡುವ ಕುಮ್ಮಕ್ಕು ಕೊಡುವ ಶಕ್ತಿಗಳನ್ನು ಬಂಧಿಸಿ ಮಾಡಿ ಜೈಲಿಗೆ ಕಳುಹಿಸಬೇಕು. ಸಮಾಜದ ಶಾಂತಿ ಹಾಳು ಗೆಡಿಸುವವರನ್ನು ಬಂಧಿಸದೇ ಈ ರೀತಿ ಹೇಳಿಕೆ ಕೊಟ್ಟರೆ ಇನ್ನು ಪ್ರೋತ್ಸಾಹ ಕೊಟ್ಟಂತೆ ಆಗುತ್ತದೆ. ಈ ಘಟನೆ ಕಾನೂನು ಸುವ್ಯವಸ್ಥೆ ಹದಗೆಟ್ಟಿರುವುದಕ್ಕೆ ಸಾಕ್ಷಿ. ಇಂತಹ ಘಟನೆಗಳನ್ನ ಗಂಭೀರವಾಗಿ ಪರಿಗಣಿಸಬೇಕೆಂದರು. ಮಾಜಿ ಉಪಮುಖ್ಯಮಂತ್ರಿ ● 6ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಗೆಳೆಯ (ತನ್ನ ಮದುವೆಗೆ ರಜೆ ಹಾಕಿ ಕಚೇರಿಗೆ ಹಾಜರಾದಾತನಿಗೆ) : ಈಗ ಹೆಂಡ್ತಿ ಬಂದಿರೋದ್ರಿಂದ ನಿನ್ನ ಕೆಲಸ ಹಗುರವಾಗಿರಬೇಕಲ್ಲಾ?

ಆತ : ಇಲ್ಲ ಕಣೋ ಮೂರುಪಟ್ಟು ಹೆಚ್ಚಾಗಿದೆ. ಅತ್ತೇನೂ ಸೇರಿ ಈಗ ಮೂವರಿಗೆ ಅಡುಗೆ ಮಾಡಬೇಕಾಗಿದೆ!

ಮೈಸೂರು ಮಿತ್ರ

ಮಂಗಳವಾರ, 3 ಅಕ್ಟೋಬರ್ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ಸ್ವಯಂ ಶಿಸ್ತು ಎಂದರೆ ಸ್ನಾಯುಗಳಿದ್ದಂತೆ, ಹೆಚ್ಚು ಅಭ್ಯಾಸ ಮಾಡಿದಷ್ಟೂ ಹೆಚ್ಚು ದೃಢವಾಗುತ್ತದೆ – ಡೇನಿಯಲ್ ಗೋಲ್ಡ್‌ಸ್ಟೀನ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಸೌಟು ಬಲ್ಲದೆ ಸಾರಿನ ನಂಟ

ನಿಮ್ಮ ಪತ್ರಗಳು

ಸರಕಾರಕ್ಕೇ ನಷ್ಟ !

ಮಾನ್ಯರೆ,

ಆಸ್ತಿ ನೋಂದಣಿ ದುಬಾರಿ ಎಂಬ ಸುದ್ದಿ ಪ್ರಕಟವಾಗಿದೆ. ಸರಕಾರ ಆಸ್ತಿಗಳ ಮಾರ್ಗಸೂಚಿ ದರಗಳನ್ನು ಹಾಗೂ ನೋಂದಣಾ ಶುಲ್ಕ ಹೆಚ್ಚಿಸಿದರೂ ಸರಕಾರಕ್ಕೇ ಎರಡು ರೀತಿಯ ನಷ್ಟವಾಗುತ್ತದೆ.

ಹೇಗೆನ್ನುವಿರಾ? ಮಾರುಕಟ್ಟೆ ದರವೊಂದಾದರೆ ಅದನ್ನು ಮಾರ್ಗಸೂಚಿ ದರದನ್ವಯ ನೋಂದಾಯಿಸಿದರೆ ಅದೂ ಮಾರುಕಟ್ಟೆ ದರಕ್ಕಿಂತ ಕಡಿಮೆಯೇ ಆಗಿರುತ್ತದೆ. ಒಂದು ಆಸ್ತಿಯನ್ನು ಒಂದು ಕೋಟಿಗೂ ಮೀರಿ ಮಾರಿದಾಗ ಅದರ ನಿಜವಾದ ಬೆಲೆಗಿಂತ ಕಡಿಮೆಯಿರುವ ಮಾರ್ಗಸೂಚಿ ದರಕ್ಕಷ್ಟೇ ನೋಂದಣಿ ಶುಲ್ಕ ನೀಡುತ್ತೇವೆ. ನೋಂದಣಿ ಪತ್ರದಲ್ಲಿ ನಮೂದಿಸಿದ ದರಕ್ಕಷ್ಟೇ ವರಮಾನ ತೆರಿಗೆ ಪಾವತಿಸುತ್ತೇವೆ.

ಮಾರುಕಟ್ಟೆ ದರ ಒಂದು ಕೋಟಿಯಾದರೂ ನೋಂದಣಿ ಸಂದರ್ಭದಲ್ಲಿ ಐವತ್ತು ಲಕ್ಷವಷ್ಟೇ ಪಾವತಿ ಮಾಡಿದ್ದೇವೆಯೆಂದು ತೋರಿಸುವುದರಿಂದ ಐವತ್ತು ಲಕ್ಷಕ್ಕೆ ಮಾತ್ರ ವರಮಾನ ತೆರಿಗೆ ಹಾಗೂ ಐವತ್ತು ಲಕ್ಷಕ್ಕೆ ಮಾತ್ರ ನೋಂದಣಿ ಶುಲ್ಕವನ್ನು ಪಾವತಿ ಮಾಡುವುದರಿಂದ ಇನ್ನೂ ಐವತ್ತು ಲಕ್ಷಕ್ಕೆ ಸರಕಾರಕ್ಕೆ ಬರಬೇಕಾದ ಹಣ ಕಡಿಮೆಯಾಗುತ್ತದೆ. ಅದರ ಬದಲು ಆಸ್ತಿಯನ್ನು ಮಾರುವ ಮಾರುಕಟ್ಟೆ ದರವನ್ನೇ ಲೆಕ್ಕಕ್ಕೆ ತೆಗೆದುಕೊಂಡರೆ ತೆರಿಗೆ ಕಳ್ಳತನ ಮಾಡುವ ಅಗತ್ಯವೇ ಇಲ್ಲ. ಆದ ಕಾರಣ ಸರಕಾರ ನೋಂದಣಿಯ ಉದ್ದೇಶಕ್ಕಾಗಿ ಮಾರುಕಟ್ಟೆ ದರವನ್ನೇ ಲೆಕ್ಕಕ್ಕೆ ತೆಗೆದುಕೊಳ್ಳಲಿ.ಈ ಬಗ್ಗೆ ಸರಕಾರ ಗಮನಹರಿಸುವುದೇ?

–ಕೊ.ಸು.ನರಸಿಂಹ ಮೂರ್ತಿ, ಹಿರಿಯ ನಾಗರಿಕ, ಮೈಸೂರು.

ಸಚಿವರ ನಡೆ ಜನಮೆಚ್ಚುವ ಕಡೆಗೆ



ಮಾನ್ಯರೆ,

ಮೈಸೂರು ಜಿಲ್ಲೆಯ ಉಸ್ತುವಾರಿ ಸಚಿವರಾದ ಡಾ.ಎಚ್.ಸಿ. ಮಹದೇವಪ್ಪನವರು ತಮ್ಮನ್ನು ಭೇಟಿ ಮಾಡಲು ಬರುವಾಗ ದುಂದುವೆಚ್ಚ ಮಾಡಿ ಹಾರ ಹಾಗೂ ಪೇಟಗಳನ್ನು ತರುವ ಬದಲು 200 ಪುಟಗಳ ನೋಟ್‌ಬುಕ್ ತರುವಂತೆ ಬರೆದುಕೊಂಡಿರುವುದು ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಗಿದೆ. ಹೆಚ್ಚು ಹಣ ಕೊಟ್ಟು ತರುವ ಹಾರತುರಾಯಿಗಳು ಹಾಗೂ ಪೇಟಗಳು ಮರುಬಳಕೆ ಆಗದೆ ಕಸದ ಬುಟ್ಟಿಗೆ ಸೇರಿ ತ್ಯಾಜ್ಯವಾಗುತ್ತಿತ್ತು. ಇದರ ಬದಲಾಗಿ ನೋಟ್ ಪುಸ್ತಕಗಳು, ರಬ್ಬರು, ಪೆನ್ನು ಪೆನ್ಸಿಲ್‌ಗಳನ್ನು ಗೌರವಪೂರ್ವಕವಾಗಿ ಗಣ್ಯರಿಗೆ ಕೊಡುವುದರಿಂದ ಅವುಗಳನ್ನು ಅಗತ್ಯ ಇರುವ ಬಡ ವಿದ್ಯಾರ್ಥಿಗಳಿಗೆ ವಿತರಿಸುವುದರಿಂದ ಸದುಪಯೋಗವಾಗುವುದಲ್ಲದೆ ಅಟಿವಶ್ಯಕ ದುಂದುವೆಚ್ಚದ ಪರಂಪರೆಗೆ ನಾಂದಿ ಆಡಬಹುದಾಗುತ್ತದೆ. ಈ ನಿಟ್ಟಿನಲ್ಲಿ ಯೋಚಿಸಿ ಸಾರ್ವಜನಿಕರಿಗೆ ಮನವಿ ಮಾಡಿದ ಸಚಿವರಿಗೆ ಅಭಿನಂದನೆಗಳು, ಹಾಗೆಂಯೇ ಇದನ್ನು ಜನಾಂದೋಲನ ರೀತಿ ಎಲ್ಲರೂ ಅನುಷ್ಠಾನಕ್ಕೆ ತರುವಂತಾಗಲಿ.

–ಮಿರ್ಲೆ ಚಂದ್ರಶೇಖರ, ಲೇಖಕರು, ಮೈಸೂರು.

ಕ್ರಿಯಾಶೀಲತೆ ನಶಿಸುತ್ತಿದೆ?!

ಮಾನ್ಯರೆ,

ಇಂದಿನ ತಾಂತ್ರಿಕ ಜಗತ್ತು ವಿಸ್ಮಯಗೊಳಿಸುವಂತೆ ಪರಿವರ್ತನೆಗೊಳ್ಳುತ್ತಿದೆ. ಬುದ್ಧಿಮತ್ತೆಯ ಅಳತೆಗೋಲು ನಿಲುಕದಷ್ಟು ಎತ್ತರವಾಗುತ್ತಿದೆ. ಆದರೂ ನಮ್ಮಲ್ಲಿ ಕ್ರಿಯಾಶೀಲತೆ ಕ್ಷೀಣಿಸುತ್ತಿದೆ ಎನ್ನಬಹುದು. ಏನು ಬೇಕಾದರೂ ಬೆರಳ ತುದಿಯಲ್ಲಿ ಗೂಗಲ್ ಸರ್ಚ್ ಎಂದು ಮುಂದಾಗುತ್ತಿರುವ ನಾವು ಚಿಂತಿಸುವ, ಆಲೋಚಿಸುವ ಕ್ರಿಯೆಯನ್ನು ಮರೆಯುತ್ತಿದ್ದೇವೆ. ಎಲ್ಲವೂ ತಯಾರಿ ಸಿದ್ಧಪಡಿಸಿದ ವಸ್ತುಗಳಂತೆ ಸ್ವಂತಿಕೆಯ ಹಂಗೇ ಇಲ್ಲಾ..! ನಾವೇ ಮಾಡಿದ ಕೆಲಸಗಳು ಅದರಲ್ಲಿ ನಾವೀನ್ಯತೆ ಕೊಡುವ ಸಂತೋಷ ಸಿದ್ಧವಸ್ತುಗಳಿಂದ ಸಿಗುವುದೇ? ಪ್ರೀತಿಯ ಒಂದು ಲೇಪನ ಅವುಗಳ ಬೆಲೆಯನ್ನು ಹೆಚ್ಚಿಸುತ್ತದೆ. ಎಲ್ಲರೂ ಒಟ್ಟಾಗಿ ಕಲಿತು ಮಾಡುವ ಸಂಭ್ರಮದ ದಿನಗಳು ಇಂದು ಮಾಯವಾಗಿವೆ. ಹಬ್ಬವಾಗಬಹುದು, ಒಂದು ಕಾರ್ಯಕ್ರಮವಾಗಬಹುದು, ಸ್ವಚ್ಛತೆ ಸಿಂಗಾರವಾಗಬಹುದು, ಭಾಗವಹಿಸುವಿಕೆ, ಸಂಬಂಧಗಳ ಗಟ್ಟಿತನ, ಸ್ವಂತಿಕೆ, ಚೂರು ಮುನಿಸು, ಕಾಲೆಳೆದು ತಮಾಷೆ ತರಲೆ ಮಾಡಿ ಸಮಾಧಾನ ಮಾಡುವ ಪರಿ ಎಲ್ಲವೂ ಮಾಯಾ..! ಮನೆಯ ಒಳಗೆ ಹೊರಗೆ ಬರೀ ಇಲೆಕ್ಟ್ರಾನಿಕ್ ಸಾಧಕಗಳ ವೈಭವ. ಇದೆಲ್ಲದರಿಂದ ನಮ್ಮಲ್ಲಿ ನಾವು ಒಂಟಿಯಾಗಿಸಿಕೊಳ್ಳುತ್ತಿದ್ದೇವೆ. ಆತಂಕದಿಂದ ಎಚ್ಚೆತ್ತು ಕ್ರಿಯಾಶೀಲರಾಗಿ ಸಾಗುವ ಮನಸ್ಸು ಮಾಡೋಣ.

– ಎಸ್.ಆರ್. ಹೇಮಲತಾ, ಪ್ರಾಂಶುಪಾಲರು, ಸಿದ್ಧಾರ್ಥನಗರ. ಮೈಸೂರು

ಬಸ್ ತಂಗುದಾಣವಿಲ್ಲದೆ ಪರದಾಟ

ಮಾನ್ಯರೆ,

ಪ್ರತಿದಿನ ಸಾವಿರಾರು ಮಂದಿ ಮೈಸೂರು–ಬೆಂಗಳೂರು ರಾಷ್ಟ್ರೀಯ ಹೆದ್ದಾರಿ ಮಾರ್ಗದಲ್ಲಿ ಪ್ರಯಾಣಿಸುತ್ತಾರೆ. ಅದರಲ್ಲೂ ಮಂಡ್ಯ–ಮೈಸೂರು ನಡುವೆ ಪ್ರಯಾಣ ಬೆಳೆಸುವವರೇ ಹೆಚ್ಚಿದ್ದಾರೆ. ಹೀಗಿರುವಾಗ ಮಂಡ್ಯದ ಶುಗರ್ ಫ್ಯಾಕ್ಟರಿ ಸರ್ಕಲ್ ಸಮೀಪ ಬಸ್ ತಂಗುದಾಣವಿಲ್ಲದೆ ಸಾರ್ವಜನಿಕರು ಮಳೆ, ಬಿಸಿಲು ಹಾಗೂ ಗಾಳಿ ಲೆಕ್ಕಿಸದೆ ರಸ್ತೆಯಲ್ಲಿಯೇ ನಿಂತು ಬಸ್‌ಗಾಗಿ ಕಾಯಬೇಕಾದ ದಯನೀಯ ಸ್ಥಿತಿ ನಿರ್ಮಾಣವಾಗಿದೆ. ಶಾಲಾ ಕಾಲೇಜಿನ ವಿದ್ಯಾರ್ಥಿಗಳು, ವಯೋವೃದ್ಧರು, ಮಹಿಳೆಯರು, ಪುರುಷರು ತಂಗುದಾಣವಿಲ್ಲದೆ ಮರದ ನೆರಳು, ಬೇಕರಿ ಅಥವಾ ಖಾಸಗಿ ಅಂಗಡಿಗಳ ಮಹಡಿಯ ಕೆಳಗೆ ಆಶ್ರಯಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಹೀಗೆ ಬಸ್ ಬರುವವರೆಗೂ ನೆರಳನ್ನು ಬಯಸಿ ಖಾಸಗಿ ಅಂಗಡಿಗಳ ಆಶ್ರಯಿಸಲು ಹೋದವರಿಗೆ ಮಾಲೀಕರು ಹಿಡಿಶಾಪ ಹಾಕುವುದನ್ನು ಕೇಳಿಸಿಕೊಳ್ಳಲಾಗುವುದಿಲ್ಲ. ಪರಿಸ್ಥಿತಿ ಹೀಗಿರುವಾಗ ನಗರಪಾಲಿಕೆ ಅಧಿಕಾರಿಗಳು ಇತ್ತ ಗಮನಿಸಿ, ಆದಷ್ಟು ಬೇಗ ಬಸ್ ತಂಗುದಾಣವನ್ನು ನಿರ್ಮಿಸಲಿ.

–ದೀಪಿಕಾ ಹೆಚ್.ಸಿ., ಸರ್ಕಾರಿ ಮಹಿಳಾ ಕಾಲೇಜು, ಮಂಡ್ಯ.

ರಸ್ತೆ ಬದಿ ಗೋಲ್‌ಗಪ್ಪ ಮಾರಾಟದ ಬಗ್ಗೆ ಪಾಲಿಕೆ ಅಧಿಕಾರಿಗಳು ಗಮನಹರಿಸಲಿ



ಮಾನ್ಯರೆ,

ಮೈಸೂರು ನಗರದ ಪ್ರಮುಖ ರಸ್ತೆಗಳಲ್ಲಿ, ಕೆಲವು ದೊಡ್ಡ–ದೊಡ್ಡ ಅಂಗಡಿಗಳ ಮುಂದೆ, ಮಾಲ್‌ಗಳ ಮುಂದೆ, ಬಟ್ಟೆ ಶೋ ರೂಂಗಳು ಮತ್ತು ಜನನಿಬಿಡ ರಸ್ತೆ ಬದಿಯಲ್ಲಿ ಕನಿಷ್ಠ ಶುಚಿತ್ವವೂ ಇಲ್ಲದೇ 'ಗೋಲ್‌ಗಪ್ಪ' ಹೆಸರಿನಲ್ಲಿ ಪಾನಿಪುರಿಯನ್ನು ಮಧ್ಯಾಹ್ನ ಎರಡು ಗಂಟೆಯಿಂದ ರಾತ್ರಿ ಹತ್ತು ಗಂಟೆಯ ತನಕ ಮಾರಾಟ ಮಾಡಲಾಗುತ್ತಿದೆ. ರಸ್ತೆ ಬದಿಯಲ್ಲಿ ವಾಹನಗಳು ಉಗುಳುವ ಹೊಗೆ ನಡುವೆ ಸಾರ್ವಜನಿಕರು ಈ ಗೋಲ್‌ಗಪ್ಪವನ್ನು ಆರೋಗ್ಯದ ಬಗ್ಗೆ ಯಾವುದೇ ಭಯವೂ ಇಲ್ಲದೇ ತಿನ್ನುತ್ತಾರೆ. ಇದನ್ನು ತಿಂದು ಸಾರ್ವಜನಿಕರ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಉಂಟಾದರೆ ಆದಕ್ಕೆ ಮೈಸೂರಿನ ನಗರ ಪಾಲಿಕೆಯ ಆರೋಗ್ಯಾಧಿಕಾರಿಗಳೇ ನೇರ ಹೊಣೆಗಾರರಾಗಬೇಕಾಗುತ್ತದೆ. ಮೈಸೂರಿನಲ್ಲಿ ಸುಮಾರು 200ಕ್ಕೂ ಹೆಚ್ಚು ಕಡೆಗಳಲ್ಲಿ ಇಂತಹ ವ್ಯಾಪಾರ ನಡೆಸುತ್ತಿದ್ದಾರೆ. ನಗರಪಾಲಿಕೆ ಆರೋಗ್ಯಾಧಿಕಾರಿ ಈ ಬಗ್ಗೆ ಗಮನಹರಿಸಿ, ಸಾರ್ವಜನಿಕರ ಆರೋಗ್ಯ ಕಾಪಾಡುವಂತಾಗಲಿ.

– ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು. ಮೊ.: 9448026186

ಖಾಸಗಿ ವಾಹಿನಿ ಪಬ್ಲಿಕ್ ಟಿವಿಯ ರಂಗನಾಥರ 'ಮುಖಾಮುಖಿ' ಸಂದರ್ಶನ

ಎರಡು ಪಕ್ಷಗಳ ಉಳಿವು ಮಾತ್ರವಲ್ಲ ರಾಜ್ಯದ ಹಿತದೃಷ್ಟಿಗೆ 'ಮೈತ್ರಿ'

ಬಿಜೆಪಿ–ಜೆಡಿಎಸ್ ಮೈತ್ರಿಯ ವಿಚಾರವಾಗಿ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಮುಕ್ತ ಮಾತು

ಮೈಸೂರು, ಅ.2(ಎಸ್‌ಬಿಡಿ)– ಮೈತ್ರಿ, ಎರಡು ಪಕ್ಷಗಳ ಉಳಿವಿಗಾಗಿ ಮಾತ್ರವಲ್ಲ, ಇಲ್ಲಿ ರಾಜ್ಯದ ಹಿತದೃಷ್ಟಿ ಮುಖ್ಯವಾಗಿದೆ. ಹಾಗಾಗಿ ಲೋಕಸಭಾ ಚುನಾವಣೆಯ ನಂತರವೂ ಮೈತ್ರಿ ಮುಂದುವರೆಯಲಿದೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಸ್ಪಷ್ಟಪಡಿಸಿದ್ದಾರೆ. ರಾಜ್ಯ ಮಟ್ಟದ ಖಾಸಗಿ ಸುದ್ದಿವಾಹಿನಿ 'ಪಬ್ಲಿಕ್ ಟಿವಿ'ಯ ರಂಗನಾಥ್ ಅವರ ಮುಖಾಮುಖಿ ಸಂದರ್ಶನದಲ್ಲಿ ಅವರು, ಬಿಜೆಪಿಯೊಂದಿಗೆ ಮತ್ತೊಮ್ಮೆ ಮೈತ್ರಿ ಮಾಡಿಕೊಂಡಿದ್ದು, ಇದರ ಹಿಂದಿನ ಪ್ರಮುಖ ಉದ್ದೇಶ, ಕಾಂಗ್ರೆಸ್ ಜೊತೆ ಸೇರಿ ಸರ್ಕಾರ ರಚನೆ ಮಾಡಿದ್ದರ ಪರಿಣಾಮ ಸೇರಿದಂತೆ ಹಲವು ವಿಚಾರಗಳ ಬಗ್ಗೆ ಮುಕ್ತವಾಗಿ ಮಾತನಾಡಿದ್ದಾರೆ.





ಈ ಬದಲಾವಣೆ ಊಹಿಸಿರಲಿಲ್ಲ ವೈಯಕ್ತಿಕ ಜೀವನದಲ್ಲಿ ಪ್ಯಾಂಟ್ ಬದಲು ಪಂಚೆ ಬಂದಿದೆ. ಆದರೆ ರಾಜಕಾರಣದಲ್ಲಿ ಹಲವು ಬದಲಾವಣೆಗಳು ಆರಂಭವಾಗಿವೆ. ಇಂದಿನ ರಾಜಕಾರಣವನ್ನು ನನ್ನನ್ನೂ ಸೇರಿದಂತೆ ಯಾರೂ ಊಹೆ ಮಾಡಿರಲಿಲ್ಲ. ನಮ್ಮ ರಾಷ್ಟ್ರೀಯ ಅಧ್ಯಕ್ಷರಾದ ಹೆಚ್.ಡಿ.ದೇವೇಗೌಡರ 60 ವರ್ಷದ ರಾಜಕೀಯ ಜೀವನದಲ್ಲಿ ಈ ರೀತಿಯ ರಾಜಕೀಯ ಬದಲಾವಣೆ ಆಗಿರಲಿಲ್ಲ. ಬಿಜೆಪಿ ನಾಯಕರಾದ ಅಮಿತ್ ಷಾ ಅವರಿಂದ ನನಗೆ ಕರೆ ಬಂದ ನಂತರದಲ್ಲಿ ಈ ಬದಲಾವಣೆ ಶುರುವಾಯಿತು. ಅವರನ್ನು ಭೇಟಿಯಾಗಿ ಪರಸ್ಪರ ಅಭಿಪ್ರಾಯ ಹಂಚಿಕೊಂಡೆವು. ಆದರೆ ರಾಷ್ಟ್ರೀಯ ಅಧ್ಯಕ್ಷರಾದ ದೇವೇಗೌಡರ ನಿಲುವಿನ ಬಗ್ಗೆ ಆತಂಕವಿತ್ತು. ಮೈತ್ರಿಗೆ ಅವರು ಒಪ್ಪುವುದಿಲ್ಲ ಎಂದು ತಿಳಿದಿದ್ದೆವು. ಏಕೆಂದರೆ, ಅವರ ಆರು ದಶಕಗಳ ರಾಜಕೀಯ ಜೀವನದಲ್ಲಿ ಅವರೆಂದೂ ಬಿಜೆಪಿ ಒಡನಾಟಕ್ಕೆ ಹೋದವರಲ್ಲ. ಹಿಂದೆ ಮೈತ್ರಿಯಾಗಿ ಸರ್ಕಾರ ರಚಿಸಿದಾಗಲೂ ಅವರು ಒಪ್ಪಿರಲಿಲ್ಲ. ಅಂತಹವರು ಬಿಜೆಪಿ ಜೊತೆ ಮೈತ್ರಿಗೆ ನಾನೇ ಒಪ್ಪಿಗೆ ಕೊಟ್ಟಿದ್ದೇನೆ ಎಂದು ಮಾಧ್ಯಮಗಳ ಮುಂದೆ ಹೇಳಿದರು. ಈ ಸಂದರ್ಭವನ್ನು ಯಾರೂ ನಿರೀಕ್ಷೆ ಮಾಡಿರಲಿಲ್ಲ. ದೇವೇಗೌಡರ ಸಹಮತದ ಹಿಂದೆ ರಾಜ್ಯದ ಹಿತವಿದೆ. ಅವರು ಕಳೆದ 10–15 ವರ್ಷದ ರಾಜಕಾರಣವನ್ನು ಗಮನಿಸಿಕೊಂಡು ಬಂದಿದ್ದಾರೆ. ಅವರ ಅನುಭವಗಳ ಆಧಾರದಲ್ಲೇ ಈ ನಿರ್ಧಾರಕ್ಕೆ ಬಂದಿದ್ದಾರೆ. ಮೊದಲೇ ಸಹಕರಿಸಿದ್ದರೆ ಇನ್ನೂ ಒಳ್ಳೆಯದಾಗಿರುತ್ತಿತ್ತು.

ಕೈ ಜೊತೆ ಮೈತ್ರಿ ಅಸ್ವಾಭಾವಿಕ

2006ರ ಬಿಜೆಪಿ–ಜೆಡಿಎಸ್ ಮೈತ್ರಿ ಮುಂದುವರೆದಿದ್ದರೆ ರಾಜ್ಯದಲ್ಲಿ ಕಾಂಗ್ರೆಸ್ ಉಳಿಯುತ್ತಿರಲಿಲ್ಲ. ಜೆಡಿಎಸ್ ಅನ್ನು ಬಿಜೆಪಿಯ ಬಿ ಟೀಮ್ ಎಂದು ಜರಿದ ಕಾಂಗ್ರೆಸ್ ನಾಯಕರು 2018ರ ಚುನಾವಣಾ ಫಲಿತಾಂಶದ ನಂತರ ಶರವೇಗದಲ್ಲಿ ದೇವೇಗೌಡರ ಬಳಿ ಬಂದರು. ಅಂದು ಅಸಹಜ ಮೈತ್ರಿಯಾಯಿತು. ಮೈತ್ರಿ ಸರ್ಕಾರ ರಚನೆಯಾದ ಒಂದೇ ತಿಂಗಳಲ್ಲಿ ನಾನು ಕಣ್ಣೀರಾಕಿದೆ. ಒಂದು ರೀತಿಯ ಆತ್ಮಹತ್ಯೆ ಅದು. ಸರ್ಕಾರ ಮಾಡಿ 14 ತಿಂಗಳು ಹೇಗೆಲ್ಲಾ ನಡೆಸಿಕೊಂಡರು. ಕಾಂಗ್ರೆಸ್ ಸಂಬಂಧ ಬೆಳೆಸಿದ ಪರಿಣಾಮ ಮತ ಪ್ರಮಾಣ ಶೇ.19 ರಿಂದ 13ಕ್ಕಿಳಿಯಿತು. ಮೈತ್ರಿ ಸರ್ಕಾರ ಹೋಗಬೇಕು ಎಂದು ಸಿದ್ದರಾಮಯ್ಯನವರು ನೇರವಾಗಿ ಹೇಳಿದರು. ಕುಮಾರಸ್ವಾಮಿ ರಕ್ಷಣೆ ಮಾಡುತ್ತೇನೆ ಎನ್ನುವಂತೆ ಡಿ.ಕೆ.ಶಿವಕುಮಾರ್ ನಟಿಸಿದರು. ಜೋಡೆತ್ತು ಎಂದು ನಂಬಿಸಿ ನಮ್ಮನ್ನು ನಡುರಸ್ತೆಯಲ್ಲಿ ಬಿಟ್ಟು ಎತ್ತುಗಾಡಿ ಸಮೇತ ಹೊರಟು ಹೋದರು.

ರಾಜ್ಯದ ಹಿತ ಮುಖ್ಯ

ಕಾಂಗ್ರೆಸ್ ಜೊತೆ ಮೈತ್ರಿ ಮಾಡಿ ತಪ್ಪು ಮಾಡಿದ್ದನ್ನು ಈಗ ಸರಿಪಡಿಸಿಕೊಳ್ಳುತ್ತಿದ್ದೇವೆ. ರಾಜ್ಯದ ಹಿತದೃಷ್ಟಿಯಿಂದ ಬಿಜೆಪಿ ಜೊತೆ ಮೈತ್ರಿ ಅನಿವಾರ್ಯವಾಗಿದೆ. ಇದರಲ್ಲಿ ಪಕ್ಷಗಳ ರಕ್ಷಣೆಗಿಂತ ರಾಜ್ಯದ ಹಿತದೃಷ್ಟಿ ಮುಖ್ಯವಾಗಿದೆ. ಅಧಿಕಾರವನ್ನು ಮತ್ತೆ ಪಡೆಯಬೇಕೆಂಬ ಉದ್ದೇಶವಂತೂ ಇಲ್ಲ. ರಾಜ್ಯದ ಸಮಸ್ಯೆಗಳನ್ನು ಪರಿಹರಿಸಲು ಅಧಿಕಾರ ಬೇಕಿದೆ. ಅದು ಬೇರೆ ವಿಚಾರ. ಈಗಿನ ಮೈತ್ರಿ ಖಂಡಿತವಾಗಿ ಲೋಕಸಭಾ ಚುನಾವಣೆ ಫಲಿತಾಂಶದ ಮೇಲೆ ನಿಂತಿಲ್ಲ. ಮೈತ್ರಿಯನ್ನು ಇಷ್ಟಕ್ಕೆ ಮಿತಿಗೊಳಿಸುವ ಪ್ರಶ್ನೆಯೇ ಇಲ್ಲ. ರಾಜ್ಯ ಬಿಜೆಪಿ ನಾಯಕರಲ್ಲಿ ಶೇ.90ರಷ್ಟು ಮಂದಿ ನನ್ನ ಸ್ನೇಹಿತರು. ಎಲ್ಲಾ ನಾಯಕರೊಂದಿಗೆ ವಿಶ್ವಾಸದಿಂದ ನಡೆದುಕೊಳ್ಳದಿದ್ದರೆ ಮೈತ್ರಿಗೆ ಅರ್ಥವೇ ಇರುವುದಿಲ್ಲ.

ಮೋದಿ ದೊಡ್ಡತನ

ಕಾಂಗ್ರೆಸ್ ನಾಯಕತ್ವದಲ್ಲಿ ಹಲವಾರು ಪಕ್ಷಗಳು ಹೊಂದಾಣಿಕೆ ಮಾಡಿಕೊಳ್ಳಲು ಹೋದವು. ಆದರೆ ಜನ ನಂಬುವುದಿಲ್ಲ. ನಾಯಕತ್ವದ ವಿಷಯದಲ್ಲಿ ಪ್ರಧಾನಿ ಮೋದಿ ಹಾಗೂ ರಾಹುಲ್‌ಗಾಂಧಿ ಸಮಾನರು ಎಂದು ನಾನೂ ಸೇರಿದಂತೆ ಯಾರೂ ಒಪ್ಪುವುದಿಲ್ಲ. 2014 ಲೋಕಸಭಾ ಚುನಾವಣೆ ವೇಳೆ ಮೋದಿ ಪ್ರಧಾನಿಯಾದರೆ ನಾನು ದೇಶ ಬಿಡುತ್ತೇನೆ ಎಂದು ದೇವೇಗೌಡರು ಹೇಳಿದ್ದರು. ಮೋದಿ ಅವರು ಪ್ರಧಾನಿಯಾದ ಬಳಿಕ ದೇವೇಗೌಡರು ತಮ್ಮ ಸದಸ್ಯತ್ವಕ್ಕೆ ರಾಜೀನಾಮೆ ನೀಡಲು ನಿರ್ಧರಿಸಿದ್ದರು. ಆದರೆ ಮೋದಿ ಅವರೇ ದೇವೇಗೌಡರನ್ನು ಆಹ್ವಾನಿಸಿ, ಚರ್ಚಿಸುವ ವೇಳೆ ರಾಜೀನಾಮೆ ನಿರ್ಧಾರ ಕೈಬಿಡುವಂತೆ ಒತ್ತಾಯಿಸಿದ್ದರು. ಅದು ಮೋದಿ ಅವರ ದೊಡ್ಡತನ.

ಸರ್ಕಾರ ತಾನೇ ಉರುಳಲಿದೆ

ನಾವು ಈ ಸರ್ಕಾರ ಬೀಳಿಸಲು ಹೋಗುವುದಿಲ್ಲ. ರಾಷ್ಟ್ರ ಹಾಗೂ ರಾಜ್ಯದಲ್ಲಿನ ಬೆಳವಣಿಗೆ ಗಮನಿಸಿದರೆ ರಾಜ್ಯದ ಕಾಂಗ್ರೆಸ್ ಸರ್ಕಾರ ತಾನಾಗಿಯೇ ಬೀಳುವಂತಿದೆ. ನಾವೆಲ್ಲೂ ಸರ್ಕಾರ ಬೀಳಿಸುತ್ತೇವೆ ಎಂದು ಹೇಳಿಲ್ಲ. ಯಾವ ಮುಹೂರ್ತವನ್ನೂ ಇಟ್ಟಿಲ್ಲ. ಆದರೆ ಸಚಿವ ರಾಜಣ್ಣ ಅವರೇ ಹೇಳಿದ್ದಾರೆ. ಸಂಸತ್ ಚುನಾವಣೆ ನಂತರ ಸರ್ಕಾರ ಬೀಳುವ ಆತಂಕ ಇದೆ. ಹಾಗಾಗಿ ಇನ್ನು ಮೂವರು ಉಪಮುಖ್ಯಮಂತ್ರಿಗಳನ್ನು ಮಾಡುವ ಅಗತ್ಯವಿದೆ ಎಂದು ಅಭಿಪ್ರಾಯಿಸಿದ್ದಾರೆ. ಈ ರೀತಿಯ ಚರ್ಚೆಗಳು ಅವರಲ್ಲೇ ನಡೆದಿದೆ. ಇದು ಪೂರ್ಣ ಅವಧಿ ಸರ್ಕಾರವಲ್ಲ. ಯಾವಾಗ ಬೇಕಾದರೂ ಬೀಳಬಹುದು ಎಂದು ಅವರೇ ಹೇಳುತ್ತಿದ್ದಾರೆ. ಮಹಾರಾಷ್ಟ್ರದಲ್ಲಿ ಉದ್ಧವ್ ಠಾಕ್ರೆಯನ್ನು ಅಷ್ಟು ಸುಲಭವಾಗಿ ಇಳಿಸಿ ಹೊಸ ಮೈತ್ರಿಯೊಂದಿಗೆ ಸರ್ಕಾರ ರಚನೆ ಮಾಡುತ್ತಾರೆ ಎಂದು ಯಾರಾದರೂ ಊಹಿಸಿದ್ದರಾ?. ಜೆಡಿಎಸ್–ಕಾಂಗ್ರೆಸ್ ಮೈತ್ರಿ ಸರ್ಕಾರವಿದ್ದಾಗ 17 ಜನ ಶಾಸಕರು ಬಿಜೆಪಿ ಸೇರಿ ಸರ್ಕಾರ ರಚಿಸಲು ಸಹಕರಿಸುತ್ತಾರೆ ಎಂದು ಯಾರಾದರೂ ಯೋಚಿಸಿದ್ದರಾ?. ರಾಜಕಾರಣದಲ್ಲಿ ಏನು ಬೇಕಾದರೂ ಆಗಬಹುದು.

ಪಕ್ಷದಲ್ಲಿ ಭಾರಿ ವ್ಯತ್ಯಾಸವಾಗದು

ನಾವು ಬಿಜೆಪಿ ಸಂಬಂಧ ಬೆಳೆಸಿದ್ದೇವೆ ಎಂದು ಪಕ್ಷದಲ್ಲಿ ದೊಡ್ಡ ಮಟ್ಟದಲ್ಲಿ ವ್ಯತ್ಯಾಸವಾಗದು. ಕಳೆದ ವಿಧಾನಸಭೆ ಚುನಾವಣೆಗೆ ಮುಂಚೆ ಯಾರು ಬಂದಿದ್ದರೋ ಅವರು ಹೋಗಬಹುದು. ಎಲ್ಲರನ್ನೂ ಉಳಿಸಿಕೊಳ್ಳಲು ಪ್ರಯತ್ನಿಸುತ್ತೇವೆ. ಆದರೂ ಹೊರಟು ನಿಂತರೆ ಏನೂ ಮಾಡಲಾಗದು. ಜೆಡಿಎಸ್ ಎಲ್ಲಾ ಸಮುದಾಯಗಳೊಂದಿಗೆ ಮುಂದುವರಿಯಲಿದೆ ಎಂದು ವರಿಷ್ಠರಾದ ದೇವೇಗೌಡರೇ ಸ್ಪಷ್ಟಪಡಿಸಿದ್ದಾರೆ. ಯಾವುದೇ ಒಂದು ವರ್ಗವನ್ನು ನಂಬಿ ರಾಜಕಾರಣ ಮಾಡಲು ಸಾಧ್ಯವಿಲ್ಲ. ನಮ್ಮದು ರಾಜ್ಯದ ಆರೂವರೆ ಕೋಟಿ ಜನರಿಗಾಗಿ ಇರುವ ಪಕ್ಷ.

ಜಾತ್ಯಾತೀತತೆ ಎಂದರೇನು?

ಜೆಡಿಎಸ್‌ನಲ್ಲಿ ಜಾತ್ಯಾತೀತ ಎನ್ನುವ ಪದ ತೆಗೆಯುವಂತೆ ಕಾಂಗ್ರೆಸ್‌ನವರು ಹೇಳಿಕೆ ನೀಡಿದ್ದಾರೆ. ಜಾತ್ಯಾತೀತತೆ ಎಂದರೆ ಏನು ಎಂದು ಜನರಿಗೆ ಅರ್ಥವಾಗುವಂತೆ ಹೇಳುವಂತೆ ಕಾಂಗ್ರೆಸ್ ನಾಯಕರನ್ನೇ ಒತ್ತಾಯಿಸುತ್ತಿದ್ದೇನೆ. ನಿಮ್ಮದು ಜಾತ್ಯಾತೀತ ಪಕ್ಷ ಎನ್ನುತ್ತೀರಿ. ಆದರೆ ಸಚಿವ ಸ್ಥಾನ ನೀಡುವಾಗ, ಅಧಿಕಾರಿಗಳ ನೇಮಕ ಮಾಡುವಾಗ ಜಾತಿ ನೋಡುತ್ತೀರಿ. ಇದು ಯಾವ ಜಾತ್ಯಾತೀತತೆ. ಈ ದೇಶದಲ್ಲಿ ಅಲ್ಪಸಂಖ್ಯಾತರಿಗೆ ರಕ್ಷಣೆ ಇಲ್ಲ ಎನ್ನುತ್ತೀರಿ. ಹಾಗಾದರೆ ಅವರಿಗಿಂತ ಕಡಿಮೆ ಸಂಖ್ಯೆಯಲ್ಲಿರುವ ಸಮುದಾಯಗಳಿಗೆ ರಕ್ಷಣೆ ಸಿಕ್ಕಿಲ್ಲವೇ?.

ಆತ್ಮಾವಲೋಕನ ಮಾಡಿಕೊಳ್ಳಬೇಕು

ಹಿಂದುಗಳನ್ನು ಕೋಮುವಾದಿಗಳು ಎನ್ನುವುದಾದರೆ ಅಲ್ಪಸಂಖ್ಯಾತರನ್ನು ಏನೆಂದು ಕರೆಯುತ್ತೀರಿ. ಅವರನ್ನು ಜಾತ್ಯಾತೀತ ಎಂದು ಏಕೆ ಕರೆಯುತ್ತೀರಿ. ಕಾಂಗ್ರೆಸ್ ಜೊತೆ ಹೋಗಿದ್ದಕ್ಕೆ ನನಗೆ ಮತ್ತು ನಮ್ಮ ತಂದೆಗೆ ವಿಷಾದವಿದೆ. ಅದರಿಂದಲೇ ತಂದೆಯವರು ಈ ಬಿಜೆಪಿ ಜೊತೆ ಮೈತ್ರಿಗೆ ಒಪ್ಪಿಗೆ ನೀಡಿದ್ದಾರೆ. ಕಾಂಗ್ರೆಸ್ ಹೈಕಮಾಂಡ್ ನಮ್ಮನ್ನು ದಾರಿ ತಪ್ಪಿಸಿತು. ಸರ್ಕಾರ ಮಾಡುವ ತೀರ್ಮಾನ ಮಾಡಿದ ಮೇಲೆ ಇಲ್ಲಿನ ನಾಯಕರನ್ನು ಹತೋಟಿಯಲ್ಲಿಡಬೇಕಾಗಿತ್ತು. ನನ್ನನ್ನು ಅವಕಾಶವಾದಿ ಎನ್ನುವವರು ಒಮ್ಮೆ ಆತ್ಮಾವಲೋಕನ ಮಾಡಿಕೊಳ್ಳಬೇಕು. ಕಾಂಗ್ರೆಸ್ ನಾಯಕರು ಯಾವ ಕಾರಣಕ್ಕೆ ಜೆಡಿಎಸ್ ಮನೆ ಬಾಗಿಲು ತಟ್ಟಿದರು. ಅವರದ್ದೂ ಅವಕಾಶವಾದಿತನ ಅಲ್ಲವೇ?. ಡಿ.ಕೆ.ಶಿವಕುಮಾರ್ ಹಾಗೂ ಸಿದ್ದರಾಮಯ್ಯನವರಿಗೆ ನಾನು ಮುಖ್ಯಮಂತ್ರಿಯಾಗಿದ್ದು ಒಂದಿಷ್ಟೂ ಇಷ್ಟವಿರಲಿಲ್ಲ. ಕಾಂಗ್ರೆಸ್ ಜೊತೆ ಹೋಗಿದ್ದರಿಂದಲೇ ಕಳೆದ ಲೋಕಸಭಾ ಚುನಾವಣೆಯಲ್ಲಿ ನಮಗೆ ಸೋಲಾಯಿತು ಎನ್ನುವುದರಲ್ಲಿ ಯಾವುದೇ ಸಂಶಯವಿಲ್ಲ.

ಬೇಡುವ ಸ್ಥಿತಿಯಲ್ಲಿಡಬೇಡಿ

ಜನರನ್ನು ಇನ್ನೂ ಎಷ್ಟು ಕಾಲ ಕೈಯೊಡ್ಡಿ ಬೇಡುವ ಸ್ಥಿತಿಯಲ್ಲಿಡುತ್ತೀರಿ. ನಿಮ್ಮ ಫ್ರೀ ಸ್ಕೀಂಗಳ ಬಗ್ಗೆ ತಕರಾರಿಲ್ಲ. ಆದರೆ ರಾಜ್ಯದ ಅಭಿವೃದ್ಧಿ ಏನಾಗಿದೆ. ನೀರಾವರಿ ಪರಿಸ್ಥಿತಿ ಏನು. ಕಾಂಗ್ರೆಸ್ ನಡಿಗೆ ಕೃಷ್ಣ ಕಡೆಗೆ ಎಂದಿರಿ. ಆದರೆ ಕೃಷ್ಣ ಮೇಲ್ದಂಡೆ ಕತೆ ಏನಾಯಿತು. ನಮ್ಮ ನೀರು ನಮ್ಮ ಹಕ್ಕು ಎಂದು ಪಾದಯಾತ್ರೆ ಮಾಡಿದಿರಿ. ಆದರೆ ಮೇಕೆದಾಟು ಯೋಜನೆ ಏನಾಯಿತು.

ಸೆಡ್ಡು ಹೊಡೆಯುವುದು ಖಚಿತ

ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ–ಜೆಡಿಎಸ್ ಮೈತ್ರಿಯಾಗಿ ಕಾಂಗ್ರೆಸ್‌ಗೆ ಸೆಡ್ಡು ಹೊಡೆಯುವುದು ಖಚಿತ. ನಾವು 28 ಕ್ಷೇತ್ರಗಳಲ್ಲೂ ತಮಗಾದ ರೀತಿಯಲ್ಲಿ ಅಳಿಲು ಸೇವೆ ಸಲ್ಲಿಸುತ್ತೇವೆ. ಜೆಡಿಎಸ್ ಮುಗಿಸಬೇಕು ಎನ್ನುವುದೇ ಕಾಂಗ್ರೆಸ್ ಮೂಲ ಉದ್ದೇಶವಾಗಿತ್ತು. ಅದಕ್ಕಾಗಿಯೇ ದೇವೇಗೌಡರು ಕಠಿಣ ನಿರ್ಧಾರಕ್ಕೆ ಬಂದಿದ್ದಾರೆ. ಮೈತ್ರಿಯಿಂದ ವಿಧಾನಸಭೆ ಹಾಗೂ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಗೋಜಲು ಆಗಬಹುದು. ಆದರೆ ಉಭಯ ಪಕ್ಷದವರೂ ಸಮನ್ವಯತೆಯಿಂದ ಪರಿಹರಿಸಿಕೊಳ್ಳಬಹುದು. ಏಕರೂಪ ನಾಗರಿಕ ಸಂಹಿತೆ ಬೇಕು, ಜಾರಿಯಾಗಬೇಕು ಎಂಬ ಆಗ್ರಹವಿದೆ. ಕಾನೂನು ವ್ಯಾಪ್ತಿಯೊಳಗೆ ಸಂವಿಧಾನದ ಚೌಕಟ್ಟಿನಲ್ಲಿ ಎನ್‌ಡಿಎ ಕೈಗೊಳ್ಳುವ ನಿರ್ಧಾರಗಳಿಗೆ ನಮ್ಮ ಬೆಂಬಲ ಇರುತ್ತದೆ.

ಮೋದಿಯವರ ಮಾತು ಕೇಳಬೇಕಿತ್ತು

ಬಹಳ ಹಿಂದೆ ಮೋದಿ ಅವರು ಸಿಎಂ ಆಗು ಎಂದಾಗ ಒಪ್ಪದೆ ಬಂದಿದ್ದು ನನ್ನ ಮೂರ್ಖತನ. 2018ರ ಚುನಾವಣಾ ಫಲಿತಾಂಶ ಬಂದಾಗಲೂ ಅಮಿತ್ ಷಾ ನನ್ನನ್ನು ಸಂಪರ್ಕಿಸಲು ಪ್ರಯತ್ನಿಸಿದರು. ಇತ್ತೀಚೆಗೆ ಭೇಟಿಯಾದಾಗ ಆ ಸಂದರ್ಭವನ್ನು ನೆನೆದರು. ಅಂದು ಒಪ್ಪಿಗೆ ಕೊಟ್ಟಿದ್ದರೆ 5 ವರ್ಷ ನೀವೇ ಸಿಎಂ ಆಗಿರಬಹುದಿತ್ತು. ಈಗಲೂ ಮೈತ್ರಿ ಮುಂದುವರೆಯುತ್ತಿತ್ತು ಎಂದರು. ಆಗಲೇ ಸೂಕ್ತ ನಿರ್ಧಾರಕ್ಕೆ ಬಂದಿದ್ದರೆ ಈ ಪರಿಸ್ಥಿತಿಯೇ ಸೃಷ್ಟಿಯಾಗುತ್ತಿರಲಿಲ್ಲ.

ನಾವಿಬ್ಬರು ಸ್ಪರ್ಧಿಸಲ್ಲ

ಮುಂಬರುವ ಲೋಕಸಭಾ ಚುನಾವಣೆಯಲ್ಲಿ ನಾನು ಮತ್ತು ನನ್ನ ಮಗ ಸ್ಪರ್ಧೆ ಮಾಡಲ್ಲ. ನಾಡಿನ ಜನತೆಗೆ ಪಕ್ಷದ ಕೆಲ ವಿಷಯಗಳಲ್ಲಿ ವಿಶ್ವಾಸ ಮೂಡಿಸುವುದಷ್ಟೇ ನಮ್ಮ ಗುರಿ. ಈ ಹಿನ್ನಲೆಯಲ್ಲಿ ನಿಖಿಲ್‌ಗೆ ಪಕ್ಷದ ಸಂಘಟನೆಯಲ್ಲಿರುವಂತೆ ತಿಳಿಸಿದ್ದೇನೆ ಅಷ್ಟೇ. ಮೈತ್ರಿ ವಿಚಾರದಲ್ಲಿ ಪಕ್ಷದ ಅಧ್ಯಕ್ಷರೊಂದಿಗೆ (ಇಬ್ರಾಹಿಂ) ಚರ್ಚೆ ಮಾಡಿದ್ದೆ. ಎರಡು ಸಭೆಗಳಲ್ಲಿ ಅವರ ಸಮ್ಮುಖದಲ್ಲೇ ಚರ್ಚೆಯಾಗಿತ್ತು. ಎಲ್ಲರ ವಿಶ್ವಾಸದೊಂದಿಗೆ ನಿರ್ಧಾರ ಕೈಗೊಳ್ಳಬೇಕು ಎಂಬುದು ನಮ್ಮ ಉದ್ದೇಶವಾಗಿತ್ತು.

ಹಿಟ್ ಅಂಡ್ ರನ್ ಅಲ್ಲ

ಪೆನ್‌ಡ್ರೈವ್ ಬಗ್ಗೆ ಹೇಳಿದಾಗ ನನ್ನನ್ನು ಹಿಟ್ ಅಂಡ್ ರನ್ ಮಾಡುತ್ತಾರೆ ಎಂದು ಆರೋಪ ಮಾಡಿದರು. ಹಾಗಾದರೆ ಕಾಂಗ್ರೆಸ್‌ನವರು ಚುನಾವಣೆ ಪ್ರಚಾರ ದಲ್ಲಿ ಬಿಜೆಪಿ ವಿರುದ್ಧ ಮಾಡಿದ 40 ಪರ್ಸೆಂಟ್ ಆರೋಪಕ್ಕೆ ಅವರ ಬಳಿ ಯಾವ ಆಧಾರವಿತ್ತು. ನಾನು 2008ರಲ್ಲಿ ದಾಖಲೆ ಸಮೇತ ಹಲವು ವಿಷಯಗಳನ್ನು ಮುಂದಿಟ್ಟಿದ್ದೆ. ಹಣದ ವ್ಯವಹಾರ ನಡೆದಾಗ ಯಾವ ದಾಖಲೆ ಇರುವುದಿಲ್ಲ.

ಆರೋಗ್ಯದ ಬಗ್ಗೆ ನಿಗಾ

ಆರೋಗ್ಯದ ವಿಚಾರದಲ್ಲಿ ವೈದ್ಯರ ಸಲಹೆಯನ್ನು ಕಡ್ಡಾಯವಾಗಿ ಪಾಲಿಸುತ್ತಿದ್ದೇನೆ. ಈ ವಿಚಾರದಲ್ಲಿ ಬಹಳ ದುಡುಕಿದ್ದೇನೆ. ಆರೋಗ್ಯದ ವಿಚಾರದಲ್ಲಿ ಸಂಪೂರ್ಣವಾಗಿ ದೇವೇಗೌಡರನ್ನು ಅನುಸರಿಸುತ್ತಿದ್ದೇನೆ. ನನ್ನನ್ನು ನಂಬಿದವರಿಗಾಗಿ ಆರೋಗ್ಯ ಕಾಪಾಡಿಕೊಳ್ಳುತ್ತೇನೆ. ಇತ್ತೀಚೆಗೆ ಕುಟುಂಬದಲ್ಲಿ 13–14 ಜನ ವೈದ್ಯರಿದ್ದಾರೆ. ಈಗಿನಂತೆ ನಿಗಾ ವಹಿಸಿದ್ದರೆ ಸಮಸ್ಯೆಗಳೇ ಬರುತ್ತಿರಲಿಲ್ಲ ಎಂದು ಹೇಳಿದರು.

ಉಭಯ ಪಕ್ಷದವರಲ್ಲಿ ಮನವಿ

ಬಿಜೆಪಿಯ ಹಲವಾರು ಸ್ನೇಹಿತರು, ಕಾರ್ಯಕರ್ತರು ಕುಮಾರ ಸ್ವಾಮಿಯವರನ್ನೇ ವಿಪಕ್ಷ ನಾಯಕರನ್ನಾಗಿ ಮಾಡಬೇಕು ಎಂಬ ಭಾವನೆ ವ್ಯಕ್ತಪಡಿಸಿದ್ದಾರೆ. ಆದರೆ ಬಿಜೆಪಿಯಲ್ಲಿ ಹಲವರು ಸಮರ್ಥರಿದ್ದಾರೆ. ಹಾಗಾಗಿ ಆ ಸ್ಥಾನವನ್ನು ಖಾಲಿ ಬಿಡಬೇಡಿ, ಯಾರನ್ನಾದರೂ ನೇಮಕ ಮಾಡಿ ಎಂದು ಅಮಿತ್ ಷಾ ಅವರಲ್ಲೂ ಹೇಳಿದೆ. ಈ ಸಂದರ್ಭದಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರು ಸಹೋದರರಂತೆ ಸಮನ್ವಯತೆಯಿಂದ ಕೆಲಸ ಮಾಡಬೇಕು. ರಾಜಕೀಯ ಮಾತ್ರವಲ್ಲದೆ ರಾಜ್ಯದ ಸಮಸ್ಯೆ ಬಗೆಹರಿಸಲು ಪರಸ್ಪರ ಒಟ್ಟಾಗಿ ದುಡಿಯಬೇಕು ಎಂದು ಮನವಿ ಮಾಡುತ್ತೇನೆ.

ಕಲ್ಲು, ಕಬ್ಬಿಣದ ರಾಡ್‌ಗಳನ್ನಿಟ್ಟು ವಂದೇ ಭಾರತ್ ರೈಲು ಹಳಿ ತಪ್ಪಿಸಲು ದುಷ್ಕರ್ಮಿಗಳ ಯತ್ನ



ತುರ್ತು ನಿಲುಗಡೆಯಿಂದ ತಪ್ಪಿದ ಭಾರಿ ಅನಾಹುತ

ನವದೆಹಲಿ: ಕೆಲವು ದುಷ್ಕರ್ಮಿಗಳು ಹಳಿಯ ಮೇಲೆ ಕಲ್ಲುಗಳು ಮತ್ತು ಕಬ್ಬಿಣದ ರಾಡ್‌ಗಳನ್ನಿರಿಸಿ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲನ್ನು ಹಳಿ ತಪ್ಪಿಸಲು ಯತ್ನಿಸಿದ್ದು, ತಕ್ಷಣ ಎಚ್ಚೆತ್ತ ಅಧಿಕಾರಿ ಮತ್ತು ಸಿಬ್ಬಂದಿ ರೈಲನ್ನು ತುರ್ತಾಗಿ ನಿಲ್ಲಿಸಿ ಭಾರಿ ಅನಾಹುತ ತಪ್ಪಿಸಿದ್ದಾರೆ.

ರಾಜಸ್ಥಾನದ ಚಿತ್ತೋರ್‌ಗಢ ಜಿಲ್ಲೆಯಲ್ಲಿ ರೈಲ್ವೆ ಅಧಿಕಾರಿಗಳು ಹಳಿಯ ಮೇಲೆ ಕಲ್ಲು, ಬಂಡೆ ಮತ್ತು ರಾಡ್‌ಗಳನ್ನು ಪತ್ತೆ ಹಚ್ಚಿ ಉದಯಪುರದಿಂದ ಜೈಪುರಕ್ಕೆ ತೆರಳುತ್ತಿದ್ದ ವಂದೇ ಭಾರತ್ ರೈಲು ಸಂಚಾರ ತಡೆದಿದ್ದಾರೆ. ಘಟನಾ ಸ್ಥಳಕ್ಕೆ ಡಿಎಸ್‌ಸಿ ಅಜ್ಮೀರ್, ಐಪಿಎಫ್ ಭಿಲ್ವಾರಾ, ಪಿಡಬ್ಲ್ಯುಐ ಗಂಗರಾರ್, ಸ್ಥಳೀಯ ಪೊಲೀಸರು ಮತ್ತು ಜಿಆರ್‌ಪಿ ಅಧಿಕಾರಿಗಳು ಭೇಟಿ ನೀಡಿದ ನಂತರ ರೈಲ್ವೆ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿದೆ. ಸಾಮಾಜಿಕ ಮಾಧ್ಯಮದಲ್ಲಿ ಹರಿದಾಡಿದ ವಿಡಿಯೋದಲ್ಲಿ ಗಂಗಾರಾರ್–ಸೋನಿಯಾನಾ ವಿಭಾಗದಲ್ಲಿ ರೈಲ್ವೆ ಟ್ರ್ಯಾಕ್ ಮೇಲೆ ಕಲ್ಲುಗಳು ಮತ್ತು ರಾಡ್‌ಗಳನ್ನು ಇಟ್ಟಿರುವುದು ಕಂಡುಬಂದಿದೆ. ಈ ವರ್ಷಾರಂಭದಲ್ಲಿ ವಂದೇ ಭಾರತ್ ರೈಲುಗಳ ಮೇಲೆ ಕಲ್ಲು ತೂರಾಟ ಮಾಡಿರುವ ಪ್ರಕರಣಗಳು ಹಲವು ರಾಜ್ಯಗಳಲ್ಲಿ ವರದಿಯಾಗಿದ್ದವು.

ಈ ಹಿಂದಿನ ಘಟನೆ: ಇತ್ತೀಚೆಗೆ, ಉತ್ತರ ಪ್ರದೇಶದ ಗೋರಖ್‌ಪುರ ಮತ್ತು ಲಕ್ನೋ ನಡುವೆ ಸಂಚರಿಸುವ ವಂದೇ ಭಾರತ್ ರೈಲಿನ ಮೇಲೆ ಕಿಡಿಗೇಡಿಗಳು ಕಲ್ಲೆಸೆದಿದ್ದರು. ಮಲ್ಹೌರ್ ಬಳಿ ಗೋರಖ್‌ಪುರದಿಂದ ಲಕ್ನೋಗೆ ಬರುತ್ತಿದ್ದ ವಂದೇ ಭಾರತ್ ಎಕ್ಸ್‌ಪ್ರೆಸ್ ಮೇಲೆ ಕಲ್ಲು ತೂರಾಟ ನಡೆಸಲಾಗಿತ್ತು. ಇದರಿಂದ ಗಾಜಿಗೆ ಹಾನಿಯಾಗಿತ್ತು. ಕಲ್ಲು ತೂರಾಟ ನಡೆಸಿದವರಿಗಾಗಿ ಆರ್‌ಪಿಎಫ್ ಹುಡುಕಾಟ ಆರಂಭಿಸಿತ್ತು. ರೈಲು ಗೋರಖ್‌ಪುರದಿಂದ ಲಕ್ನೋಗೆ ಸಂಚಾರ ಮಾಡುತ್ತಿತ್ತು. ಇದೇ ವೇಳೆ ಮಲ್ಹೌರ್ ರೈಲು ನಿಲ್ದಾಣದ ಮೂಲಕ ಸಾಗುತ್ತಿದ್ದಾಗ ಕಿಡಿಗೇಡಿಗಳು ಕಲ್ಲು ತೂರಾಟ ನಡೆಸಿದ್ದರು. ಇದರಿಂದಾಗಿ ರೈಲಿನ ಕೋಚ್ ಸಂಖ್ಯೆ ಸಿ–3 ಮೂರರ ಗಾಜು ಜಖಂಗೊಂಡಿತ್ತು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com



ಮೈಸೂರಿನ ವಾರ್ಡ್ ನಂ.23ರಲ್ಲಿ ಬಿಜೆಪಿ ವತಿಯಿಂದ ಮಹಾತ್ಮ ಗಾಂಧಿ ಜಯಂತಿ ಅಂಗವಾಗಿ ಸ್ವಚ್ಛತೆಯೇ ಸೇವಾ ತ್ಯಾಜ್ಯ ಮುಕ್ತ ಭಾರತ ಅಭಿಯಾನವನ್ನು ಮಾಜಿ ಶಾಸಕ ಎಲ್.ನಾಗೇಂದ್ರ ಅಧ್ಯಕ್ಷತೆಯಲ್ಲಿ ನಡೆಯಿತು. ನಗರಪಾಲಿಕೆ ಸದಸ್ಯೆ ಪ್ರಮೀಳಾ ಭರತ್, ಮುಖಂಡ ದಿನೇಶ್‌ಗೌಡ, ಹೆಲ್ತ್ ಇನ್ಸ್‌ಪೆಕ್ಟರ್ ಮಂಜುಕುಮಾರ್, ಹೆಲ್ತ್ ಸೂಪರ್ ವೈಸರ್ ನಂಜುಂಡಸ್ವಾಮಿ, 23ನೇ ವಾರ್ಡಿನ ಪೌರಕಾರ್ಮಿಕರು, ವಿಘ್ನೇಶ್ವರ ಭಟ್, ಶ್ರೀನಿವಾಸ್, ಪಾಪಣ್ಣ, ಸುದರ್ಶನ್, ಪ್ರವೀಣ್, ಚರಣ್, ರಾಮು, ಪ್ರಸಾದ್, ಸತೀಶ್, ವಿನುತ್, ಲಕ್ಷ್ಮೀ, ಶ್ರೀಲಕ್ಷ್ಮಿ, ರಚನಾ, ಜ್ಯೋತಿ ಇನ್ನಿತರರಿದ್ದರು.



'ನಮ್ಮ ಮೈಸೂರು ಫೌಂಡೇಷನ್' ಹಾಗೂ ಸ್ಥಳೀಯ ನಿವಾಸಿಗಳ ಸಹಭಾಗಿತ್ವದಲ್ಲಿ ಸಿಎಫ್‌ಟಿಆರ್‌ಐ ಬಡಾವಣೆಯಲ್ಲಿ ಸ್ವಚ್ಛತಾ ಕಾರ್ಯ ನಡೆಯಿತು. ಮೇಯರ್ ಶಿವಕುಮಾರ್, ಪಾಲಿಕೆ ಆಯುಕ್ತ ಅಶಾದ್ ಉರ್‌ರೆಹಮಾನ್ ಷರೀಫ್, ಫೌಂಡೇಷನ್ ಟ್ರಸ್ಟಿ ಡಾ.ರಂಗರಾಜು, ಸಿಎಫ್‌ಟಿಆರ್‌ಐ ಬಡಾವಣೆ ಅಧ್ಯಕ್ಷ ಪಾಂಡುರಂಗರಾವ್, ರಮೇಶ್, ಮನೀಶ್ ಠಾಕೂರ್, ರಾಮ್ ಟಿಕ್ಕೆ, ಸುಜಾತಾ ಶ್ರೀನಿವಾಸ್, ಜಾನಕಿ ಸುಬ್ರಮಣ್ಯ, ಮೀನಾ, ಅಲೋಕ್ ಶ್ರೀವತ್ಸ, ಮಣಿ, ಶ್ರೀನಿವಾಸ್, ಪ್ರದೀಪ್ ಇದ್ದರು.



ಮಹಾತ್ಮ ಗಾಂಧೀಜಿ ಜಯಂತಿ ಅಂಗವಾಗಿ ಮೈಸೂರಿನ ಪುರಭವನದ ಬಳಿ ಇರುವ ಗಾಂಧಿ ಪ್ರತಿಮೆಗೆ ಮೈಸೂರು ನಗರ ಕಾಂಗ್ರೆಸ್ ಹಿಂದುಳಿದ ವರ್ಗದ ಅಧ್ಯಕ್ಷ ಎನ್.ಆರ್.ನಾಗೇಶ್ ಪುಷ್ಪ ನಮನ ಸಲ್ಲಿಸಿದರು. ಕಾಂಗ್ರೆಸ್ ಮುಖಂಡರಾದ ರಾಜು ಉಪ್ಪಾರ್, ಮಹೇಶ್ ಮಡಿವಾಳ, ರವಿ ಕುಂಬಾರ್, ದಿನೇಶ್, ಸಂಜೀವ್‌ಕುಮಾರ್, ಮಂಗಳ, ಲೀಲಾವತಿ, ಮಂಜುಳಾ ಇನ್ನಿತರರಿದ್ದರು.



ಮಹಾತ್ಮ ಗಾಂಧಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿ ಅಂಗವಾಗಿ ಮಾನಸಗಂಗೋತ್ರಿ ಆವರಣದಲ್ಲಿ ಕರ್ನಾಟಕ ಪ್ರಜಾ ಪಾರ್ಟಿ (ರೈತ ಪರ್ವ) ವತಿಯಿಂದ ಸ್ವಚ್ಛತಾ ಕಾರ್ಯ ನಡೆಸಲಾಯಿತು. ಪಕ್ಷದ ಸಂಸ್ಥಾಪಕ ಅಧ್ಯಕ್ಷ ಡಾ.ಬಿ.ಶಿವಣ್ಣ, ಮೈಸೂರು ನಗರಾಧ್ಯಕ್ಷ ಆರ್.ಶ್ರೀನಿವಾಸ್, ನಟ ಮಂಡ್ಯ ರಮೇಶ್ ಸಹೋದರ ಮಂಡ್ಯ ಆನಂದ್, ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷ ಸ್ಟೀಫನ್ ಜೋಸೆಫ್, ಸಂಚಾಲಕರಾದ ಚಂದ್ರು, ಟಿ.ಮಂಜುಳಾ ಇನ್ನಿತರರಿದ್ದರು.



ಮೈಸೂರಿನ ಸ್ವರ್ಣ ಜಯಂತಿ ಉದ್ಯಾನವನದಲ್ಲಿ ಸ್ವಚ್ಛತಾ ಕಾರ್ಯ ನಡೆಸುವ ಮೂಲಕ ಮೈಸೂರು ನಗರ ಮತ್ತು ಜಿಲ್ಲಾ ಚಿಲ್ಲರೆ ಔಷಧಿ ವ್ಯಾಪಾರಿಗಳ ಸಂಘದಿಂದ ಗಾಂಧೀಜಿ ಜಯಂತಿ ಆಚರಿಸಲಾಯಿತು. ಸಂಘದ ಅಧ್ಯಕ್ಷ ಎಂ.ರಾಜು, ಕಾರ್ಯಾಧ್ಯಕ್ಷ ಎನ್.ದೇವರಾಜ್, ಖಜಾಂಚಿ ಮನ್ಸೂರ್ ಅಹಮದ್ ಖಾನ್, ಸದಸ್ಯರಾದ ವಿ.ಹೆಚ್.ಗಂಗಾಧರ್, ಟಿ.ಎಸ್.ಮಹೇಶ್, ಎ.ಪಿ.ವಿರೂಪಾಕ್ಷ, ಎಸ್.ಎನ್.ಸತೀಶ್‌ಬಾಬು, ಸ್ಪಂದನ ಅಧ್ಯಕ್ಷ ಎಂ.ಜಯಶಂಕರ್ ಉಪಸ್ಥಿತರಿದ್ದರು.



ಮೈಸೂರಿನ ಬನ್ನಿಮಂಟಪ ಹುಡ್ಕೋದಲ್ಲಿರುವ ಸರ್ಕಾರಿ ಪ್ರೌಢಶಾಲೆಯಲ್ಲಿ ಮಹಾತ್ಮ ಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿ ಆಚರಿಸಲಾಯಿತು. ದಕ್ಷ ಕಾಲೇಜಿನ ಸಂಸ್ಥಾಪಕ ಜಯಚಂದ್ರರಾಜು, ಗೌತಮ್, ಶ್ರೀಮತಿ ಅನಿತಾ, ಶ್ರೀಮತಿ ಜಯಂತಿ, ಮುಖ್ಯ ಶಿಕ್ಷಕಿ ಶ್ರೀಮತಿ ರುಕ್ಮಿಣಿ ಇನ್ನಿತರರು ಉಪಸ್ಥಿತರಿದ್ದರು.



ಮಹಾತ್ಮ ಗಾಂಧೀಜಿ ಜಯಂತಿ ಪ್ರಯುಕ್ತ ಹಾಗೂ ಗಾಂಧಿ ಸ್ಮರಣೆಯಲ್ಲಿ ಒಂದು ಗಂಟೆ ಕಾಲ ಸ್ವಚ್ಛತೆಯಲ್ಲಿ ತೊಡಬೇಕೆಂಬ ಪ್ರಧಾನಿ ಮೋದಿಯವರ ಕರೆ ಮೇರೆಗೆ ಮೈಸೂರಲ್ಲಿ ಮಾಜಿ ಮೇಯರ್ ಸಂದೇಶ್ ಸ್ವಾಮಿ ರಸ್ತೆಬದಿಯ ಕಳೆ ಗಿಡಗಳನ್ನು ಯಂತ್ರ ಮುಖೇನ ತೆರವುಗೊಳಿಸುವ ಮೂಲಕ ಸ್ವಚ್ಛತಾ ಶ್ರಮದಾನ ನಡೆಸಿದರು.

ಇಂದು ಸೇನಾ ಪಡೆ ಪ್ರತಿಭಟನೆ

ಮೈಸೂರು,ಅ.2(ಪಿಎಂ)– ಮೈಸೂರಿನ ಪುರಭವನದ ಮುಂಭಾಗ, ದೊಡ್ಡ ಗಡಿಯಾರ ಬಳಿಯಲ್ಲಿ ಕಾವೇರಿ ನದಿ ನೀರು ಹಂಚಿಕೆ ಸಂಬಂಧ ರಾಜ್ಯ ಪರವಾಗಿ ಕಾವೇರಿ ಕ್ರಿಯಾ ಸಮಿತಿ ಹಮ್ಮಿಕೊಂಡಿರುವ ನಿರಂತರ ಹೋರಾಟದಲ್ಲಿ ಅ.3ರಂದು ಬೆಳಗ್ಗೆ 11.30ಕ್ಕೆ ಕರ್ನಾಟಕ ಸೇನಾ ಪಡೆ ವತಿಯಿಂದ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಸಮಿತಿ ಅಧ್ಯಕ್ಷ ಜಯಪ್ರಕಾಶ್, ಸಮಿತಿ ಗೌರವಾಧ್ಯಕ್ಷರೂ ಆದ ಎಂಎಲ್‌ಸಿ ಸಿ.ಎನ್.ಮಂಜೇಗೌಡ ಸೇರಿದಂತೆ ಹಲವರು ಪಾಲ್ಗೊಳ್ಳಲಿದ್ದಾರೆ ಎಂದು ಸೇನಾ ಪಡೆಯ ಜಿಲ್ಲಾಧ್ಯಕ್ಷ ತೇಜೇಶ್ ಲೋಕೇಶ್‌ಗೌಡ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರು ಜಿಲ್ಲಾಡಳಿತದಿಂದ ಮಹಾತ್ಮನಿಗೆ ಸರ್ವಧರ್ಮ ಪ್ರಾರ್ಥನೆ, ಪುಷ್ಪ ನಮನ



ಮೈಸೂರು,ಅ.2(ಎಂಟಿವೈ)– ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ 154ನೇ ಜಯಂತಿ ಅಂಗವಾಗಿ ಮೈಸೂರಲ್ಲಿ ಜಿಲ್ಲಾಡಳಿತದ ವತಿಯಿಂದ ಸರ್ವ ಧರ್ಮ ಪ್ರಾರ್ಥನೆ ಏರ್ಪಡಿಸಲಾಗಿತ್ತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮೈಸೂರು ಮಹಾನಗರ ಪಾಲಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸೋಮವಾರ ಆಯೋಜಿಸಿದ್ದ ಮಹಾತ್ಮಗಾಂಧಿ ಜಯಂತಿ ಕಾರ್ಯಕ್ರಮದಲ್ಲಿ ಮೈಸೂರಿನ ಮಹಾತ್ಮ ಗಾಂಧಿ ವೃತ್ತದಲ್ಲಿರುವ ಗಾಂಧೀಜಿ ಪ್ರತಿಮೆಗೆ ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ ಜಿಲ್ಲಾಡಳಿತದ ಪರವಾಗಿ ಮಾಲಾರ್ಪಣೆ ಮಾಡಿ ಗೌರವ ಸಮರ್ಪಿಸಿದರು. ಇದೇ ವೇಳೆ ಮೇಯರ್ ಶಿವಕುಮಾರ್, ಶಾಸಕ ಟಿ.ಎಸ್.ಶ್ರೀವತ್ಸ ಸೇರಿದಂತೆ ಹಿರಿಯ ಅಧಿಕಾರಿಗಳು, ಪಾಲಿಕೆ ಸದಸ್ಯರು, ವಿವಿಧ ಸಂಘ–ಸಂಸ್ಥೆಗಳ ಮುಖಂಡರು, ಕಾರ್ಯಕರ್ತರು ಮಹಾತ್ಮಗಾಂಧಿ ಪ್ರತಿಮೆಗೆ ಮಾಲಾರ್ಪಣೆಯೊಂದಿಗೆ ಪುಷ್ಪಾರ್ಚನೆ ಮಾಡಿ ಗೌರವ ಸಲ್ಲಿಸಿದರು.

ಬಳಿಕ ಪುರಭವನದಲ್ಲಿ ಆಯೋಜಿಸಿದ್ದ ಗಾಂಧಿ ಜಯಂತಿ ಕಾರ್ಯಕ್ರಮದಲ್ಲಿ ಶಾಸಕ ತನ್ವೀರ್ ಸೇಠ್ ಮಹಾತ್ಮಗಾಂಧೀಜಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು. ನಂತರ ನಡೆದ ಭಜನಾ ಕಾರ್ಯಕ್ರಮದಲ್ಲಿ ವೈಷ್ಣವ ಜನತೋ, ರಘುಪತಿ ರಾಘವ ರಾಜಾರಾಮ್ ಸೇರಿದಂತೆ ಸದ್ಭಾವನಾ ಗೀತೆಗಳನ್ನು ಹಾಡಲಾಯಿತು. ನಂತರ ಸರ್ವ ಧರ್ಮಗಳ ಗುರುಗಳಿಂದ ಪ್ರಾರ್ಥನೆ ನಡೆಸಿ, ಶಾಂತಿಧೂತನಿಗೆ ನಮನ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ವಿವಿಧ ಧರ್ಮ ಗುರುಗಳಾದ ಶ್ರೀ ಅಘಹರಾನಂದ ಸ್ವಾಮೀಜಿ, ಶ್ರೀ ಇನ್ನಾಸಿ ಮುತ್ತು, ಶ್ರೀ ನಿಜಾಮುದ್ದೀನ್, ವಿವಿಧ ಧರ್ಮಗಳ ಸಂದೇಶ ವಾಚಿಸಿ ಗಾಂಧೀಜಿಯವರ ಸತ್ಯ, ಅಹಿಂಸೆ, ಶಾಂತಿ, ಸರ್ವ ಧರ್ಮ ಸಹಿಷ್ಣುತೆಯ ಗುಣಗಳನ್ನು ಅಳವಡಿಸಿಕೊಂಡರೆ ನಮ್ಮ ನಾಡು ಸರ್ವ ಜನಾಂಗದ ಶಾಂತಿಯ ತೋಟವಾಗಲಿದೆ ಎಂದು ಅಭಿಪ್ರಾಯಪಟ್ಟರೆ, ಸುರೇಶ್‌ಕುಮಾರ್ ಜೈನ್, ಆನಂದ್ ಸಿಂಗ್ ಪ್ರವಚನ ನೀಡಿದರು.

ಇದೇ ವೇಳೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಏರ್ಪಡಿಸಿದ್ದ ಬಾಪೂಜಿ ಪ್ರಬಂಧ ಸ್ಪರ್ಧೆಯ ವಿಜೇತರಿಗೆ ಶಾಸಕ ತನ್ವೀರ್ ಸೇಠ್ ಬಹುಮಾನ ವಿತರಿಸಿದರು.

ಈ ಸಂದರ್ಭದಲ್ಲಿ ಶಾಸಕ ಟಿ.ಎಸ್.ಶ್ರೀವತ್ಸ, ಮೇಯರ್ ಶಿವಕುಮಾರ್, ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ, ಜಿ.ಪಂ. ಸಿಇಓ ಕೆ.ಎಂ.ಗಾಯತ್ರಿ, ನಗರ ಪೊಲೀಸ್ ಆಯುಕ್ತ ಬಿ.ರಮೇಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೀಮಾ ಲಾಟ್ಕರ್, ನಗರ ಪಾಲಿಕೆ ಆಯುಕ್ತ ಅಶಾದ್ ಉರ್ ರೆಹಮಾನ್ ಷರೀಫ್, ಹೆಚ್ಚುವರಿ ಆಯುಕ್ತೆ ರೂಪ, ತಹಶೀಲ್ದಾರ್ ಗಿರೀಶ್, ನಗರಪಾಲಿಕೆ ಅಧಿಕಾರಿ ಸೋಮಶೇಖರ್ ಜಿಗಿಣಿ, ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಅಧಿಕಾರಿಗಳು ಉಪಸ್ಥಿತರಿದ್ದರು.

ಗಾಂಧೀಜಿ ಕಂಡ ಕನಸು ಒಂದೂ ಈಡೇರಿಲ್ಲ

● ಪ್ರಾಧ್ಯಾಪಕಿ ಡಾ.ಬಿ.ಪಿ.ಇಂದಿರಾ ವಿಷಾದ ● ಗಾಂಧೀಜಿ ಕನಸಿನ ಭಾರತ ವಿಶೇಷ ಉಪನ್ಯಾಸ



ಮೈಸೂರು,ಅ.2(ಎಂಟಿವೈ)– ಗಾಂಧಿ ಯುಗದಿಂದ ಪ್ರಸ್ತುತ ದಿನದವರೆಗೆ ಪುನರ್ ಅವಲೋಕನ ಮಾಡುವುದರೊಂದಿಗೆ ಗಾಂಧೀಜಿ ಅವರ ಆಶಯಗಳನ್ನು ಪುನರ್ ಪ್ರತಿಪಾದನೆ ಮಾಡಬೇಕಾದ ಅವಶ್ಯಕತೆ ಇದೆ ಎಂದು ತಿ.ನರಸೀಪುರ ತಾಲೂಕಿನ ಬೈರಾಪುರ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಪ್ರಾಧ್ಯಾಪಕಿ ಡಾ. ಬಿ.ಪಿ. ಇಂದಿರಾ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರು ವಿಶ್ವವಿದ್ಯಾನಿಲಯದ ಗಾಂಧಿ ಅಧ್ಯಯನ ಕೇಂದ್ರ, ಗಾಂಧಿ ಭವನ ಹಾಗೂ ಜ್ಞಾನ ದೀಪ ಪ್ರಥಮ ದರ್ಜೆ ಕಾಲೇಜು ಸಹಯೋಗದಲ್ಲಿ ಸೋಮವಾರ ಗಾಂಧಿ ಭವನದಲ್ಲಿ ಆಯೋಜಿಸಿದ್ದ ಗಾಂಧಿ ಜಯಂತಿ, ವಿಶ್ವ ಅಹಿಂಸಾ ದಿನಾಚರಣೆ ಕಾರ್ಯಕ್ರಮದಲ್ಲಿ 'ಗಾಂಧೀಜಿ ಕನಸಿನ ಭಾರತ' ಕುರಿತು ವಿಶೇಷ ಉಪನ್ಯಾಸ ನೀಡಿದರು.

ಗಾಂಧೀಜಿ ಅವರಿಗೆ ಎರಡು ಕನಸುಗಳಿದ್ದವು. ಸ್ವತಂತ್ರ ಭಾರತ ಮತ್ತು ಭಾರತೀಯರು ಅನ್ಯಾಯ, ಶೋಷಣೆ, ಅಸಮಾನತೆ ಮತ್ತು ಅಸಮತೆಯಿಂದ ಬಿಡುಗಡೆಯ ಕನಸು ಕಂಡಿದ್ದರು. ಅವರ ಕನಸು ಈವರೆಗೂ ಈಡೇರಿಲ್ಲ ಎಂಬುದು ವಿಷಾದನೀಯ. ಅದನ್ನು ಈಡೇರಿಸುವ ಜವಾಬ್ದಾರಿ ನಮೆಲ್ಲರ ಮೇಲಿದೆ. ಗಾಂಧೀಜಿಯವರ ಸ್ವರಾಜ್ಯ ಎಂದರೆ ರೈತರು, ಅಂಗಹೀನರು, ಶ್ರಮಿಕರು ಒಳಗೊಂಡು ಎಲ್ಲರ ಅಭ್ಯುದಯ. ರಾಜಕೀಯ ಮತ್ತು ಆರ್ಥಿಕ ಸ್ವಾತಂತ್ರ್ಯ, ನೈತಿಕ, ಸಾಮಾಜಿಕ ಗುರಿಯಿರಬೇಕು ಎಂದು ಪ್ರತಿಪಾದಿಸಿದ್ದರು. ಸ್ವರಾಜ್ಯ ಎಲ್ಲರನ್ನೂ ಒಳಗೊಳ್ಳುವ ನೀತಿಯಾಗಿದೆ. ಪ್ರತಿ ಗ್ರಾಮ ಸ್ವಾವಲಂಬಿಯಾಗಬೇಕು. ಹಳ್ಳಿಗಳು ನಾಶವಾದರೆ ಭಾರತ ಕೂಡ ನಾಶವಾಗುತ್ತದೆ ಎಂದು ಗಾಂಧಿ ಎಚ್ಚರಿಸಿದ್ದರು. ಗ್ರಾಮ ಸ್ವರಾಜ್ಯ ಕಲ್ಪನೆ ಇವತ್ತಿಗೆ ಹೆಚ್ಚು ಪ್ರಸ್ತುತವಾಗಿದೆ. ಗ್ರಾಮಗಳ ಪುನರುತ್ಥಾನವಾಗದೆ ಭವಿಷ್ಯವಿಲ್ಲ ಎಂಬುದನ್ನು ಅರಿಯಬೇಕು ಎಂದು ಹೇಳಿದರು.

ಸಾಮಾಜಿಕ ಅಸಮಾನತೆ ನಿವಾರಣೆಗೆ ಆದ್ಯತೆ ನೀಡಿದ್ದ ಗಾಂಧೀಜಿಯವರು ತಾರತಮ್ಯವಿಲ್ಲದೆ ಸಮ ಸಮಾಜದ ನಿರ್ಮಾಣದೊಂದಿಗೆ ಭವ್ಯ ಭಾರತದ ಕನಸು ಕಂಡಿದ್ದರು. ಅದಕ್ಕಾಗಿ ಸರ್ವರ ಉದಯ ಬಯಸುವ ಸರ್ವೋದಯ ಮಂತ್ರವನ್ನು ಜಪಿಸಿದ್ದರು. ಗಾಂಧಿ ಚಿಂತನೆಯಲ್ಲಿ ಶಿಕ್ಷಣ ಅಂದರೆ ಮಗುವಿಗೆ ಶ್ರಮದ ಮಹತ್ವ ಕಲಿಸುವುದಾಗಿತ್ತು. ಮಹಿಳಾ ಸಮಾನತೆ ಹರಿಕಾರರು. ಸ್ವಾತಂತ್ರ್ಯ ಹೋರಾಟದಲ್ಲಿ ಮಹಿಳೆಯರು ಪಾಲ್ಗೊಳ್ಳುವಂತೆ ಪ್ರೇರೇಪಿಸಿ, ಅವರಲ್ಲೂ ನಾಯಕತ್ವ ರೂಪಿಸಿದರು. ಆರೋಗ್ಯ ನೈರ್ಮಲ್ಯದ ವಿಷಯದಲ್ಲಿ ಗಾಂಧಿ ಮಹಾ ವೈದ್ಯ ಎಂದು ಬಣ್ಣಿಸಿದರು.

ಕೊಳ್ಳುಬಾಕ ಮಾರುಕಟ್ಟೆ ಸಂಸ್ಕೃತಿ ಯುಗವಿದು. ಖರೀದಿಸುವ ಹಪಾಹಪಿ ತೀವ್ರವಾಗಿದೆ. ಮೊಬೈಲ್ ಆ್ಯಪ್‌ಗಳಿಂದ ಮೋಸವಾಗುವವರ ಸಂಖ್ಯೆ ಹೆಚ್ಚಿದೆ. ಈಗ ಬೇಕಿಲ್ಲದ್ದನ್ನು ನಿರಾಕರಿಸುವ ಮನಸ್ಥಿತಿ ನಮದಾಗಬೇಕು ಎಂದು ಹೇಳಿದರು.

ಇದಕ್ಕೂ ಮುನ್ನ ಕಾರ್ಯಕ್ರಮವನ್ನು ಸ್ವಾತಂತ್ರ್ಯ ಹೋರಾಟಗಾರ ಡಾ.ಎಂ. ಸೋಮಶೇಖರಯ್ಯ ಉದ್ಘಾಟಿಸಿದರು. ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಗಾಂಧಿ ಭವನದ ನಿರ್ದೇಶಕ ಪ್ರೊ.ಎಸ್. ನರೇಂದ್ರಕುಮಾರ್ ಪ್ರಾಸ್ತಾವಿಕ ನುಡಿಗಳನ್ನಾಡಿದರೆ, ಜ್ಞಾನದೀಪ ಎಜುಕೇಷನಲ್ ಟ್ರಸ್ಟ್ ಖಜಾಂಚಿ ಎನ್.ಸಂತೋಷ ಕುಮಾರ್, ಪ್ರಾಂಶುಪಾಲ ಸಿ.ಆರ್.ಸಿದ್ಧಲಿಂಗಸ್ವಾಮಿ ಇದ್ದರು. ಲಲಿತ ಕಲೆಗಳ ಕಾಲೇಜು ವಿದ್ಯಾರ್ಥಿನಿಯರು ಗಾಂಧಿ ಭಜನ್ ಹಾಡಿದರು.

ಕೋವಿಡ್-19 ಲಸಿಕೆ ಆವಿಷ್ಕಾರಕ್ಕೆ ವೈದ್ಯಕೀಯ ನೊಬೆಲ್ ಘೋಷಣೆ



ನವದೆಹಲಿ: ಶರೀರಶಾಸ್ತ್ರ ಅಥವಾ ವೈದ್ಯಕೀಯ ವಿಭಾಗದಲ್ಲಿ 2023ನೇ ಸಾಲಿನ ನೋಬೆಲ್ ಪ್ರಶಸ್ತಿಯನ್ನು ಕ್ಯಾಟಲಿನ್ ಕಾರಿಕ್ ಮತ್ತು ಡ್ರೂ ವೈಸ್‌ಮನ್‌ಗೆ ಘೋಷಿಸಲಾಗಿದೆ. ಎಂಆರ್‌ಎನ್‌ಎ ಕೋವಿಡ್ ಲಸಿಕೆಯ ಆವಿಷ್ಕಾರಕ್ಕೆ ಈ ಪ್ರಶಸ್ತಿಯನ್ನು ಕ್ಯಾಟಲಿನ್ ಕಾರಿಕ್ ಮತ್ತು ಡ್ರೂ ವೈಸ್‌ಮನ್‌ಗೆ ನೀಡಲಾಗುತ್ತಿದೆ.

ನಮ್ಮ ಪ್ರತಿರಕ್ಷಣಾ ವ್ಯವಸ್ಥೆಯೊಂದಿಗೆ ಎಮ್‌ಆರ್‌ಎನ್‌ಎ ಹೇಗೆ ಸಂವಹನ ನಡೆಸುತ್ತದೆ ಎಂಬುದರ ಕುರಿತು ನಮ್ಮ ತಿಳುವಳಿಕೆಯನ್ನು ಅವರ ಅದ್ಭುತ ಸಂಶೋಧನೆಗಳು ಮೂಲಭೂತವಾಗಿ ಬದಲಾಯಿಸಿದೆ. ಈ ಮೂಲಕ, ಪ್ರಶಸ್ತಿ ವಿಜೇತರು ಆಧುನಿಕ ಕಾಲದಲ್ಲಿ ಮಾನವನ ಆರೋಗ್ಯಕ್ಕೆ ದೊಡ್ಡ ಅಪಾಯಗಳಲ್ಲಿ ಒಂದಾದ ಕೋವಿಡ್‌ಗೆ ಲಸಿಕೆ ಅಭಿವೃದ್ಧಿಪಡಿಸಿ ಕೊಡುಗೆ ನೀಡಿದ್ದಾರೆ ಎಂದು ಸಮಿತಿ ಉಲ್ಲೇಖಿಸಿದೆ.

ಕರ್ನಾಟಕ ಸೇನಾ ಪಡೆಯಿಂದ ಸದಸ್ಯರ ಮಕ್ಕಳಿಗೆ ಗಾಂಧೀಜಿ, ಲಾಲ್ ಬಹದ್ದೂರ್ ಶಾಸ್ತ್ರಿ ವೇಷ ಭೂಷಣ



ಮೈಸೂರು,ಅ.2–ವಿಶ್ವ ಕಂಡ ಅಪ್ರತಿಮ ಹೋರಾಟಗಾರ, ದೇಶಕ್ಕೆ ಸ್ವಾತಂತ್ರ್ಯವನ್ನು ತಂದುಕೊಟ್ಟ ಶತಮಾನದ ನಾಯಕ, ಮಹಾತ್ಮ ಗಾಂಧೀಜಿ ಹಾಗೂ ದೇಶ ಕಂಡ ಸರಳ, ಶಿಸ್ತಿನ ಮಾಜಿ ಪ್ರಧಾನಿ ಲಾಲ್ ಬಹುದ್ದೂರ್ ಶಾಸ್ತ್ರೀಜಿ ರವರ ಜಯಂತಿ ಕಾರ್ಯಕ್ರಮವನ್ನ ಕರ್ನಾಟಕ ಸೇನಾ ಪಡೆ ವತಿಯಿಂದ ಆಚರಿಸಲಾಯಿತು.

ಮೈಸೂರಿನ ಅಗ್ರಹಾರ ವೃತ್ತದಲ್ಲಿ ಡಿ. ದೇವರಾಜು ಅರಸು ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಕೌಟಿಲ್ಯ ರಘು ಮಹಾತ್ಮರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿ, ಮಹಾತ್ಮ ಗಾಂಧೀಜಿ ಅವರ ಜೀವನವೇ ಒಂದು ಸಂದೇಶ, ದೇಶದ ಸ್ವಾತಂತ್ರ್ಯಕ್ಕಾಗಿ ನಡೆದ ಹೋರಾಟಗಳಲ್ಲಿ ಹಲವಾರು ಮಹನೀಯರು ತಮ್ಮ ತಮ್ಮ ಜೀವಗಳನ್ನು ಮುಡುಪಾಗಿಟ್ಟರು. ಮಹಾತ್ಮ ಗಾಂಧೀಜಿಯವರು ತಮ್ಮ ಅಹಿಂಸ ಚಳುವಳಿಯಿಂದ ಇಡೀ ವಿಶ್ವದ ಗಮನ ಸೆಳೆದು, ದೇಶಕ್ಕೆ ಸ್ವಾತಂತ್ರ್ಯ ತಂದು ಕೊಡುವಲ್ಲಿ ಮಹತ್ತರ ಪಾತ್ರ ವಹಿಸಿದರು. ಅವರು ಸ್ವಚ್ಛ ಭಾರತ, ಸ್ವದೇಶಿ ಬಳಸಿ ದೇಶ ಉಳಿಸಿ ಅಭಿಯಾನ ಮಾಡಿ ದೇಶದ ಜನರನ್ನು ಎಚ್ಚರಿಸಿದರು. ದೇಶ ಕಂಡ ಅತೀ ಸರಳ ಶಿಸ್ತಿನ ಸಿಪಾಯಿ ಪ್ರಧಾನಿ ಲಾಲ್ ಬಹುದ್ದೂರ್ ಶಾಸ್ತ್ರೀಜಿ. ಅವರಿಬ್ಬರ ಆದರ್ಶ ಮತ್ತು ತತ್ವಗಳನ್ನು ದೇಶದ ಜನಪ್ರತಿನಿಧಿಗಳೆಲ್ಲ ಅಳವಡಿಸಿಕೊಳ್ಳಬೇಕು, ಕರ್ನಾಟಕ ಸೇನಾ ಪಡೆ ಕನ್ನಡ ನೆಲಜಲ ಭಾಷೆಗಳ ಜತೆ ದೇಶಪ್ರೇಮ, ರಾಷ್ಟ್ರ ನಾಯಕರ ಜಯಂತಿ ಆಚರಣೆ ಮಾಡುತ್ತಿರುವುದು ಶ್ಲಾಘನೀಯ ಎಂದು ಹೇಳಿದರು.

ಕರ್ನಾಟಕ ಸೇನಾ ಪಡೆ ಸದಸ್ಯರ ಮಕ್ಕಳಿಗೆ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರೀಜಿ ವೇಷ ಧರಿಸಿ ವಿನೂತನವಾಗಿ ಜಯಂತಿ ಆಚರಿಸಲಾಯಿತು. ನಂತರ ಸಾರ್ವಜನಿಕರಿಗೆ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಸಿಹಿ ವಿತರಿಸಿದರು. ಮುಖ್ಯ ಅತಿಥಿಗಳಾಗಿ ಜೂ.ವಿಷ್ಣು, ಮಾ.ವಿ.ರಾಮಪ್ರಸಾದ್, ಸುರೇಶ್ ಗೋಲ್ಡ್, ಕರ್ನಾಟಕ ಸೇನಾ ಪಡೆ ಅಧ್ಯಕ್ಷ ತೇಜೇಶ್ ಲೋಕೇಶ್‌ಗೌಡ, ಪ್ರಭುಶಂಕರ್ ಕೃಷ್ಣಯ್ಯ ಸಿ.ಹೆಚ್., ಅಂಬಾ ಅರಸ್, ಡಾ.ಶಾಂತರಾಜೇ ಅರಸ್, ಡಾ. ಮೊಗಣ್ಣಾಚಾರ್, ಗಣೇಶ್‌ಪ್ರಸಾದ್, ನೇಹಾ, ಇಂದಿರಾ, ಪದ್ಮ, ಪುಷ್ಪವತಿ, ರವಿ ಒಲಂಪಿಯ, ದಿನೇಶ್, ಸುಬ್ಬೇಗೌಡ, ಪ್ರಭಾಕರ್, ವೆಂಕಟೇಶ್, ಕೃಷ್ಣಮೂರ್ತಿ, ಸ್ವಾಮಿ, ಕುಮಾರ್‌ಗೌಡ, ಶ್ರೀನಿವಾಸ ರಾಜಕುಮಾರ್, ಎಳನೀರು ರಾಮಣ್ಣ, ದರ್ಶನ್ ಇನ್ನೂ ಮುಂತಾದವರು ಹಾಜರಿದ್ದರು.

ಗೋಲ್ಡನ್ ಟೆಂಪಲ್‌ನಲ್ಲಿ ಪ್ರಾರ್ಥನೆ ಸಲ್ಲಿಸಿ, ಪಾತ್ರೆ ತೊಳೆದ ರಾಹುಲ್ ಗಾಂಧಿ





ಅಮೃತಸರ: ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಪಂಜಾಬ್‌ನ ಅಮೃತಸರದಲ್ಲಿರುವ ಗೋಲ್ಡನ್ ಟೆಂಪಲ್‌ಗೆ ಭೇಟಿ ನೀಡಿದ್ದು, ಪ್ರಾರ್ಥನೆ ಸಲ್ಲಿಸಿದ್ದಾರೆ. ಅಲ್ಲದೆ, ಸ್ವಯಂಪ್ರೇರಿತರಾಗಿ ದೇವಾಲಯದಲ್ಲಿ ಪಾತ್ರೆ ತೊಳೆದಿದ್ದಾರೆ. ಈ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಗೋಲ್ಡನ್ ಟೆಂಪಲ್‌ನ ಗರ್ಭಗುಡಿಯಲ್ಲಿ ಜನಸಮೂಹದ ನಡುವೆ ಗಾಂಧಿ ಯವರು ಕೈಮುಗಿದು ಪ್ರಾರ್ಥನೆ ಸಲ್ಲಿಸುತ್ತಿರುವುದು ವಿಡಿಯೋದಲ್ಲಿದೆ. ಪ್ರಾರ್ಥನೆ ಸಲ್ಲಿಸಿದ ನಂತರ ಅವರು, ಸಿಖ್ಖರ ಅತ್ಯುನ್ನತ ತಾತ್ಕಾಲಿಕ ಸ್ಥಾನವಾದ ಅಕಲ್ ತಖ್ತ್‌ಗೆ ಭೇಟಿ ನೀಡಿದ್ದು, ಭಕ್ತರು ಬಳಸುವ ನೀರಿನ ಬಟ್ಟಲುಗಳನ್ನು ಸ್ವಚ್ಛಗೊಳಿಸುವ ಮೂಲಕ 'ಸೇವಾ' ಕಾರ್ಯ ಮಾಡಿದರು. ಇತರ ಭಕ್ತರ ನಡುವೆ ಕುಳಿತು, ಗಾಂಧಿ ಪಾತ್ರೆಗಳನ್ನು ತೊಳೆಯುತ್ತಿರುವುದು ಕಂಡುಬಂದಿತು. ರಾಹುಲ್ ನಾಳೆ ಬೆಳಗ್ಗೆ ನಡೆಯುವ 'ಪಾಲ್ಕಿ ಸೇವೆ'ಯಲ್ಲಿ ಪಾಲ್ಗೊಳ್ಳುವ ಸಾಧ್ಯತೆಯೂ ಇದೆ. ಅವರು ದರ್ಬಾರ್ ಸಾಹಿಬ್ ಬಳಿಯ ಖಾಸಗಿ ಹೋಟೆಲ್‌ನಲ್ಲಿ ಕೊಠಡಿ ಕಾಯ್ದಿರಿಸಿದ್ದಾರೆ. ಭದ್ರತಾ ಸಿಬ್ಬಂದಿಗೆ ಖಾಸಗಿ ಹೋಟೆಲ್‌ನಲ್ಲಿ ಪರ್ಯಾಯ ವ್ಯವಸ್ಥೆ ಮಾಡಲಾಗಿದೆ ಎಂದು ಪಂಜಾಬ್ ಕಾಂಗ್ರೆಸ್ ಅಧ್ಯಕ್ಷ ಅಮರೀಂದರ್ ಸಿಂಗ್ ರಾಜಾ ವಾರಿಂಗ್ ಹೇಳಿದ್ದಾರೆ.

ಗಾಂಧಿ ತತ್ವದಂತೆ ಮುನ್ನಡೆದು ದೇಶ ಸಮೃದ್ಧಗೊಳಿಸಬೇಕಿದೆ

ಸ್ವಾತಂತ್ರ್ಯ ಹೋರಾಟಗಾರ ವೈ.ಸಿ.ರೇವಣ್ಣ; ಒಕ್ಕಲಿಗ ಲೇಡಿಸ್ ಅಸೋಸಿಯೇಷನ್‌ನಿಂದ ಗಾಂಧಿ, ಲಾಲ್‌ಬಹದ್ದೂರ್ ಶಾಸ್ತ್ರಿ ಜಯಂತಿ



ಕಾರ್ಯಕ್ರಮದಲ್ಲಿ ಸ್ವಾತಂತ್ರ್ಯ ಹೋರಾಟಗಾರ ವೈ.ಸಿ.ರೇವಣ್ಣ ಮತ್ತು ಸ್ಮಶಾನದಲ್ಲಿ ಕಾರ್ಯನಿರ್ವಹಿಸುವ ನೀಲಮ್ಮ ಅವರನ್ನು ಆತ್ಮೀಯವಾಗಿ ಸನ್ಮಾನಿಸಲಾಯಿತು.

ಮೈಸೂರು,ಅ.2(ಪಿಎಂ)–ಒಕ್ಕಲಿಗ ಲೇಡಿಸ್ ಅಸೋಸಿಯೇಷನ್ ಮೈಸೂರು ವತಿಯಿಂದ ಗಾಂಧಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿಯವರ ಜಯಂತಿ ಪ್ರಯುಕ್ತ ಸೋಮವಾರ ಸ್ವಾತಂತ್ರ್ಯ ಹೋರಾಟಗಾರ ವೈ.ಸಿ.ರೇವಣ್ಣ ಮತ್ತು ಸ್ಮಶಾನದಲ್ಲಿ ಕಾರ್ಯನಿರ್ವಹಿಸುವ ನೀಲಮ್ಮ ಅವರನ್ನು ಸನ್ಮಾನಿಸಲಾಯಿತು.

ಮೈಸೂರಿನ ಹುಣಸೂರು ರಸ್ತೆಯ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಯಂತಿ ಕಾರ್ಯಕ್ರಮದಲ್ಲಿ ಮೈಸೂರು ಜಿಲ್ಲಾ ಸ್ವಾತಂತ್ರ್ಯ ಹೋರಾಟಗಾರರ ಸಂಘದ ಅಧ್ಯಕ್ಷರೂ ಆದ ವೈ.ಸಿ. ರೇವಣ್ಣ ಮತ್ತು ಮೈಸೂರಿನ ವಿದ್ಯಾರಣ್ಯಪುರಂನ ಲಿಂಗಾಯತರ ರುದ್ರಭೂಮಿಯಲ್ಲಿ ಮೃತದೇಹಗಳನ್ನು ಹೂಳಲು ಗುಂಡಿ ತೆಗೆಯುವ ಕಾಯಕ ಮಾಡುವ ನೀಲಮ್ಮ ಸನ್ಮಾನ ಸ್ವೀಕರಿಸಿದರು.

ಇದೇ ವೇಳೆ ಮಾತನಾಡಿದ ವೈ.ಸಿ. ರೇವಣ್ಣ, ಗಾಂಧಿ ಕಂಡ ಭಾರತದ ಕನಸು ನನಸಾಗದೇ ಉಳಿದಿದೆ. ಗಾಂಧಿ ಜೀವಂತವಾಗಿದ್ದರೆ, ಅದೆಷ್ಟು ನೊಂದುಕೊಳ್ಳುತ್ತಿದ್ದರೋ ಗೊತ್ತಿಲ್ಲ. ಅಂತಹ ಸನ್ನಿವೇಶ ಇಂದು ನಿರ್ಮಾಣಗೊಂಡಿದೆ. ಇನ್ನಾದರೂ ಭಾರತೀಯರು ಗಾಂಧಿ ತತ್ವದಂತೆ ಮುನ್ನಡೆದು ದೇಶವನ್ನು ಸಮೃದ್ಧಗೊಳಿಸಬೇಕಿದೆ ಎಂದು ಹೇಳಿದರು.

ಗಾಂಧಿಯವರ ಸ್ವದೇಶಿ ದೃಷ್ಟಿಕೋನ ಅರ್ಥ ಮಾಡಿಕೊಳ್ಳುವಲ್ಲಿ ನಾವು ಸೋತಿದ್ದೇವೆ. ಇದರಲ್ಲಿ ದೇಶವು ಪರಿಪೂರ್ಣ ಯಶಸ್ಸು ಕಾಣಲಾಗಿಲ್ಲ. ಗ್ರಾಮೀಣ ಭಾರತದ ಸಬಲೀಕರಣ ಅವರ ಉದ್ದೇಶವಾಗಿತ್ತು. ಮದ್ಯಪಾನ ವಿರೋಧಿ ಚಳುವಳಿ ನಡೆಸಿದರು. ಆದರೆ ಈಗ ಗಲ್ಲಿ ಗಲ್ಲಿಯಲ್ಲಿ ಮದ್ಯದ ಮಳಿಗೆಳು ತಲೆ ಎತ್ತುತ್ತಿದ್ದು, ಇದು ಸರಿಯಲ್ಲ. ನಾವು ವಿದ್ಯಾರ್ಥಿಗಳಾಗಿದ್ದಾಗ ಗಾಂಧಿಯವರ ಕರೆಗೆ ಓಗೊಟ್ಟು ಸ್ವಾತಂತ್ರ್ಯ ಚಳವಳಿಯಲ್ಲಿ ಭಾಗವಹಿಸಿದ್ದೆವು ಎಂದರು.

ಮೈಸೂರು ನಗರಪಾಲಿಕೆ ಸದಸ್ಯರೂ ಆದ ಒಕ್ಕಲಿಗ ಲೇಡಿಸ್ ಅಸೋಸಿಯೇಷನ್ ಸದಸ್ಯೆ ಭಾಗ್ಯ ಮಾದೇಶ್, ಅಸೋಸಿಯೇಷನ್‌ನ ಅಧ್ಯಕ್ಷೆ ಪದ್ಮಜ ಶ್ರೀನಿವಾಸ್, ಉಪಾಧ್ಯಕ್ಷೆ ನಳಿನಾ ಮಂಜು, ಗೌರವಾಧ್ಯಕ್ಷೆ ಜಯಲಕ್ಷ್ಮೀ, ಕಾರ್ಯದರ್ಶಿ ಶೋಭಾ ಮಂಜುನಾಥ್, ಸಹ ಕಾರ್ಯದರ್ಶಿಗಳಾದ ವನಿತಾ ರವಿ, ನವೀನಾ, ನಮಿತಾ ಮಂಜು, ಖಜಾಂಚಿ ಸುಮಾ ಅನಿಲ್, ಸಹಾಯಕ ಖಜಾಂಚಿ ಭವ್ಯ ರಘು, ನಿರ್ದೇಶಕಿ ವಿಜಯಾ ಮಂಜುನಾಥ್, ಜಿಲ್ಲಾ ಸ್ವಾತಂತ್ರ್ಯ ಹೋರಾಟಗಾರರ ಸಂಘದ ಕಾರ್ಯಾಧ್ಯಕ್ಷ ಯೋಗಾನಂದ್ ಮತ್ತಿತರರಿದ್ದರು.

ಮೈಸೂರು ಮಿತ್ರ

ಅಹಿಂಸೆ, ಸತ್ಯಾಗ್ರಹದ ಮೂಲಕ

ಸ್ವಾತಂತ್ರ್ಯ ತಂದುಕೊಟ್ಟ ಮಹಾನ್ ವ್ಯಕ್ತಿ ಗಾಂಧೀಜಿ: ಡಿಸಿ ಬಣ್ಣನೆ

ಮಂಡ್ಯ, ಅ.2– ಅಹಿಂಸೆ, ಸತ್ಯಾಗ್ರಹ ಹಾಗೂ ಶಾಂತಿ ಮೂಲಕ ಹೋರಾಟ ಮಾಡಿ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ಮಹಾನ್ ವ್ಯಕ್ತಿ ಮಹಾತ್ಮ ಗಾಂಧೀಜಿ ಎಂದು ಜಿಲ್ಲಾಧಿಕಾರಿ ಡಾ.ಕುಮಾರ್ ಬಣ್ಣಿಸಿದರು.



ಸೋಮವಾರ ಗಾಂಧಿ ಜಯಂತಿ ಅಂಗವಾಗಿ ನಗರದ ಕಾವೇರಿ ಉದ್ಯಾನವನದಲ್ಲಿರುವ ಮಹಾತ್ಮ ಗಾಂಧಿ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಅವರು, ಗಾಂಧೀಜಿ ಹೆಸರು ಕೇವಲ ಅವರ ಜನ್ಮದಿನದ ಆಚರಣೆಗೆ ಸೀಮಿತವಾಗಬಾರದು. ಸತ್ಯ, ಅಹಿಂಸೆ ಮತ್ತು ಶಾಂತಿ ಮಾರ್ಗಗಳನ್ನು ಅನುಸರಿಸಬೇಕು. ಅವರ ತತ್ವಗಳು ಉತ್ತಮ ಜಗತ್ತನ್ನು ರೂಪಿಸುವ ಶಕ್ತಿಯಾಗಿದೆ. ಮಹಾತ್ಮ ಗಾಂಧಿ ಅವರದ್ದು ಬಹು ಆಯಾಮದ ವ್ಯಕ್ತಿತ್ವ, ಗಾಂಧೀಜಿ ಅವರು ಹಾಕಿಕೊಟ್ಟಿರುವ ಆದರ್ಶಗಳನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಂಡಾಗ ಮಾತ್ರ ಸಾರ್ಥಕತೆ ದೊರಕುತ್ತದೆ ಎಂದರು.


ಭಾರತೀಯ ಸ್ವಾತಂತ್ರ್ಯ ಹೋರಾಟಕ್ಕೆ ತನ್ನದೇ ಆದ ಇತಿಹಾಸವಿದೆ. ಬೇರೆ ದೇಶಗಳು ಸ್ವಾತಂತ್ರ್ಯವನ್ನು ಯುದ್ಧ, ದಂಗೆ ಮೂಲಕ ಗಳಿಸಿಕೊಂಡರೆ, ಗಾಂಧಿಯವರು ಭಾರತಕ್ಕೆ ಶಾಂತಿ ಮೂಲಕ ಸ್ವಾತಂತ್ರ್ಯ ಗಳಿಸಿಕೊಟ್ಟು ಇಡೀ ವಿಶ್ವಕ್ಕೆ ಶಾಂತಿ ಮತ್ತು ಅಹಿಂಸೆಯನ್ನು ಕೊಡುಗೆ ನೀಡಿದ ಮಹನೀಯರಾಗಿದ್ದಾರೆ. ಗಾಂಧಿ ಹುಟ್ಟಿದ ನಾಡಲ್ಲಿ ನಾವು ಹುಟ್ಟಿದ್ದೇವೆ. ಅದೇ ನಮ್ಮ ಅದೃಷ್ಟ, ಅಹಿಂಸೆ ಹೇಡಿತನವಲ್ಲ ಎಂದಿದ್ದರು. ಅದೊಂದು ಶಕ್ತಿ ಎಂದು ಗಾಂಧೀಜಿ ಅವರು ನಂಬಿದ್ದರು. ಹಾಗಾಗಿ ನಾವೂ ಕೂಡ ಸತ್ಯ ಮತ್ತು ಅಹಿಂಸೆಯ ಕಡೆ ಸಾಗೋಣ ಎಂದು ಕರೆ ನೀಡಿದರು.

ಗಾಂಧಿ ಅವರ ಹೆಸರು ಅಜರಾಮರ. ಭಾರತದ ಎಲ್ಲಾ ನಗರಗಳಲ್ಲಿ ಮಹಾತ್ಮ ಗಾಂಧೀಜಿ ಅವರ ಹೆಸರಿನ ರಸ್ತೆ, ಪಾರ್ಕ್ ಅಥವಾ ಪ್ರತಿಮೆ ಇದ್ದೇ ಇರುತ್ತದೆ. ಇದರಿಂದ ಪ್ರತಿಯೊಬ್ಬರಿಗೂ ಮಹಾತ್ಮ ಗಾಂಧೀಜಿ ಅವರ ತ್ಯಾಗ ಹಾಗೂ ಅವರು ನಡೆದು ಬಂದ ದಾರಿಯ ಮಹತ್ವ ತಿಳಿಯುತ್ತದೆ. ಮಹಾತ್ಮ ಗಾಂಧೀಜಿಯವರನ್ನು ವಿದೇಶದಲ್ಲಿ ಜನ ಆರಾಧಿಸುತ್ತಾರೆ. ಆದರೆ ಭಾರತೀಯರಾದ ನಾವು ಇನ್ನು ಗಾಂಧೀಜಿ ಅವರನ್ನು ಪೂರ್ಣ ಪ್ರಮಾಣದಲ್ಲಿ ಅರಿತಿಲ್ಲದಿರುವುದು ವಿಷಾದಕರ ಎಂದರು.

ಇದೇ ವೇಳೆ ಬಾಪೂಜಿ ಜಿಲ್ಲಾ ಮಟ್ಟದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ನಗದು ಬಹುಮಾನ ನೀಡಿ ಗೌರವಿಸಲಾಯಿತು. ವಿದ್ಯಾರ್ಥಿಗಳಾದ ನಂದಿತಾ, ತಾರಾ, ಯಶೋಧಾ, ಉದಂತ್‌ಕುಮಾರ್, ಅಮೂಲ್ಯ, ನಿರ್ಮಲಾ, ಪೂಜಾ, ಸಹನ ಸ್ಪರ್ಧೆಯಲ್ಲಿ ಭಾಗವಹಿಸಿ ಬಹುಮಾನ ಪಡೆದುಕೊಂಡರು. ಕಾರ್ಯಕ್ರಮದಲ್ಲಿ ತಹಸೀಲ್ದಾರ್ ಡಾ.ಶಿವಕುಮಾರ್ ಬಿರಾದಾರ್, ಮುಡಾ ಆಯುಕ್ತೆ ಐಶ್ವರ್ಯ, ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ಡಾ.ಸಿದ್ದಲಿಂಗೇಶ್, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪ ನಿರ್ದೇಶಕ ಕೃಷ್ಣಕುಮಾರ್, ಯುವಜನ ಸೇವಾ ಹಾಗೂ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಓಂ ಪ್ರಕಾಶ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕಿ ನಿರ್ಮಲ, ನೆಹರೂ ಯುವ ಕೇಂದ್ರದ ಹರ್ಷ ಸೇರಿದಂತೆ ಇನ್ನಿತರರಿದ್ದರು.

ಶಾಸಕರಿಂದ ಪ್ರತಿಮೆಗೆ ಮಾಲಾರ್ಪಣೆ: ಶಾಸಕ ಗಣಿಗ ರವಿಕುಮಾರ್ ಡಿಸಿ ಕಚೇರಿ ಮುಂಭಾಗವಿರುವ ಕಾವೇರಿ ಉದ್ಯಾನವನದಲ್ಲಿ ಮಹಾತ್ಮ ಗಾಂಧೀಜಿ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು. ಇದರ ಜೊತೆಗೆ ಜಿಲ್ಲಾಡಳಿತ, ಜಿಪಂ, ನೆಹರು ಯುವ ಕೇಂದ್ರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದ್ದ ಮಹಾತ್ಮ ಗಾಂಧೀಜಿ ಜಯಂತಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿಯಲ್ಲಿ ಭಾಗವಹಿಸಿ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು.

ಕೆಆರ್‌ಎಸ್ ವೀಕ್ಷಿಸಿದ ಪ್ರಮೋದಾದೇವಿ ಒಡೆಯರ್



ಶ್ರೀರಂಗಪಟ್ಟಣ, ಅ.2– ಕೃಷ್ಣರಾಜ ಸಾಗರಕ್ಕೆ ಮೈಸೂರು ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್ ಭಾನುವಾರ ಸಂಜೆ ಭೇಟಿ ನೀಡಿ ಅಣೆಕಟ್ಟೆ ವೀಕ್ಷಿಸಿದರು. ಅಣೆಕಟ್ಟೆ ಮೇಲೆ ನಡೆದು ಸಾಗಿದ ಅವರು, ಬರಿದಾಗಿರುವ ಅಣೆಕಟ್ಟೆಯ ಹಿನ್ನೀರು ಪ್ರದೇಶ ಕಂಡು ಬೇಸರ ವ್ಯಕ್ತಪಡಿಸಿದರು.

ಈ ಸಂದರ್ಭ ಮಾತನಾಡಿದ ಅವರು, ಪ್ರತಿ ವರ್ಷ ನಾನು ಈ ಸಮಯದಲ್ಲಿ ಅಣೆಕಟ್ಟೆಗೆ ಭೇಟಿ ನೀಡುತ್ತೇನೆ. ಆದರೆ ಈ ಬಾರಿ ನೀರು ಇಲ್ಲದಿರುವುದನ್ನು ಕಂಡು ಬೇಸರವಾಗಿದೆ. ಮುಂಗಾರು ವಿಫಲವಾಗಿ ಕಾವೇರಿ ಜಲಾನಯನ ಪ್ರದೇಶಗಳಲ್ಲಿ ಮಳೆ ಕಡಿಮೆಯಾಗಿದ್ದು, ಅಣೆಕಟ್ಟೆಯಲ್ಲಿ ನಿರೀಕ್ಷಿತ ಮಟ್ಟದಲ್ಲಿ ನೀರಿನ ಸಂಗ್ರಹವಾಗಿಲ್ಲ ಎಂದರು.

ಮುಂದಿನ ದಿನಗಳಲ್ಲಾದರೂ ವರುಣದೇವ ಕೃಪೆ ತೋರಬೇಕು. ರೈತರ ಕಷ್ಟಗಳನ್ನು ನಿವಾರಣೆ ಮಾಡಲು ಮಳೆಯಾಗಬೇಕಾಗಿದೆ. ಕಾವೇರಿ ಮಾತೆ ಹರಿಯುವ ಜಾಗದಲ್ಲಿ ಉತ್ತಮ ಮಳೆಯಾಗಿ ಕೃಷ್ಣರಾಜಸಾಗರ ಅಣೆಕಟ್ಟೆಯಲ್ಲಿ ನೀರಿನ ಸಂಗ್ರಹವಾಗಲಿ ಎಂದು ಆಶಿಸಿದರು. ಕರ್ನಾಟಕ ಕೈಗಾರಿಕಾ ಭದ್ರತಾ ಪಡೆಯ ಶಾಮಲಾ ಉಪಸ್ಥಿತರಿದ್ದರು.

ಶ್ರೀರಂಗಪಟ್ಟಣ ಬಳಿ ರೌಡಿಶೀಟರ್ ಹತ್ಯೆ

ಶ್ರೀರಂಗಪಟ್ಟಣ, ಅ.2– ರೌಡಿಶೀಟರ್ ನೋರ್ವನನ್ನು ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆ ಮಾಡಿರುವ ಘಟನೆ ತಾಲೂಕಿನ ಪಾಲಹಳ್ಳಿ ಗ್ರಾಮದಲ್ಲಿ ಸೋಮವಾರ ಮುಂಜಾನೆ ನಡೆದಿದೆ.



ಪಾಲಹಳ್ಳಿ ನಿವಾಸಿ ವಿನೋದ್ ಅಲಿಯಾಸ್ ಕುಂಟ ವಿನು(32) ಕೊಲೆಯಾದವರು. ಈತ ಸೋಮವಾರ ಮುಂಜಾನೆ ತನ್ನ ಫಾರ್ಮ್‌ಹೌಸ್‌ಗೆ ಸ್ಕೂಟರ್‌ನಲ್ಲಿ ತೆರಳುತ್ತಿದ್ದ ವೇಳೆ ಮಾರುತಿ ಓಮ್ನಿಯಲ್ಲಿ ಬಂದ ನಾಲ್ವರು ದುಷ್ಕರ್ಮಿಗಳು ಮೊದಲು ಸ್ಕೂಟರ್‌ಗೆ ಕಾರಿನಿಂದ ಡಿಕ್ಕಿ ಹೊಡೆದಿದ್ದಾರೆ. ಬಳಿಕ ಕಾರಿನಿಂದ ಇಳಿದು ಬಂದು ಮಾರಕಾಸ್ತ್ರಗಳಿಂದ ಕೊಚ್ಚಿ ಭೀಕರವಾಗಿ ಹತ್ಯೆಗೈದು ಪರಾರಿಯಾಗಿದ್ದಾರೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಶ್ರೀರಂಗಪಟ್ಟಣ ಗ್ರಾಮಾಂತರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿ, ಪ್ರಕರಣ ದಾಖಲಿಸಿಕೊಂಡು ಪರಾರಿಯಾಗಿರುವ ಹಂತಕರಿಗಾಗಿ ಶೋಧ ಕಾರ್ಯ ಕೈಗೊಂಡಿದ್ದಾರೆ.

ಕಳೆದ ತಿಂಗಳಷ್ಟೇ ಮಂಡ್ಯದ ಗಾಂಧಿ ನಗರದಲ್ಲಿ ಕ್ಷುಲ್ಲಕ ವಿಚಾರಕ್ಕೆ ದೀಕ್ಷಿತ್ ಎಂಬ ಯುವಕನನ್ನು ಜನನಿಬಿಡ ಪ್ರದೇಶದಲ್ಲಿ ಹತ್ಯೆ ಮಾಡಲಾಗಿತ್ತು. ಈ ಘಟನೆ ಮಾಸುವ ಮುನ್ನವೇ ಮಂಡ್ಯ ಜಿಲ್ಲೆಯಲ್ಲಿ ಪುಡಿರೌಡಿಗಳ ಅಟ್ಟಹಾಸದಿಂದ ಮತ್ತೊಂದು ಹತ್ಯೆಯಾಗಿದ್ದು, ಪೊಲೀಸರು ಪುಡಿರೌಡಿಗಳನ್ನು ಮಟ್ಟ ಹಾಕಲು ದಿಟ್ಟ ಕಾನೂನು ಕ್ರಮ ಕೈಗೊಳ್ಳಬೇಕಿದೆ.

ನಾಳೆ ಮೈಸೂರು ವಿಭಾಗ ಮಟ್ಟದ ದಸರಾ ಕ್ರೀಡಾಕೂಟ

ಮಂಡ್ಯ, ಅ.2– ಪ್ರಸಕ್ತ ಸಾಲಿನ ಮೈಸೂರು ವಿಭಾಗ ಮಟ್ಟದ ದಸರಾ ಕ್ರೀಡಾಕೂಟದ ಹಾಕಿ, ಯೋಗ ಮತ್ತು ಜಿಮ್ನಾಸ್ಟಿಕ್ಸ್ ಸ್ಪರ್ಧೆಗಳನ್ನು ಅ.4 ರಂದು ಕೊಡಗು ಜಿಲ್ಲೆಯ ಕೂಡಿಗೆ ಕ್ರೀಡಾ ಶಾಲೆಯಲ್ಲಿ ಸಂಘಟಿಸಲಾಗುತ್ತಿದೆ. ಮಂಡ್ಯ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸಿದವರು ಮಾತ್ರ ವಿಭಾಗ ಮಟ್ಟದಲ್ಲಿ ಭಾಗವಹಿಸಲು ಅರ್ಹರಾಗಿರುತ್ತಾರೆ ಭಾಗವಹಿಸುವವರು ಸ್ಪರ್ಧೆ ನಡೆಯುವ ದಿನಾಂಕದಂದು ಬೆಳಗ್ಗೆ 9ಗಂಟೆಯೊಳಗೆ ವರದಿ ಮಾಡಿಕೊಳ್ಳುವಂತೆ ತಿಳಿಸಿದೆ. ಜಿಮ್ನಾಸ್ಟಿಕ್ ಸ್ಪರ್ಧೆಯಲ್ಲಿ ಭಾಗವಹಿಸುವವರು ನೇರವಾಗಿ ವಿಭಾಗ ಮಟ್ಟದಲ್ಲಿ ಸ್ಪರ್ಧಿಸಬಹುದಾಗಿರುತ್ತದೆ. ಹೆಚ್ಚಿನ ಮಾಹಿತಿಗೆ ಮೊ: 9916644007 ಅಥವಾ ಕಚೇರಿಗೆ ಭೇಟಿ ನೀಡಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಏಳು ಮನೆಗಳಲ್ಲಿ ನಗನಾಣ್ಯ ಲೂಟಿ

ಹಲಗೂರು, ಅ.2– ಇಲ್ಲಿಗೆ ಸಮೀಪದ ತೊರೆಕಾಡನಹಳ್ಳಿ ಬಿಡಬ್ಲ್ಯೂಎಸ್‌ಎಸ್‌ಬಿ ಕ್ವಾಟ್ರಸ್‌ನ ಏಳು ಮನೆಗಳ ಬಾಗಿಲು ಮುರಿದಿರುವ ದುಷ್ಕರ್ಮಿಗಳು ಲಕ್ಷಾಂತರ ರೂ. ಮೌಲ್ಯದ ಚಿನ್ನಾಭರಣ ಹಾಗೂ ನಗದು ದೋಚಿ ಪರಾರಿಯಾಗಿದ್ದಾರೆ.

ಕ್ವಾಟ್ರಸ್ ನಿವಾಸಿಗಳಾದ ಚಿಕ್ಕಪುಟ್ಟಯ್ಯ ಮತ್ತು ನಾಗೇಶ್ ಅವರ ಮನೆಗಳೂ ಸೇರಿದಂತೆ 7 ಮನೆಗಳ ಬಾಗಿಲು ಮುರಿದು ಸುಮಾರು 60 ಗ್ರಾಂ ಚಿನ್ನ ಹಾಗೂ 23 ಸಾವಿರ ರೂ. ನಗದನ್ನು ದೋಚಿ ಪರಾರಿಯಾಗಿದ್ದಾರೆ. ವಿಷಯ ತಿಳಿದು ಶ್ವಾನದಳದೊಂದಿಗೆ ಆಗಮಿಸಿದ ಡಿವೈಎಸ್ಪಿ ಕೃಷ್ಣಪ್ಪ, ಸಿಪಿಐ ಶ್ರೀಧರ್, ಎಸ್‌ಐ ಮಹೇಂದ್ರ ಭೇಟಿ ನೀಡಿ ಪರಿಶೀಲಿಸಿದರು. ಈ ಸಂಬಂಧ ಹಲಗೂರು ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಆರೋಪಿಗಳ ಪತ್ತೆಗೆ ಬಲೆ ಬೀಸಿದ್ದಾರೆ.

ಕಾವೇರಿ ಇಲ್ಲದಿದ್ದರೆ ಬೆಂಗಳೂರಿನ ಜನ ಬದುಕಲು ಸಾಧ್ಯವಿಲ್ಲ

ಮಾಜಿ ಉಪಮುಖ್ಯಮಂತ್ರಿ ಆರ್.ಅಶೋಕ್

ಮಂಡ್ಯ ಅ.2– ಬೆಂಗಳೂರಿನ ಒಂದು ಕಾಲು ಕೋಟಿ ಜನ ಕಾವೇರಿ ನೀರನ್ನು ನಂಬಿಕೊಂಡು ಜೀವನ ನಡೆಸುತ್ತಿದ್ದು, ಒಂದೇ ಒಂದು ದಿನ ನೀರು ನಿಂತರೆ ಬೆಂಗಳೂರಿನ ಪದ್ಮನಾಭನಗರ ಶಾಸಕನಾಗಿರುವ ನನಗೆ 50 ಕರೆ ಬರುತ್ತದೆ. ಈ ನಿಟ್ಟಿನಲ್ಲಿ ಕಾವೇರಿ ನೀರಿಲ್ಲದಿದ್ದರೆ ಬೆಂಗಳೂರಿನ ಜನ ಬದುಕಲು ಸಾಧ್ಯವೇ ಇಲ್ಲ ಎಂದು ಮಾಜಿ ಉಪಮುಖ್ಯಮಂತ್ರಿ ಆರ್.ಅಶೋಕ್ ಹೇಳಿದರು.



ಸೋಮವಾರ ನಗರದ ಸರ್‌ಎಂವಿ ಪುತ್ಥಳಿ ಮುಂಭಾಗ ನಡೆಯುತ್ತಿರುವ ರೈತ ಹಿತರಕ್ಷಣಾ ಸಮಿತಿ ಹೋರಾಟದಲ್ಲಿ ಮಾತನಾಡಿದ ಅವರು, ಕಾವೇರಿಗಾಗಿ ಬೆಂಗಳೂರಿನ ಕೋಟ್ಯಾಂತರ ಜನ ಹಾಗೂ ರಾಜಕಾರಣಿಗಳು ಪಕ್ಷಾತೀತವಾಗಿ ಮಂಡ್ಯ ಜನರು ನಡೆಸುತ್ತಿರುವ ಹೋರಾಟಕ್ಕೆ ಬೆಂಬಲ ಸೂಚಿಸಿ ದನಿಯಾಗಿ ನಿಲ್ಲಬೇಕೆಂದು ಕರೆ ನೀಡಿದರು. ನಾನು ಸಚಿವನಾಗಿದ್ದ ಏಳೆಂಟು ವರ್ಷದಲ್ಲಿ ಅತೀ ಹೆಚ್ಚು ಮಂಡ್ಯ ಜಿಲ್ಲೆ ಉಸ್ತುವಾರಿ ಸಚಿವನಾಗಿ ಕಾರ್ಯನಿರ್ವಹಿಸಿದ್ದೇನೆ. ಆ ಸಂದರ್ಭ ಮೈಷುಗರ್ ಪುನರಾರಂಭ, ನಾಲೆಗಳ ಆಧುನೀಕರಣ ಸೇರಿದಂತೆ ಅನೇಕ ರೈತ ಉಪಯೋಗಿ ಕೆಲಸಗಳನ್ನು ಮಾಡುತ್ತಾ ಬಂದಿದ್ದೇವೆ. ಈ ಭಾಗದ ರೈತರ ವಿಚಾರದಲ್ಲಿ ಬಿಜೆಪಿಗಿರುವ ಕಾಳಜಿ ಕಾಂಗ್ರೆಸ್‌ಗಿಲ್ಲ ಎಂದು ಕಿಡಿಕಾರಿದರು.

ಮಂಡ್ಯ ಜನ ಬೀದಿಗಿಳಿದು ಹೋರಾಟ ಮಾಡುತ್ತಿರುವುದರಿಂದ ರಾಜ್ಯ ಸರ್ಕಾರ ಕದ್ದು ಮುಚ್ಚಿ ನೀರು ಬಿಡುತ್ತಿದೆ. ಒಂದು ವೇಳೆ ಇಲ್ಲಿನ ಜನ ಹೋರಾಟ ಮಾಡದಿದ್ದರೆ ರಾಜಾರೋಷವಾಗಿ ನೀರು ಬಿಟ್ಟು ಡ್ಯಾಂ ಅನ್ನು ಸಂಪೂರ್ಣ ಖಾಲಿ ಮಾಡುತ್ತಿದ್ದರು. ಸರ್ಕಾರಕ್ಕೆ ಬಿಸಿ ಮುಟ್ಟಿಸುವ ಕೆಲಸವನ್ನು ರೈತ ಹೋರಾಟಗಾರರು ಮಾಡುತ್ತಿದ್ದು, ಇದಕ್ಕೆ ನಮ್ಮ ಬೆಂಬಲವಿದೆ. ಈಗಾಗಲೇ ರಾಜ್ಯದ ಬಿಜೆಪಿ ಸಂಸದರು ಕೇಂದ್ರ ನೀರಾವರಿ ಸಚಿವರೊಂದಿಗೆ ಕಾವೇರಿ ವಿಚಾರವಾಗಿ ಮಾತುಕತೆ ನಡೆಸಿದ್ದಾರೆ. ರಾಜ್ಯ ಬಿಜೆಪಿ ಮುಖಂಡರು ಸಹ ಅಗತ್ಯ ಬಿದ್ದಾಗಲೆಲ್ಲಾ ಕಾವೇರಿ ವಿಚಾರದಲ್ಲಿ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹಾಕುತ್ತಿದ್ದೇವೆ ಎಂದರು.

ರಾಜ್ಯ ಕಾಂಗ್ರೆಸ್ ಸರ್ಕಾರ ಮೊದಲು ತಮಿಳುನಾಡಿಗೆ ನೀರು ಬಿಟ್ಟು ನಂತರ ಸರ್ವಪಕ್ಷ ಸಭೆ ಕರೆಯುತ್ತಾರೆ. ಹಾಗಾದರೆ ಏನು ಪ್ರಯೋಜನ ಎಂದು ಪ್ರಶ್ನಿಸಿದ ಅವರು, ರಾತ್ರೋರಾತ್ರಿ ನೀರು ಹರಿಸುತ್ತಾರೆ. ಅದನ್ನು ಪ್ರಶ್ನಿಸಿದರೆ ಲೀಕೇಜ್ ವಾಟರ್ ತಮಿಳುನಾಡಿಗೆ ಹೋಗುತ್ತಿದೆ ಎನ್ನುತ್ತಾರೆ. ನಮ್ಮ ಸರ್ಕಾರ ಇದ್ದಾಗ ಹಾಗೂ ಮೊನ್ನೆ ಡ್ಯಾಂಗೆ ಭೇಟಿ ನೀಡಿದಾಗ ಪರಿಶೀಲನೆ ಮಾಡಿದ್ದು, ಡ್ಯಾಂನಲ್ಲಿ ಯಾವ ಲೀಕೇಜ್ ಸಹ ಇಲ್ಲ. ತಮಿಳುನಾಡಿನ ವಾಲ್ವ್‌ಮ್ಯಾನ್‌ಗಳಂತೆ ಈ ಸರ್ಕಾರ ವರ್ತಿಸುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಕಾವೇರಿ ನದಿ ದಕ್ಷಿಣ ಭಾರತದ್ದು ಎಂದು ಕೆಲ ಸಚಿವರು ಹೇಳುತ್ತಾರೆ. ಹಾಗಾಗಿ ನದಿಗೆ ಕಾವೇರಿ ಹೆಸರು ತೆಗೆದು ಸ್ಟಾಲಿನ್ ಮತ್ತು ಪಳನಿಸ್ವಾಮಿ ಎಂದು ಹೆಸರಿಟ್ಟರೆ ಒಳಿತು ಎಂದು ವ್ಯಂಗ್ಯವಾಡಿದ ಅವರು, ಕಾವೇರಿ ನದಿ ನಮ್ಮದು. ಅದಕ್ಕಾಗಿ ಮಂಡ್ಯ, ಮೈಸೂರು, ರಾಮನಗರ, ಬೆಂಗಳೂರಿನ ಜನ ಹೋರಾಟ ಮಾಡುತ್ತಿದ್ದಾರೆ. ಹೀಗೇನೋ ಅಲ್ಪಸ್ವಲ್ಪ ನೀರಿದೆ. ಫೆಬ್ರವರಿ ವೇಳೆಗೆ ಇದೇ ರೀತಿ ತಮಿಳುನಾಡಿಗೆ ನೀರು ಬಿಟ್ಟರೆ ನಮ್ಮ ಗತಿ ಏನು ಎಂದು ಪ್ರಶ್ನಿಸಿದರು.

ಅಪ್ಪು ಅಭಿಮಾನಿಗಳಿಗೆ ದೊಡ್ಮನೆ ಕುಟುಂಬ ಆಭಾರಿ

ಅಪ್ಪು ಪುತ್ಥಳಿ ಲೋಕಾರ್ಪಣೆಗೊಳಿಸಿದ ಅಶ್ವಿನಿ ಪುನೀತ್ ರಾಜ್‌ಕುಮಾರ್





ಕೆ.ಆರ್.ಪೇಟೆ, ಅ.2– ರಾಜ್ಯಾದ್ಯಂತ ಅಪ್ಪು ಅಭಿಮಾನಿಗಳು ಒಂದಲ್ಲ ಒಂದು ಕಾರ್ಯಕ್ರಮ ಆಯೋಜಿಸುವ ಮೂಲಕ ಅಪ್ಪು ಅಗಲಿಕೆಯ ನೋವನ್ನು ಮರೆಯುವ ಶಕ್ತಿ ತುಂಬುತ್ತಿದ್ದಾರೆ. ಹೀಗಾಗಿ ಅಭಿಮಾನಿ ದೇವರುಗಳಿಗೆ ದೊಡ್ಮನೆ ಕುಟುಂಬ ಆಭಾರಿಯಾಗಿದೆ ಎಂದು ಪವರ್ ಸ್ಟಾರ್ ಪುನೀತ್ ರಾಜ್‌ಕುಮಾರ್ ಪತ್ನಿ ಅಶ್ವಿನಿ ಪುನೀತ್ ರಾಜ್‌ಕುಮಾರ್ ತಿಳಿಸಿದರು.

ಪಟ್ಟಣದ ಎಂ.ಕೆ.ಬೊಮ್ಮೇಗೌಡ ವೃತ್ತದಲ್ಲಿ ಡಾ.ಪುನೀತ್ ಯುವ ಬ್ರಿಗೇಡ್ ಯುವ ಬಳಗ ಪ್ರತಿಷ್ಠಾಪಿಸಿರುವ ಪುನೀತ್ ರಾಜಕುಮಾರ್ ಪುತ್ಥಳಿ ಲೋಕಾರ್ಪಣೆ ಮಾಡಿ ಮಾತನಾಡಿದರು.

ಶಾಸಕ ಹೆಚ್.ಟಿ.ಮಂಜು ವೇದಿಕೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಪುನೀತ್ ರಾಜ್‌ಕುಮಾರ್ ಅವರು ಸಮಾಜಕ್ಕೆ ಉತ್ತಮ ಸಂದೇಶ ನೀಡುವ ಚಿತ್ರಗಳಲ್ಲಿ ನಟಿಸುತ್ತಿದ್ದರು. ಅಂತಹ ಅಪರೂಪದ ನಟ ಡಾ.ಪುನೀತ್ ರಾಜ್‌ಕುಮಾರ್ ಅವರು ಇಂದು ನಮ್ಮೊಂದಿಗೆ ಇಲ್ಲದಿದ್ದರೂ ಅವರ ಆದರ್ಶಗಳು ನಮ್ಮೆಲ್ಲರಿಗೂ ಸ್ಫೂರ್ತಿಯಾಗಿದೆ ಎಂದರು. ಆರ್‌ಟಿಓ ಅಧಿಕಾರಿ ಮಲ್ಲಿಕಾರ್ಜುನ್ ಮಾತನಾಡಿ, ಯುವ ಜನರು ಪುನೀತ್ ಅವರಂತೆ ಸೇವಾ ಮನೋಭಾವ ಹಾಗೂ ಪರೋಪಕಾರ ಗುಣಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸಮಾಜಮುಖಿಯಾಗಿ ಮುನ್ನಡೆದು ಗುರಿ ಸಾಧನೆ ಮಾಡಬೇಕು. ಗುರು ಹಿರಿಯರು ಹಾಗೂ ತಂದೆ ತಾಯಿಗಳನ್ನು ಗೌರವಿಸಬೇಕು ಎಂದರು.

ಮಿತ್ರ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷ ವಿಜಯ್ ರಾಮೇಗೌಡ ಮಾತನಾಡಿ, ಪುನೀತ್ ರಾಜ್‌ಕುಮಾರ್ ಅವರಲ್ಲಿದ್ದ ಸಮಯಪ್ರಜ್ಞೆ, ಶಿಸ್ತು, ಸಂಯಮ ಗುಣಗಳು ಎಲ್ಲರೂ ರೂಢಿಸಿಕೊಂಡರೆ ಉತ್ತಮ ವ್ಯಕ್ತಿಗಳಾಗಬಹುದು ಎಂದರು.

ಇದೇ ವೇಳೆ ಪಟ್ಟಣದ ಸೈ ಸ್ಕೂಲ್ ಆಫ್ ಡ್ಯಾನ್ಸ್, ಪ್ರಿನ್ಸೆಸ್ ಸ್ಕೂಲ್ ಆಫ್ ಡ್ಯಾನ್ಸ್, ನಾಟ್ಯ ನೃತ್ಯ ಶಾಲೆ, ನೃತ್ಯ ಪಯಣ ನಾಟ್ಯ ಶಾಲೆ ವಿದ್ಯಾರ್ಥಿಗಳು ಆಕರ್ಷಕ ನೃತ್ಯ ಪ್ರದರ್ಶನ ಹಾಗೂ ಶಾಸ್ತ್ರೀಯ ಭರತನಾಟ್ಯ ಪ್ರದರ್ಶನ ನೀಡಿ ರಂಜಿಸಿದರು.

ಇದಕ್ಕೂ ಮುನ್ನಾ ಕೆ.ಆರ್.ಪೇಟೆಗೆ ಅಶ್ವಿನಿ ಪುನೀತ್ ರಾಜ್‌ಕುಮಾರ್ ಆಗಮಿಸುತ್ತಿದ್ದಂತೆಯೇ ಕನ್ನಡಪರ ಸಂಘಟನೆಗಳ ಕಾರ್ಯಕರ್ತರು ಹಾಗೂ ಪುನೀತ್ ಸಾಮ್ರಾಜ್ಯದ ಯುವ ಬಳಗದ ಪದಾಧಿಕಾರಿಗಳು ಪಟಾಕಿ ಸಿಡಿಸಿ ಪುಷ್ಪವೃಷ್ಟಿ ಮಾಡಿ ಹೃದಯಸ್ಪರ್ಶಿ ಸ್ವಾಗತ ನೀಡಿದರು. ಇದೇ ವೇಳೆ ಕನ್ನಡ ಬಾವುಟಗಳು ಹಾರಾಡಿದವು. ಪುನೀತ್ ಪರ ಜಯಘೋಷ ಮೊಳಗಿದವು.

ಈ ಸಂದರ್ಭ ಮಾಜಿ ಶಾಸಕ ಕೆ.ಬಿ.ಚಂದ್ರಶೇಖರ್, ಮಂಡ್ಯ ಜಿಲ್ಲಾಧ್ಯಕ್ಷ ಯೋಗಣ್ಣ, ಜಯ ಕರ್ನಾಟಕ ಸಂಘಟನೆ ರಾಜ್ಯಾಧ್ಯಕ್ಷ ಡಾ.ಜಗದೀಶ್, ಪುನೀತ್ ಯುವ ಸಾಮ್ರಾಜ್ಯದ ತಾಲೂಕು ಘಟಕದ ಅಧ್ಯಕ್ಷ ಮಹೇಶ್, ತಾಲೂಕು ಘಟಕದ ಅಧ್ಯಕ್ಷ ಹೆಚ್.ಆರ್. ಸೋಮಶೇಖರ್, ಯುವ ಘಟಕದ ಅಧ್ಯಕ್ಷ ಕೆ.ಎಲ್.ಮಹೇಶ್, ಪುರಸಭೆ ಅಧ್ಯಕ್ಷ ನಟರಾಜು, ಕಾಮಿಡಿ ಕಿಲಾಡಿಗಳು ಖ್ಯಾತಿಯ ಶಿವರಾಜ್ ಕೆ.ಆರ್.ಪೇಟೆ, ಭರ್ಜರಿ ಬ್ಯಾಚುಲರ್ಸ್ ಖ್ಯಾತಿಯ ಮನೋಹರ್‌ಗೌಡ, ಮಂಡ್ಯ ರವಿ, ಶೀಳನೆರೆ ಕೇಶವ್, ಕೆ.ಆರ್.ಪೇಟೆ ಮಂಜುನಾಥ್, ಸಕಲೇಶಪುರದ ಜೂನಿಯರ್ ಪುನೀತ್ ಅಪ್ಪು ಸೇರಿದಂತೆ ಪುನೀತ್ ಅಭಿಮಾನಿಗಳು ಭಾಗವಹಿಸಿದ್ದರು.

ಜೂನಿಯರ್ ಪುನೀತ್‌ರಾಜ್‌ಕುಮಾರ್ ಮತ್ತು ಗಾಯಕ ಕೇಶವ್ ತಂಡದವರು ಅಪ್ಪು ಗೀತ ಗಾಯನ ಕಾರ್ಯಕ್ರಮ ನಡೆಸಿಕೊಟ್ಟರು.

ಅನ್ನದಾನ: ತಾಲೂಕಿನ ಪುರಾಣ ಪ್ರಸಿದ್ಧ ಶ್ರೀಭೂವರಹನಾಥ ಶ್ರೀಕ್ಷೇತ್ರದ ವತಿಯಿಂದ ಸುಮಾರು 5000ಕ್ಕೂ ಹೆಚ್ಚು ಅಭಿಮಾನಿಗಳಿಗೆ ಹಾಗೂ ಸಾರ್ವಜನಿಕರಿಗೆ ಅನ್ನದಾನ ವ್ಯವಸ್ಥೆ ಮಾಡಲಾಗಿತ್ತು. ಪುತ್ಥಳಿ ಲೋಕಾರ್ಪಣೆ ಅಂಗವಾಗಿ ರಕ್ತದಾನ, ನೇತ್ರದಾನ ಸೇರಿದಂತೆ ವಿವಿಧ ಅರ್ಥಪೂರ್ಣ ಕಾರ್ಯಕ್ರಮಗಳು ಜರುಗಿದವು.

ಗಾಂಧಿ ತತ್ವದಡಿ ರೈತ ಸಂಘ ಮುನ್ನಡೆಯುತ್ತಿದೆ

ಪಾಂಡವಪುರ, ಅ.2– ಮಹಾತ್ಮ ಗಾಂಧೀಜಿ ಅವರ ಶಾಂತಿ, ಅಹಿಂಸೆ ತತ್ವದಡಿ ರೈತ ಸಂಘಟನೆ ಮುನ್ನಡೆಯುತ್ತಿದೆ ಎಂದು ಶಾಸಕ ದರ್ಶನ್ ಪುಟ್ಟಣ್ಣಯ್ಯ ತಿಳಿಸಿದರು.



ಪಟ್ಟಣದ ತಾಲೂಕು ಕಚೇರಿಯಲ್ಲಿ ನಡೆದ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹಾದ್ದೂರ್ ಶಾಸ್ತ್ರಿ ಅವರ ಜಯಂತಿ ಉದ್ಘಾಟಿಸಿ ಅವರು ಮಾತನಾಡಿದರು.

ಮಹಾತ್ಮ ಗಾಂಧೀಜಿ ಅವರು ಶಾಂತಿ, ಅಹಿಂಸೆ, ಸತ್ಯದ ಮಾರ್ಗದಲ್ಲಿ ನಡೆದು ಬ್ರಿಟಿಷರ ವಿರುದ್ಧ ಹೋರಾಡಿ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ಮಹಾತ್ಮರು. ಇಂತಹ ಮಹಾನ್ ನಾಯಕರ ತತ್ವಾದರ್ಶಗಳನ್ನು ಪ್ರತಿಯೊಬ್ಬರೂ ಮೈಗೂಡಿಸಿಕೊಂಡು ಮುನ್ನಡೆಯಬೇಕೆಂದು ಸಲಹೆ ನೀಡಿದರು. ರೈತ ಸಂಘಟನೆಯೂ ಕೂಡ ಮಹಾತ್ಮ ಗಾಂಧೀಜಿ ಅವರ ಸಿದ್ಧಾಂತದಡಿ ಕೆಲಸ ಮಾಡುತ್ತಿದೆ. ಗಾಂಧೀಜಿ ಅವರ ಶಾಂತಿ, ಅಹಿಂಸೆ ತತ್ವದಡಿಯಲ್ಲಿಯೇ ಹೋರಾಟ ನಡೆಸುತ್ತಿದ್ದೇವೆ. ಮುಂದೆಯೂ ಸಹ ನಡೆಯುತ್ತೇವೆ ಎಂದರು. ಬಿಇಓ ಚಂದ್ರಶೇಖರ್ ಮಾತನಾಡಿ, ಮಹಾತ್ಮ ಗಾಂಧೀಜಿ ಅವರ ಆದರ್ಶಗಳನ್ನು ಜಾಗತಿಕ ಮಟ್ಟದ ಹಲವಾರು ನಾಯಕರು ಅಳವಡಿಸಿಕೊಂಡು ಹೋರಾಟ ನಡೆಸಿದ್ದಾರೆ ಎಂದು ತಿಳಿಸಿದರು.

ಸಮಾರಂಭದಲ್ಲಿ ತಹಸೀಲ್ದಾರ್ ಸಂತೋಷ್, ತಾಪಂ ಇಓ ಲೋಕೇಶ್‌ಮೂರ್ತಿ, ಸಾರ್ವಜನಿಕ ಆಸ್ಪತ್ರೆ ಆಡಳಿತಾಧಿಕಾರಿ ಡಾ.ಸಿ.ಎ.ಅರವಿಂದ್, ಅಬಕಾರಿ ಅಧಿಕಾರಿ ರಮ್ಯ, ಪುರಸಭೆ ಮುಖ್ಯಾಧಿಕಾರಿ ವೀಣಾ, ಪಿ.ನಾಗರಾಜು, ದಲಿತ ಮುಖಂಡ ಅಂಕಯ್ಯ ಸೇರಿದಂತೆ ಹಲವರಿದ್ದರು.

ಮೂರನೇ ಪುಟದಿಂದ

ಎಕ್ಸ್‌ಪ್ರೆಸ್ ವೇ ಸಮೀಪ ಕಾಡಾನೆಗಳ ಹಿಂಡು ಪ್ರತ್ಯಕ್ಷ

ಮಾರ್ಗೋಪಾಯಗಳನ್ನು ಮಾಡಿದ್ದಾರೆ. ಮತ್ತೊಂದೆಡೆ ಪಕ್ಕದಲ್ಲೇ ಎಕ್ಸ್‌ಪ್ರೆಸ್‌ವೇ ಹಾಗೂ ಬೈಪಾಸ್ ಇರುವುದರಿಂದ ಬೈಪಾಸ್‌ನಲ್ಲಿ ಜನ ಸಂಚಾರ ಮಾಡದಂತೆ ಮನವಿ ಮಾಡಿದ್ದು, ಒಂದು ವೇಳೆ ಹೆದ್ದಾರಿಗೂ ಆನೆಗಳು ಪ್ರವೇಶ ಮಾಡದಂತೆ ಎಚ್ಚರಿಕೆ ವಹಿಸಿದ್ದಾರೆ.

ಆನೆಗಳು ರಾತ್ರಿ ಸಂದರ್ಭದಲ್ಲೇ ಹೆಚ್ಚು ಸಂಚರಿಸುವುದರಿಂದ ಇಂದು ಸಂಜೆ ಆರು ಗಂಟೆಯಿಂದ ಕಾರ್ಯಾಚರಣೆ ಆರಂಭಿಸಲು ಪೊಲೀಸರು ಹಾಗೂ ಅರಣ್ಯ ಇಲಾಖೆ ಸಿಬ್ಬಂದಿ ಕ್ರಮ ವಹಿಸಿದೆ. ಸಾಧ್ಯವಾದಷ್ಟು ಇಂದು ರಾತ್ರಿಯೇ ಆನೆಗಳನ್ನು ಚನ್ನಪಟ್ಟಣ ಅಥವಾ ಮುತ್ತತ್ತಿ ಅರಣ್ಯ ಪ್ರದೇಶಕ್ಕೆ ಅಟ್ಟಲು ಸಿದ್ಧತೆ ಮಾಡಿಕೊಂಡಿದ್ದಾರೆ. ಹಾಗೊಂದು ವೇಳೆ ಆಗದಿದ್ದರೆ, ಲಾರಿಗಳ ಮೂಲಕ ಕಾಡಿಗೆ ಕಳುಹಿಸುವ ಸಾಧ್ಯತೆಯೂ ಇದೆ. ಈ ನಿಟ್ಟಿನಲ್ಲಿ ಬೆಂಗಳೂರಿನಿಂದ ಬಂದಿರುವ ಇಸ್ರೇಲ್ ಮೂಲದ ತಂತ್ರಜ್ಞರು ಕಾರ್ಯಾಚರಣೆ ಮಾಡುತ್ತಿದ್ದಾರೆ.

ಚನ್ನಪಟ್ಟಣ ಅರಣ್ಯ ಪ್ರದೇಶದಿಂದ ಮದ್ದೂರಿನ ಅಂಬರಹಳ್ಳಿ, ಮಂಡ್ಯ ತಾಲೂಕಿನ ಬೂದನೂರು ಮಾರ್ಗವಾಗಿ ಮಂಡ್ಯ ನಗರದ ಚಿಕ್ಕಮಂಡ್ಯ ವ್ಯಾಪ್ತಿಗೆ ಬಂದಿರುವ ಕಾಡಾನೆಗಳು ಅಂಬರಹಳ್ಳಿ ಹಾಗೂ ಬೂದನೂರಿನ ಹಲವು ಕೃಷಿ ಪ್ರದೇಶಗಳನ್ನು ನಾಶ ಮಾಡಿದೆ. ಇಂದು ಸಹ ಚಿಕ್ಕಮಂಡ್ಯದ ಪುಟ್ಟಸ್ವಾಮಿ ಎಂಬುವವರಿಗೆ ಸೇರಿದ ಕೃಷಿ ಭೂಮಿ ನಾಶ ಮಾಡಿದ್ದು, ರೈತರು ಅಳಲು ತೋಡಿಕೊಂಡಿದ್ದಾರೆ.

ಶಾಸಕ ಗಣಿಗ ರವಿಕುಮಾರ್ ಭೇಟಿ: ಇನ್ನು ಸ್ಥಳಕ್ಕೆ ಶಾಸಕ ಗಣಿಗ ರವಿಕುಮಾರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದೇ ಮೊದಲ ಬಾರಿಗೆ ಆನೆಗಳ ಗುಂಪು ಮಂಡ್ಯ ನಗರ ವ್ಯಾಪ್ತಿಯಲ್ಲಿ ಕಾಣಿಸಿಕೊಂಡಿದ್ದು ಆತಂಕದ ವಿಚಾರವಾಗಿದೆ. ಅಧಿಕಾರಿಗಳಿಗೆ ಸೂಚನೆ ಕೊಟ್ಟಿದ್ದು, ಇಂದು ರಾತ್ರಿಯಿಂದಲೇ ಕಾಡಿಗೆ ಕಳುಹಿಸುವ ಪ್ರಕ್ರಿಯೆ ನಡೆಯಲಿದೆ ಎಂದು ಹೇಳಿದರು.

ನಿನ್ನೆ ಬೂದನೂರಿನಲ್ಲಿ ಬೀಡು ಬಿಟ್ಟಾಗಲೇ ಆನೆಗಳನ್ನು ಕಾಡಿಗೆ ಅಟ್ಟುವ ಕೆಲಸವನ್ನು ಅರಣ್ಯ ಇಲಾಖೆ ಮಾಡಿತ್ತಾದರೂ ಹಲವು ಗ್ರಾಮಗಳಲ್ಲಿ ನಿನ್ನೆ ರಾತ್ರಿ ಗಣೇಶನನ್ನು ವಿಸರ್ಜಿಸುತ್ತಿರುವ ಪರಿಣಾಮ ತಮಟೆ, ಡಿಜೆ, ಪಟಾಕಿ ಶಬ್ದಕ್ಕೆ ಆನೆಗಳು ದಿಕ್ಕಾಪಾಲಾಗಿ ತಪ್ಪಿಸಿಕೊಂಡು ಇಲ್ಲಿಯವರೆಗೆ ಬಂದಿದೆ. ಆ ನಿಟ್ಟಿನಲ್ಲಿ ಮಂಡ್ಯ ಎಸ್ಪಿ ಅವರೊಂದಿಗೆ ಮಾತನಾಡಿದ್ದು, ಮಂಡ್ಯ, ಮದ್ದೂರು, ಮಳವಳ್ಳಿ ವ್ಯಾಪ್ತಿಯಲ್ಲಿ ಇಂದು ಗಣೇಶ ವಿಸರ್ಜನೆ ಕಾರ್ಯಕ್ರಮವಿದ್ದರೆ ಮುಂದೂಡಿಕೆ ಮಾಡಿ ಅಥವಾ ಐದು ಗಂಟೆಯೊಳಗೆ ವಿಸರ್ಜನೆ ಮಾಡುವಂತೆ ಸೂಚನೆ ಕೊಡಿ ಎಂದು ಹೇಳಿದ್ದೇನೆ ಎಂದರು.

ಜೊತೆಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಜೊತೆಗೂ ಈ ಬಗ್ಗೆ ಚರ್ಚೆ ನಡೆಸಿದ್ದು, ಚನ್ನಪಟ್ಟಣ ಅಥವಾ ಮುತ್ತತ್ತಿ ಕಾಡಿಗೆ ಆನೆಗಳನ್ನು ಅಟ್ಟುವ ಸಾಧ್ಯತೆ ಇರುವುದರಿಂದ ರಾಮನಗರ ಜಿಲ್ಲೆಯ ಚನ್ನಪಟ್ಟಣ ಹಾಗೂ ಕನಕಪುರ ತಾಲೂಕಿನಲ್ಲಿ ಗಣೇಶ ವಿಸರ್ಜನೆಯನ್ನು ಮುಂದೂಡಲು ಯುವಕರಿಗೆ ಸೂಚನೆ ಕೊಡಲು ಅಲ್ಲಿನ ಪೊಲೀಸರ ಜೊತೆಗೆ ಮಾತನಾಡುವಂತೆ ಡಿಸಿಎಂಗೆ ಮನವಿ ಮಾಡಿದ್ದೇನೆ ಎಂದು ತಿಳಿಸಿದರು.

ನೀರು ಸಮುದ್ರಕ್ಕೆ ಹರಿಸಿ, ನಮ್ಮ ನೀರಲ್ಲಿ ಬೆಳೆ ಬೆಳೆದಿದೆ

ಇಂದಿನ ಕಾಂಗ್ರೆಸ್ ಸರ್ಕಾರ ಪ್ರಯೋಗಿಸಬೇಕು. ಅದನ್ನು ಬಿಟ್ಟು ಕೇಳಿದ ತಕ್ಷಣವೇ ನೀರು ಹರಿಸುವುದು ಸರಿಯಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ದೇವರ ದಯೆಯಿಂದ ನನ್ನ ಕಾಲದಲ್ಲಿ ಸಮರ್ಪಕ ಮಳೆಯಾಗಿ ಕಾವೇರಿ ಸಮಸ್ಯೆ ಉದ್ಭವಿಸಲಿಲ್ಲ. ಆದರೆ ಕೆಆರ್‌ಎಸ್ ಡ್ಯಾಂನ ಗೇಟ್‌ಗಳ ಸಮಸ್ಯೆ ಇತ್ತು. ಅದನ್ನು ಸರಿಪಡಿಸಲು ಮುಂದಾದೆ. ಅದಕ್ಕೆ ಅಧಿಕಾರಿಗಳು ನಾಲ್ವಡಿ ಕೃಷ್ಣರಾಜ ಒಡೆಯರ್ ಹಾಗೂ ಸರ್ ಎಂ.ವಿಶ್ವೇಶ್ವರಯ್ಯ ನಿರ್ಮಿಸಿದ ಐತಿಹಾಸಿಕ ಡ್ಯಾಂ ಇದು. ಉತ್ತರ ಕರ್ನಾಟಕದವರಾದ ನಿಮಗೆ ಡ್ಯಾಂ ಬಗ್ಗೆ ಮಾಹಿತಿ ಇಲ್ಲ. ಗೇಟ್ ಸರಿಪಡಿಸಬೇಡಿ ಎಂದಿದ್ದರು. ಆದರೆ ಅದಕ್ಕೆ ಸೊಪ್ಪು ಹಾಕದೇ ರಿಪೇರಿಗೆ ಬಂದಿದ್ದ ಡ್ಯಾಂನ ಗೇಟ್‌ಗಳನ್ನು ಸಿದ್ಧಪಡಿಸಿದೆ. ಇದೀಗ ಡ್ಯಾಂನ ಗೇಟ್‌ಗಳು ಸಮರ್ಪಕವಾಗಿದ್ದು, ಐತಿಹಾಸಿಕ ಡ್ಯಾಂನ ಗೇಟ್‌ಗಳು ಇನ್ನು 50 ವರ್ಷ ಯಾವುದೇ ಸಮಸ್ಯೆಯಾಗದಂತೆ ಸಿದ್ಧಗೊಂಡಿದೆ. ಈ ವಿಚಾರದಲ್ಲಿ ನನಗೆ ಬಹಳ ಹೆಮ್ಮೆ ಇದೆ ಎಂದರು.

ಸಂಕಷ್ಟ ಸೂತ್ರ ಸಿದ್ಧಪಡಿಸಿ: ರಾಜ್ಯ ಸರ್ಕಾರ ಸಮರ್ಪಕವಾಗಿ ಕಾವೇರಿ ಸಂಕಷ್ಟ ಸೂತ್ರ ಹೆಣೆಯಬೇಕು. ಮೊದಲು ಕಾನೂನು ತಜ್ಞರ ಜೊತೆಗೆ ಚರ್ಚಿಸಿ ಬಳಿಕ ಒಂದು ಸೂತ್ರ ರಚಿಸಬೇಕು. ತದ ನಂತರ ಹೋರಾಟಗಾರರು ಹಾಗೂ ಸರ್ವಪಕ್ಷಗಳ ಮುಖಂಡರೊಂದಿಗೆ ಒಂದು ಸುತ್ತಿನ ಮಾತುಕತೆ ನಡೆಸಿ, ಬಳಿಕ ಸುಪ್ರೀಂಕೋರ್ಟ್, ಕಾವೇರಿ ನೀರು ನಿರ್ವಹಣಾ ಸಮಿತಿ ಹಾಗೂ ಪ್ರಾಧಿಕಾರದ ಮುಂದೆ ಇಡಬೇಕು. ಈ ರೀತಿ ನಿರ್ಣಯ ತೆಗೆದುಕೊಂಡರೆ ನಮ್ಮ ಬೆಂಬಲ ಸರ್ಕಾರಕ್ಕೆ ಇದೆ. ಆದರೆ ಕದ್ದು ಮುಚ್ಚಿ ನೀರು ಬಿಟ್ಟರೆ ನಾವು ರೈತ ಮುಖಂಡರೊಂದಿಗೆ ಬೀದಿಗಿಳಿದು ಹೋರಾಡುತ್ತೇವೆ ಎಂದು ಎಚ್ಚರಿಕೆ ನೀಡಿದರು.

ಮೇಕೆದಾಟು ಕಾಮಗಾರಿ ಶೀಘ್ರ ಆರಂಭಿಸಿ: ಮೇಕೆದಾಟು ಯೋಜನೆ ಇಂದು ನಿನ್ನೆಯದಲ್ಲ. ಈ ಯೋಜನೆ ಆರಂಭಿಸಲು ಕಳೆದ ಎರಡು ದಶಕಗಳಿಂದ ನಿರಂತರ ಹೋರಾಟ ನಡೆಯುತ್ತಿದೆ. ತಮಿಳುನಾಡು ವಿರೋಧದ ನಡುವೆಯೂ 2012ರಲ್ಲಿ ಡಿಪಿಆರ್ ಬದಲಾವಣೆ ಆಗಿತ್ತು. ಬಳಿಕ ಮೋದಿ ನೇತೃತ್ವದ ಕೇಂದ್ರ ಸರ್ಕಾರದಲ್ಲಿ ಹೊಸದಾಗಿ ಡಿಪಿಆರ್ ಸಿದ್ಧಪಡಿಸಲು ಒಪ್ಪಿಗೆ ಕೊಡಲಾಯಿತು. ಈ ಬಗ್ಗೆ ಸುಪ್ರೀಂಕೋರ್ಟ್ ಸಹ ಮೇಕೆದಾಟು ಬಳಿ ಡ್ಯಾಂ ನಿರ್ಮಿಸಲು ಅಧ್ಯಯನ ತಂಡಕ್ಕೆ ಪರಿಶೀಲಿಸಲು ಸೂಚನೆ ಕೊಟ್ಟಿದೆ. ಡ್ಯಾಂ ನಿರ್ಮಾಣದಿಂದ ಆಗುವ ಅನುಕೂಲಗಳ ಬಗ್ಗೆ ಅಧ್ಯಯನ ತಂಡಕ್ಕೆ ರಾಜ್ಯ ಸರ್ಕಾರ ಮಾಹಿತಿ ನೀಡಿ ಒಪ್ಪಿಗೆ ಪಡೆಯಬೇಕು. ಶೀಘ್ರವೇ ಡ್ಯಾಂ ನಿರ್ಮಾಣ ಕೆಲಸ ಆರಂಭವಾದರೆ ಕನಿಷ್ಟ 5 ವರ್ಷ ಬೇಕಾಗುತ್ತದೆ. ಡ್ಯಾಂ ನಿರ್ಮಾಣದಿಂದ ಬೆಂಗಳೂರು ಸೇರಿದಂತೆ ಹಲವು ಕಡೆಗಳಲ್ಲಿ ಶಾಶ್ವತವಾಗಿ ನೀರಿನ ಸಮಸ್ಯೆ ಬಗೆಹರಿಯುತ್ತದೆ ಎಂದು ಸಲಹೆ ನೀಡಿದರು.

ಇಂದಿನ ಚಳುವಳಿ ಯಶಸ್ವಿ: ಬೊಮ್ಮಾಯಿ ಸಮ್ಮುಖದಲ್ಲಿ ನಡೆದ ಹೋರಾಟದಲ್ಲಿ ಬಿಜೆಪಿ ಮುಖಂಡರು ಬೇವು– ಬೆಲ್ಲ ಪ್ರದರ್ಶಿಸಿ, ಕಾವೇರಿ ವಿಚಾರದಲ್ಲಿ ತಮಿಳುನಾಡಿಗೆ ಬೆಲ್ಲ, ಕರ್ನಾಟಕಕ್ಕೆ ಬೇವು ಸಿಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಇಂದಿನ ಪ್ರತಿಭಟನೆಗೆ ಸರ್ಕಾರಿ ನೌಕರರ ಸಂಘ ಸೇರಿದಂತೆ ಹಲವು ಸಂಘಟನೆಗಳು ಬೆಂಬಲ ಸೂಚಿಸಿದ್ದವು. ಜೊತೆಗೆ ಬೀದರ್‌ನ ಬಸವ ಮಂಟಪದ ಶ್ರೀ ಚನ್ನಬಸವಾನಂದ ಸ್ವಾಮೀಜಿ ಸಾಥ್ ನೀಡಿದರು.

ಪ್ರತಿಭಟನೆಯಲ್ಲಿ ಶಾಸಕರಾದ ಆರ್.ಅಶೋಕ್, ರವಿ ಸುಬ್ರಹ್ಮಣ್ಯ, ವಿಧಾನಪರಿಷತ್ ಮಾಜಿ ಸದಸ್ಯ ಅಶ್ವತ್ಥ್ ನಾರಾಯಣಗೌಡ, ಬಿಬಿಎಂಪಿ ಬಿಜೆಪಿ ಕಾರ್ಪೋರೇಟರ್‌ಗಳಾದ ಟಿ.ವಿ.ಕೃಷ್ಣ, ಆನಂದ್, ಬೆಟ್ಟಸ್ವಾಮಿ, ಉಮೇಶ್ ಶೆಟ್ಟಿ, ಉಮೇಶ್, ಬಸವರಾಜ್, ಮೋಹನ್‌ಕುಮಾರ್, ಲಕ್ಷ್ಮಿಕಾಂತ್, ಮುನಿಸ್ವಾಮಿ, ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಪಿ.ಉಮೇಶ್, ಬಿಜೆಪಿ ಮುಖಂಡರಾದ ಡಾ.ಇಂದ್ರೇಶ್, ಅಶೋಕ್ ಜಯರಾಂ, ಎ.ಎಲ್.ಚೇತನ್‌ಗೌಡ, ಎಸ್.ಪಿ.ಸ್ವಾಮಿ, ಪೀಹಳ್ಳಿ ರಮೇಶ್, ಅರವಿಂದ್, ಸಿ.ಟಿ.ಮಂಜುನಾಥ್, ಶಿವಕುಮಾರ್ ಆರಾಧ್ಯ, ಹಿತರಕ್ಷಣಾ ಸಮಿತಿಯ ಸುನಂದಾ ಜಯರಾಂ, ಬೋರಯ್ಯ, ಜಿ.ಬಿ.ಶಿವಕುಮಾರ್, ಎಂ.ಎಸ್.ಆತ್ಮಾನಂದ, ಕನ್ನಡಸೇನೆ ಮಂಜು, ದಸಂಸ ಕೃಷ್ಣ ಸೇರಿದಂತೆ ನೂರಾರು ಮಂದಿ ಭಾಗವಹಿಸಿದ್ದರು.

ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ: ಬೊಮ್ಮಾಯಿ

ಆರ್.ಅಶೋಕ್ ಮಾತನಾಡಿ, ಶಿವಮೊಗ್ಗ ಘಟನೆಯನ್ನು ನಾನು ಖಂಡಿಸುತ್ತೇನೆ. ಈ ಘಟನೆಯಿಂದ ಕೋಮುಗಲಭೆಗೆ ಕಾರಣವಾಗುತ್ತದೆ. ಅದಕ್ಕೆ ನೇರ ಕಾರಣ ಕಾಂಗ್ರೆಸ್ ಸರ್ಕಾರ. ಇಂತಹ ಘಟನೆಯಿಂದ ರಾಜ್ಯದ ಮಾನ ಮರ್ಯಾದೆ ಹಾಳಾಗುತ್ತದೆ. ಕುಕ್ಕರ್ ಸ್ಫೋಟ, ಡಿ.ಜೆ.ಹಳ್ಳಿ ಗಲಭೆಯಾದಾಗ ಅಮಾಯಕರು ಅಂತ ಹೇಳಿಕೆ ಕೊಟ್ಟರು. ಈ ರೀತಿ ಹೇಳಿದರೆ ಅವರನ್ನು ಪ್ರೋತ್ಸಾಹಿಸಿದಂತಾಗುತ್ತದೆ. ಇನ್ನಷ್ಟು ಇಂತಹ ಘಟನೆಗಳಿಗೆ ಕಾಂಗ್ರೆಸ್ ಕಾರಣವಾಗುತ್ತದೆ ಎಂದರು. ಕಾಂಗ್ರೆಸ್ ನವರು ಇಂತಹ ಘಟನೆಯನ್ನ ಸಣ್ಣದಲ್ಲ, ಕಣ್ಣಿಗೆ ಕಾಣಿಸಿಲ್ಲ ಅಂತಾರೆ. ಮಾಧ್ಯಮವರು ದೊಡ್ಡದು ಮಾಡುತ್ತಿದ್ದಾರೆ ಅಷ್ಟೇ ಎನ್ನುತ್ತಾರೆ. ಕಾಂಗ್ರೆಸ್‌ನವರಿಗೆ ತಲ್ವಾರ್ ಬಂದರೂ ಗೊತ್ತಿಲ್ಲ, ಬಾಂಬ್ ಸ್ಫೋಟವಾದರು ಗೊತ್ತಾಗುವುದಿಲ್ಲ ಎಂದು ಕಿಡಿಕಾರಿದರು.



ಮೈಸೂರಿನ ಜಯಲಕ್ಷ್ಮಿಪುರಂನಲ್ಲಿರುವ ಶ್ರೀ ಸತ್ಯಸಾಯಿ ಬಾಬಾ ಪದವಿಪೂರ್ವ ಕಾಲೇಜಿನಲ್ಲಿ ಶ್ರಮದಾನದ ಮೂಲಕ ಗಾಂಧಿ ಜಯಂತಿ ಆಚರಿಸಲಾಯಿತು. ಈ ವೇಳೆ ಕರಾಮುವಿವಿ ಡೀನ್ ಡಾ.ಎನ್.ಲಕ್ಷ್ಮಿ ಮತ್ತಿತರರು ಹಾಜರಿದ್ದರು.

ಹಿರಿಯರ ಮಾರ್ಗದರ್ಶನದಿಂದ ಸದ್ಗತಿ



ಮೈಸೂರು, ಅ.2–ಜೀವನದಲ್ಲಿ ಶಿಸ್ತು ಕಾಯ್ದುಕೊಳ್ಳಲು, ಸಮಾಜ ಸರಿಯಾದ ಮಾರ್ಗದಲ್ಲಿ ಸಾಗಲು ಹಿರಿಯ ಜೀವಗಳ ಮಾರ್ಗದರ್ಶನ, ಸಲಹೆ ಅಗತ್ಯವಿದೆ. ಹಿರಿಯರ ಮಾತು ಆಲಿಸಿ ಅದನ್ನು ಪಾಲಿಸಿದರೆ ನಮಗೆ ಸದ್ಗತಿ ಎಂದು ಕೆಎಂಪಿಕೆ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ವಿಕ್ರಮ ಅಯ್ಯಂಗಾರ್ ಹೇಳಿದರು.

ನಾರಾಯಣ ಶಾಸ್ತ್ರಿ ರಸ್ತೆಯಲ್ಲಿರುವ ಸ್ವಾತಂತ್ರ್ಯ ಹೋರಾಟಗಾರರ ಉದ್ಯಾನವನದಲ್ಲಿ ಕೆಎಂಪಿಕೆ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಸ್ವಾತಂತ್ರ್ಯ ಹೋರಾಟಗಾರರ ಸಂಘದ ಅಧ್ಯಕ್ಷರಾದ ರೇವಣ್ಣ ಅವರನ್ನು ಸನ್ಮಾನಿಸಿ ಮಾತನಾಡಿದ ಅವರು, ಆರೋಗ್ಯ ಕಾಪಾಡಿಕೊಳ್ಳುವ ಮತ್ತು ಶಿಸ್ತಿನ ಜೀವನ ಕಟ್ಟಿಕೊಳ್ಳುವ ವಿಷಯದಲ್ಲಿ ಹಿರಿಯ ನಾಗರಿಕರು ನಮಗೆಲ್ಲ ಮಾದರಿಯಾಗಿದ್ದಾರೆ. ಆಧುನಿಕ ಜೀವನ ಶೈಲಿಯ ಪದ್ಧತಿಗೆ ಅಂಟಿಕೊಂಡ ಯುವ ಸಮೂಹ ಆರೋಗ್ಯ ಹದಗೆಡಿಸಿಕೊಳ್ಳುತ್ತಿರುವುದು ಕಳವಳಕಾರಿ ವಿಚಾರವಾಗಿದೆ. ಇಂತಹ ಸಂದಿಗ್ಧ ಸ್ಥಿತಿಯಲ್ಲಿ ಹಿರಿಯ ನಾಗರಿಕರ ಸಲಹೆ ಪಡೆಯಬೇಕಾಗಿದೆ. ಅವರು ರೂಢಿಸಿಕೊಂಡಿದ್ದ ಜೀವನ ಶೈಲಿ ನಾವೂ ರೂಢಿಸಿಕೊಳ್ಳಬೇಕಿದೆ ಎಂದರು.

ವೃದ್ಧಾಪ್ಯ ಪ್ರತಿಯೊಬ್ಬರ ಜೀವನದಲ್ಲಿ ಎದುರಾಗುತ್ತದೆ. ವೃದ್ಧರ ಕಡೆಗಣಿಸದೆ ಸಮಾಜದ ಪ್ರತಿಯೊಬ್ಬರು ಗೌರವಿಸಬೇಕು. ಹಿರಿಯ ನಾಗರಿಕರ ಮೇಲೆ ದೌರ್ಜನ್ಯ ನಡೆದರೆ ತಕ್ಷಣ ಅಧಿಕಾರಿಗಳ ಗಮನಕ್ಕೆ ತರಬೇಕು. ಹಿರಿಯರ ಸಮಸ್ಯೆಗಳಿಗೆ ತ್ವರಿತ ಗತಿಯ ಪರಿಹಾರ ಸಿಗಬೇಕು ಎಂದು ಹೇಳಿದರು. ಮುಖಂಡರಾದ ಆರ್.ಪರಮೇಶ್ ಗೌಡ, ಸುರೇಂದ್ರ, ರಾಜೇಶ್, ವಿನಯ್ ಕಣಗಾಲ್, ಲಕ್ಷ್ಮಿ ಶ್ರೀನಿವಾಸ್, ವಿಘ್ನೇಶ್ವರ ಭಟ್, ರಾಜೇಂದ್ರ ಸುದರ್ಶನ್, ಕೃಷ್ಣಮೂರ್ತಿ, ಪ್ರವೀಣ್ ಕುಮಾರ್, ರಾಮು, ಹಾಗೂ ಇನ್ನಿತರರು ಗೌರವ ಸಲ್ಲಿಸಿದರು.



ಜೆಎಸ್ಎಸ್ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜು, ವಿಜಯನಗರ ಸಮುಚ್ಚಯದಲ್ಲಿ ಗಾಂಧೀ ಜಯಂತಿ ಆಚರಣೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ಪ್ರಾಂಶುಪಾಲ ಕಾಂತರಾಜ್ ಆಲನಹಳ್ಳಿ, ಮುಖ್ಯ ಶಿಕ್ಷಕ ವಿ.ನಾಗೇಶ್ ಹಾಗೂ ಸಂಸ್ಥೆಯ ಸಿಬ್ಬಂದಿ ಉಪಸ್ಥಿತರಿದ್ದರು.

ನೃಪತುಂಗ ಕನ್ನಡ ಶಾಲೆಯಲ್ಲಿ ಮಹಾತ್ಮ ಗಾಂಧಿ, ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿ ಆಚರಣೆ



ಮೈಸೂರು, ಅ. 2–ಮೈಸೂರಿನ ರಾಮಕೃಷ್ಣನಗರದಲ್ಲಿರುವ ನೃಪತುಂಗ ಕನ್ನಡ ಶಾಲೆ ಮತ್ತು ಕಾಲೇಜಿನಲ್ಲಿ ಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜನ್ಮ ದಿನಾಚರಣೆಯನ್ನು ಆಚರಿಸಲಾಯಿತು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಡಾ.ಸಿ.ಜಿ. ಉಷಾದೇವಿಯವರು ಮಕ್ಕಳಿಗೆ ಉದಾಹರಣೆಗಳ ಮೂಲಕ ಗಾಂಧೀಜಿಯವರ ತತ್ವಗಳು, ಆದರ್ಶಗಳು, ಅವರ ಸರಳ ಜೀವನ, ಶಿಕ್ಷಣದ ಬಗ್ಗೆ ಅವರಿಗಿದ್ದ ಚಿಂತನೆಯನ್ನು ತಿಳಿಸಿಕೊಟ್ಟರು. ನಮ್ಮ ದೇಶದ ನಾಯಕರು ಹಾಗೂ ಮಹಾನ್ ವ್ಯಕ್ತಿಗಳ ಜೀವನ ಚರಿತ್ರೆಗಳನ್ನು ಓದುವ ಅಭ್ಯಾಸ ಬೆಳೆಸಿಕೊಳ್ಳಿ ಎಂದು ಮಕ್ಕಳಿಗೆ ಕಿವಿಮಾತು ಹೇಳಿದರು.

ಅಧ್ಯಕ್ಷತೆಯನ್ನು ವಹಿಸಿದ್ದ ಸಂಸ್ಥೆಯ ಖಜಾಂಚಿ ಡಾ.ಹೆಚ್.ಟಿ.ಶೈಲಜಾ, ಲಾಲ್ ಬಹದ್ದೂರ್ ಶಾಸ್ತ್ರಿಯವರ ಜೀವನ, ಅವರು ಮಾಡಿದ ಸಾಧನೆಗಳ ಬಗ್ಗೆ ತಿಳಿಸಿಕೊಟ್ಟರು.

ವೇದಿಕೆ ಕಾರ್ಯಕ್ರಮದ ನಂತರ ಮಕ್ಕಳು ಗಾಂಧಿ ಜಯಂತಿಯ ಪ್ರಯುಕ್ತ ಶಾಲಾ ಆವರಣದ ಸ್ವಚ್ಛತೆಯನ್ನು ಮಾಡಿದ್ದು ವಿಶೇಷವಾಗಿತ್ತು. ಸಂಸ್ಥೆಯ ಉಪಾಧ್ಯಕ್ಷ ಸ.ರ. ಸುದರ್ಶನ, ಕಾರ್ಯದರ್ಶಿ ಸವಿತಾ ಪ ಮಲ್ಲೇಶ್, ಕಾಲೇಜಿನ ಪ್ರಾಂಶುಪಾಲರಾದ ಮಮತಾ, ಪ್ರಾಥಮಿಕ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಭರತ್ ಕುಮಾರ್, ಪ್ರಾಥಮಿಕ ಮತ್ತು ಪ್ರೌಢಶಾಲಾ ಮುಖ್ಯ ಶಿಕ್ಷಕರಾದ ಶೀಲಾ ಮತ್ತು ಸೌಮ್ಯಶ್ರೀ, ಉಪನ್ಯಾಸಕರು, ಶಿಕ್ಷಕರು ಉಪಸ್ಥಿತರಿದ್ದರು.

ಅಮೃತ ವಿದ್ಯಾರ್ಥಿಗಳಿಂದ ಬಾಪುಗೆ 'ಸ್ವಚ್ಛಾಂಜಲಿ'



ಮೈಸೂರು, ಅ.2–ಗಾಂಧಿ ಜಯಂತಿಯ ಅಂಗವಾಗಿ ಬೋಗಾದಿ ಎರಡನೇ ಹಂತದಲ್ಲಿರುವ ಅಮೃತ ವಿಶ್ವವಿದ್ಯಾಪೀಠಂನ ಸುತ್ತಮುತ್ತಲಿನ ಸ್ಥಳಗಳಲ್ಲಿ ಸ್ವಚ್ಛತಾ ಅಭಿಯಾನವನ್ನು ನಡೆಸಲಾಯಿತು. ಅಮೃತ ವಿಶ್ವವಿದ್ಯಾಪೀಠಂ ಮೈಸೂರು ಕ್ಯಾಂಪಸ್, ಮಾತಾ ಅಮೃತಾನಂದಮಯಿ ಮಠ, ಮೈಸೂರು ಹಾಗೂ ಅಮೃತಕೃಪ ಆಸ್ಪತ್ರೆಯ ಸಹಯೋಗದಲ್ಲಿ ನಡೆದ ಈ ಶ್ರಮದಾನವನ್ನು ವಾರ್ಡ್ ನಂ.44ರ ಪಾಲಿಕೆ ಸದಸ್ಯೆ ಹಾಗೂ ಆರೋಗ್ಯ ಸ್ಥಾಯಿ ಸಮಿತಿಯ ಮುಖ್ಯಸ್ಥೆ ಸವಿತಾ ಸುರೇಶ್ ಉದ್ಘಾಟಿಸಿದರು.

ಮಹಾತ್ಮ ಗಾಂಧಿಯವರಿಗೆ ಗೌರವ ಸಲ್ಲಿಸುವ ನಿಟ್ಟಿನಲ್ಲಿ ಒಂದು ಗಂಟೆಯ ಶ್ರಮದಾನ ಮಾಡುವ ಮೂಲಕ ಗಾಂಧೀಜಿಯವರಿಗೆ 'ಸ್ವಚ್ಛಾಂಜಲಿ' ಸಲ್ಲಿಸಬೇಕೆಂದು ಪ್ರಧಾನಿ ಮೋದಿ ದೇಶದ ಜನತೆಗೆ ಕರೆ ನೀಡಿದ್ದಾರೆ. ಪ್ರಧಾನಿ ಯವರ ಕರೆಗೆ ಪ್ರತಿಸ್ಪಂದನೆಯಾಗಿ 'ಕಸ ಮುಕ್ತ ಭಾರತವನ್ನು ನಿರ್ಮಿಸುವ ನಿಟ್ಟಿನಲ್ಲಿ ಈ ಶ್ರಮದಾನವನ್ನು ಮಾಡಲಾಯಿತು. ಅಮೃತ ವಿಶ್ವವಿದ್ಯಾಪೀಠಂ ಹಾಗೂ ಅಮೃತಕೃಪ ಆಸ್ಪತ್ರೆಯ 200ಕ್ಕೂ ಹೆಚ್ಚಿನ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ವರ್ಗ ಈ ಶ್ರಮದಾನದಲ್ಲಿ ಭಾಗವಹಿಸಿದ್ದರು. ಅಮೃತ ವಿಶ್ವವಿದ್ಯಾಪೀಠಂ ಮೈಸೂರು ಕ್ಯಾಂಪಸ್‌ನ ಪ್ರಾಂಶುಪಾಲ ಡಾ.ಜಿ.ರವೀಂದ್ರನಾಥ್, ಅಕಾಡೆಮಿಕ್ ಕೋರ್ಡಿನೇಟರ್ ಡಾ.ರೇಖಾ ಭಟ್, ಅಮೃತ ಕೃಪಾ ಆಸ್ಪತ್ರೆಯ ಡಾ. ವಿಕಾಸ್ ಮೋದಿ, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.


ಮೈಸೂರಿನ ಶ್ರೀ ರಾಂಪುರದಲ್ಲಿರುವ ವಿವೇಕಾ ಸೋಷಿಯಲ್ ಕ್ಲಬ್‌ನಲ್ಲಿ ಮಹಾತ್ಮ ಗಾಂಧೀಜಿಯವರ 154 ನೇ ಜಯಂತಿಯನ್ನು ಆಚರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಕ್ಲಬ್‌ನ ಅಧ್ಯಕ್ಷರಾದ ರಾಜೇಂದ್ರ, ಕಾರ್ಯದರ್ಶಿ ಹರೀಶ್, ಸಹ ಕಾರ್ಯದರ್ಶಿ ಬೂಕನಕೆರೆ ವಿಜೇಂದ್ರ ಇದ್ದಾರೆ.



ಅಧಿಕಾರ ವಿಕೇಂದ್ರೀಕರಣ, ಮಹಿಳಾ ಮೀಸಲಾತಿ ಗಾಂಧಿ ಕನಸು; ನನಸು ಮಾಡಿದ್ದು ರಾಜೀವ್ ಗಾಂಧಿ

● ಮುಖ್ಯಮಂತ್ರಿ ಸಿದ್ದರಾಮಯ್ಯ ವಿವರಣೆ ● 2023ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರ ಪ್ರದಾನ

ಬೆಂಗಳೂರು, ಅ.2(ಕೆಎಂಶಿ)– ಮಹಾತ್ಮ ಗಾಂಧಿ ಅವರ ಕನಸಿನ ಅಧಿಕಾರ ವಿಕೇಂದ್ರೀಕರಣ ಮತ್ತು ಮಹಿಳಾ ಮೀಸಲಾತಿಗೆ ಮುನ್ನುಡಿ ಬರೆದವರು ಮಾಜಿ ಪ್ರಧಾನಿ ದಿ. ರಾಜೀವ್ ಗಾಂಧಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನುಡಿದಿದ್ದಾರೆ.



ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಬ್ಯಾಂಕ್ವೆಟ್ ಹಾಲ್‌ನಲ್ಲಿ ಹಮ್ಮಿಕೊಂಡಿದ್ದ 2023ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರ ಪ್ರಶಸ್ತಿ ಪ್ರದಾನ ಸಮಾರಂಭ ಹಾಗೂ ಸ್ವಚ್ಛ ಸರ್ವೇಕ್ಷಣಾ ಗ್ರಾಮೀಣ ರಾಜ್ಯ ಮಟ್ಟದ ಪ್ರಶಸ್ತಿ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ, ಪ್ರಶಸ್ತಿ ವಿತರಿಸಿ ಮಾತನಾಡಿದರು.

ಅಧಿಕಾರ ವಿಕೇಂದ್ರೀಕರಣ ಗಾಂಧಿಯವರ ಕನಸಾಗಿತ್ತು. ಇದರಿಂದ ಮಾತ್ರ ಪ್ರಜಾಪ್ರಭುತ್ವ ಯಶಸ್ವಿಯಾಗುತ್ತದೆ. ದೇಶ, ರಾಜ್ಯದ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದು ನಂಬಿದ್ದರು. ಹೀಗಾಗಿ ಗ್ರಾಮ ಸ್ವರಾಜ್ಯವನ್ನು ಪ್ರತಿಪಾದಿಸಿದರು. ಗ್ರಾಮಗಳ ಅಭಿವೃದ್ಧಿ ಇಲ್ಲದೆ ದೇಶದ ಅಭಿವೃದ್ಧಿ ಸಾಧ್ಯವಿಲ್ಲ ಎನ್ನುವುದು ಗಾಂಧೀಜಿಯವರ ನೀತಿಯಾಗಿತ್ತು ಎಂದು ಹೇಳಿದ್ದಾರೆ.

ರಾಜೀವ್ ಗಾಂಧಿ ಅವರು ಮಹಾತ್ಮ ಗಾಂಧಿಯವರ ಆಶಯದಂತೆ ಅಧಿಕಾರ ವಿಕೇಂದ್ರೀಕರಣಕ್ಕೆ ಮುನ್ನುಡಿ ಬರೆದರು. ಜನತಂತ್ರದ ವಿಕೇಂದ್ರೀಕರಣಕ್ಕಾಗಿ ಸಂವಿಧಾನಕ್ಕೆ ತಿದ್ದುಪಡಿ ತಂದವರು ರಾಜೀವ್ ಗಾಂಧಿ ಮತ್ತು ಇದನ್ನು ಜಾರಿ ಮಾಡಿದವರು ಮಾಜಿ ಪ್ರಧಾನಿ ನರಸಿಂಹರಾವ್ ಎಂದಿದ್ದಾರೆ. ಸ್ಥಳೀಯ ಸಂಸ್ಥೆ ಮತ್ತು ಪಂಚಾಯತ್‌ಗಳಲ್ಲಿ ಶೇ.50 ಮೀಸಲಾತಿ ಜಾರಿ ಆಗಲು ಕಾರಣ ಆದವರು ರಾಜೀವ್ ಗಾಂಧಿ ಮತ್ತು ಕಾಂಗ್ರೆಸ್. ಈಗ ಕೇಂದ್ರ ಸರ್ಕಾರ ಜಾರಿ ಮಾಡಿದ್ದೀವಿ ಎಂದು ಹೇಳಿಕೊಳ್ಳುತ್ತಿರುವ ಮಹಿಳೆಯರ ರಾಜಕೀಯ ಮೀಸಲಾತಿಗೆ ಮುನ್ನುಡಿ ಬರೆದದ್ದು ಕಾಂಗ್ರೆಸ್. ಈಗ ಹಿಂದುಳಿದ ವರ್ಗಗಳ ಮಹಿಳೆಯರಿಗೂ ಮೀಸಲಾತಿ ಕಲ್ಪಿಸಬೇಕು ಎನ್ನುವುದು ನಮ್ಮ ಒತ್ತಾಯವಾಗಿದೆ. ಗ್ರಾಮಗಳ ವ್ಯಾಜ್ಯಗಳು ಗ್ರಾಮಗಳಲ್ಲೇ ಬಗೆಹರಿಯಬೇಕು ಎನ್ನುವ ಮಹತ್ವಾಕಾಂಕ್ಷೆಯಿಂದ ಗ್ರಾಮ ನ್ಯಾಯಾಲಯಗಳನ್ನು ಸ್ಥಾಪಿಸುವ ಬಗ್ಗೆ ಸರ್ಕಾರ ಗಂಭೀರ ಚಿಂತನೆ ನಡೆಸಿದೆ ಎಂದು ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿಗಳು ತಿಳಿಸಿದ್ದಾರೆ. ಮಹಾತ್ಮಗಾಂಧಿ ಮತ್ತು ರಾಜೀವ್ ಗಾಂಧಿ ಅವರ ಗ್ರಾಮ ಸ್ವರಾಜ್ಯ ಮತ್ತು ಅಧಿಕಾರ ವಿಕೇಂದ್ರೀಕರಣ ಆಶಯದಂತೆ ಗ್ರಾಮ ನ್ಯಾಯಾಲಯಗಳ ಸ್ಥಾಪನೆಯಾದರೆ ಗ್ರಾಮಸ್ಥರಿಗೆ ಬಹಳ ಅನುಕೂಲ ಆಗುತ್ತದೆ ಎಂದು ಹೇಳಿದ್ದಾರೆ. ಖಾದಿ–ಗ್ರಾಮೋದ್ಯೋಗ ಸ್ಥಳಗಳನ್ನು ಅಭಿವೃದ್ಧಿ ಪಡಿಸಲಾಗುವುದು. ಮತ್ತು ಗ್ರಾಮೋದ್ಯೋಗ ಉತ್ಪನ್ನಗಳಿಗೆ ಮಾರುಕಟ್ಟೆ ವಿಸ್ತರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ್ದಾರೆ.

ಮಕ್ಕಳ ಉತ್ತಮ ಭವಿಷ್ಯದ ದೃಷ್ಟಿಯಿಂದ ಪಠ್ಯ ಪರಿಷ್ಕರಣೆ

● ಶಾಲಾ ಶಿಕ್ಷಣ, ಸಾಕ್ಷರತಾ ಇಲಾಖೆ ಸಚಿವ ಮಧು ಬಂಗಾರಪ್ಪ ಸ್ಪಷ್ಟನೆ ● ಮಕ್ಕಳು ಫೇಲ್ ಆದರೆ ಶಾಲೆ ಬಿಡುತ್ತಾರೆ; ಅದನ್ನು ತಪ್ಪಿಸಲು ಹೆಚ್ಚುವರಿ ಪೂರಕ ಪರೀಕ್ಷೆ

ಬೆಂಗಳೂರು, ಅ.2–(ಕೆಎಂಶಿ)ಪಠ್ಯ ಪರಿಷ್ಕರಣೆ ಯಾವುದೇ ಪಕ್ಷದ ಪರ ವಿರುದ್ಧ ಅಂತ ಅಲ್ಲ. ಮಕ್ಕಳ ಉತ್ತಮ ಭವಿಷ್ಯವೇ ನಮ್ಮ ಉದ್ದೇಶ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವರಾದ ಎಸ್.ಮಧು ಬಂಗಾರಪ್ಪ ಹೇಳಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ಸಹಯೋಗದೊಂದಿಗೆ 'ನನ್ನ ಶಾಲೆ ನನ್ನ ಕೊಡುಗೆ ಅಡಿಯಲ್ಲಿ ದೇವನಹಳ್ಳಿ ತಾಲೂಕಿನ ವಿಶ್ವನಾಥಪುರ ಕರ್ನಾಟಕ ಪಬ್ಲಿಕ್ ಸ್ಕೂಲ್ ಆವರಣದಲ್ಲಿ ಸಿ.ಎಸ್.ಆರ್ ಅನುದಾನದಲ್ಲಿ ನಿರ್ಮಿಸಿರುವ ಮಾದರಿ ಸರ್ಕಾರಿ ಶಾಲೆ, ನೂತನ ಶಾಲಾ ಕೊಠಡಿಗಳು ಹಾಗೂ ವಿವೇಕ ಶಾಲಾ ಕೊಠಡಿಗಳನ್ನು ಉದ್ಘಾಟಿಸಿ ಮಾತನಾಡಿದರು.

ಮಕ್ಕಳಿಗೆ ಶಿಕ್ಷಣವನ್ನು ನೀಡುವ ಕೆಲಸ ಪುಣ್ಯದ ಕೆಲಸ. ನಮ್ಮ ರಾಜ್ಯ ಸರ್ಕಾರ ಶಿಕ್ಷಣ ಇಲಾಖೆಯನ್ನು ನನ್ನ ಮೇಲೆ ವಿಶ್ವಾಸವಿಟ್ಟು, ನಾನು ಚೆನ್ನಾಗಿ ನಿಭಾಯಿಸುವ ವಿಶ್ವಾಸ ಇಟ್ಟಿದ್ದಾರೆ. ಈ ಇಲಾಖೆಯನ್ನು ನಾನು ಬಹಳ ಹೆಮ್ಮೆಯಿಂದ, ಸಂತೋಷದಿಂದ ಮುಂದುವರೆಸಿಕೊಂಡು ಹೋಗುತ್ತೇನೆ. ಈ ಇಲಾಖೆಯ ಜವಾಬ್ದಾರಿ ನೀಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿಕೆ ಶಿವಕುಮಾರ್ ಅವರಿಗೆ ಧನ್ಯವಾದ ಸಲ್ಲಿಸುತ್ತೇನೆ ಎಂದರು.

ಮೊದಲಿಗೆ ನನಗೆ ಈ ಇಲಾಖೆ ಕೊಟ್ಟಿರಲಿಲ್ಲ. ಅದು ಮುನಿಯಪ್ಪ ಸಾಹೇಬರಿಗೂ ಗೊತ್ತು. ಬೇರೆ ಇಲಾಖೆ ಕೊಟ್ಟಿದ್ದರು. ನಮ್ಮನ್ನು ಯಾಕೆ ಸಚಿವರನ್ನಾಗಿ ಆಯ್ಕೆ



ಮಾಡಿದರೂ ಅನ್ನೋದನ್ನ ಬೇರೆ ಶಾಸಕರಿಗೆ ಹೇಳಬೇಕಾಗುತ್ತದೆ.

ನಮ್ಮ ತಂದೆ ಬಂಗಾರಪ್ಪನವರು ಇಡೀ ದೇಶದಲ್ಲಿ ರೈತರ ಬೋರ್‌ವೆಲ್‌ಗಳಿಗೆ ಉಚಿತ ವಿದ್ಯುತ್ ನೀಡುವ ಗ್ಯಾರಂಟಿ ನೀಡಿದ್ದರು. ರಾಜ್ಯದಲ್ಲಿ ಕಾಂಗ್ರೆಸ್‌ನಿಂದ ಮೊದಲ ಬಾರಿಗೆ ಅವರು ಮುಖ್ಯಮಂತ್ರಿಯಾಗಿದ್ದರು. ಆ ವೇಳೆ ಮಾಡಿದ ಆದೇಶದಿಂದ ಇವತ್ತು ನಮ್ಮ ರೈತರ ಬದುಕು ಹಸಿರಾಗಿದೆ. ಬಹಳಷ್ಟು ಯೋಜನೆಗಳನ್ನು ಅವರು ನೀಡಿದ್ದಾರೆ. ಆಶ್ರಯ, ಆರಾಧನಾ ಹೀಗೆ ಗ್ರಾಮೀಣ ಭಾಗದ ಜನರಿಗೆ ಹಲವು ಯೋಜನೆ ನೀಡಿದ್ದಾರೆ. ಅವರ ಮಗನಾಗಿ ನಾನು ಶಿಕ್ಷಣ ಇಲಾಖೆ ಸಚಿವನಾಗಿದ್ದೇನೆ. ಇದು ನನ್ನ ಪುಣ್ಯ ಎಂದರು.

ನನಗೆ ಚುನಾವಣೆಯ ಸಮಯದಲ್ಲಿ ಒಂದು ಜವಾಬ್ದಾರಿ ಕೊಟ್ಟಿದ್ದರು. ಚುನಾವಣಾ ಪ್ರಣಾಳಿಕೆ ರಚನಾ ಸಮಿತಿಯ ಉಪಾಧ್ಯಕ್ಷನಾಗಿದ್ದೆ. ಈಗ ನಿಮಗೆ ನೀಡಿರುವ ಗ್ಯಾರಂಟಿ ಯೋಜನೆಗಳ ಬಗ್ಗೆ ಮತದಾನಕ್ಕೂ ಮುಂಚೆಯೇ ನಾವು ಚಿಂತನೆ ಮಾಡಿದ್ದೆವು. ನೀವು ನೀಡಿದ ಆಶೀರ್ವಾದದಿಂದ ರಾಜ್ಯದಲ್ಲಿ 136 ಕ್ಷೇತ್ರದಲ್ಲಿ ಕಾಂಗ್ರೆಸ್ ಗೆದ್ದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಾವು ನೀಡಿದ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ್ದಾರೆ. 130 ದಿನಗಳಲ್ಲಿ ಮತದಾರನಿಗೆ ನೀಡಿದ ಭರವಸೆಯನ್ನು ಹಂತ ಹಂತವಾಗಿ ನಮ್ಮ ಸರ್ಕಾರ ಈಡೇರಿಸುವ ಕೆಲಸ ಮಾಡುತ್ತಿದೆ. ಇನ್ನೂ ಕೆಲವು ಗ್ಯಾರಂಟಿಗಳು ಉಳಿದಿವೆ ಅವುಗಳನ್ನು ಈಡೇರಿಸುವ ಮೂಲಕ ನೀವು ಇಟ್ಟಿರುವ ವಿಶ್ವಾಸ ಉಳಿಸಿಕೊಂಡು ಹೋಗುತ್ತೇವೆ ಎಂದರು.

ಪಠ್ಯಪುಸ್ತಕ ಪರಿಷ್ಕರಣೆಯನ್ನು ಮಾಡುತ್ತೇವೆ ಎಂದು ಪ್ರಣಾಳಿಕೆಯಲ್ಲಿ ಹೇಳಿದ್ದೆವು. ನಾನು ಅಧಿಕಾರ ಸ್ವೀಕರಿಸಿದ ಬಳಿಕ ಪಠ್ಯ ಪರಿಷ್ಕರಣೆಗೆ ಮೊದಲ ಸಹಿ ಮಾಡಿದ್ದೇನೆ. ನನಗೆ ಜವಾಬ್ದಾರಿ ಇದೆ. ಯಾವುದೇ ಪಕ್ಷದ ಪರ, ವಿರುದ್ಧ ಅಂತ ಇಲ್ಲಿ ತೀರ್ಮಾನ ತೆಗೆದುಕೊಂಡಿಲ್ಲ. ಇಲ್ಲಿ ನಮ್ಮ ಉದ್ದೇಶ, ಮಕ್ಕಳ ಭವಿಷ್ಯಕ್ಕಾಗಿ ಆ ಕೆಲಸವನ್ನು ನಾನು ಪ್ರಾಮಾಣಿಕವಾಗಿ ಮಾಡುತ್ತಿದ್ದೇನೆ ಎಂದರು. ಮಕ್ಕಳಿಗೆ ನೀಡುವ ಮೊಟ್ಟೆಯಲ್ಲಿಯೂ ಮೊದಲು ಭೇದಭಾವ ಮಾಡಲಾಗುತ್ತಿತ್ತು. ನಾವು 8ನೇ ತರಗತಿಯಿಂದ ಹತ್ತನೇ ತರಗತಿಯ ಮಕ್ಕಳವರೆಗೂ ವಾರಕ್ಕೆ ಎರಡು ಮೊಟ್ಟೆ ಕೊಡುವ ವ್ಯವಸ್ಥೆ ಮಾಡಿದ್ದೇವೆ.

ಮುನಿಯಪ್ಪ ಸಾಹೇಬರ ಜೊತೆಗೆ ಮಾತನಾಡಿ ಕೂಡಲೇ ಮೊಟ್ಟೆ ಬಾಳೆಹಣ್ಣು ಚಿಕ್ಕಿ ನೀಡಲು ಅವರು ಆದೇಶ ಹೊರಡಿಸಿದರು. ಬಡವರ ಮಕ್ಕಳಿಗೆ ಅನ್ನದ ಜೊತೆಗೆ ಮೊಟ್ಟೆ ವಿತರಣೆ ಕೆಲಸ ರಾಜ್ಯದಲ್ಲಿ ಆಗುತ್ತಿದೆ. ಸಾಹುಕಾರನ ಹತ್ತಿರ ದುಡ್ಡು ಇದ್ದರೆ, ಅದು ಬ್ಯಾಂಕ್‌ನಲ್ಲಿರುತ್ತದೆ. ಅದೇ ಬಡವರ ಹತ್ತಿರ ಇದ್ದರೆ ಚಲಾವಣೆಯಲ್ಲಿರುತ್ತದೆ. ಅದರಿಂದ ರಾಜ್ಯದಲ್ಲಿ ಆರ್ಥಿಕತೆ ಹೆಚ್ಚಾಗುತ್ತದೆ ಎಂದರು.

ದೀಪಾ ಶಾಲೆಯಲ್ಲಿ ಮಹಾತ್ಮ ಗಾಂಧೀಜಿ, ಲಾಲ್ ಬಹದ್ದೂರ್ ಶಾಸ್ತ್ರಿ ಜನ್ಮದಿನಾಚರಣೆ



ಮೈಸೂರು, ಅ. 2– ಮೈಸೂರು ಬೋಗಾದಿಯ ದೀಪಾ ನಗರದ ದೀಪಾ ಶಾಲೆಯಲ್ಲಿ ಮಹಾತ್ಮ ಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿಯವರ ಜನ್ಮ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಮಹಾನಾಯಕರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಅವರ ಸಾಧನೆ, ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಇತರರಿಗೆ ಮಾದರಿಯಾಗಿ ಜೀವಿಸಬೇಕು ಎಂದು ಶಾಲೆಯ ಸಹ ಶಿಕ್ಷಕ ಸರ್ವೇಶ್ ತಿಳಿಸಿದರು. ಕಾರ್ಯಕ್ರಮದಲ್ಲಿ ದೀಪಾ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಪ್ರಣೀತಾ ಎರ್ಮಾಳ್, ದೀಪಾ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಗೀತಾ, ಕಾಲೇಜಿನ ಉಪನ್ಯಾಸಕರು, ಶಾಲೆಯ ಸಹ ಶಿಕ್ಷಕರು ಹಾಗೂ ಬೋಧಕೇತರ ಸಿಬ್ಬಂದಿ ಭಾಗವಹಿಸಿದ್ದರು.

ಗ್ಯಾಸ್ ಕಂಪನಿ ಡೀಲರ್‌ಶಿಪ್ ಕೊಡಿಸುವುದಾಗಿ ನಿವೃತ್ತ ಪ್ರಾಂಶುಪಾಲರಿಗೆ ರೂ. 45 ಲಕ್ಷ ವಂಚನೆ

ಬೆಂಗಳೂರು: ಖಾಸಗಿ ಗ್ಯಾಸ್ ಕಂಪನಿಯ ಡೀಲರ್‌ಶಿಪ್ ಕೊಡಿಸುವುದಾಗಿ ಹೊಸಪೇಟೆಯ ಐಟಿಐ ಸಂಸ್ಥೆಯೊಂದರ ನಿವೃತ್ತ ಪ್ರಾಂಶುಪಾಲರೊಬ್ಬರಿಗೆ (61) 45 ಲಕ್ಷ ರೂ. ವಂಚನೆ ಮಾಡಿರುವ ಘಟನೆಯೊಂದು ಬೆಳಕಿಗೆ ಬಂದಿದೆ.

ನಾಗೇಂದ್ರಪ್ಪ ವಂಚನೆಗೊಳಗಾದ ವ್ಯಕ್ತಿಯಾಗಿದ್ದಾರೆ. ಈ ಸಂಬಂಧ ನಾಗೇಂದ್ರಪ್ಪ ಅವರು ಸೆಪ್ಟೆಂಬರ್ 30ರಂದು ವಿಜಯನಗರ ಜಿಲ್ಲೆಯ ಕೊಟ್ಟೂರು ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಿದ್ದಾರೆ. ದೂರು ಬೆನ್ನಲ್ಲೇ ಪೊಲೀಸರು ಸೈಬರ್ ಕ್ರೈಂ ಪೊಲೀಸ್ ಠಾಣೆಯಲ್ಲಿ ಐಟಿ ಕಾಯ್ದೆ 2008 ಮತ್ತು ಐಪಿಸಿ ಸೆಕ್ಷನ್ 420ರ ಅಡಿಯಲ್ಲಿ ಎಫ್‌ಐಆರ್ ದಾಖಲಿಸಿದ್ದಾರೆ.

ಖಾಸಗಿ ಗ್ಯಾಸ್ ಕಂಪನಿಯ ಡೀಲರ್‌ಶಿಪ್ ಕುರಿತು ಆನ್‌ಲೈನ್‌ನಲ್ಲಿ ಹುಡುಕಾಟ ನಡೆಸಿದ್ದೆ. ಈ ವೇಳೆ ಮುಂಬೈನಲ್ಲಿರುವ ಗೋ ಗ್ಯಾಸ್ ಕಂಪನಿಯ ಲಿಂಕ್ ಸಿಕ್ಕಿತ್ತು. ಕರ್ನಾಟಕದಲ್ಲಿ ಡೀಲರ್‌ಶಿಪ್ ಬಗ್ಗೆ ತಿಳಿದುಕೊಂಡು ಹುಡುಕಾಟ ನಡೆಸಿದಾಗ ದೂರವಾಣಿ ಸಂಖ್ಯೆಯೊಂದು ಆಗಸ್ಟ್ 21ರಂದು ದೊರೆತಿತ್ತು. ಆ ಸಂಖ್ಯೆಯನ್ನು ಸಂಪರ್ಕಿಸಿದಾಗ ಮುಂಬೈನಿಂದ ಶಶಿಕಾಂತ್ ತಿವಾರಿ ಎಂದು ಹೇಳಿಕೊಂಡ ವ್ಯಕ್ತಿಯೊಬ್ಬ, ನನ್ನನ್ನು ನಂಬಿಸಿ, ಎನ್‌ಒಸಿ ಪಡೆಯಲು ಗೂಗಲ್ ಪೇ ಹಾಗೂ ಆರ್‌ಟಿಜಿಎಸ್ ಮೂಲಕ ಹಣ ವರ್ಗಾವಣೆ ಮಾಡುವಂತೆ ತಿಳಿಸಿದ. ಇದೇ ರೀತಿ ಪದೇ ಪದೇ ಫೋನ್ ಮಾಡಿ ಹಣ ವರ್ಗಾಯಿಸುವಂತೆ ಕೇಳುತ್ತಿದ್ದರು.

ಪ್ರತೀ ಬಾರಿ ಹಣ ಕೇಳಿದಾಗಲೂ ಇದೇ ಕೊನೆ ಬಾರಿ ಎಂದು ಭರವಸೆ ನೀಡುತ್ತಿದ್ದರು. ಸೆ.22ರಂದು ಅಂತಿಮ ಕಂತು ಎಂದು ಹೇಳಿ ರೂ.5 ಲಕ್ಷಕ್ಕೂ ಹೆಚ್ಚು ಹಣ ಪಡೆದಿದ್ದರು. ಇದಾದ ಬಳಿಕ ಅವರನ್ನು ಸಂಪರ್ಕಿಸಲು ಸಾಧ್ಯವಾಗಲಿಲ್ಲ. ಫೋನ್ ಸ್ವಿಚ್ ಆಫ್ ಬಂದಿತ್ತು. ಒಂದು ವಾರದಿಂದ ಸಂಪರ್ಕಿಸಲು ಪ್ರಯತ್ನಿಸಿದೆ. ಆದರೂ ಸಾಧ್ಯವಾಗಲಿಲ್ಲ. ಬಳಿಕ ಮೋಸ ಹೋದೆನೆಂಬುದು ಅರಿವಾಯಿತು. ನಂತರ ಪೊಲೀಸರನ್ನು ಸಂಪರ್ಕಿಸಿದೆ. ವಹಿವಾಟುಗಳಿಗೆ ಬಳಸಿದ ಬ್ಯಾಂಕ್ ಖಾತೆ ಸಂಖ್ಯೆಯ ಮೂಲಕ ಕಳ್ಳರನ್ನು ಪತ್ತೆ ಹಚ್ಚುವುದಾಗಿ ಪೊಲೀಸರು ಭರವಸೆ ನೀಡಿದ್ದಾರೆಂದು ನಾಗೇಂದ್ರಪ್ಪ ಹೇಳಿದ್ದಾರೆ.

ಸರ್ಕಾರಕ್ಕೆ ಗಾಂಧಿ ಜಯಂತಿ ಆಚರಿಸುವ ನೈತಿಕತೆ ಇಲ್ಲ: ರಫತ್ ಖಾನ್

ಮದ್ಯದಂಗಡಿ ಸ್ಥಾಪನೆ ವಿರುದ್ಧ ಎಸ್‌ಡಿಪಿಐ ಪಕ್ಷದಿಂದ ಗಾಂಧಿ ವೃತ್ತದಲ್ಲಿ ಪ್ರತಿಭಟನೆ

ಮೈಸೂರು, ಅ. 2–ಮಹಾತ್ಮ ಗಾಂಧಿಯವರ ಕನಸಾಗಿದ್ದ ಸಂಪೂರ್ಣ ಪಾನ ನಿಷೇಧ ಜಾರಿ ಬದಲು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಮದ್ಯದಂಗಡಿ ತೆರೆಯಲು ಮುಂದಾಗಿರುವ ಕಾಂಗ್ರೆಸ್ ಸರ್ಕಾರಕ್ಕೆ ಗಾಂಧಿ ಜಯಂತಿ ಆಚರಿಸುವ ನೈತಿಕತೆ ಇಲ್ಲ ಎಂದು ಸೋಷಿಯಲ್ ಡೆಮಾಕ್ರಟಿಕ್ ಪಾರ್ಟಿ ಮೈಸೂರು ಜಿಲ್ಲಾ ಅಧ್ಯಕ್ಷ ರಫತ್ ಖಾನ್ ಟೀಕಿಸಿದರು.



ನಗರದ ಗಾಂಧಿ ವೃತ್ತದಲ್ಲಿ ಎಸ್‌ಡಿಪಿಐ ಪಕ್ಷದಿಂದ ಸೋಮವಾರ ಮಧ್ಯಾಹ್ನ ರಾಜ್ಯ ಸರ್ಕಾರದ ವಿರುದ್ಧ ಹಮ್ಮಿಕೊಂಡಿದ್ದ ಪ್ರತಿಭಟನೆಯ ನೇತೃತ್ವ ವಹಿಸಿ ಅವರು ಮಾತನಾಡಿ, ರಾಜ್ಯದಲ್ಲಿ ಸಾವಿರಾರು ಕನ್ನಡ ಶಾಲೆಗಳಿಗೆ ಸಮರ್ಪಕವಾದ ಕಟ್ಟಡಗಳಿಲ್ಲದೆ ಮುಚ್ಚುತ್ತಿವೆ. ಸೂಕ್ತ ಗ್ರಂಥಾಲಯಗಳಿಲ್ಲ. ಜನರಿಗೆ ಉದ್ಯೋಗ ಇಲ್ಲ. ಇಂತಹ ಸಂದರ್ಭದಲ್ಲಿ ಸರ್ಕಾರ ತನ್ನ ಆದಾಯ ಹೆಚ್ಚಿಸಿಕೊಳ್ಳುವ ಏಕೈಕ ಉದ್ದೇಶದಿಂದ ಗ್ರಾಮ ಪಂಚಾಯತ್ ಮಟ್ಟದಲ್ಲಿ ಮದ್ಯದಂಗಡಿಗಳಿಗೆ ಪರವಾನಗಿ ನೀಡಲು ಮುಂದಾಗಿದೆ. ಮದ್ಯಪಾನ ನಿಷೇಧ ಮಾಡುವ ಬದಲು ಅದನ್ನು ಗ್ರಾಮಗಳ ಮಟ್ಟದಲ್ಲಿ ಕೊಂಡೊಯ್ಯುತ್ತಿರುವುದು ವಿಷಾದನೀಯ. ಇದರಿಂದ ಸರ್ಕಾರಕ್ಕೆ ಗಾಂಧಿ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಯಾವ ನೈತಿಕತೆ ಇಲ್ಲ ಎಂದು ಕಿಡಿ ಕಾರಿದರು.

ಮದ್ಯಪಾನದಿಂದ ಸಮಾಜದಲ್ಲಿ ಎಷ್ಟೆಲ್ಲಾ ಸಾಮಾಜಿಕ ಸಮಸ್ಯೆಗಳು, ಅಪರಾಧ ಪ್ರಕರಣಗಳು ಹೆಚ್ಚಾಗುತ್ತಿದ್ದರೂ ಅದ್ಯಾವುದನ್ನೂ ಪರಿಗಣನೆಗೆ ತೆಗೆದುಕೊಳ್ಳದೆ ಮದ್ಯದಂಗಡಿಗಳ ಸಂಖ್ಯೆಯನ್ನು ದೊಡ್ಡ ಮಟ್ಟದಲ್ಲಿ ಏರಿಸಲು ಹೊರಟಿರುವ ಯೋಜನೆಯನ್ನು ಎಸ್.ಡಿ.ಪಿ.ಐ ಕಟುವಾಗಿ ವಿರೋಧಿಸುತ್ತದೆ. ಜನರನ್ನು ಮದ್ಯಪಾನಕ್ಕೆ ಉತ್ತೇಜಿಸುವ ಕಾಂಗ್ರೆಸ್ ಸರಕಾರಕ್ಕೆ ಪಾನಮುಕ್ತ ಸಮಾಜದ ಕನಸು ಕಂಡಿದ್ದ ಗಾಂಧಿ ಜಯಂತಿ ಆಚರಿಸುವ ಯಾವುದೇ ನೈತಿಕತೆ ಇರುವುದಿಲ್ಲ. ಅದು ಗಾಂಧೀಜಿಯವರಿಗೆ ಈ ಸರ್ಕಾರ ಮಾಡುವ ಅವಮಾನವಾಗಿರುತ್ತದೆ. ಈ ಸರ್ಕಾರಕ್ಕೆ ನಿಜವಾಗಿಯೂ ಗಾಂಧಿಯವರ ಮೇಲೆ ಗೌರವ ಇದ್ದರೆ ತಕ್ಷಣವೇ ಜಾರಿಯಾಗುವಂತೆ ರಾಜ್ಯದಲ್ಲಿ ಸಂಪೂರ್ಣ ಪಾನ ನಿಷೇಧ ಮಾಡಲಿ ಎಂದು ಅವರು ಆಗ್ರಹಿಸಿದರು. ಈ ಸಂದರ್ಭದಲ್ಲಿ ಎಸ್‌ಡಿಪಿಐ ರಾಜ್ಯ ಉಪಾಧ್ಯಕ್ಷ ದೇವನೂರು ಪುಟ್ಟನಂಜಯ್ಯ, ಮೈಸೂರು ಮಹಾನಗರಪಾಲಿಕೆ ಮಾಜಿ ಸದಸ್ಯ ಎಸ್.ಸ್ವಾಮಿ, ಸಫಿಯುಲ್ಲಾ, ಫರ್ದಿನ್ ಇತರರು ಇದ್ದರು.

ಸುತ್ತೂರು ಜೆಎಸ್‌ಎಸ್‌ನಲ್ಲಿ ಗಾಂಧೀಜಿ, ಶಾಸ್ತ್ರೀಜಿ ದಿನಾಚರಣೆ

ಸುತ್ತೂರು, ಅ. 2– ಸುತ್ತೂರು ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಆಶ್ರಯದಲ್ಲಿ ಮಹಾತ್ಮ ಗಾಂಧಿ, ಲಾಲ್‌ಬಹದ್ದೂರ್ ಶಾಸ್ತ್ರಿ ಜಯಂತಿ ಹಾಗೂ ಅಂತಾರಾಷ್ಟ್ರೀಯ ಹಿರಿಯ ನಾಗರಿಕರ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.



ಮೈಸೂರಿನ ಜೆಎಸ್‌ಎಸ್ ಆಯುರ್ವೇದ ವೈದ್ಯ ಕಾಲೇಜು ಮತ್ತು ಆಸ್ಪತ್ರೆಯ ನಿವೃತ್ತ ಮುಖ್ಯ ವೈದ್ಯಾಧಿಕಾರಿ ಮತ್ತು ಪ್ರಾಧ್ಯಾಪಕ ಡಾ. ಗುರುಬಸವರಾಜ ಮಾತನಾಡಿ, ಗಾಂಧೀಜಿಯವರು ಭಾರತದ ಸ್ವಾತಂತ್ರ್ಯ ಚಳುವಳಿಗೆ ಮೂರ್ತ ರೂಪವನ್ನು ಕೊಟ್ಟು ದೇಶದ ಜನರ ಕನಸನ್ನು ನನಸು ಮಾಡಿದರು. ವಿಶ್ವದ ಬಹುತೇಕ ರಾಷ್ಟ್ರಗಳು ಗಾಂಧೀಜಿಯವರ ಚಿಂತನೆಯನ್ನು ಅಳವಡಿಸಿಕೊಂಡಿದ್ದಾರೆ ಎಂಬುದು ನಮಗೆ ಹೆಮ್ಮೆಯ ವಿಷಯವಾಗಿದೆ. ಗಾಂಧೀಜಿಯವರು ಸ್ವಚ್ಛತೆ, ಗುಡಿ ಕೈಗಾರಿಕೆಗಳಿಗೆ ಹೆಚ್ಚು ಒತ್ತು ನೀಡುತ್ತಿದ್ದರು. ಸತ್ಯ ಮತ್ತು ಅಹಿಂಸೆಯನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡಿದ್ದರು. ಇಂದಿನ ಪೀಳಿಗೆಯವರು ಗಾಂಧೀಜಿಯವರ ತತ್ವ ಹಾಗೂ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ದೇಶದ ಅಭಿವೃದ್ಧಿಗೆ ಕಾರಣೀಭೂತರಾಗಬೇಕೆಂದು ಕರೆ ನೀಡಿದರು. ಲಾಲ್‌ಬಹದ್ದೂರ್ ಶಾಸ್ತ್ರೀಜಿಯವರು ಗಾಂಧೀಜಿಯವರ ಕನಸನ್ನು ಸಾಕಾರಗೊಳಿಸಲು ಪ್ರಯತ್ನಿಸಿದರು. ಭಾರತ ದೇಶಕ್ಕೆ ರೈತರು ಹಾಗೂ ಯೋಧರು ಎರಡು ಕಣ್ಣುಗಳಿದ್ದಂತೆ ಎಂದು ಪರಿಭಾವಿಸಿ ಗೌರವಿಸಿದವರು. ಇಂದಿನ ಪೀಳಿಗೆಯವರು ದೇಶಕ್ಕಾಗಿ ಸಮರ್ಪಣಾಭಾವದಿಂದ ತಮ್ಮ ಕರ್ತವ್ಯಗಳನ್ನು ನಿರ್ವಹಿಸಬೇಕು ಎಂದು ತಿಳಿಸಿದರು.

ಸುತ್ತೂರು ಐಸಿಎಆರ್ ಜೆಎಸ್‌ಎಸ್ ಕೃಷಿ ವಿಜ್ಞಾನ ಕೇಂದ್ರದ ನಿವೃತ್ತ ಗೃಹ ವಿಜ್ಞಾನ ವಿಷಯ ತಜ್ಞರಾದ ಎನ್. ಜಮುನಾ ಅರಸ್ ಮಾತನಾಡಿದರು.

ಸುತ್ತೂರು ಜೆಎಸ್‌ಎಸ್ ಸಂಸ್ಥೆಗಳ ಆಡಳಿತಾಧಿಕಾರಿ ಎಸ್. ಪಿ. ಉದಯ ಶಂಕರ್ ಅಧ್ಯಕ್ಷತೆ ವಹಿಸಿದ್ದರು.

ಸಂಸ್ಥೆಯ ಮುಖ್ಯಸ್ಥರಾದ ಜಿ.ಎಲ್. ತ್ರಿಪುರಾಂತಕ, ಸಂಪತ್ತು, ವೀರಭದ್ರಯ್ಯ, ಎಸ್.ಶಿವಸ್ವಾಮಿ, ಡಾ.ಹೆಚ್.ಎಂ. ಮಹೇಶ್, ಜಿ.ಶಿವಮಲ್ಲು, ಎಂ.ಜಿ.ಬಸವಣ್ಣ, ಜಿ.ಎಂ.ಷಡಕ್ಷರಿ, ಹೆಚ್.ವಿ.ದಿವ್ಯಾ, ಎಂ. ಷಡಕ್ಷರಿ, ಮಹದೇವಪ್ರಸಾದ್ ಹಾಗೂ ಸುಶೀಲ ಉಪಸ್ಥಿತರಿದ್ದರು.

ಕಾಂತೂರು–ಮೂರ್ನಾಡು ಗ್ರಾಪಂನಿಂದ ಸ್ವಚ್ಛತಾ ಅಭಿಯಾನ



ಮೂರ್ನಾಡು, ಅ.2– ಕಾಂತೂರು–ಮೂರ್ನಾಡು ಗ್ರಾಮಪಂಚಾಯಿತಿ ವತಿಯಿಂದ 'ಸ್ವಚ್ಛತೆಯೇ ಸೇವೆ' ಅಭಿಯಾನ ಗಾಂಧಿ ಜಯಂತಿಯಂದು ನಡೆಯಿತು.

ಮೂರ್ನಾಡುವಿನ ತ್ರಿನೇತ್ರ ವಾಹನ ಮಾಲೀಕರ ಹಾಗೂ ಚಾಲಕರ ಸಂಘ, ಶ್ರೀ ರಾಮಮಂದಿರ ಸೇವಾ ಸಮಿತಿ ಗಾಂಧಿನಗರ ಹಾಗೂ ಕಾಂತೂರು ಮೂರ್ನಾಡು ಗ್ರಾಮ ಪಂಚಾಯಿತಿ ಇವರ ಜಂಟಿ ಆಶ್ರಯದಲ್ಲಿ ಮೂರ್ನಾಡು ಪ್ರಾಥಮಿಕ ಹಾಗೂ ಪ್ರೌಢಶಾಲೆ ರಸ್ತೆ, ಆರೋಗ್ಯ ಕೇಂದ್ರ ಪಕ್ಕದಲ್ಲಿ, ಆರೋಗ್ಯ ಕೇಂದ್ರದ ವಸತಿ ನಿಲಯ ಹಾಗೂ ನಾಪೋಕ್ಲು ರಸ್ತೆ ಈ ಭಾಗದಲ್ಲಿ 'ಸ್ವಚ್ಛತೆಯೇ ಸೇವೆ' ಅಭಿಯಾನದ ಶ್ರಮದಾನ ಕಾರ್ಯಕ್ರಮ ನಡೆಯಿತು.

'ಸ್ವಚ್ಛತೆಯೇ ಸೇವೆ' ಅಭಿಯಾನದ ಶ್ರಮದಾನದಲ್ಲಿ ಭಾಗವಹಿಸಿದ ಸರ್ವರಿಗೂ ಕಾಂತೂರು–ಮೂರ್ನಾಡು ಗ್ರಾಪಂ ವತಿಯಿಂದ ಈ ಸಂದರ್ಭದಲ್ಲಿ ಹೃದಯ ತುಂಬಿದ ಅಭಿನಂದನೆಗಳನ್ನು ಸಲ್ಲಿಸಿರುತ್ತಾರೆ.

ಕೊಡಗಲ್ಲಿ ಮಹಾತ್ಮ ಗಾಂಧೀಜಿ, ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿ

ಮಡಿಕೇರಿ, ಅ.2– ಮಹಾತ್ಮ ಗಾಂಧೀಜಿ ಅವರು ವಿಶ್ವದಲ್ಲಿ ನಿರಂತರ ಶಾಂತಿಗಾಗಿ ಶ್ರಮಿಸಿದರು. ಗಾಂಧೀಜಿ ಅವರು ಸತ್ಯ ದರ್ಶನದ ಮೂಲಕ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟರು. ಗಾಂಧೀಜಿಯವರ ಬದುಕಿನ ಬಗ್ಗೆ ಪ್ರತಿಯೊಬ್ಬರೂ ತಿಳಿದುಕೊಳ್ಳಬೇಕು ಎಂದು ಮಡಿಕೇರಿ ವಿಧಾನಸಭಾ ಕ್ಷೇತ್ರದ ಶಾಸಕ ಡಾ.ಮಂಥರ್ ಗೌಡ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ವತಿಯಿಂದ ನಗರಸಭೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ, ಪದವಿ ಪೂರ್ವ ಶಿಕ್ಷಣ, ಕಾಲೇಜು ಶಿಕ್ಷಣ ಇಲಾಖೆಗಳ ಹಾಗೂ ಸರ್ವೋದಯ ಸಮಿತಿ, ಸ್ಕೌಟ್ಸ್ ಮತ್ತು ಗೈಡ್ಸ್ ಇವರ ಸಹಕಾರದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ 154 ನೇ ಹಾಗೂ ಮಾಜಿ ಪ್ರಧಾನಮಂತ್ರಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ 119 ನೇ ಜನ್ಮ ದಿನಾಚರಣೆ ಪ್ರಯುಕ್ತ ನಗರದ ಗಾಂಧಿ ಭವನದಲ್ಲಿ ಸೋಮವಾರ ನಡೆದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಮಹಾತ್ಮ ಗಾಂಧೀಜಿ ಅವರು 'ನನ್ನ ಜೀವನವೇ, ನನ್ನ ಸಂದೇಶ' ಎಂಬುದನ್ನು ಸಾರಿದರು. ಮಹಾತ್ಮ ಗಾಂಧೀಜಿಯವರ ಸರಳ ಮತ್ತು ಶಾಂತಿಯುತ ಜೀವನವನ್ನು ನಾವೆಲ್ಲರೂ ಅನುಸರಿಸುವಂತಾಗಬೇಕು. ಮಹಾತ್ಮ ಗಾಂಧೀಜಿ ಅವರು ನಡೆದು ಬಂದ ಹಾದಿಯಲ್ಲಿ ಮುನ್ನಡೆಯಬೇಕು ಎಂದರು.



ಲಾಲ್ ಬಹದ್ದೂರ್ ಶಾಸ್ತ್ರಿ ಅವರು ಪ್ರಧಾನಿಯಾಗಿ ರಾಷ್ಟ್ರಕ್ಕೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. 'ಜೈಜವಾನ್ ಜೈಕಿಸಾನ್' ಎಂಬ ಸಂದೇಶ ಸಾರುವ ಮೂಲಕ ರಾಷ್ಟ್ರದಲ್ಲಿ ಸೇನೆ ಹಾಗೂ ಕೃಷಿಯ ಮಹತ್ವದ ಬಗ್ಗೆ ವರ್ಣಿಸಿದ್ದಾರೆ ಎಂದು ಡಾ.ಮಂಥರ್ ಗೌಡ ಅವರು ಹೇಳಿದರು.

ನಗರಸಭೆ ಅಧ್ಯಕ್ಷೆ ಅನಿತಾ ಪೂವಯ್ಯ ಮಾತನಾಡಿ, ಗಾಂಧೀಜಿ ಅವರ ತತ್ವಗಳು ಇಡೀ ವಿಶ್ವಕ್ಕೆ ಮಾದರಿಯಾಗಿದೆ. ಆ ದಿಸೆಯಲ್ಲಿ ಮಹಾತ್ಮ ಗಾಂಧೀಜಿ ಅವರ ಚಿಂತನೆಗಳನ್ನು ಅಳವಡಿಸಿಕೊಳ್ಳಬೇಕು. ಸತ್ಯ, ಅಹಿಂಸೆ ಮತ್ತು ಶಾಂತಿ ಮಾರ್ಗದ ಮೂಲಕ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟರು. ಸತ್ಯ ಶೋಧನೆಯಿಂದ ಮಾತ್ರ ಗುರಿ ತಲುಪಲು ಸಾಧ್ಯ ಎಂಬುದನ್ನು ಸಾರಿ ಹೇಳಿದ್ದರು ಎಂದರು.

ಗಾಂಧೀಜಿಯವರು ಜಗತ್ತು ಕಂಡ ಒಬ್ಬ ಶ್ರೇಷ್ಠ ಸಮಾಜ ಸುಧಾರಕ, ಸತ್ಯಾಗ್ರಹಿ, ಪತ್ರಕರ್ತರಾಗಿ ಗ್ರಾಮ ಸ್ವರಾಜ್ಯದ ಹರಿಕಾರರಾಗಿ ವಿವಿಧ ಕ್ಷೇತ್ರಗಳಲ್ಲಿ ಕರ್ತವ್ಯ ನಿರ್ವಹಿಸಿದ್ದಾರೆ ಎಂದ ಸರ್ವೋದಯ ಸಮಿತಿ ನಿಕಟಪೂರ್ವ ಅಧ್ಯಕ್ಷ ಟಿ.ಪಿ.ರಮೇಶ್, ಜಗತ್ತಿನಲ್ಲೇ ವಿಶ್ವಸಂಸ್ಥೆಯಿಂದ ಗಾಂಧಿ ಜನ್ಮ ದಿನವನ್ನು ಆಚರಿಸಲಾಗುತ್ತಿದೆ. ವಿಶ್ವ ಸಂಸ್ಥೆಯು ಗಾಂಧೀಜಿ ಜನ್ಮದಿನವನ್ನು ವಿಶ್ವ ಅಹಿಂಸಾ ದಿನವನ್ನಾಗಿ ಘೋಷಿಸಿದೆ ಎಂದು ಹೇಳಿದರು.

ಲಾಲ್ ಬಹದ್ದೂರು ಶಾಸ್ತ್ರಿ ಅವರು ಭಾರತದ ಎರಡನೇ ಪ್ರಧಾನ ಮಂತ್ರಿಯಾಗಿ ಸರಳ, ಸಜ್ಜನಿಕೆಗೆ ಹೆಸರು ವಾಸಿಯಾಗಿದ್ದರು. ಸೇನೆ ಮತ್ತು ಕೃಷಿಗೆ ಹೆಚ್ಚಿನ ಮಹತ್ವಾಕಾಂಕ್ಷೆ ನೀಡಿದ್ದರು ಎಂದರು.

ಜಿಪಂ ಸಿಇಓ ವರ್ಣಿತ್ ನೇಗಿ ಮಾತನಾಡಿ, ಗಾಂಧೀಜಿಯವರ ಜೀವನ ಚರಿತ್ರೆಗಳನ್ನು ಓದಿಕೊಂಡಾಗ ಸತ್ಯ, ಅಹಿಂಸೆ ಮತ್ತು ಸರಳತೆಯ ಬದುಕು ಕಾಣಬಹುದು ಎಂದರು.

ಹೆಚ್ಚುವರಿ ಜಿಲ್ಲಾಧಿಕಾರಿ ಬಿ.ಎನ್.ವೀಣಾ, ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಪ್ರಧಾನ ಆಯುಕ್ತ ಕೆ.ಟಿ.ಬೇಬಿಮ್ಯಾಥ್ಯೂ ಮಾತನಾಡಿದರು.

ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ 154 ನೇ ಜಯಂತಿ ಪ್ರಯುಕ್ತ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ 'ಬಾಪೂಜಿ ಪ್ರಬಂಧ ಸ್ಪರ್ಧೆ'ಯಲ್ಲಿ ವಿಜೇತರಾದವರಿಗೆ ಪ್ರಥಮ ರೂ.3,000, ದ್ವಿತೀಯ ರೂ.2,000 ಹಾಗೂ ತೃತೀಯ ರೂ.1000 ನಗದು ಬಹುಮಾನ ಮತ್ತು ಪ್ರಮಾಣ ಪತ್ರ ನೀಡಲಾಯಿತು.

ಸರ್ವೋದಯ ಸಮಿತಿ ಅಧ್ಯಕ್ಷ ಅಂಬೆಕಲ್ಲು ಕುಶಾಲಪ್ಪ, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ರಾಣಿ ಮಾಚಯ್ಯ, ಉಪ ವಿಭಾಗಾಧಿಕಾರಿ ಡಾ.ಯತೀಶ್ ಉಲ್ಲಾಳ್, ತಹಶೀಲ್ದಾರ್ ಪ್ರವೀಣ್‌ಕುಮಾರ್, ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಸತೀಶ್, ನಗರಸಭೆ ಸದಸ್ಯ ರಾಜೇಶ್ ಯಲ್ಲಪ್ಪ, ಮಡಿಕೇರಿ ನಗರ ದಸರಾ ಸಮಿತಿ ಕಾರ್ಯಾಧ್ಯಕ್ಷ ಪ್ರಕಾಶ್ ಆಚಾರ್ಯ, ಕಸಾಪ ಗೌರವ ಕಾರ್ಯದರ್ಶಿ ಮುನಿರ್ ಅಹಮದ್, ಕಸಾಪ ತಾಲೂಕು ಘಟಕದ ಅಧ್ಯಕ್ಷ ಕಡ್ಲೇರ ತುಳಸಿ ಮೋಹನ್, ನಗರಸಭೆ ಪೌರಾಯುಕ್ತ ವಿಜಯ್, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ ಉಪ ನಿರ್ದೇಶಕಿ ಸೌಮ್ಯ ಪೊನ್ನಪ್ಪ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಪುಟ್ಟರಾಜು, ಕಾಲೇಜು ಶಿಕ್ಷಣ ಇಲಾಖೆಯ ನೋಡಲ್ ಅಧಿಕಾರಿ ವೆಂಕಟೇಶ್ ಪ್ರಸನ್ನ, ಉಪನ್ಯಾಸಕ ಉ.ರಾ.ನಾಗೇಶ್, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ಕೊಡಗು ಜಿಲ್ಲಾ ಸಮಿತಿ ಅಧ್ಯಕ್ಷರೂ ಆದ ಟಿ.ಜಿ.ಪ್ರೇಮಕುಮಾರ್, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಸದಾಶಿವ ಪಲ್ಲೇದ್ ಇತರರು ಇದ್ದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ಚಿನ್ನಸ್ವಾಮಿ ಸ್ವಾಗತಿಸಿದರು, ಉಪನ್ಯಾಸಕ ಉ.ರಾ.ನಾಗೇಶ್ ನಿರೂಪಿಸಿದರು, ಕನ್ನಡ ಸಾಹಿತ್ಯ ಪರಿಷತ್ ತಂಡದವರು ನಾಡಗೀತೆ ಹಾಡಿದರು, ಲಿಯಾಕತ್ ಆಲಿ ಗಾಂಧೀಜಿಗೆ ಪ್ರಿಯವಾದ ವೈಷ್ಣವೋ ಜಯತೊ ಗೀತೆ ಹಾಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮಣಜೂರು ಮಂಜುನಾಥ್ ವಂದಿಸಿದರು.

69 ನೇ ವನ್ಯಜೀವಿ ಸಪ್ತಾಹ ಅಂಗವಾಗಿ ನಡಿಗೆ, ಜಾಗೃತಿ ಜಾಥಾ

ಅರಣ್ಯ ಸಂರಕ್ಷಣೆ ಎಲ್ಲರ ಹೊಣೆ: ಸಿಸಿಎಫ್ ಮನೋಜ್ ಕುಮಾರ್ ತ್ರಿಪಾಠಿ

ಮಡಿಕೇರಿ, ಅ.2– ಅರಣ್ಯ ಹಾಗೂ ವನ್ಯಜೀವಿಗಳನ್ನು ಸಂರಕ್ಷಿಸುವುದರೊಂದಿಗೆ ಜೀವ ವೈವಿಧ್ಯವನ್ನು ಸಂರಕ್ಷಿಸುವ ಮೂಲಕ ಮುಂದಿನ ಪೀಳಿಗೆಗಾಗಿ ಉತ್ತಮ ಪರಿಸರವನ್ನು ಕಾಪಾಡುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದು ಕೊಡಗು ಅರಣ್ಯ ವೃತ್ತದ ಅರಣ್ಯ ಸಂರಕ್ಷಣಾಧಿಕಾರಿ ಮನೋಜ್ ಕುಮಾರ್ ತ್ರಿಪಾಠಿ ಸೋಮವಾರ ಮಡಿಕೇರಿಯಲ್ಲಿ ಹೇಳಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ಅರಣ್ಯ ಇಲಾಖೆಯ ಕೊಡಗು ಅರಣ್ಯ ವೃತ್ತ ಹಾಗೂ ಮಡಿಕೇರಿ ವನ್ಯಜೀವಿ ವಿಭಾಗದ ವತಿಯಿಂದ ಶಾಲಾ ಶಿಕ್ಷಣ ಇಲಾಖೆ, ರಾಷ್ಟ್ರೀಯ ಹಸಿರು ಪಡೆ ಇಕೋ ಕ್ಲಬ್ , ರಾಷ್ಟ್ರೀಯ ಸೇವಾ ಯೋಜನೆ (ಎನ್ನೆಸ್ಸೆಸ್) ಘಟಕಗಳು, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ (ಕರಾವಿಪ) ಕೊಡಗು ಜಿಲ್ಲಾ ಸಮಿತಿ, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯ ಜಿಲ್ಲಾ ಘಟಕ ಮತ್ತು ಎನ್.ಸಿ.ಸಿ. ಘಟಕ ಹಾಗೂ ನಗರದ ಗ್ರೀನ್ ಸಿಟಿ ಫೋರಂನ ಸಂಯುಕ್ತಾಶ್ರಯದಲ್ಲಿ ಸೋಮವಾರ ನಗರದ ಅರಣ್ಯ ಭವನದ ಆವರಣದಲ್ಲಿ "ವನ್ಯಜೀವಿಗಳ ಸಂರಕ್ಷಣೆಗಾಗಿ ನಡಿಗೆ" ಎಂಬ ಘೋಷವಾಕ್ಯದೊಂದಿಗೆ ಹಮ್ಮಿಕೊಂಡಿದ್ದ 69ನೇ ವನ್ಯಜೀವಿ ಸಪ್ತಾಹದ ಜಾಗೃತಿ ಜಾಥಾ ಹಾಗೂ ಪರಿಸರ ನಡಿಗೆ ಕಾರ್ಯಕ್ರಮಕ್ಕೆ ಹಸಿರು ನಿಶಾನೆ ಮೂಲಕ ಚಾಲನೆ ನೀಡಿ, ಮಾತನಾಡಿದರು.

ಅರಣ್ಯ ಮತ್ತು ಪರಿಸರ ಸಂರಕ್ಷಣೆ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿರುವ ಕೊಡಗಿನ ಜನತೆಯ ಪರಿಸರ ಪ್ರೇಮ ಮಾದರಿಯಾದುದು. ಅರಣ್ಯ ಹಾಗೂ ವನ್ಯಜೀವಿಗಳ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದ್ದು, ಈ ನಿಟ್ಟಿನಲ್ಲಿ ಜನ ಜಾಗೃತಿ ಮೂಡಿಸುವ ಸಲುವಾಗಿ ವನ್ಯಜೀವಿ ಸಪ್ತಾಹ ಆಚರಿಸಲಾಗುತ್ತಿದೆ ಎಂದು ತ್ರಿಪಾಠಿ ಹೇಳಿದರು.

ವನ್ಯಜೀವಿ ಸಪ್ತಾಹ ಕುರಿತಾದ ಕರಪತ್ರ ಬಿಡುಗಡೆಗೊಳಿಸಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಮಾತನಾಡಿ, ಅರಣ್ಯ ಸಂರಕ್ಷಣೆಗೆ ಅರಣ್ಯ ಇಲಾಖೆಯವರು ಹೆಚ್ಚಿನ ಜವಾಬ್ದಾರಿಯಿಂದ ಸೇವೆ ಸಲ್ಲಿಸುತ್ತಿರುವುದು ಶ್ಲಾಘನೀಯವಾದುದು. ನಾವೆಲ್ಲರೂ ಅವರೊಂದಿಗೆ ಕೈ ಜೋಡಿಸಿ ಅರಣ್ಯ ಮತ್ತು ವನ್ಯಜೀವಿಗಳ ಸಂರಕ್ಷಣೆಗೆ ಪಣ ತೊಡಬೇಕಿದೆ ಎಂದರು.

ಪ್ರತಿಜ್ಞಾ ವಿಧಿ ಬೋಧಿಸಿ ಮಾತನಾಡಿದ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ಕೊಡಗು ಜಿಲ್ಲಾ ಸಮಿತಿ ಅಧ್ಯಕ್ಷರೂ ಆದ ರಾಷ್ಟ್ರೀಯ ಹಸಿರು ಪಡೆಯ ಜಿಲ್ಲಾ ನೋಡಲ್ ಅಧಿಕಾರಿ ಟಿ.ಜಿ.ಪ್ರೇಮಕುಮಾರ್, ವನ್ಯಜೀವಿಗಳು ಭೂ ಜಗತ್ತಿನ ಪ್ರಮುಖ ಜೀವಿಗಳಾಗಿವೆ. ಆಹಾರ ಸರಪಳಿ ಮತ್ತು ಪರಿಸರ ವ್ಯವಸ್ಥೆಯ ಸಮತೋಲನವನ್ನು ಕಾಪಾಡಿಕೊಳ್ಳಲು ವನ್ಯಜೀವಿ ಸಂರಕ್ಷಣೆ ಬಹಳ ಮುಖ್ಯ. ಅರಣ್ಯಕ್ಕೆ ನಾವು ಯಾವುದೇ ಹಾನಿಯನ್ನು ಉಂಟುಮಾಡದೇ ನಾವು ಪಶ್ಚಿಮ ಘಟ್ಟ ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡುವ ಮೂಲಕ ಅರಣ್ಯದಲ್ಲಿ ಸಸ್ಯ ಮತ್ತು ಪ್ರಾಣಿ ಸಂಪತ್ತನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ಸಂರಕ್ಷಿಸುವುದು ನಮ್ಮ ಆದ್ಯ ಕರ್ತವ್ಯ ಆಗಿದೆ ಎಂದರು.

ಜಾಥಾದಲ್ಲಿ ಅರಣ್ಯ ಅಧಿಕಾರಿಗಳು, ಸಿಬ್ಬಂದಿ, ನಗರದ ಸರ್ಕಾರಿ ಪಿಯು ಕಾಲೇಜಿನ ಪ್ರೌಢಶಾಲಾ ವಿಭಾಗದ ಎನ್‌ಸಿಸಿ ಘಟಕ, ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಎನ್‌ಎಸ್‌ಎಸ್ ಘಟಕ, ಕುಶಾಲನಗರ ತಾಲೂಕಿನ ಕೂಡುಮಂಗಳೂರು ಸರ್ಕಾರಿ ಪ್ರೌಢಶಾಲೆಯ ಇಕೋ ಕ್ಲಬ್, ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆ ಹಾಗೂ ಎನ್ನೆಸ್ಸೆಸ್ ಘಟಕದ ವಿದ್ಯಾರ್ಥಿಗಳು ಭಾಗವಹಿಸಿ ಅರಣ್ಯ ಹಾಗೂ ವನ್ಯಜೀವಿ ಸಂರಕ್ಷಣೆ ಕುರಿತು ಜನಜಾಗೃತಿ ಮೂಡಿಸಿದರು.

ಜನಜಾಗೃತಿ ಜಾಥಾ: ನಗರದ ಅರಣ್ಯ ಭವನದಿಂದ ಸಾಲುಮರದ ತಿಮ್ಮಕ್ಕ ಉದ್ಯಾನದ ತನಕ 4 ಕಿ.ಮೀ ದೂರ ನಡಿಗೆ ಜತೆಗೆ ಬೈಸಿಕಲ್ ಜಾಥಾ ಕೂಡ ನಡೆಯಿತು.

ಜಾಗೃತಿ ಜಾಥಾ ಮತ್ತು ನಡಿಗೆ ಕಾರ್ಯಕ್ರಮದಲ್ಲಿ ಹಸಿರೇ ಉಸಿರು, ಜಲಮೂಲಗಳ ಸಂರಕ್ಷಣೆ, ಕಾಡಿನ ರಕ್ಷಣೆ ಮತ್ತು ವನ್ಯಜೀವಿಗಳ ಸಂರಕ್ಷಣೆ ನಮ್ಮೆಲ್ಲರ ಹೊಣೆ, ಕಾಡೇ ರಾಷ್ಟ್ರದ ಸಂಪತ್ತು, ಪಶ್ಚಿಮ ಘಟ್ಟ ಸಂರಕ್ಷಣೆ ಎಲ್ಲರ ಹೊಣೆ, ವನ್ಯಜೀವಿ ಸಂಪತ್ತನ್ನು ಭವಿಷ್ಯಕ್ಕಾಗಿ ಸಂರಕ್ಷಿಸಿ ಎಂಬಿತ್ಯಾದಿ ಅರಣ್ಯ, ವನ್ಯಜೀವಿ ಹಾಗೂ ಪರಿಸರ ಸಂರಕ್ಷಣೆ ಕುರಿತು ಜಾಥಾದಲ್ಲಿ ಘೋಷಣಾ ಫಲಕಗಳನ್ನು ಹಿಡಿದು ಪರಿಸರ ಘೋಷಣೆಗಳನ್ನು ಪ್ರಚುರಪಡಿಸಲಾಯಿತು.

ಗುಡ್ಡೆಹೊಸೂರು ಗ್ರಾಪಂಗೆ ಗಾಂಧಿ ಗ್ರಾಮ ಪುರಸ್ಕಾರ



ಕುಶಾಲನಗರ, ಅ.2– ತಾಲೂಕಿನ ಗುಡ್ಡೆಹೊಸೂರು ಗ್ರಾಮ ಪಂಚಾಯಿತಿಗೆ 2023–24ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರ ಪ್ರಶಸ್ತಿ ಲಭಿಸಿದೆ.

ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ಗಾಂಧಿ ಜಯಂತಿ ಅಂಗವಾಗಿ ಬೆಂಗಳೂರಿನಲ್ಲಿ ಸೋಮವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸಚಿವ ಪ್ರಿಯಾಂಕ ಖರ್ಗೆ ಅವರಿಂದ ಗುಡ್ಡೆಹೊಸೂರು ಗ್ರಾಪಂ ಅಧ್ಯಕ್ಷೆ ರುಕ್ಮಿಣಿ ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶ್ಯಾಮ್ ಅವರು ಗಾಂಧಿ ಗ್ರಾಮ ಪ್ರಶಸ್ತಿ ಸ್ವೀಕರಿಸಿದರು.

ಪಂಚಾಯಿತಿಯ ಸಮಗ್ರ ಸ್ವಚ್ಛತೆ, ಸಾರ್ವಜನಿಕ ಸಮಸ್ಯೆಗಳಿಗೆ ತೋರುತ್ತಿರುವ ಬದ್ಧತೆ, ಗ್ರಾಮದ ಅಭಿವೃದ್ಧಿ ದೃಷ್ಟಿಯಿಂದ ಬೆಸೆಯುತ್ತಿರುವ ವಿಚಾರಗಳು ಸೇರಿದಂತೆ ಇನ್ನಿತರ ರೀತಿ ನೀತಿಗಳನ್ನು ಪರಿಗಣಿಸಿ ತಾಲೂಕಿಗೊಂದು ಗ್ರಾಪಂ ಅನ್ನು ಆಯ್ದುಕೊಂಡು ರಾಜ್ಯ ಸರ್ಕಾರದ ಗ್ರಾಮೀಣಾಭಿವೃದ್ಧಿ ಇಲಾಖೆ ಕೊಡಮಾಡುವ ಪ್ರಶಸ್ತಿಗೆ ಪಂಚಾಯಿತಿ ಆಯ್ಕೆಯಾಗಿದೆ.

ಈ ಸಂದರ್ಭ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಉಮಾ ಮಹದೇವನ್, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ಆಯುಕ್ತರು ಪ್ರಿಯಾಂಕಾ ಮೇರಿ ಫ್ರಾನ್ಸಿಸ್, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ನಿರ್ದೇಶಕ ಕೆ.ನಾಗೇಂದ್ರ ಪ್ರಸಾದ್ ಮತ್ತು ವಿವಿಧ ಇಲಾಖೆಯ ಹಿರಿಯ ಅಧಿಕಾರಿಗಳು ಹಾಗೂ ಗುಡ್ಡೆಹೊಸೂರು ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಪಟ್ಟು ಮಾದಪ್ಪ ಹಾಗೂ ಸದಸ್ಯರು ಇದ್ದರು.

ನಾಳೆ ತಲಕಾವೇರಿ ದೇವಾಲಯದಲ್ಲಿ ಸ್ವಚ್ಛತಾ ಕಾರ್ಯ

ಮಡಿಕೇರಿ, ಅ.2– ತಲಕಾವೇರಿಯ ಶ್ರೀ ತಲಕಾವೇರಿ ದೇವಾಲಯದಲ್ಲಿ ಅ.4 ರಂದು ಮಧ್ಯಾಹ್ನ 2 ಗಂಟೆಯ ನಂತರ ಸ್ವಚ್ಛತಾ ಕಾರ್ಯದ ಪ್ರಯುಕ್ತ ಶ್ರೀ ತಲಕಾವೇರಿ ದೇವಾಲಯದ ಪ್ರವೇಶ ಇರುವುದಿಲ್ಲ. ಆದ್ದರಿಂದ ಸಾರ್ವಜನಿಕ ಭಕ್ತಾದಿಗಳು ಸಹಕರಿಸುವಂತೆ ದೇವಾಲಯದ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ್ ಎನ್.ಜಿ ಕೋರಿದ್ದಾರೆ.

ಮಹಾತ್ಮ ಗಾಂಧಿ ಜಯಂತಿ ಅರ್ಥಪೂರ್ಣ ಆಚರಣೆ : ಗಾಂಧಿ ಭವನ ಉದ್ಘಾಟನೆ

ಚಾಮರಾಜನಗರ, ಅ.2– ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 154ನೇ ಜಯಂತಿ ಆಚರಣೆ ಹಾಗೂ ಮಹಾತ್ಮ ಗಾಂಧೀಜಿಯವರ ವಿಚಾರಧಾರೆಗಳನ್ನು ಪ್ರಚುರಪಡಿಸುವ ಉದ್ದೇಶದಿಂದ ನಿರ್ಮಿಸಿರುವ ನೂತನ ಗಾಂಧಿ ಭವನ ಕಟ್ಟಡದ ಲೋಕಾರ್ಪಣೆ ಇಂದು ಅರ್ಥಪೂರ್ಣವಾಗಿ ನಡೆಯಿತು.

ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಯೋಗದೊಂದಿಗೆ ನಗರದ ಹೊರವಲಯದ ಯಡಬೆಟ್ಟದಲ್ಲಿರುವ ಸಿಮ್ಸ್ ಬೋಧನಾ ಆಸ್ಪತ್ರೆಯ ಪಕ್ಕದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ನಿರ್ಮಾಣಗೊಂಡಿರುವ ನೂತನ ಗಾಂಧಿ ಭವನದಲ್ಲಿ ಗಾಂಧಿ ಜಯಂತಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿಯನ್ನು ಆಚರಿಸಲಾಯಿತು.

ಆರಂಭದಲ್ಲಿಯೇ ನೂತನ ಗಾಂಧಿ ಭವನವನ್ನು ಶಾಸಕರಾದ ಸಿ. ಪುಟ್ಟರಂಗಶೆಟ್ಟಿ, ಎ.ಆರ್. ಕೃಷ್ಣಮೂರ್ತಿ ಅವರು ಉದ್ಘಾಟಿಸಿದರು. ಗಾಂಧಿ ಭವನದಲ್ಲಿ ಪ್ರತಿಷ್ಠಾಪಿಸಿರುವ ಗಾಂಧಿ ಪ್ರತಿಮೆಗೆ ಪುಷ್ಪಾರ್ಚನೆ ನೆರವೇರಿಸಿ, ಗೌರವ ಸಲ್ಲಿಸಿದರು.

ವೇದಿಕೆ ಕಾರ್ಯಕ್ರಮದಲ್ಲಿ ಸರ್ವಧರ್ಮಗಳ ಪ್ರಾರ್ಥನೆ ನಡೆಯಿತು. ವಿವಿಧ ಧರ್ಮಗುರುಗಳಾದ ಸರ್ಪಭೂಷಣ ಸ್ವಾಮೀಜಿ, ಅಂತೋಣಿಸ್ವಾಮಿ, ಸೈಯ್ಯದ್ ಮುಕ್ತಾರ್, ಇಂದುಮತಿ ಅವರು ಸರ್ವಧರ್ಮ ಸಮನ್ವಯದ ಸಂದೇಶ ವಾಚಿಸಿದರು.

ಭಾರತ ಹಲವು ಭಾಷೆ, ಸಂಸ್ಕೃತಿಗಳ ನೆಲೆವೀಡು. ಸರ್ವಧರ್ಮಗಳನ್ನು ಸಮಾನತೆಯಿಂದ ಕಾಣುವ ಏಕೈಕ ದೇಶ ಭಾರತವಾಗಿದೆ. ದೇಶವು ಅಹಿಂಸೆಯ ಮೂಲಕ ಸ್ವಾತಂತ್ರ್ಯ ಪಡೆದು ಅಹಿಂಸೆಯೇ ಪರಮಧರ್ಮವೆಂದು ವಿಶ್ವಕ್ಕೆಲ್ಲಾ ಸಾರಿತು. ಪುಸ್ತಕಗಳು ಹಾಗೂ ನಾಟಕಗಳಿಂದ ಪ್ರೇರಣೆಗೊಂಡ ಮಹಾತ್ಮ ಗಾಂಧೀಜಿಯವರು ಸತ್ಯ, ಅಹಿಂಸೆ, ಶಾಂತಿ, ಸಹಬಾಳ್ವೆ, ಸಾಮರಸ್ಯ ಹಾಗೂ ಸರಳ ಜೀವನದ ಸಂದೇಶಗಳನ್ನು ಸಾರಿದರು. ಅವರ ಜೀವನಾದರ್ಶಗಳನ್ನು ಎಲ್ಲರೂ ಅಳವಡಿಸಿಕೊಳ್ಳಬೇಕು ಎಂದು ಸರ್ವಧರ್ಮಗುರುಗಳು ತಮ್ಮ ಸಂದೇಶದ ಮೂಲಕ ತಿಳಿಸಿದರು.



ಕಾರ್ಯಕ್ರಮದಲ್ಲಿ ಮಹಾತ್ಮ ಗಾಂಧೀಜಿಯವರ ಜನ್ಮದಿನ ಆಚರಣೆ ಅಂಗವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಗಾಂಧೀಜಿಯವರ ಬದುಕು, ಬರಹ, ಸ್ವಾತಂತ್ರ್ಯ ಚಳವಳಿ, ಸರಳತೆ, ಅಹಿಂಸಾ ಮಾರ್ಗ, ಅಸ್ಪೃಶ್ಯತೆ ನಿವಾರಣೆಗಾಗಿ ನಡೆಸಿದ ಪ್ರಯೋಗಗಳ ಕುರಿತ ವಿಚಾರಗಳ ಬಗ್ಗೆ ಪ್ರೌಢಶಾಲೆ, ಪದವಿ ಪೂರ್ವ ಹಾಗೂ ಪದವಿ, ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಜಿಲ್ಲಾಮಟ್ಟದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ನಗದು ಬಹುಮಾನ ಪುರಸ್ಕಾರ, ಪ್ರಮಾಣ ಪತ್ರಗಳನ್ನು ಗಣ್ಯರು ವಿತರಿಸಿದರು.

ಇದೇ ವೇಳೆ ಮಹಾತ್ಮ ಗಾಂಧಿ, ಡಾ. ಬಿ.ಆರ್. ಅಂಬೇಡ್ಕರ್, ನೆಹರು, ಕಿತ್ತೂರು ರಾಣಿ ಚೆನ್ನಮ್ಮ, ಒನಕೆ ಓಬವ್ವ, ನೇತಾಜಿ ಸುಭಾಷ್ ಚಂದ್ರ ಬೋಸ್, ಸಂಗೊಳ್ಳಿ ರಾಯಣ್ಣ, ಝಾನ್ಸಿ ರಾಣಿ ಲಕ್ಷ್ಮೀಬಾಯಿ ಸೇರಿದಂತೆ ರಾಷ್ಟ್ರನಾಯಕರು, ಸ್ವಾತಂತ್ರ್ಯ ಹೋರಾಟಗಾರರರನ್ನು ಅನುಕರಿಸುವ ವೇಷಭೂಷಣ ತೊಟ್ಟಿದ್ದ ಪುಟ್ಟಮಕ್ಕಳು ಗಾಂಧಿ ಜಯಂತಿ ಕಾರ್ಯಕ್ರಮದ ಮೆರುಗು ಹೆಚ್ಚಿಸಿದರು.

ಗಾಂಧಿಪ್ರಿಯ ಗಾಯನಗಳ ಭಜನೆ ಕಾರ್ಯಕ್ರಮ ವಿಶೇಷ ಗಮನ ಸೆಳೆಯಿತು. ಕಾರ್ಯಕ್ರಮದ ಆರಂಭದಲ್ಲಿ ನೂತನ ಗಾಂಧೀ ಭವನ ಕಟ್ಟಡದ ಲೋಕಾರ್ಪಣೆ ಸವಿನೆನಪಿಗಾಗಿ ಭವನದ ಅವರಣದಲ್ಲಿ ಗಣ್ಯರು ಗಿಡ ನೆಟ್ಟು ನೀರೆರೆದರು.

ಗಾಂಧಿ ಜಯಂತಿ ಅಂಗವಾಗಿ ಶ್ರಮದಾನದ ಮೂಲಕ ವೈದ್ಯಕೀಯ ಕಾಲೇಜು ಆಸ್ಪತ್ರೆ ಮತ್ತಿತರ ಕಡೆ ಸ್ವಚ್ಛತಾ ಕಾರ್ಯಕ್ರಮ ಅಧಿಕಾರಿಗಳು, ಶಾಲಾ–ಕಾಲೇಜು ವಿದ್ಯಾರ್ಥಿಗಳು, ವೈದ್ಯಕೀಯ ಕಾಲೇಜಿನ ವಿದ್ಯಾರ್ಥಿಗಳು, ಬೋಧಕ ವೃಂದದಿಂದ ನಡೆಯಿತು.

ಶಿವಪುರ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಮಹದೇವಮ್ಮ, ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಎ. ರಮೇಶ, ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಡೀನ್ ಹಾಗೂ ನಿರ್ದೇಶಕ ಮಂಜುನಾಥ್, ಜಿಲ್ಲಾ ಆಸ್ಪತ್ರೆಯ ಸ್ಥಾನಿಕ ವೈದ್ಯಾಧಿಕಾರಿ ಮಹೇಶ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಗುರುಲಿಂಗಯ್ಯ, ವಾರ್ತಾ ಸಹಾಯಕ ಸಿ. ಸುರೇಶ್‌ಕುಮಾರ್, ಇತರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಚಾ.ನಗರ ವಿವಿಯಲ್ಲಿ ಮಹಾತ್ಮ ಗಾಂಧಿ ಜಯಂತಿ



ಚಾಮರಾಜನಗರ, ಅ.2– ಚಾಮರಾಜನಗರ ವಿಶ್ವವಿದ್ಯಾನಿಲಯ, ಸುವರ್ಣ ಗಂಗೋತ್ರಿ ಆವರಣದಲ್ಲಿ ಮಹಾತ್ಮ ಗಾಂಧೀಜಿ ಅವರ ಜಯಂತಿಯನ್ನು ವಿಶ್ವವಿದ್ಯಾಲಯದ ಸ್ವಚ್ಛತಾ ಸಿಬ್ಬಂದಿಗಳನ್ನು ಸನ್ಮಾನಿಸುವ ಮೂಲಕ ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕುಲಪತಿ ಪ್ರೊ ಎಂ ಆರ್ ಗಂಗಾಧರ್ ಅವರು, ಮಹಾತ್ಮ ಗಾಂಧೀಜಿ ಒಬ್ಬ ಉತ್ತಮ ಪರಿಸರವಾದಿಯಾಗಿದ್ದರು. ವೈಯಕ್ತಿಕ ಸ್ವಚ್ಛತೆಯ ಜೊತೆಗೆ ಪರಿಸರ ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕು. ಆ ಮೂಲಕ ದೇಶದ ಸ್ವಚ್ಛತೆಯನ್ನು ಉಳಿಸಿಕೊಳ್ಳಲು ಸಾಧ್ಯ ಎಂದು ಕರೆಕೊಟ್ಟರು.

ನಮ್ಮ ದೇಶ ಶೇ. 80ರಷ್ಟು ಗ್ರಾಮೀಣ ಪ್ರದೇಶಗಳಿಂದ ಕೂಡಿದ್ದು ಗ್ರಾಮಗಳ ಉದ್ಧಾರದಿಂದ ಮಾತ್ರ ದೇಶದ ಅಭಿವೃದ್ಧಿ ಸಾಧ್ಯ ಎಂದು ನಂಬಿ ಅದಕ್ಕಾಗಿ ಗುಡಿ ಕೈಗಾರಿಕೆಗಳನ್ನು ಸ್ಥಾಪಿಸಿ ಖಾದಿ ಹಾಗೂ ಇನ್ನಿತರ ಸ್ವದೇಶಿ ಉತ್ಪನ್ನಗಳನ್ನು ತಯಾರಿಸಿ ಬಳಸುವುದರ ಮೂಲಕ ನಮ್ಮ ದೇಶದ ಪ್ರಗತಿಯನ್ನು ಸಾಧಿಸಿಕೊಳ್ಳಬೇಕು ಎಂದು ಗಾಂಧೀಜಿ ಅವರು ತಿಳಿಸಿದ್ದರು ಎಂದರು.

ಪರೀಕ್ಷಾಂಗ ಕುಲಸಚಿವ ಪ್ರೊ. ಪಿ ಮಾದೇಶ್ ಮಾತನಾಡಿ, ಮಹಾತ್ಮ ಗಾಂಧೀಜಿಯವರದ್ದು ಇಡೀ ಜಗತ್ತೆ ಮೆಚ್ಚಿದ ಮೇರು ವ್ಯಕ್ತಿತ್ವ. ಅವರ ಸರಳತೆಯೇ ಸರ್ವರಿಗೂ ಮಾದರಿಯಾಗುವ ಗುಣವಾಗಿದೆ. ಅವರು ಅಹಿಂಸೆಯ ಮೂಲಕ ಸ್ವಾತಂತ್ರ್ಯವನ್ನು ಪಡೆಯುವಲ್ಲಿ ಯಶಸ್ವಿಯಾದ ನಾಯಕ. ಆಧುನಿಕತೆಯ ಈ ಯುಗದಲ್ಲಿ ಅವರ ಸರಳತೆಯನ್ನು ಪ್ರತಿಯೊಬ್ಬರು ಅಳವಡಿಸಿಕೊಳ್ಳಬೇಕಾದ ಅನಿವಾರ್ಯತೆ ಇದೆ ಎಂದರು.

ಪಿ.ಎಂ.ಇ.ಬಿ ನಿರ್ದೇಶಕರು ಹಾಗೂ ವಿದ್ಯಾರ್ಥಿ ಕ್ಷೇಮಪಾಲನಾಧಿಕಾರಿಗಳಾದ ಡಾ. ವಿ.ಜಿ.ಸಿದ್ದರಾಜು ಮಾತನಾಡಿ, ಯಾವುದೇ ದೇಶದ ಪ್ರಗತಿಗೆ ಆ ದೇಶದ ಭೌಗೋಳಿಕ ಮತ್ತು ಸಾಂಸ್ಕೃತಿಕ ಪರಂಪರೆ ಕಾರಣವಾಗುತ್ತದೆ. ಗಾಂಧೀಜಿಯವರು ದೇಶದ ಪ್ರಗತಿಯ ಯೋಜನೆಗಳನ್ನು ರೂಪಿಸುವಾಗ ಈ ಭೌಗೋಳಿಕ ಹಾಗೂ ಸಾಂಸ್ಕೃತಿಕ ಹಿನ್ನಲೆಯನ್ನೇ ಪ್ರಮುಖವಾಗಿ ಬಳಸಿಕೊಳ್ಳಬೇಕು ಎಂಬುದನ್ನು ಸಾರುತ್ತಿದ್ದರು ಎಂದು ತಿಳಿಸಿದರು. ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಭಾಗ್ಯ, ಕನ್ನಡ ವಿಭಾದ ಮುಖ್ಯಸ್ಥರಾದ ಬಸಣ್ಣ ಗಣಿತಶಾಸ್ತ್ರವಿಭಾಗದ ಹುಜೀರಾ ಭಾನು, ಉಪನ್ಯಾಸಕರು, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಸ್ವಯಂ ಪ್ರೇರಿತ ರಕ್ತದಾನ, ಆರೋಗ್ಯ ತಪಾಸಣಾ ಶಿಬಿರ

ಚಾಮರಾಜನಗರ, ಅ.2– ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿಗಳ 108ನೇ ಜಯಂತಿ ಮಹೋತ್ಸವ ಹಾಗೂ ಗಾಂಧೀಜಿ, ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿ ಅಂಗವಾಗಿ ನಗರದ ಜೆಎಸ್‌ಎಸ್ ಕಾಲೇಜಿನ ಆವರಣದಲ್ಲಿ ಸೋಮವಾರ ನಡೆದ ಸ್ವಯಂಪ್ರೇರಿತ ರಕ್ತದಾನ ಶಿಬಿರ ಹಾಗೂ ಬೃಹತ್ ಆರೋಗ್ಯ ತಪಾಸಣಾ ಶಿಬಿರ ಯಶಸ್ವಿಯಾಗಿ ನಡೆಯಿತು.

ಶಿಬಿರದಲ್ಲಿ ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆಯ ತಜ್ಞ ವೈದ್ಯರ ತಂಡ ವಿವಿಧ ವಿಭಾಗಗಳಲ್ಲಿ ಆರೋಗ್ಯ ತಪಾಸಣೆ ನಡೆಸಿ, ಆರೋಗ್ಯ ಸಲಹೆ ಹಾಗೂ ಔಷಧೋಪಚಾರಗಳನ್ನು ನೀಡಿತು. 1,468 ಮಂದಿ ಆರೋಗ್ಯ ತಪಾಸಣೆ ಮಾಡಿಸಿಕೊಂಡರು.



ಇದಕ್ಕೂ ಮೊದಲು ನಡೆದ ಸ್ವಯಂ ಪ್ರೇರಿತ ರಕ್ತದಾನ ಶಿಬಿರಕ್ಕೆ ಜಿಲ್ಲಾಧಿಕಾರಿ ಸಿ.ಟಿ. ಶಿಲ್ಪನಾಗ್, ಎಸ್‌ಪಿ ಪದ್ಮಿನಿಸಾಹು ಅವರು ಸ್ವಯಂಪ್ರೇರಿತರಾಗಿ ರಕ್ತದಾನ ಮಾಡುವ ಮೂಲಕ ಚಾಲನೆ ನೀಡಿದರು. ಹರವೆ ಮಠದ ಶ್ರೀಸರ್ಪಭೂಷಣ ಸ್ವಾಮೀಜಿ, ಕೆಆರ್‌ಡಿಎಲ್ ಮಾಜಿ ಅಧ್ಯಕ್ಷ ಎಂ. ರುದ್ರೇಶ್ ಸೇರಿದಂತೆ 117 ಮಂದಿ ಸ್ವಯಂಪ್ರೇರಿತವಾಗಿ ರಕ್ತದಾನ ಮಾಡಿದರು.

ಈ ವೇಳೆ ಜಿಲ್ಲಾಧಿಕಾರಿ ಸಿ.ಟಿ. ಶಿಲ್ಪನಾಗ್ ಮಾತನಾಡಿ, ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರು ಸರಳವಾಗಿ ಬದುಕಿ ಜೀವನದ ಮೌಲ್ಯವನ್ನು ತೋರಿಸಿಕೊಟ್ಟರು. ಶ್ರೀರಾಜೇಂದ್ರ ಶ್ರೀಗಳು ಸಹ ಕಾಯಕಯೋಗಿಗಳಾಗಿ ಧಾರ್ಮಿಕ, ಆರೋಗ್ಯ ಹಾಗೂ ಶಿಕ್ಷಣ ಕ್ಷೇತ್ರದಲ್ಲಿ ಕೊಡುಗೆ ನೀಡಿ, ಜನಮಾನಸದಲ್ಲಿದ್ದಾರೆ. ಮೂವರು ಮಹಾಪುರುಷರ ಜಯಂತಿ ಕಾರ್ಯಕ್ರಮದಲ್ಲಿ ಒಂದು ಸಾರ್ಥಕವಾದ ಸೇವಾ ಕಾರ್ಯಕ್ರಮಗಳ ಮೂಲಕ ನಡೆಸುತ್ತಿರುವುದು ಹೆಮ್ಮೆ ವಿಚಾರವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಜಿಪಂ ಸಿಇಓ ಆನಂದ್ ಪ್ರಕಾಶ್‌ಮೀನಾ, ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ್, ಎಎಸ್‌ಪಿ ಉದೇಶ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಚಿದಂಬರು, ರೆಡ್‌ಕ್ರಾಸ್ ಸಂಸ್ಥೆಯ ಕಾರ್ಯದರ್ಶಿ ಡಾ.ಮಹೇಶ್, ರಾಜ್ಯ ಸಮಿತಿ ಸದಸ್ಯರಾದ ಡಾ.ಬಿ.ಎನ್. ರೇಣುಕಾದೇವಿ, ರಕ್ತನಿಧಿ ಅಧಿಕಾರಿ ಡಾ. ದಿವ್ಯಾ, ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಸಂಯೋಜಕ ಆರ್.ಎಂ. ಸ್ವಾಮಿ, ಮೈಸೂರು ಜೆಎಸ್‌ಎಸ್ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲ ಡಾ.ಬಸವಗೌಡಪ್ಪ, ನಿರ್ದೇಶಕ ಡಾ.ಮಧು, ಗೋವಿಂದಶೆಟ್ಟಿ, ಬಿ.ಕೆ. ರವಿಕುಮಾರ್, ಸಿದ್ದರಾಜು, ದೊಡ್ಡರಾಯಪೇಟೆ ಗಿರೀಶ್, ಆಲೂರು ಪ್ರದೀಪ್, ಎಚ್.ಎಂ. ಅಜಯ್, ಟಿ.ಪಿ. ವಿಶ್ವಾಸ್, ಮೂಡ್ಲುಪುರ ನಂದೀಶ್, ನಾಗೇಂದ್ರ, ಮರಿಸ್ವಾಮಿ, ಸದಾಶಿವಮೂರ್ತಿ, ಮುನ್ನಾ ಇದ್ದರು.

ಇಂದು ರಾಜೇಂದ್ರ ಸ್ವಾಮೀಜಿ ಜಯಂತಿ

ನಗರದ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿ ಅವರ 108ನೇ ಜಯಂತಿ ಮಹೋತ್ಸವ ನಾಳೆ (ಅ.3) ನಡೆಯಲಿದ್ದು, ಬೆಳಗ್ಗೆ 8.30ಕ್ಕೆ ಶ್ರೀಗಳ ಭಾವಚಿತ್ರಗಳ ಮೆರವಣಿಗೆ ಆರಂಭವಾಗಲಿದೆ. 10.30ಕ್ಕೆ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಸುತ್ತೂರು ಮಠದ ಶ್ರೀಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಅವರು ಸಾನ್ನಿಧ್ಯ ವಹಿಸಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಕೆ ವೆಂಕಟೇಶ್ ಅಧ್ಯಕ್ಷತೆ ವಹಿಸಲಿದ್ದಾರೆ. ಸಂಸದ ವಿ. ಶ್ರೀನಿವಾಸ ಪ್ರಸಾದ್ ನಿವೃತ್ತ ಸೈನಿಕರನ್ನು ಅಭಿನಂದಿಸಲಿದ್ದಾರೆ. ಶೋಭಾ ಕರಂದ್ಲಾಜೆ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಶಾಸಕರಾದ ಸಿ. ಪುಟ್ಟರಂಗಶೆಟ್ಟಿ, ಎ.ಆರ್. ಕೃಷ್ಣಮೂರ್ತಿ, ಎಚ್.ಎಂ. ಗಣೇಶ ಪ್ರಸಾದ್, ಎಂ.ಆರ್. ಮಂಜುನಾಥ್ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.



ಕರ್ನಾಟಕ ಸೇನಾಪಡೆಯಿಂದ ಕಿವಿ, ಬಾಯಿ, ಕಣ್ಣು ಮುಚ್ಚಿ ಮೌನ ಪ್ರತಿಭಟನೆ

ಚಾಮರಾಜನಗರ, ಅ.2– ಗಾಂಧಿ ಜಯಂತಿ ಹಿನ್ನೆಲೆ ಮಹಾತ್ಮಗಾಂಧೀಜಿ ಸಾರಿದ ಸಂದೇಶವನ್ನು ಸಾರಿ ಕಾವೇರಿಗಾಗಿ ಕರ್ನಾಟಕ ಸೇನಾಪಡೆ ವತಿಯಿಂದ ನಗರದಲ್ಲಿ ಕಿವಿ, ಬಾಯಿ, ಕಣ್ಣು ಮುಚ್ಚಿ ಮೌನ ಪ್ರತಿಭಟನೆ ನಡೆಸಿದರು. ನಗರದ ಶ್ರೀಚಾಮರಾಜೇಶ್ವರಿ ಉದ್ಯಾನವನದ ಮುಂಭಾಗದಲ್ಲಿ ಕರ್ನಾಟಕ ಸೇನಾಪಡೆ ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ ಅವರ ನೇತೃತ್ವದಲ್ಲಿ ಜಮಾಯಿಸಿದ ಪ್ರತಿಭಟನಾನಿರತರು ಅಲ್ಲಿಂದ ಮೆರವಣಿಗೆ ಹೊರಟು ಭುವನೇಶ್ವರಿ ವೃತ್ತಕ್ಕೆ ತೆರಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಗಾಂಧೀಜಿಯವರ ಭಾವಚಿತ್ರ ಹಿಡಿದು ಕುಳಿತು ಬಾಯಿ, ಕಿವಿ, ಕಣ್ಣು ಮುಚ್ಚಿ ಮೌನ ಪ್ರತಿಭಟನೆ ನಡೆಸಿದರು. ಈ ಸಂದರ್ಭದಲ್ಲಿ ಪ್ರತಿಭಟನೆ ನೇತೃತ್ವ ವಹಿಸಿದ್ದ. ಚಾ.ರಂ. ಶ್ರೀನಿವಾಸಗೌಡ ಮಾತನಾಡಿ, ಅಹಿಂಸೆ ಮೂಲಕ ಮಹಾತ್ಮ ಗಾಂಧಿ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟರು. ಅದರಂತೆ, ಗಾಂಧಿ ಜಯಂತಿ ದಿನದಂದು ಜೀವನದಿ ಕಾವೇರಿಗಾಗಿ ಇಂದು ನಾವು ಮೌನ ಪ್ರತಿಭಟನೆ ನಡೆಸುತ್ತಿದ್ದೇವೆ. ಕರ್ನಾಟಕಕ್ಕೆ ಕೆಟ್ಟದ್ದಾಗುವುದನ್ನು ನಾವು ನೋಡುವುದಿಲ್ಲ, ಕೇಳುವುದಿಲ್ಲ, ಕಾವೇರಿ ನೀರನ್ನು ತಮಿಳುನಾಡಿಗೆ ಹರಿಸುವುದನ್ನು ನಿಲ್ಲಿಸಿ ರಾಜ್ಯದ ಜನರಿಗೆ ಸರ್ಕಾರ ಒಳ್ಳೆಯ ಸಂದೇಶ ಸಾರಬೇಕು ಎಂದು ಆಗ್ರಹಿಸಿದರು.



ಪ್ರತಿಭಟನೆಯಲ್ಲಿ ಶಾ.ಮುರಳಿ, ಪಣ್ಯದಹುಂಡಿ ರಾಜು, ಚಾ.ವೆಂ.ರಾಜ್‌ಗೋಪಾಲ್, ನಿಜಧ್ವನಿಗೋವಿಂದರಾಜು, ಚಾ.ಹ.ರಾಮು, ಬಂಗಾರಸ್ವಾಮಿ, ರಾಮಸಮುದ್ರ ಸುರೇಶ್, ತಾಂಡವಮೂರ್ತಿ ಇತರರು ಭಾಗವಹಿಸಿದ್ದರು.

ಗೂಗಲ್ ಮ್ಯಾಪ್ ಅನುಸರಿಸಿದ ಕಾರು ನದಿಗೆ ಬಿದ್ದು ಇಬ್ಬರು ಯುವ ವೈದ್ಯರ ಸಾವು!

ಕೊಚ್ಚಿ: ಕಾರೊಂದು ಪೆರಿಯಾರ್ ನದಿಗೆ ಉರುಳಿ ಬಿದ್ದ ಪರಿಣಾಮ ಇಬ್ಬರು ಯುವ ವೈದ್ಯರು ಸಾವನ್ನಪ್ಪಿರುವ ಘಟನೆ ಕೇರಳದ ಕೊಚ್ಚಿ ಬಳಿಯ ಗೋತುರುತ್‌ನಲ್ಲಿ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಭಾನುವಾರ ಮಧ್ಯರಾತ್ರಿ 12.30ರ ಸುಮಾರಿಗೆ ಸಂಭವಿಸಿದ ಅಪಘಾತದಲ್ಲಿ ಜಿಲ್ಲೆಯ ಖಾಸಗಿ ಆಸ್ಪತ್ರೆಯಲ್ಲಿ ಕೆಲಸ ಮಾಡುತ್ತಿದ್ದ ಅದ್ವೈತ್ (29) ಮತ್ತು ಅಜ್ಮಲ್ (29) ಮೃತಪಟ್ಟಿದ್ದಾರೆ. ಅವರೊಂದಿಗೆ ಪ್ರಯಾಣಿಸುತ್ತಿದ್ದ ಇತರ ಮೂವರಿಗೆ ಗಾಯಗಳಾಗಿದ್ದು, ಸಮೀಪದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಕಾರು ಚಾಲಕ ಗೂಗಲ್ ಮ್ಯಾಪ್‌ನ ನಿರ್ದೇಶನ ಅನುಸರಿಸಿ ಚಾಲನೆ ಮಾಡುತ್ತಿದ್ದ ಎನ್ನಲಾಗಿದೆ.

ಮೂರನೇ ಪುಟದಿಂದ

ಸರ್ಕಾರ ಸಂಕ್ರಾಂತಿ ವೇಳೆಗೆ ಪತನ!?

ವೀರಶೈವ, ಒಕ್ಕಲಿಗ ಹಾಗೂ ಮುಂದುವರೆದ (ಜಿಲೇಬಿ) ಸಮುದಾಯಗಳನ್ನು ಕಡೆಗಣಿಸಲಾಗುತ್ತಿದೆ ಎಂಬ ಭಾವನೆ ಬಂದಿದೆ. ಇದನ್ನು ಪಕ್ಷದ ಶಾಸಕರು ಬಹಿರಂಗವಾಗಿಯೇ ಹೇಳುತ್ತಿದ್ದಾರೆ. ನಾವು ಈ ಸರ್ಕಾರವನ್ನು ಬೀಳಿಸಬೇಕಿಲ್ಲ. ಸಂಕ್ರಾಂತಿ ಹಬ್ಬದಂದು ಸೂರ್ಯ ಹೇಗೆ ಪಥ ಬದಲಿಸುತ್ತಾನೋ ಹಾಗೆಯೇ ಕರ್ನಾಟಕದ ರಾಜಕೀಯದಲ್ಲೂ ಮಹತ್ತರ ಪಥ ಬದಲಾವಣೆ ಆಗಲಿದೆ. ಜೆಡಿಎಸ್, ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟ ಸೇರಿದ ನಂತರವಂತೂ ಕಾಂಗ್ರೆಸ್‌ನ ಅನೇಕ ಶಾಸಕರು ನಮ್ಮ ಕಡೆ ಮುಖ ಮಾಡಿದ್ದಾರೆ. ಮುಂಬರುವ ಲೋಕಸಭೆ ಚುನಾವಣೆಗೆ 1983ರಲ್ಲಿ ಯಾವ ರೀತಿ ರಾಜಕೀಯ ಬದಲಾವಣೆಗಳು ಹಾಗೂ ಕಾಂಗ್ರೆಸ್ ವಿರುದ್ಧ ಶಕ್ತಿ ಉದ್ಭವಿಸಿತೋ ಅದೇ ರೀತಿಯ ಬದಲಾವಣೆ ಆಗಲಿದೆ ಎಂದು ಅವರು ಹೇಳಿದ್ದಾರೆ.

ಕಾಂಗ್ರೆಸ್‌ನಲ್ಲಿರುವ ಅತೃಪ್ತ ಶಾಸಕರು ನನ್ನ ಜೊತೆ ನಿರಂತರ ಸಂಪರ್ಕ ಇಟ್ಟುಕೊಂಡಿದ್ದಾರೆ. ಅಷ್ಟೇ ಅಲ್ಲ, ಬೇರೆ ಮುಖಂಡರೊಂದಿಗೂ ಸಂಪರ್ಕ ಹೊಂದಿ ಬೆಂಬಲ ನೀಡಲು ಮುಂದಾಗಿದ್ದಾರೆ. ನಾವಾಗಿಯೇ ಈ ಸರ್ಕಾರದ ವಿರುದ್ಧ ಏನನ್ನೂ ಮಾಡುತ್ತಿಲ್ಲ. ಅಲ್ಲಿನ ಆಂತರಿಕ ಕಚ್ಚಾಟದಿಂದಲೇ ಸಂಕ್ರಾಂತಿ ನಂತರ ಹೊಸ ಸರ್ಕಾರ ರಚನೆಯಾಗುವ ಲಕ್ಷಣಗಳು ಗೋಚರಿಸುತ್ತಿವೆ ಎಂದು ತಿಳಿಸಿದ್ದಾರೆ. ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು ಸಹ ರಾಜ್ಯ ಸರ್ಕಾರವು ತಾನಾಗಿಯೇ ಪತನಗೊಳ್ಳಲಿದೆ ಎಂದು ಇತ್ತೀಚೆಗಷ್ಟೇ ಭವಿಷ್ಯ ನುಡಿದಿದ್ದನ್ನು ಇಲ್ಲಿ ಸ್ಮರಿಸಬಹುದು.

ನಮ್ಮ ಸರ್ಕಾರ ಸಹಿಸಲ್ಲ...

ಪೊಲೀಸರು ಲಾಠಿ ಚಾರ್ಜ್ ಮಾಡಿದ್ದಾರೆ ಎಂದಿದ್ದಾರೆ. ಗಲಾಟೆಗೆ ಕಾರಣಕರ್ತರಾಗಿರುವ 43 ದುಷ್ಕರ್ಮಿಗಳನ್ನು ಬಂಧಿಸಿದ್ದು, ಅವರ ಮೇಲೆ ಮೊಕದ್ದಮೆಗಳನ್ನು ಹೂಡಲಾಗುತ್ತಿದೆ. ಶಿವಮೊಗ್ಗ ಸಂಪೂರ್ಣ ನಿಯಂತ್ರಣದಲ್ಲಿದೆ. ಪೊಲೀಸರು ಕ್ರಮ ಕೈಗೊಂಡು, ಶಿವಮೊಗ್ಗದಲ್ಲಿ ಶಾಂತಿ ನೆಲೆಸಿದೆ. ಶಾಂತಿ ಕಾಪಾಡಲು ಎಲ್ಲ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಸರಳತೆಯಿಂದಲೇ ಗಾಂಧೀಜಿ ಮನೆ ಮಾತಾದರು: ದೇಶಕ್ಕೆ ಗಾಂಧಿ ಒಬ್ಬರೇ ಮಹಾತ್ಮ ಮತ್ತು ಪಿತಾಮಹ. ಯಾವುದೇ ಪ್ರಚಾರದ ಸಾಮಗ್ರಿ ಮತ್ತು ತಂತ್ರಜ್ಞಾನ ಇಲ್ಲದೆ ಕೇವಲ ಅಹಿಂಸೆ ಮತ್ತು ತಮ್ಮ ಬದುಕಿನ ಸರಳತೆಯಿಂದಲೇ ಮಹಾತ್ಮಗಾಂಧಿ ವಿಶ್ವದ ಮೂಲೆ ಮೂಲೆಗೆ ತಲುಪಿದರು ಎಂದು ನುಡಿದಿದ್ದಾರೆ. ಒಮ್ಮೆ ರೈಲಿನಲ್ಲಿ ಮೂರನೇ ದರ್ಜೆಯಲ್ಲಿ ಪ್ರಯಾಣಿಸುತ್ತಿದ್ದರು. ಸಹ ಪ್ರಯಾಣಿಕರು, ಏಕೆ ಮೂರನೇ ದರ್ಜೆ ಸೀಟಿನಲ್ಲಿ ಪ್ರಯಾಣಿಸುತ್ತಿದ್ದೀರಾ ಎಂದು ಪ್ರಶ್ನಿಸಿದರು. ಇದಕ್ಕೆ ಉತ್ತರಿಸಿದ ಗಾಂಧಿ ಅವರು, ನಾಲ್ಕನೇ ದರ್ಜೆ ರೈಲು ಇಲ್ಲ. ಇದ್ದಿದ್ದರೆ ಅಲ್ಲೇ ಪ್ರಯಾಣಿಸುತ್ತಿದ್ದೆ. ಅದು ಇಲ್ಲದ್ದರಿಂದ ಮೂರನೇ ದರ್ಜೆಯಲ್ಲಿ ಪ್ರಯಾಣಿಸುತ್ತಿದ್ದೇನೆ ಎಂದರು. ಇಷ್ಟು ಸರಳವಾದ ವ್ಯಕ್ತಿತ್ವ ಗಾಂಧಿಯವರದ್ದಾಗಿತ್ತು ಎಂದು ಉದಾಹರಿಸಿದ್ದಾರೆ. ನಮ್ಮ ಸರ್ಕಾರ ರೂಪಿಸುತ್ತಿರುವ ಕಾರ್ಯಕ್ರಮಗಳಲ್ಲಿ ಮಹಾತ್ಮ ಗಾಂಧಿ ಅವರ ಆಶಯಗಳು ಸೇರಿವೆ. ಗಾಂಧಿ ಅವರ ಆಶಯದಂತೆ ಕಟ್ಟ ಕಡೆಯ ವ್ಯಕ್ತಿಗೂ ಬದುಕುವ ಅವಕಾಶಗಳನ್ನು ಸೃಷ್ಟಿಸುವುದು ನಮ್ಮ ಸರ್ಕಾರದ ಗುರಿ ಎಂದಿದ್ದಾರೆ.

ಕಾಂಗ್ರೆಸ್ ದಿವಾಳಿಯಾಗುವುದು ಅಷ್ಟೇ ಸತ್ಯ

ಅವರನ್ನು ಒಪ್ಪಿಸಿದವರಲ್ಲಿ ನಾನು ಒಬ್ಬ ಎಂದು ಜಿ.ಟಿ.ದೇವೇಗೌಡರು ತಿಳಿಸಿದರು.

ದೇಶದ ಸ್ವಚ್ಛತಾ ಕಾರ್ಯ ಸೇರಿದಂತೆ ಹಲವು ಯೋಜನೆಗಳನ್ನು ಅನುಷ್ಠಾನ ಮಾಡಿದ ನರೇಂದ್ರ ಮೋದಿ ಅವರ ಬಗ್ಗೆ ಈ ಹಿಂದೆ ಬಹಳಷ್ಟು ಬಾರಿ ಹೆಚ್.ಡಿ.ದೇವೇಗೌಡರು ಪ್ರಶಂಸೆಯ ಮಾತುಗಳಾಡಿದ್ದಾರೆ. ನರೇಂದ್ರ ಮೋದಿ ಅವರಿಗೂ ಕೂಡ ದೇವೇಗೌಡರ ಬಗ್ಗೆ ಅಪಾರ ಗೌರವ ಭಾವನೆ ಇದೆ ಈ ಹಿನ್ನೆಲೆಯಲ್ಲಿ ದೇವೇಗೌಡರು ಬಿಜೆಪಿ ಜೊತೆಗಿನ ಮೈತ್ರಿಗೆ ಸಮ್ಮತಿಸಿದ್ದಾರೆ ಎಂದು ಸ್ಪಷ್ಟಪಡಿಸಿದರು.

ಪ್ರಧಾನಮಂತ್ರಿ ಆಗಿದ್ದಾಗ ಮಹಿಳೆಯರಿಗೆ ಶೇಕಡ 33ರಷ್ಟು ಮೀಸಲಾತಿ ಕಾಯ್ದೆಗೆ ಅನುಮೋದನೆ ಪಡೆಯಲು ಹೆಚ್.ಡಿ.ದೇವೇಗೌಡರು ಪ್ರಯತ್ನಿಸಿದ್ದರು. ಆದರೆ ಕೆಲವರು ಅಡ್ಡಿ ಮಾಡಿದರು. ಈಗ ನರೇಂದ್ರ ಮೋದಿ ಅವರು ಮಹಿಳೆಯರಿಗೆ ಮೀಸಲಾತಿ ಕಲ್ಪಿಸಿದ್ದಾರೆ. ಯಾರಿಗೂ ಗುಟ್ಟು ಬಿಟ್ಟುಕೊಡದೆ ಸಂಸತ್ ವಿಶೇಷ ಅಧಿವೇಶನ ಕರೆದು, ಮಹಿಳಾ ಮೀಸಲಾತಿ ಕಾಯ್ದೆಗೆ ಅನುಮೋದನೆ ಪಡೆದಿದ್ದಾರೆ ಎಂದು ಜಿ.ಟಿ.ದೇವೇಗೌಡರು ಪ್ರಶಂಸೆ ವ್ಯಕ್ತಪಡಿಸಿದರು. ಕಳೆದ ಒಂಭತ್ತು ವರ್ಷದ ಅವಧಿಯಲ್ಲಿ ನರೇಂದ್ರ ಮೋದಿ ಅವರು ಜನಪರವಾದ ಹಲವು ಯೋಜನೆಗಳನ್ನು ಸಾಕಾರಗೊಳಿಸಿದ್ದಾರೆ. ಆದರೆ, ಇಂತಹ ಪ್ರಧಾನಿ ಬಗ್ಗೆ ಸಿದ್ದರಾಮಯ್ಯನವರು "ಹೇ ಮೋದಿ" ಎನ್ನುತ್ತಾರೆ. ಇಂತಹ ಪದ ಬಳಕೆ ಮಾಡಬೇಡಿ ಎಂದು ಎಷ್ಟೋ ಬಾರಿ ಸಲಹೆ ನೀಡಿದ್ದೇನೆ. ಆದರೆ ಸಿದ್ದರಾಮಯ್ಯ ತಮ್ಮ ಮಾತಿನ ಧಾಟಿ ಬದಲಾಯಿಸಿಕೊಂಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಒತ್ತಡದ ಕೆಲಸದ ಮಧ್ಯೆ ಸರಿಯಾಗಿ ನಿದ್ರೆ ಮಾಡಲು ಸಾಧ್ಯವಾಗುತ್ತಿಲ್ಲ. ಸರಿಯಾದ ಸಮಯಕ್ಕೆ ಆಹಾರ ಸೇವಿಸಲು ಸಾಧ್ಯವಾಗುತ್ತಿಲ್ಲ ಎಂದು ನರೇಂದ್ರ ಮೋದಿ ಹೇಳಿದ್ದಾರೆ. ದೇಶ ಸೇವೆಗೆ ದಿನ ಪೂರ್ತಿ ದುಡಿಯುವ ಇಂತಹ ಮಹಾನ್ ನಾಯಕನನ್ನು ಪಕ್ಷಾತೀತವಾಗಿ ಎಲ್ಲರೂ ಬೆಂಬಲಿಸಬೇಕು ಎಂದು ಜಿ.ಟಿ. ದೇವೇಗೌಡರು ಸಲಹೆ ನೀಡಿದರು. ಕಾಂಗ್ರೆಸ್‌ನವರು ಇಂಡಿಯಾ ಮೈತ್ರಿ ಕೂಟ ಮಾಡಿಕೊಂಡಿದ್ದಾರೆ. ಆದರೆ ನರೇಂದ್ರ ಮೋದಿಗೆ ಸರಿಸಾಟಿಯಾಗುವ ಯಾವುದೇ ಒಬ್ಬ ನಾಯಕನು ಇಂಡಿಯಾ ಮೈತ್ರಿ ಕೂಟದಲ್ಲಿ ಇಲ್ಲ ಎಂದು ಅಭಿಪ್ರಾಯಪಟ್ಟರು.

ಕೇಂದ್ರ ಸರ್ಕಾರ ಅಕ್ಕಿ ನೀಡುತ್ತಿದೆ. ಆದರೆ ಅನ್ನ ಭಾಗ್ಯ ಯೋಜನೆ ಮೂಲಕ ನಾನೇ ಅಕ್ಕಿ ಕೊಡುತ್ತಿದ್ದೇನೆ ಎಂದು ಸಿದ್ದರಾಮಯ್ಯ ಪ್ರಚಾರ ಮಾಡುತ್ತಿದ್ದಾರೆ. ಈಗ ಬರಗಾಲ ಬಂದಿದೆ. ಕುಡಿಯಲು ನೀರಿಲ್ಲ. ಆದರೆ ತಮಿಳುನಾಡಿಗೆ ಕಾವೇರಿ ನದಿ ನೀರು ಹರಿಸಿ ಜಲಾಶಯವನ್ನು ಖಾಲಿ ಮಾಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದ್ದೇವೆ ಅಂತಾರೆ. ಆದರೆ ಇದರಿಂದ ಕರ್ನಾಟಕದ ಅಭಿವೃದ್ಧಿ ಶೂನ್ಯವಾಗಿದೆ. ಯಾವುದೇ ಯೋಜನೆಗಳಿಗೆ ಹಾಗೂ ಕಾಮಗಾರಿಗಳಿಗೆ ಹಣವಿಲ್ಲದಂತಾಗಿದೆ. ರಸ್ತೆಗಳು ಹಳ್ಳ ಬಿದ್ದಿವೆ. ಈಗಾಗಲೇ ನಡೆಯುತ್ತಿದ್ದ ಕಾಮಗಾರಿಗಳು ಅರ್ಧಕ್ಕೆ ನಿಂತಿವೆ. ಗ್ಯಾರಂಟಿ ಯೋಜನೆಯಿಂದ ರಾಜ್ಯವನ್ನು ಇಂತಹ ಪರಿಸ್ಥಿತಿಗೆ ತಂದು ನಿಲ್ಲಿಸಿದ್ದಾರೆ. ಅಭಿವೃದ್ಧಿ ಮಾಡದೆ ಯಾವ ಗ್ಯಾರಂಟಿ ಕೊಟ್ಟರೆ ಏನು ಪ್ರಯೋಜನ ಎಂದು ಪ್ರಶ್ನಿಸಿದ ಜಿ.ಟಿ. ದೇವೇಗೌಡರು, ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ತೀವ್ರ ತರಾಟೆಗೆ ತೆಗೆದುಕೊಂಡರು.

ಹುಲಿ ದಾಳಿಗೆ ವ್ಯಕ್ತಿ ಬಲಿ

ನೆಮ್ಮದಿಯಿಂದ ಜೀವನ ನಡೆಸಲು ಅನುಕೂಲ ಮಾಡಿಕೊಡಬೇಕು ಎಂದು ಒತ್ತಾಯಿಸಿದರು. ಈ ವೇಳೆ ಅರಣ್ಯಾಧಿಕಾರಿ ಹರ್ಷಕುಮಾರ್ ಮಾತನಾಡಿ, ಹುಲಿ ಸೆರೆಗೆ ನಾಳೆಯಿಂದಲೇ ಕ್ರಮ ಕೈಗೊಳ್ಳಲಾಗುವುದು. ಅಲ್ಲದೇ ಮೃತ ಗಣೇಶ್ ಕುಟುಂಬಕ್ಕೆ ಸರ್ಕಾರದಿಂದ ಸೂಕ್ತ ಪರಿಹಾರ ನೀಡಲಾಗುವುದು ಎಂದು ಭರವಸೆ ನೀಡಿದರು.

ಶಾಸಕ ಜಿ.ಡಿ.ಹರೀಶ್‌ಗೌಡ ಭೇಟಿ: ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಶಾಸಕ ಜಿ.ಡಿ.ಹರೀಶ್‌ಗೌಡರು ಮೃತ ಗಣೇಶನ ನಿವಾಸಕ್ಕೆ ಭೇಟಿ ನೀಡಿ ಕುಟುಂಬದವರಿಗೆ ಸಾಂತ್ವನ ಹೇಳಿದರು. ಅಲ್ಲದೇ ಘಟನೆ ಬಗ್ಗೆ ಅರಣ್ಯಾಧಿಕಾರಿಗಳು ಹಾಗೂ ಸಾರ್ವಜನಿಕರಿಂದ ಸಂಪೂರ್ಣ ಮಾಹಿತಿ ಪಡೆದು ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರೊಂದಿಗೆ ಫೋನ್ ಮೂಲಕ ಘಟನೆ ಬಗ್ಗೆ ಚರ್ಚಿಸಿದರು. ಅಲ್ಲದೇ ಅರಣ್ಯ ಇಲಾಖೆಯಿಂದ ಮೃತನ ಕುಟುಂಬಕ್ಕೆ ಪರಿಹಾರ ನೀಡುವುದರ ಜೊತೆಗೆ ಹುಲಿ ಸೆರೆ ಹಿಡಿಯಲು ಅನುಮತಿ ನೀಡುವಂತೆ ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ಈಶ್ವರ್ ಖಂಡ್ರೆ ಘಟನೆ ಸಂಬಂಧ ಹೆಚ್ಚಿನ ಮಾಹಿತಿ ಪಡೆದು ಮೃತನ ಕುಟುಂಬಕ್ಕೆ ಸೂಕ್ತ ಪರಿಹಾರ ನೀಡುವುದಾಗಿ ಭರವಸೆ ನೀಡಿದರು. ಇದೇ ವೇಳೆ ಶಾಸಕ ಜಿ.ಡಿ.ಹರೀಶ್‌ಗೌಡ ಮೃತ ಗಣೇಶ್ ಕುಟುಂಬದವರಿಗೆ 50 ಸಾವಿರ ರೂ.ಗಳ ವೈಯಕ್ತಿಕ ಪರಿಹಾರ ನೀಡಿದರು. ಬಳಿಕ ಗಣೇಶ್ ಮೃತದೇಹವನ್ನು ಹನಗೋಡು ಪ್ರಾಥಮಿಕ ಆರೋಗ್ಯ ಕೇಂದ್ರ ರವಾನಿಸಿ, ಮರಣೋತ್ತರ ಪರೀಕ್ಷೆ ಬಳಿಕ ವಾರಸುದಾರರಿಗೆ ಒಪ್ಪಿಸಲಾಯಿತು.

ಡ್ರೋಣ್ ಹಾರಾಟ ನಿಷೇಧ

ವಿಮಾನದ ಮೂಲಕ ಮಧ್ಯಾಹ್ನ 1.50ಕ್ಕೆ ನಗರಕ್ಕೆ ಆಗಮಿಸುವರು. ಇಲ್ಲಿಂದ 2.15ಕ್ಕೆ ಸೇನಾ ಹೆಲಿಕಾಪ್ಟರ್‌ನಲ್ಲಿ ನಿಜಾಮಾಬಾದ್‌ಗೆ ಪ್ರಯಾಣಿಸುವರು. ಅಲ್ಲಿಂದ ಸಂಜೆ 5.50ಕ್ಕೆ ಹೊರಟು ಸಂಜೆ 5.55ಕ್ಕೆ ವಾಯುನೆಲೆಗೆ ಬಂದು, ಅಲ್ಲಿಂದ ವಿಶೇಷ ವಿಮಾನದಲ್ಲಿ ನವದೆಹಲಿಗೆ ಪಯಣ ಬೆಳೆಸುವರು. ಸಂಜೆ ವಿಮಾನ ಹತ್ತುವುದಕ್ಕೂ ಮುನ್ನ ಸ್ಥಳೀಯ ಮುಖಂಡರೊಂದಿಗೆ ಕೆಲ ನಿಮಿಷ ಚರ್ಚಿಸುವರು ಎಂದು ತಿಳಿದು ಬಂದಿದೆ.

ಮತ್ತೆ ಗುಡುಗಿದ ಶಾಮನೂರು

ಎಚ್. ವಿಶ್ವನಾಥ್ ಅವರು ಮಧ್ಯಪ್ರವೇಶ ಮಾಡಿ ಶಾಮನೂರು ಅವರನ್ನು ಪ್ರಶ್ನೆ ಮಾಡಿದ್ದರು. ಎಲ್ಲರಿಗೂ ಅವರು ಕೇಳಿದ ಹಾಗೆ ಹೇಗೆ ಸ್ಥಾನಮಾನ ಕೊಡಲು ಸಾಧ್ಯ ಅಧಿಕಾರಿಗಳನ್ನು ಅರ್ಹತೆ ಮೇಲೆ ನೇಮಿಸಲಾಗುತ್ತದೆ ಎಂದಿದ್ದರು. ಹೆಚ್ ವಿಶ್ವನಾಥ್ ಹೇಳಿಕೆಗೆ ಕಿಡಿಕಾರಿರುವ ಶಾಮನೂರು ಅವರು, ಹೆಚ್ ವಿಶ್ವನಾಥರನ್ನು ಹುಚ್ಚಾಸ್ಪತ್ರೆಗೆ ಕಳುಹಿಸಿ. ನನ್ನ ಹೇಳಿಕೆಗೆ ಎಂಎಲ್‌ಸಿ ಹೆಚ್. ವಿಶ್ವನಾಥ ಹೇಳಿಕೆ ನೀಡಿದ್ದಾರೆ. ನಾನು ಸತ್ಯ ಹೇಳಿದ್ದೇನೆ. ವಿಶ್ವನಾಥ ತರ ನಾನು ಯಾರಿಗೋ ಬೆಣ್ಣೆ ಹಚ್ಚಿ ಎಂಎಲ್‌ಸಿ ಆಗಿಲ್ಲ. ನಾನು ಜನರಿಂದ ಏಳು ಸಲ ಎಂಎಲ್‌ಎ ಆಗಿದ್ದೇನೆ ಎಂದು ತಿರುಗೇಟು ನೀಡಿದ್ದಾರೆ.

ಚರಕದಿಂದ ನೂಲು ತೆಗೆದು ಕ್ರಿಯೆ ರೂಪದಲ್ಲೂ ಗಾಂಧಿ ಸ್ಮರಣೆ

ಮೈಸೂರು ನೂಲುಗಾರರ ಬಳಗದಿಂದ ವಿಶೇಷ ರೀತಿಯಲ್ಲಿ ಗಾಂಧಿ ಜಯಂತಿ



ಮೈಸೂರಿನ ಒಡೆಯರ್ ಸೆಂಟರ್ ಫಾರ್ ಆರ್ಕಿಟೆಕ್ಚರ್ ಸಂಸ್ಥೆ ಆವರಣದಲ್ಲಿ ಸೋಮವಾರ ಗಾಂಧಿ ಜಯಂತಿ ಪ್ರಯುಕ್ತ ಪೋರ್ಟಬಲ್ ಚರಕಗಳಿಂದ ಹತ್ತಿಯ ನೂಲು ತೆಗೆಯುವ ಶಿಬಿರ ನಡೆಯಿತು.

ಮೈಸೂರು,ಅ.2(ಪಿಎಂ)- ಮೈಸೂರು ನೂಲುಗಾರರ ಬಳಗದ ವತಿಯಿಂದ ಕ್ರಿಯೆ ರೂಪದಲ್ಲೂ ಗಾಂಧಿ ಸ್ಮರಿಸುವ ಉದ್ದೇಶದಿಂದ ಪೋರ್ಟಬಲ್ ಚರಕಗಳಿಂದ ಹತ್ತಿಯ ನೂಲು ತೆಗೆಯುವ ಮೂಲಕ ಗಾಂಧಿ ಜಯಂತಿ ಆಚರಿಸಲಾಯಿತು.

ಮೈಸೂರಿನ ಕೃಷ್ಣ-ಬುಲೆವಾರ್ಡ್ ರಸ್ತೆಯಲ್ಲಿರುವ ಒಡೆಯರ್ ಸೆಂಟರ್ ಫಾರ್ ಆರ್ಕಿಟೆಕ್ಚರ್ ಸಂಸ್ಥೆ ಆವರಣದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಗಾಂಧಿ ಜಯಂತಿ ಕಾರ್ಯಕ್ರಮದಲ್ಲಿ 40ಕ್ಕೂ ಹೆಚ್ಚು ಮಂದಿ ಪೋರ್ಟಬಲ್ ಚರಕಗಳಿಂದ ಹತ್ತಿಯ ನೂಲು ತೆಗೆದು, ಕ್ರಿಯೆ ರೂಪದಲ್ಲಿ ಗಾಂಧಿ ಸ್ಮರಣೆ ಮಾಡಿದರು.

ಇದೇ ವೇಳೆ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಬಳಗದ ಸಚ್ಚಿದಾನಂದ, ಪ್ರತಿ ಶನಿವಾರ ಮತ್ತು ಭಾನುವಾರ ಚರಕದಿಂದ ನೂಲು ತೆಗೆಯುವ ಕಲಿಕೆ ಶಿಬಿರ ಆಯೋಜಿಸುತ್ತೇವೆ. ಗಾಂಧಿ ಜಯಂತಿಯಾದ ಇಂದು ಕ್ರಿಯೆ ರೂಪದಲ್ಲೂ ಗಾಂಧಿ ಸ್ಮರಿಸುವ ಉದ್ದೇಶದಿಂದ ಒಂದು ಗಂಟೆ ಕಾಲ ಇಲ್ಲಿ ಸಾಮೂಹಿಕವಾಗಿ ನೂಲು ತೆಗೆಯುವ ಕಾರ್ಯಕ್ರಮ ನಡೆಸುತ್ತಿದ್ದೇವೆ ಎಂದು ತಿಳಿಸಿದರು.

ನಾವಿಂದು ಇಲ್ಲಿ ಬಳಸುತ್ತಿರುವ ಪೋರ್ಟಬಲ್ ಚರಕವು 80 ವರ್ಷದಷ್ಟು ಹಳೆಯದು. ಗಾಂಧಿಯವರ ಕಾಲದಿಂದಲೂ ಇದೆ. ಅವರು ಇದನ್ನೇ ಹೆಚ್ಚು ಬಳಸಿದ್ದು. ರಾಟೆ ಚರಕವನ್ನು ಎಲ್ಲೆಂದರಲ್ಲಿ ತೆಗೆದುಕೊಂಡು ಹೋಗಲು ಸಾಧ್ಯವಿಲ್ಲದ ಕಾರಣಕ್ಕೆ ಗಾಂಧಿಯವರೇ ಸ್ಪರ್ಧೆ ಆಯೋಜಿಸಿ, ಈ ಪೋರ್ಟಬಲ್ ಚರಕದ ಹುಟ್ಟಿಗೆ ಕಾರಣರಾದರು. 1936ರಿಂದಲೂ ಈ ವಿನ್ಯಾಸದ ಚರಕ ಬಳಕೆಯಲ್ಲಿದೆ ಎಂದು ಹೇಳಿದರು.

ನಾವು ಹತ್ತಿಯಿಂದ ನೂಲು ತೆಗೆದು ಅದನ್ನು ನೇಕಾರರಿಗೆ ನೀಡುತ್ತೇವೆ. ನಾನೀಗ ಹಾಕಿಕೊಂಡಿರುವ ಬಟ್ಟೆ ನಾನೇ ತೆಗೆದ ನೂಲಿನಿಂದಲೇ ತಯಾರಾಗಿದೆ. ನೂಲು ತೆಗೆಯುವ ಮೂಲಕ ನಾವು ನೇಕಾರರನ್ನು ಒಳಗೊಳ್ಳುತ್ತಿದ್ದೇವೆ. ಸಾಮಾನ್ಯವಾಗಿ ನೇಕಾರರಿಗೆ ನೇಕಾರಿಕೆ ಬಿಟ್ಟು ಬೇರೆ ಕೆಲಸ ಗೊತ್ತಿಲ್ಲ. ನೂಲು ತೆಗೆಯುವ ಮೂಲಕ ನಮ್ಮ ನೇಕಾರರಿಗೂ ಉದ್ಯೋಗಾವಕಾಶ ಕಲ್ಪಿಸುತ್ತಿದ್ದೇವೆ. ಇದರಿಂದ ನಮಗೂ ಬಟ್ಟೆ ದೊರೆಯುವ ಜೊತೆಗೆ ಅವರಿಗೂ ಉದ್ಯೋಗ ಸಿಗುತ್ತದೆ ಎಂದು ತಿಳಿಸಿದರು.

ಬಳಿಕ 'ಸುಸ್ಥಿರ ಜವಳಿ ಮತ್ತು ವಿನ್ಯಾಸ' ಕುರಿತು ಉಪನ್ಯಾಸ ನೀಡಿದ ಚೆನ್ನೈನ ತುಲಾ ಸಾವಯವ ಉಡುಪು ಸಂಸ್ಥೆಯ ಸಂಸ್ಥಾಪಕ ಅನಂತೂ ಮಾತನಾಡಿ, ಪ್ರಸ್ತುತದಲ್ಲಿ ದೇಶದ ಎಲ್ಲಾ ಸಮಸ್ಯೆಗಳಿಗೂ ಗಾಂಧಿ ಚಿಂತನೆಗಳು ಉತ್ತರವಾಗಿವೆ. ಅವರ ಚಿಂತನೆ ಮತ್ತು ಸರಳತೆ ನಮ್ಮನ್ನು ಎಂತಹ ಸನ್ನಿವೇಶದಲ್ಲೂ ಮುನ್ನಡೆಸಲಿವೆ ಎಂದು ಹೇಳಿದರು.

ಬ್ರಿಟಿಷರು ನಮ್ಮದೇ ದೇಶದ ಹತ್ತಿಯನ್ನು ಕೊಂಡೊಯ್ದು ಮತ್ತೆ ನಮಗೆಯೇ ಅತೀ ಕಡಿಮೆ ದರದಲ್ಲಿ ಸಿದ್ಧ ಉಡುಪು ಮಾರಾಟ ಮಾಡುತ್ತಿದ್ದರು. ಇದರಿಂದ ದೇಶದ ಸಣ್ಣ ಉದ್ಯಮಗಳ ಮೇಲೆ ಉಂಟಾಗುತ್ತಿದ್ದ ದುಷ್ಪರಿಣಾಮ ತಪ್ಪಿಸಲು ಗಾಂಧಿ ಮುಂದಾದರು. ಸ್ವದೇಶಿ ಉತ್ಪನ್ನ ಮಾತ್ರ ಬಳಸಬೇಕೆಂಬ ಗಾಂಧಿ ಕರೆಗೆ ಬ್ರಿಟನ್‌ನಲ್ಲಿ 64 ಉಡುಪು ತಯಾರಿಕಾ ಮಿಲ್‌ಗಳು ಬಾಗಿಲು ಮುಚ್ಚುವಂತೆ ಆಗಿತ್ತು. ಇದು ನಮ್ಮ ಸಣ್ಣ ನಿರ್ಧಾರದ ಹಿಂದಿರುವ ಶಕ್ತಿಯಾಗಿದ್ದು, ಈಗಲೂ ಇಂತಹ ನಿರ್ಣಯಗಳು ದೇಶದ ಸಮೃದ್ಧಿ ದೃಷ್ಟಿಯ ಹಿನ್ನೆಲೆಯಲ್ಲಿ ಅಗತ್ಯವಿವೆ ಎಂದು ಪ್ರತಿಪಾದಿಸಿದರು.

ಖಾದಿಯು ಸಮಾನತೆ ಮತ್ತು ಸುಸ್ಥಿರತೆಯ ಸಂಕೇತವಾಗಿದ್ದು, ಇಂದು ಜಾಗತಿಕ ಮಟ್ಟದ ಖಾಸಗಿ ಕಂಪನಿಗಳು ಹತ್ತಿ ಬೀಜಗಳ ಮೇಲಿನ ಸ್ವಾವಲಂಬನೆಯನ್ನು ರೈತರಿಂದ ಕಸಿದುಕೊಳ್ಳುತ್ತಿವೆ. ಹಾಗಾಗಿ ನಾವು ಹೆಚ್ಚು ಜಾಗರೂಕರಾಗಿ ಇರಬೇಕಿದ್ದು, ಕೃಷಿ, ಪರಿಸರ, ಉದ್ಯಮ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿ ಗಾಂಧಿ ಚಿಂತನೆಯೇ ನಮಗೆ ಸೂಕ್ತ ಮಾರ್ಗಗಳಾಗಿವೆ ಎಂದು ಹೇಳಿದರು.

ಬಳಿಕ ರಾಜಸ್ತಾನ ಮೂಲದ ಸೂಫಿ ಗಾಯಕ ಮೀರ್ ಮುಖ್ತಿಯಾರ್ ಅಲಿ ಅವರಿಂದ ಗಾಯನ ಕಾರ್ಯಕ್ರಮ ನಡೆಯಿತು. ಹಿರಿಯ ರಂಗಕರ್ಮಿ ರಾಮೇಶ್ವರಿ ವರ್ಮ, ಮೇಲುಕೋಟೆ ಜನಪದ ಸೇವಾ ಟ್ರಸ್ಟ್ ಕಾರ್ಯದರ್ಶಿ ಸಂತೋಷ್ ಕೌಲಗಿ, ಹಿರಿಯ ಸಾಹಿತಿ ಜಿ.ಪಿ.ಬಸವರಾಜು ಮತ್ತಿತರರು ಹಾಜರಿದ್ದರು.

ಮೈಸೂರಿನಿಂದ ಹೊರಡುವ ರೈಲು ವೇಳಾಪಟ್ಟಿ ಪರಿಷ್ಕರಣೆ

ಮೈಸೂರು, ಅ.2- ನೈರುತ್ಯ ರೈಲ್ವೇ ಮೈಸೂರು ವಿಭಾಗವು ಮೈಸೂರಿನಿಂದ ಹೊರಡುವ 9 ರೈಲುಗಳ ವೇಳಾ ಪಟ್ಟಿಯನ್ನು ಪರಿಷ್ಕರಿಸಿದೆ. ರೈಲು ಸಂಖ್ಯೆ ಮೈಸೂರು-ಧಾರವಾಡ ಎಕ್ಸ್‌ಪ್ರೆಸ್ ಅನ್ನು ಈಗ 20.45 ಗಂಟೆಗೆ ಮೈಸೂರಿನಿಂದ ಹೊರಡುವಂತೆ ಸಮಯವನ್ನು ಪರಿಷ್ಕರಿಸಿ ರೈಲು ಸೇವೆಯನ್ನು ಬೆಳಗಾವಿವರೆಗೆ ವಿಸ್ತರಿಸಲಾಗಿದೆ. ಹೊಸ ವೇಳಾ ಪಟ್ಟಿಯು ಅಕ್ಟೋಬರ್ 1ರಿಂದಲೇ ಜಾರಿಯಲ್ಲಿದ್ದು, ಪರಿಷ್ಕೃತ ವೇಳಾಪಟ್ಟಿ ಈ ಕೆಳಕಂಡಂತಿದೆ.

ಕ್ರ. ಸಂ.	ರೈಲು ಗಾಡಿ ಹೆಸರು ಮತ್ತು ಸಂಖ್ಯೆ	ನಿಲ್ದಾಣದಿಂದ	ನಿಲ್ದಾಣದವರೆಗೆ	ಮೈಸೂರಿನಿಂದ ಹೊರಡುತ್ತಿದ್ದ ಮೊದಲಿನ (ಹಳೆಯ) ನಿರ್ಗಮನ ಸಮಯ	ಮೈಸೂರಿನಿಂದ ಹೊರಡುವ ಈಗಿನ (ಹೊಸ) ನಿರ್ಗಮನ ಸಮಯ
1	16127 ಶಿರಡಿ ಎಕ್ಸ್ ಪ್ರೆಸ್	ಮೈಸೂರು	ಸಾಯಿನಗರ್ ಶಿರಡಿ	05.30	05.20
2	16535 ಗೋಲ್ ಗುಂಬಜ್ ಎಕ್ಸ್‌ಪ್ರೆಸ್	ಮೈಸೂರು	ಫಂಡರಾಪುರ	15.45	15.30
3	12781 ಸ್ವರ್ಣಜಯಂತಿ ಎಕ್ಸ್‌ಪ್ರೆಸ್	ಮೈಸೂರು	ಹಜ್ರತ್ ನಿಜಾಮುದ್ದೀನ್	20.10	19.30
4	17301 ಮೈಸೂರು-ಬೆಳಗಾವಿ ಎಕ್ಸ್‌ಪ್ರೆಸ್	ಮೈಸೂರು	ಬೆಳಗಾವಿ	22.30	20.45
5	06233 ಮೈಸೂರು-ಚಾಮರಾಜನಗರ	ಮೈಸೂರು	ಚಾಮರಾಜನಗರ	09.15	08.20
6	06300 ಮೈಸೂರು-ನಂಜನಗೂಡು	ಮೈಸೂರು	ನಂಜನಗೂಡು	09.35	09.15
7	16315 ಮೈಸೂರು-ಕೊಚ್ಚುವೆಳ್ಳಿ	ಮೈಸೂರು	ಕೊಚ್ಚುವೆಳ್ಳಿ	12.50	12.45
8	17326 ಮೈಸೂರು - ಬೆಳಗಾವಿ ವಿಶ್ವಮಾನವ ಎಕ್ಸ್‌ಪ್ರೆಸ್	ಮೈಸೂರು	ಬೆಳಗಾವಿ	5.50	5.40
9	06276 ಮೈಸೂರು-ಚಾಮರಾಜನಗರ ಎಕ್ಸ್‌ಪ್ರೆಸ್	ಮೈಸೂರು	ಚಾಮರಾಜನಗರ	12.15	12.00

ವ್ಯಕ್ತಿ ನಾಪತ್ತೆ



ಮೈಸೂರು, ಅ. 2- ಆಸ್ಪತ್ರೆಗೆ ಹೋಗುವುದಾಗಿ ತಿಳಿಸಿ ಮೈಸೂರಿಗೆ ತೆರಳಿದ ವ್ಯಕ್ತಿ ನಾಪತ್ತೆಯಾಗಿರುವ ಬಗ್ಗೆ ತಾಲೂಕಿನ ಕುಪ್ಪೇಗಾಲ ಗ್ರಾಮದಿಂದ ವರದಿಯಾಗಿದೆ. ಗ್ರಾಮದ ನಿವಾಸಿ ಪುಟ್ಟಸ್ವಾಮಿ(62) ನಾಪತ್ತೆಯಾದವರಾಗಿದ್ದು, ಇವರು ಸೆ. 12ರಂದು ಜ್ವರ ಬಂದಿದ್ದು, ಆಸ್ಪತ್ರೆಗೆ ಹೋಗಬೇಕೆಂದು ಪತ್ನಿ ಲೋಕಾಮಣಿ ಅವರಿಂದ ಸಾವಿರ ರೂ. ಪಡೆದು ಹೋದವರು ಈವರೆಗೂ ಮನೆಗೆ ಹಿಂದಿರುಗಿಲ್ಲ ಎಂದು ಅವರ ಅಳಿಯ ಪೊಲೀಸರಿಗೆ ನೀಡಿದ ದೂರಿನಲ್ಲಿ ತಿಳಿಸಿದ್ದಾರೆ. ಇವರ ಬಗ್ಗೆ ಮಾಹಿತಿ ಇರುವವರು ವರುಣ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 0821-2594411 ಅಥವಾ ಜಿಲ್ಲಾ ಪೊಲೀಸ್ ಕಂಟ್ರೋಲ್ ರೂಂ ಸಂಖ್ಯೆ 0821-2444800 ಅನ್ನು ಸಂಪರ್ಕಿಸುವಂತೆ ಪೊಲೀಸ್ ಪ್ರಕಟಣೆ ಕೋರಿದೆ.

ಕರ್ನಾಟಕದಲ್ಲಿ ಕುರುಬರೇ ಸರ್ಕಾರ ನಡೆಸುತ್ತಿದ್ದಾರೆ ಎಂಬುದು ಸುಳ್ಳು

ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ಸ್ಪಷ್ಟನೆ

ಮೈಸೂರು, ಅ.2(ಬಿಎಲ್‌ಯು)- ಕರ್ನಾಟಕದಲ್ಲಿ ಕುರುಬರೇ ಸರ್ಕಾರ ನಡೆಸುತ್ತಿದ್ದಾರೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಜಾತಿ ರಾಜಕಾರಣ ಮಾಡುತ್ತಿದ್ದಾರೆ ಎಂಬ ಆರೋಪ ಶುದ್ಧ ಸುಳ್ಳು ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ಸ್ಪಷ್ಟಪಡಿಸಿದ್ದಾರೆ.

ಮೈಸೂರಿನ ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರ್ ಸಭಾಂಗಣದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ ಅವರಿಗೆ ನಮ್ಮ ಪಕ್ಷದ ಕೆಲವರು ತಪ್ಪು ಮಾಹಿತಿ ನೀಡಿದ್ದಾರೆ. ತಪ್ಪು ಗ್ರಹಿಕೆಯಿಂದ ಶಿವಶಂಕರಪ್ಪ ಹಾಗೆ ಮಾತನಾಡಿದ್ದಾರೆ ಎಂದು ಸಲಹೆ ನೀಡಿದರು.

ಕರ್ನಾಟಕದ 40 ಚೀಫ್ ಇಂಜಿನಿಯರ್‌ಗಳಲ್ಲಿ 10 ಲಿಂಗಾಯಿತರಿದ್ದು, 9 ಒಕ್ಕಲಿಗರಿದ್ದಾರೆ. ನಾಲ್ವರು ಕುರುಬರಿದ್ದಾರೆ. ಹಾಗೆಯೇ 41 ವಿಶ್ವ ವಿದ್ಯಾನಿಲಯಗಳಲ್ಲಿ 14 ಕುಲಪತಿಗಳು ಲಿಂಗಾಯಿತರಾಗಿದ್ದಾರೆ. 8 ಮಂದಿ ಬ್ರಾಹ್ಮಣರಿದ್ದಾರೆ. ರಾಜ್ಯದಲ್ಲಿರುವ 272 ಐಎಎಸ್ ಅಧಿಕಾರಿಗಳಲ್ಲಿ 87 ಕರ್ನಾಟಕ ಕೇಡರ್ ಅಧಿಕಾರಿಗಳಿದ್ದಾರೆ. ಇವರ ಪೈಕಿ 22 ಲಿಂಗಾಯಿತರಿದ್ದಾರೆ. 31 ಜಿಲ್ಲಾಧಿಕಾರಿಗಳ ಪೈಕಿ ನಾಲ್ವರು ಲಿಂಗಾಯಿತರಿದ್ದಾರೆ. 5 ಮಂದಿ ಒಕ್ಕಲಿಗರಿದ್ದಾರೆ. ಇನ್ನು 409 ಕೆಎಎಸ್ ಅಧಿಕಾರಿಗಳಲ್ಲಿ 102 ಕೆಎಎಸ್ ಅಧಿಕಾರಿಗಳು ಲಿಂಗಾಯಿತರಾಗಿದ್ದಾರೆ. ಹೀಗಿರುವಾಗ ಲಿಂಗಾಯಿತರನ್ನು ಕಡೆಗಣಿಸಲಾಗಿದೆ ಎಂಬ ಆರೋಪ ಶುದ್ಧ ಸುಳ್ಳು ಎಂದು ಲಕ್ಷ್ಮಣ ಅಂಕಿ ಅಂಶಗಳ ಸಮೇತ ವಿವರ ನೀಡಿದರು.

ಹೌಸಿಂಗ್ ಬೋರ್ಡ್, ಅಗ್ರಿಕಲ್ಚರ್, ಚೆಸ್ಕಾಂ, ಐಟಿ ಬಿಟಿಯಲ್ಲಿ ಲಿಂಗಾಯಿತರಿದ್ದಾರೆ. ಈ ಮೂಲಕ ಲಿಂಗಾಯಿತ, ಒಕ್ಕಲಿಗ ಸೇರಿದಂತೆ ಪ್ರತಿಯೊಂದು ಜಾತಿಯನ್ನು ಈ ಸರ್ಕಾರದಲ್ಲಿ ಒಟ್ಟಿಗೆ ತೆಗೆದುಕೊಂಡು ಹೋಗಲಾಗುತ್ತಿದೆ ಎಂದು ತಿಳಿಸಿದರು.

ಸಂಕ್ರಾಂತಿ ಬಳಿಕ ರಾಜ್ಯ ಕಾಂಗ್ರೆಸ್ ಸರ್ಕಾರ ಬೀಳುತ್ತದೆ ಎಂದು ಹೇಳುವವರಿಗೆ ತಲೆ ಕೆಟ್ಟಿದೆ ಎಂದು ಶಾಸಕ ಯೋಗೇಶ್ವರ್‌ಗೆ ತಿರುಗೇಟು ಕೊಟ್ಟ ಲಕ್ಷ್ಮಣ್, ಬೇರೆ ಪಕ್ಷದ 25 ರಿಂದ 30 ಶಾಸಕರು ಕಾಂಗ್ರೆಸ್ ಸೇರಲು ಸಿದ್ದರಿದ್ದಾರೆ. ಆದರೆ ಕಾಂಗ್ರೆಸ್ ಹೈಕಮಾಂಡ್ ಇದಕ್ಕೆ ಇನ್ನು ಗ್ರೀನ್ ಸಿಗ್ನಲ್ ಕೊಟ್ಟಿಲ್ಲ. ಹೀಗಿರುವಾಗ ಸರ್ಕಾರ ಬೀಳಲು ಹೇಗೆ ಸಾಧ್ಯ ಎಂದು ಲಕ್ಷ್ಮಣ್ ಪ್ರಶ್ನಿಸಿದರು.

ತುಮಕೂರಿನಲ್ಲಿ ಭೀಕರ ಅಪಘಾತ: ಟ್ರಕ್-ಸ್ಕೂಟರ್ ಡಿಕ್ಕಿಯಾಗಿ ತಾಯಿ-ಮಗ ಸೇರಿ ಮೂವರು ಸಾವು

ತುಮಕೂರು: ತುಮಕೂರು ಜಿಲ್ಲೆಯಲ್ಲಿ ಸಂಭವಿಸಿದ ರಸ್ತೆ ಅಪಘಾತದಲ್ಲಿ ತಾಯಿ ಮತ್ತು ಮಗ ಸೇರಿದಂತೆ ಮೂವರು ಸಾವಿಗೀಡಾಗಿರುವ ದಾರುಣ ಘಟನೆ ನಡೆದಿದೆ.

ಕೊರಟಗೆರೆ ತಾಲೂಕಿನ ಅರಸಾಪುರ ಗೇಟ್ ಬಳಿ ಸೋಮವಾರ ಅಪಘಾತ ಸಂಭವಿಸಿದೆ ಮೃತರನ್ನು 40 ವರ್ಷದ ಅನಿತಾ, ಆಕೆಯ ಮಗ 18 ವರ್ಷದ ಬಾಲಾಜಿ ಮತ್ತು ಸೋದರಳಿಯ 20 ವರ್ಷದ ಪವನ್ ಎಂದು ಗುರುತಿಸಲಾಗಿದೆ.

ಪೊಲೀಸರ ಪ್ರಕಾರ, ಅನಿತಾ ಮತ್ತು ಇಬ್ಬರು ಸ್ಕೂಟರ್‌ನಲ್ಲಿ ಹೋಗುತ್ತಿದ್ದರು. ಈ ವೇಳೆ ಸ್ಕೂಟರ್ ಟ್ರಕ್‌ಗೆ ಡಿಕ್ಕಿ ಹೊಡೆದಿದೆ. ಅಪಘಾತದಲ್ಲಿ ಟ್ರಕ್‌ನ ಚಕ್ರದಡಿಗೆ ವಾಹನ ಸಿಲುಕಿದ್ದು, ಮೂವರು ಸ್ಥಳದಲ್ಲೇ ಸಾವಿಗೀಡಾಗಿದ್ದಾರೆ.

ಮೃತರು ವೇರೇನಹಳ್ಳಿ ತಾಂಡಾ ನಿವಾಸಿಗಳಾಗಿದ್ದು, ಟ್ರಕ್ ಚಾಲಕ ಸ್ಥಳದಿಂದ ಪರಾರಿಯಾಗಿದ್ದಾನೆ. ಪೊಲೀಸರು ಆತನಿಗಾಗಿ ಹುಡುಕಾಟ ನಡೆಸಿದ್ದಾರೆ. ಮೃತದೇಹಗಳನ್ನು ಕೊರಟಗೆರೆ ಪಟ್ಟಣದ ತಾಲೂಕು ಆಸ್ಪತ್ರೆಗೆ ರವಾನಿಸಲಾಗಿದೆ. ಕೊರಟಗೆರೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ವಿಶ್ವವಿಖ್ಯಾತ ಗೋಳಗುಮ್ಮಟಕ್ಕಿಲ್ಲ ಯುನೆಸ್ಕೋ ಸ್ಥಾನಮಾನ!



ಬೆಂಗಳೂರು: ವಿಭಿನ್ನ ಕಟ್ಟಡ ಶೈಲಿ, ವಿಸ್ಮಯವೆಂಬಂತೆ ಗೋಚರಿಸುವ ಪಿಸುಗುಟ್ಟುವ ಗ್ಯಾಲರಿ. ಇಷ್ಟೇ ಅಲ್ಲ ಅನೇಕ ವಿಸ್ಮಯಗಳಿಂದ ವಿಶ್ವ ವಿಖ್ಯಾತಿ ಪಡೆದಿರುವ ವಿಜಯಪುರದ ಗೋಳಗುಮ್ಮಟ ವೀಕ್ಷಣೆಗೆ ದೇಶ ವಿದೇಶಗಳಿಂದ ಪ್ರವಾಸಿಗರು ಬರುತ್ತಾರೆ. ಆದರೆ, ಈ ಗೋಳಗುಮ್ಮಟ ಮಾತ್ರ ಯುನೆಸ್ಕೋ ಸ್ಥಾನಮಾನದಿಂದ ದೂರ ಉಳಿದಿದೆ.

ಹಾಸನ ಜಿಲ್ಲೆಯ ಬೇಲೂರಿನ ಚೆನ್ನಕೇಶವ ದೇವಾಲಯ, ಹಳೇಬೀಡು ಹೊಯ್ಸಳೇಶ್ವರ ದೇವಾಲಯ ಮತ್ತು ಮೈಸೂರು ಜಿಲ್ಲೆಯ ಟಿ ನರಸೀಪುರದ ಸೋಮನಾಥಪುರ ದೇವಾಲಯಗಳು ಈ ವರ್ಷ ಯುನೆಸ್ಕೋ ಪಾರಂಪರಿಕ ತಾಣಗಳ ಪಟ್ಟಿಯಲ್ಲಿ ಸ್ಥಾನ ಪಡೆದುಕೊಂಡಿವೆ. ಆದರೆ, ಗೋಳಗುಮ್ಮಟ ಮಾತ್ರ ಇನ್ನೂ ಯುನೆಸ್ಕೋ ಪಟ್ಟಿಗೆ ಸೇರ್ಪಡೆಯಾಗಿಲ್ಲ.

ಗೋಲ್ ಗುಂಬಜ್ 350 ವರ್ಷಗಳ ಹಿಂದೆ ನಿರ್ಮಿಸಲಾದ ಪುರಾತನ ಮತ್ತು ಐತಿಹಾಸಿಕ ಸ್ಮಾರಕಗಳಲ್ಲಿ ಒಂದಾಗಿದ್ದರೂ, ಯುನೆಸ್ಕೋ ಪಟ್ಟಿಯಲ್ಲಿ ಸ್ಥಾನ ಪಡೆಯುವಲ್ಲಿ ವಿಫಲವಾಗಿದೆ.

ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಯು ಕನಿಷ್ಠ 83 ವಿವಿಧ ಸಣ್ಣ ಮತ್ತು ದೊಡ್ಡ ಸ್ಮಾರಕಗಳನ್ನು ಸಂರಕ್ಷಿತ ಸ್ಮಾರಕಗಳೆಂದು ಘೋಷಿಸಿದೆ. "ಇವುಗಳಲ್ಲಿ, ಪ್ರಸಿದ್ಧ ಪಿಸುಗುಟ್ಟುವ ಗ್ಯಾಲರಿ, ಗೋಲ್ ಗುಂಬಜ್ ಸೇರಿದಂತೆ ಕನಿಷ್ಠ ಹತ್ತು ದೊಡ್ಡ ಸ್ಮಾರಕಗಳಿವೆ. ಈ ಸ್ಮಾರಕವು ಯುನೆಸ್ಕೋ ಪಾರಂಪರಿಕ ತಾಣಗಳ ಪಟ್ಟಿಯಲ್ಲಿ ಸ್ಥಾನ ಪಡೆಯಲು ಅರ್ಹವಾಗಿದೆ ಎಂದು ಹಿರಿಯ ಇತಿಹಾಸಕಾರ ಮತ್ತು ಬರಹಗಾರ ಅಬ್ದುಲ್ ಘನಿ ಇಮಾರತ್ವಾಲೆ ಹೇಳಿದರು, ಹೆಸರುವಾಸಿಯಾದ ಸ್ಮಾರಕವು ಯುನೆಸ್ಕೋದ ಪಾರಂಪರಿಕ ತಾಣಗಳ ಭಾಗವಾಗಲು ವಿಫಲವಾದರೆ, ಅದು ಪ್ರಾಚೀನ ನಗರದ ಶ್ರೀಮಂತ, ವೈವಿಧ್ಯಮಯ ಮತ್ತು ಇತಿಹಾಸಕ್ಕೆ ದೊಡ್ಡ ಅನ್ಯಾಯವಾದಂತಾಗಲಿದೆ ಎಂದು ತಿಳಿಸಿದ್ದಾರೆ. ಯುನೆಸ್ಕೋದ ಪಟ್ಟಿಗೆ ಗೋಲ್ ಗುಂಬಜ್ ಹೆಸರನ್ನು ಸೇರ್ಪಡೆಗೊಳಿಸಲು ಒತ್ತಾಯಿಸಲಾಗುತ್ತದೆ ಎಂದು ಹಿರಿಯ ಎಎಸ್‌ಐ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ದಸರಾ ಚಲನಚಿತ್ರೋತ್ಸವಕ್ಕೆ 10 ಕಿರು ಚಿತ್ರಗಳ ಆಯ್ಕೆ



ಮೈಸೂರು,ಅ.2(ಎಂಟಿವೈ)- ದಸರಾ ಮಹೋತ್ಸವ ವೇಳೆ ಆಯೋಜಿಸುವ ಚಲನಚಿತ್ರೋತ್ಸವದಲ್ಲಿ ಈ ಬಾರಿ ಅತ್ಯುತ್ತಮ ಸಂದೇಶ ಸಾರುವ ಕಿರು ಚಿತ್ರಗಳ ಪ್ರದರ್ಶನಕ್ಕೆ ಉದ್ದೇಶಿಸಲಾಗಿದ್ದು, ಸೋಮವಾರ ಇವುಗಳ ಪ್ರದರ್ಶನ ಏರ್ಪಡಿಸಿ, ಅತ್ಯುತ್ತಮ ಕಿರುಚಿತ್ರಗಳ ಆಯ್ಕೆ ಪ್ರಕ್ರಿಯೆ ನಡೆಯಿತು.


ಪ್ರವಾಸೋದ್ಯಮ ಇಲಾಖೆ ವತಿಯಿಂದ ಆಯೋಜಿಸಿದ್ದ ಕಿರುಚಿತ್ರ ಸ್ಪರ್ಧೆಯಲ್ಲಿ 65 ಕಿರುಚಿತ್ರಗಳನ್ನು ಪ್ರದರ್ಶಿಸಲಾಗಿತ್ತು. ಇಂತಹ ಕಿರುಚಿತ್ರ ಪರಿಶೀಲನೆಗೆ ಕೆಎಸ್‌ಟಿಡಿಸಿ ಸಭಾಂಗಣದಲ್ಲಿ ವ್ಯವಸ್ಥೆ ಮಾಡಲಾಗಿತ್ತು. ಪರಿಣಿತ ಐವರು ಒಳಗೊಂಡ ತಂಡ ಕಿರುಚಿತ್ರಗಳನ್ನು ಪರಿಶೀಲಿಸಿದರು.

ದಸರಾ ಚಲನ ಚಿತ್ರೋತ್ಸವ-2023ರಡಿ ಆಯೋಜಿಸಿದ್ದ ಕಿರು ಚಿತ್ರಗಳ ಸ್ಪರ್ಧೆಗೆ ಮೈಸೂರು, ಬೆಂಗಳೂರು ಸೇರಿದಂತೆ ವಿವಿಧೆಡೆಯ ಕಿರುಚಿತ್ರ ತಯಾರಕರಿಂದ ಒಟ್ಟು 65 ಕಿರುಚಿತ್ರಗಳು ಸಲ್ಲಿಕೆಯಾಗಿದ್ದವು. ಅವುಗಳಲ್ಲಿ ಸಮಾಜಕ್ಕೆ ಅತ್ಯುತ್ತಮ ಸಂದೇಶ ಸಾರುವ 10 ಕಿರುಚಿತ್ರಗಳನ್ನು ಆಯ್ಕೆ ಮಾಡಲಾಗಿದ್ದು, ದಸರಾ ಚಲನಚಿತ್ರೋತ್ಸವದಲ್ಲಿ ಐನಾಕ್ಸ್ ಚಿತ್ರಮಂದಿರದಲ್ಲಿ ಪ್ರದರ್ಶಿಸಲಾಗುತ್ತದೆ.

ದಸರಾ ಚಲನ ಚಿತ್ರೋತ್ಸವ ಉಪ ಸಮಿತಿ ವತಿಯಿಂದ ಆಯೋಜಿಸಿದ್ದ ಈ ಸ್ಪರ್ಧೆಯಲ್ಲಿ ತೀರ್ಪುಗಾರರಾಗಿ ಕಾವಾದ ಶಿಲ್ಪಕಲಾ ವಿಭಾಗದ ಉಪನ್ಯಾಸಕ ವೀರಣ್ಣ ಮಾ ಅರ್ಕಸಾಲಿ, ಮಹಾರಾಣಿ ಮಹಿಳಾ ಕಲಾ ಕಾಲೇಜಿನ ಸಹ ಪ್ರಾಧ್ಯಾಪಕ ಡಾ.ಹೇಮಚಂದ್ರ, ರಂಗಭೂಮಿ ಕಲಾವಿದ ಮೈಮ್ ರಮೇಶ್, ಪತ್ರಕರ್ತ ಕೂಡ್ಲಿ ಗುರುರಾಜ್ ಹಾಗೂ ಸಿನಿಮಾ ಛಾಯಾಗ್ರಾಹಕ ನಿರೀಕ್ಷಿತ್ ಕಾರ್ಯನಿರ್ವಹಿಸಿ, ಸ್ಪರ್ಧೆಯಲ್ಲಿ ಸಲ್ಲಿಕೆಯಾಗಿದ್ದ ಕಿರುಚಿತ್ರಗಳನ್ನು ವೀಕ್ಷಿಸಿ, ವಿವಿಧ ಮಾನದಂಡಗಳ ಆಧಾರದಲ್ಲಿ ಮೌಲ್ಯಮಾಪನ ಮಾಡಿದರು.

ಈ ಸಂದರ್ಭದಲ್ಲಿ ದಸರಾ ಚಲನ ಚಿತ್ರೋತ್ಸವ ಉಪ ವಿಶೇಷಾಧಿಕಾರಿ ಹಾಗೂ ಪ್ರವಾಸೋದ್ಯಮ ಇಲಾಖೆಯ ಜಂಟಿ ನಿರ್ದೇಶಕಿ ಸವಿತಾ, ಸಮಿತಿಯ ಕಾರ್ಯಾಧ್ಯಕ್ಷರು ಹಾಗೂ ಕೆಐಎಡಿಬಿ ಭೂ ಸ್ವಾಧೀನಾಧಿಕಾರಿ ಪ್ರಿಯದರ್ಶಿನಿ, ಕಾರ್ಯದರ್ಶಿ ಹಾಗೂ ವಾರ್ತಾ ಇಲಾಖೆ ಉಪ ನಿರ್ದೇಶಕ ಅಶೋಕ್ ಕುಮಾರ್, ಸಹ ಕಾರ್ಯದರ್ಶಿ ಹಾಗೂ ವಾರ್ತಾ ಇಲಾಖೆ ಸಹಾಯಕ ನಿರ್ದೇಶಕ ಟಿ.ಕೆ.ಹರೀಶ್ ಇನ್ನಿತರರು ಪಾಲ್ಗೊಂಡಿದ್ದರು.

ಚೀನಾ ಪರ ಒಲವಿರುವ ಮೊಹಮ್ಮದ್ ಮುಯಿಜ್ಜು ಮಾಲ್ಡೀವ್ಸ್ ಅಧ್ಯಕ್ಷ



ಮಾಲೆ: ಮಾಲ್ಡೀವ್ಸ್‌ನಲ್ಲಿ ನಡೆದ ಅಧ್ಯಕ್ಷೀಯ ಚುನಾವಣೆಯಲ್ಲಿ ವಿರೋಧ ಪಕ್ಷದ ಪ್ರೋಗ್ರೆಸ್ಸಿವ್ ಪಾರ್ಟಿ ಆಫ್ ಮಾಲ್ಡೀವ್ಸ್ (ಪಿಪಿಎಂ) ಅಭ್ಯರ್ಥಿ ಡಾ.ಮಹಮ್ಮದ್ ಮುಯಿಝು ಗೆಲುವು ಸಾಧಿಸಿದ್ದಾರೆ. ಕಠಿಣ ಸ್ಪರ್ಧೆಯಲ್ಲಿ ಹಾಲಿ ಅಧ್ಯಕ್ಷ ಇಬ್ರಾಹಿಂ ಮೊಹಮ್ಮದ್ ಸೋಲಿಹ್ ಅವರನ್ನು ಮುಯಿಝು ಸೋಲಿಸಿದ್ದಾರೆ.

ಸಂಭ್ರಮಾಚರಣೆ: ಮಾಲ್ಡೀವ್ಸ್‌ನ ರಾಜಧಾನಿ ಮಾಲೆಯಲ್ಲಿ ಮುಯಿಜ್ಜು ಬೆಂಬಲಿಗರು ಈಗಾಗಲೇ ಸಂಭ್ರಮಾಚರಣೆ ಆರಂಭಿಸಿದ್ದಾರೆ. ಮುಯಿಝು ಅವರ ಸ್ಪಷ್ಟ ವಿಜಯವನ್ನು ಆಚರಿಸಲು ಮಾಲೆ ಯಲ್ಲಿರುವ ಪಕ್ಷದ ಪ್ರಧಾನ ಕಚೇರಿಯ ಮುಂದೆ ಜಮಾಯಿಸಿರುವ ನೂರಾರು ಪಿಪಿಎಂ ಬೆಂಬಲಿಗರು, ಜೈಲಿನಲ್ಲಿರುವ ಮಾಜಿ ಅಧ್ಯಕ್ಷ ಅಬ್ದುಲ್ಲಾ ಯಮೀನ್ ಬಿಡುಗಡೆಗೆ ಒತ್ತಾಯಿಸುತ್ತಿದ್ದಾರೆ.

ಅಕ್ರಮವಾಗಿ 328 ಮೂತ್ರಪಿಂಡ ಕಸಿ: ಪಾಕಿಸ್ತಾನದ ವೈದ್ಯ ಬಂಧನ

ಲಾಹೋರ್: ಅಕ್ರಮವಾಗಿ ಕನಿಷ್ಠ 328 ಮೂತ್ರಪಿಂಡ ಕಸಿ ಮಾಡಿದ್ದ ವೈದ್ಯ ಮತ್ತು ಮೋಟಾರ್ ಮೆಕ್ಯಾನಿಕ್ ನಡೆಸುತ್ತಿದ್ದ ಅಂಗಾಂಗ ಕಳ್ಳಸಾಗಣೆ ಜಾಲವನ್ನು ಪಾಕಿಸ್ತಾನ ಪೊಲೀಸರು ಭೇದಿಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ ವೈದ್ಯ ಫವಾದ್ ಮುಖ್ತಾರ್ ಬಂಧಿತ ಆರೋಪಿ. ದುಷ್ಕೃತ್ಯಕ್ಕಾಗಿ ಈಗಾಗಲೇ ಐದು ಬಾರಿ ಈತನನ್ನು ಬಂಧಿಸಲಾಗಿತ್ತು. ಆಸ್ಪತ್ರೆಗಳಿಂದ ಆಮಿಷವೊಡ್ಡಲ್ಪಟ್ಟ ದುರ್ಬಲ ರೋಗಿಗಳಿಗೆ ಶಸ್ತ್ರಚಿಕಿತ್ಸಾ ಸಹಾಯಕ ಮತ್ತು ಅರಿವಳಿಕೆ ತಜ್ಞನಾಗಿ ಮೆಕ್ಯಾನಿಕ್ ಅನ್ನು ವೈದ್ಯ ಬಳಸಿಕೊಳ್ಳುತ್ತಿದ್ದ ಎಂಬುದು ಪೊಲೀಸ್ ತನಿಖೆಯಿಂದ ತಿಳಿದುಬಂದಿದೆ ಖಾಸಗಿ ಮನೆಗಳಲ್ಲಿ ಕಿಡ್ನಿ ಕಸಿ ನಡೆಸಲಾಗುತಿತ್ತು. ಕೆಲವೊಮ್ಮೆ ರೋಗಿಗೆ ತಿಳಿಯದೆ, ಪ್ರತಿ ಮೂತ್ರಪಿಂಡಗಳನ್ನು 10 ಮಿಲಿಯನ್ ರೂಪಾಯಿಗಳಿಗೆ (35,000 ಡಾಲರ್) ಮಾರಾಟ ಮಾಡಲಾಗಿತ್ತು ಎಂದು ಪಂಜಾಬ್ ಪ್ರಾಂತ್ಯದ ಮುಖ್ಯಮಂತ್ರಿ ಮೊಹ್ಸಿನ್ ನಖ್ವಿ ಹೇಳಿದ್ದಾರೆ.




ಮೈಸೂರಿನ ನ್ಯಾಯಾಲಯಗಳ ಮುಂಭಾಗ ಗಾಂಧಿ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮೂಲಕ ಗಾಂಧಿ ಜಯಂತಿ ಆಚರಿಸಲಾಯಿತು. ಮೊದಲನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶ ಪುಟ್ಟಸ್ವಾಮಿ ಮಾಲಾರ್ಪಣೆ ಮಾಡಿದರು. ವಕೀಲರ ಸಂಘದ ಅಧ್ಯಕ್ಷ ಮಹದೇವಸ್ವಾಮಿ, ಕಾರ್ಯದರ್ಶಿ ಎಸ್.ಉಮೇಶ್, ಪದಾಧಿಕಾರಿಗಳು ಹಾಜರಿದ್ದರು.



ಮೈಸೂರಿನ ಪಡುವಾರಹಳ್ಳಿಯ ವಾಲ್ಮೀಕಿ ರಸ್ತೆಯಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧಿಯವರ 154ನೇ ಜಯಂತಿಯನ್ನು ಆಚರಿಸಲಾಯಿತು. ಚಾಮರಾಜ ಕ್ಷೇತ್ರದ ಬಿಜೆಪಿ ಅಧ್ಯಕ್ಷ ಸೋಮಶೇಖರ್ ರಾಜು, ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ನಿರ್ದೇಶಕ ಪಡುವಾರಹಳ್ಳಿ ಎಂ ರಾಮಕೃಷ್ಣ, ನಗರಪಾಲಿಕೆ ಮಾಜಿ ಸದಸ್ಯ ಎಂ. ಚಿಕ್ಕವೆಂಕಟು, ಸಿ.ಡಿ.ಕುಮಾರ್, ಕೇಬಲ್ ಕಿಟ್ಟಿ ರಾಘವ್ ಎಂ ಗೌಡ, ಸಿ.ಸಂತೋಷ್, ವೇಣುಗೋಪಾಲ್, ಸುರೇಂದ್ರ ಕೆ.ಎಂ. ಮಾಧು ಮತ್ತಿತರರು ಇದ್ದರು.



ಮೈಸೂರಿನ ಮಹರ್ಷಿ ವಿದ್ಯಾಸಂಸ್ಥೆಯಲ್ಲಿ ಮಹಾತ್ಮ ಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿಯವರ ಜಯಂತಿ ಅರ್ಥಗರ್ಭಿತವಾಗಿ ಆಚರಿಸಲಾಯಿತು. ಮಹರ್ಷಿ ವಿದ್ಯಾಸಂಸ್ಥೆಯ ವ್ಯವಸ್ಥಾಪಕ ವಿಶ್ವಸ್ಥರಾದ ಡಾ॥ ಭವಾನಿಶಂಕರ್ ಅಧ್ಯಕ್ಷತೆ ವಹಿಸಿದ್ದರು. ಕಾಲೇಜು ವಿಭಾಗದ ಪ್ರಾಚಾರ್ಯ ಮಹದೇವಸ್ವಾಮಿ, ಪಬ್ಲಿಕ್ ಶಾಲೆಯ ಪ್ರಾಚಾರ್ಯ ಸತೀಶ್, ಕುಮಾರ್ ಉಪಸ್ಥಿತರಿದ್ದರು.




ಶ್ರೀ ರಾಮಕೃಷ್ಣ ಸೇವಾ ಸಂಘದ ರಾಮಕೃಷ್ಣ ವಿದ್ಯಾಕೇಂದ್ರ ಮತ್ತು ಆರ್.ಕೆ.ವಿ.ಕೆ. ಪಿಯು ಕಾಲೇಜಿನಲ್ಲಿ ಮಹಾತ್ಮಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿ ಜನ್ಮದಿನವನ್ನು ಆಚರಿಸಲಾಯಿತು. ಚಿತ್ರದಲ್ಲಿ ರೋಟರಿ ಮೈಸೂರು ಉತ್ತರ ಸಂಸ್ಥೆ ಅಧ್ಯಕ್ಷ ಎಂ.ಕೆ.ಶ್ರೀಧರ್, ರಾಮಕೃಷ್ಣ ವಿದ್ಯಾಕೇಂದ್ರದ ಕಾರ್ಯನಿರ್ವಾಹಕ ಅಧಿಕಾರಿ ಪ್ರೊ.ಜಿ.ಚಂದ್ರಶೇಖರ್, ರಾಮಕೃಷ್ಣ ಸೇವಾ ಸಂಘದ ಉಪಾಧ್ಯಕ್ಷ ಕೆ.ಕೆಂಪಲಿಂಗರಾಜು, ಆರ್.ಕೆ.ವಿ.ಕೆ. ಪಿಯು ಕಾಲೇಜಿನ ಪ್ರಾಂಶುಪಾಲ ಸಿ.ಶಿವಪ್ಪ, ರಾಮಕೃಷ್ಣ ಸೇವಾ ಸಂಘದ ಅಧ್ಯಕ್ಷ ಎಂ.ಪಾಪೇಗೌಡ, ಸಂಗೀತ ಶಿಕ್ಷಕಿ ಭಾಗ್ಯಲಕ್ಷ್ಮಿ, ಸಂಸ್ಕೃತ ಸಹಶಿಕ್ಷಕ ಗಣೇಶ್ ಹೆಗಡೆ, ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಜಿ.ಎನ್.ವಿಶ್ವನಾಥ್, ವಿ.ಗಾಯಿತ್ರಿ ಈ ವೇಳೆ ಉಪಸ್ಥಿತರಿದ್ದರು.



ಗಾಂಧಿ ಜಯಂತಿ ಪ್ರಯುಕ್ತ ವಿಜಯನಗರ 2ನೇ ಹಂತದ ನಾಗರಿಕ ಹಿತರಕ್ಷಣಾ ಸಮಿತಿ ವತಿಯಿಂದ ವಿದ್ಯಾರಣ್ಯ ಉದ್ಯಾನವನದಲ್ಲಿ ಸ್ವಚ್ಛತಾ ಅಭಿಯಾನ ನಡೆಸಲಾಯಿತು. ಸಂಘದ ಅಧ್ಯಕ್ಷ ಶ್ರೀಕಾಂತ ಬಡಿಗೇರ, ಸಮಿತಿಯ ಪದಾಧಿಕಾರಿಗಳು ಮತ್ತು ಬಡಾವಣೆಯ ನಾಗರಿಕರು ಹಾಗೂ ಮಕ್ಕಳು ಭಾಗವಹಿಸಿದ್ದರು.

ಶನಿವಾರ ನಿನಾದ ಗೃಹ ಸಂಗೀತ ಕಛೇರಿ



ಮೈಸೂರು, ಅ. 2– 'ನಿನಾದ ಗೃಹ ಸಂಗೀತ' ಮೈಸೂರಿನಲ್ಲಿ ಪ್ರತಿ ತಿಂಗಳು ಆಯೋಜಿಸುವ ಸಂಗೀತ ಕಛೇರಿ ಸರಣಿಯ 9ನೆಯ ಕಾರ್ಯಕ್ರಮ ಶನಿವಾರ ಅ.7 ಸಂಜೆ 6 ಗಂಟೆಗೆ, #37 ಕ್ಕೆ 'ನಿನಾದ', ರಿಷಭ್ ಸಿದ್ಧಿ ಲೇಔಟ್, ಕೇರ್ಗಳ್ಳಿ, ಮೈಸೂರು ಇಲ್ಲಿ ನಡೆಯಲಿದೆ. ರಂಜನಿ ಮೆಮೋರಿಯಲ್ ಟ್ರಸ್ಟ್ ನಡೆಸುವ ಈ ಕಾರ್ಯಕ್ರಮದಲ್ಲಿ ಈ ಬಾರಿ ಶ್ರೀ ಆಯುಶ್ ಮೊರೊನಿ ಅವರಿಂದ ಸಿತಾರ್ ವಾದನ ನಡೆಯಲಿದೆ. ಮಾಹಿತಿಗೆ 9449676014 ಸಂಪರ್ಕಿಸಿ.

ಪಠ್ಯಪುಸ್ತಕಗಳಲ್ಲಿ ಸ್ವಾತಂತ್ರ್ಯ ಹೋರಾಟಗಾರರ ಜೀವನ ಚರಿತ್ರೆ ಅಳವಡಿಸಲು ಶಾಸಕ ಕೆ.ಹರೀಶ್‌ಗೌಡ ಆಗ್ರಹ

ಮೈಸೂರು, ಅ.2–ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನೀಯರ ಜೀವನ ಚರಿತ್ರೆಯನ್ನು ಪಠ್ಯಪುಸ್ತಕಗಳಲ್ಲಿ ಅಳವಡಿಸಬೇಕೆಂದು ಶಾಸಕ ಕೆ.ಹರೀಶ್ ಗೌಡ ಸರ್ಕಾರವನ್ನು ಒತ್ತಾಯಿಸಿದರು

ಮೈಸೂರಿನ 23ನೇ ವಾರ್ಡಿನ ಕಾಂಗ್ರೆಸ್ ಕಾರ್ಯಕರ್ತರು ಸ್ವಾತಂತ್ರ್ಯ ಹೋರಾಟಗಾರರ ಉದ್ಯಾನವನದಲ್ಲಿ ಸೋಮವಾರ ಮಹಾತ್ಮಗಾಂಧಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜನ್ಮದಿನದ ಅಂಗವಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಹಿರಿಯ ಸ್ವಾತಂತ್ರ್ಯ ಹೋರಾಟಗಾರರಿಗೆ ಸನ್ಮಾನಿಸಿ, ಶಾಸಕರು ಮಾತನಾಡಿದರು.

ನಮ್ಮ ದೇಶಕ್ಕೆ ಸ್ವಾತಂತ್ರ್ಯ ತಂದು ಕೊಟ್ಟು ನಾವೆಲ್ಲ ಸುರಕ್ಷಿತವಾಗಿ ಜೀವನ ಸಾಗಿಸಲು ಈ ಹಿರಿಯ ಚೇತನಗಳೇ ಕಾರಣ. ಹಾಗಾಗಿ ಅವರನ್ನು ಇಡೀ ಜನತೆ ಸದಾ ಸ್ಮರಿಸಬೇಕು ಎಂದು ಕರೆ ನೀಡಿದರು.

ಇತ್ತೀಚಿಗಿನ ಯಾವುದೇ ಪಠ್ಯಪುಸ್ತಕಗಳಲ್ಲೂ ಹಿರಿಯ ಸ್ವಾತಂತ್ರ್ಯ ಹೋರಾಟಗಾರರ ಬಗ್ಗೆ ವಿಷಯವೇ ಇರುವುದಿಲ್ಲ.



ಇದು ಅತ್ಯಂತ ಬೇಸರದ ಸಂಗತಿ ಎಂದು ವಿಷಾದಿಸಿದರು. ನಮ್ಮ ಮುಂದಿನ ಪೀಳಿಗೆಗೆ ಸ್ವಾತಂತ್ರ್ಯ ಹೋರಾಟಗಾರರ ವ್ಯಕ್ತಿತ್ವ, ಅವರು ಮಾಡಿದಂತಹ ಹೋರಾಟಗಳು, ಸಾಧನೆ ಮತ್ತು ವ್ಯಕ್ತಿತ್ವವನ್ನು ಪರಿಚಯ ಮಾಡಿಕೊಡಲೇಬೇಕಿದೆ ಎಂದು ಹೇಳಿದರು.

ನಮ್ಮ ದೇಶಕ್ಕೆ ಸ್ವಾತಂತ್ರ್ಯ ತಂದುಕೊಡಲು ಮಹಾತ್ಮ ಗಾಂಧೀಜಿ, ಸುಭಾಷ್ ಚಂದ್ರ ಬೋಸ್, ಜವಾಹರಲಾಲ್ ನೆಹರು, ಸರೋಜಿನಿ ನಾಯ್ಡು, ಸರ್ದಾರ್ ವಲ್ಲಭಬಾಯಿ ಪಟೇಲ್ ಹೀಗೆ ಅನೇಕ ಮಂದಿ ಹೋರಾಟ ಮಾಡಿದ್ದಾರೆ ಎಂದು ಸ್ಮರಿಸಿದರು.

ಮೈಸೂರು ನಗರದ ಹಿರಿಯ ಸ್ವಾತಂತ್ರ್ಯ ಹೋರಾಟಗಾರರಾದ ರೇವಣ್ಣ, ನಾಗರತ್ನಮ್ಮ, ಪ್ರೇಮಾವತಿ, ಗಿರಿಜಾ ಅಶ್ವಥ್ ಅವರುಗಳನ್ನು ಈ ವೇಳೆ ಸನ್ಮಾನಿಸುತ್ತಿರುವುದು ನಮ್ಮ ಸೌಭಾಗ್ಯ ಎಂದು ಹೇಳಿದರು. ಇಂದು ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜನ್ಮದಿನವೂ ಹೌದು, ಅವರು ಪ್ರಧಾನಿಯಾಗಿ ದೇಶವನ್ನು ಯಶಸ್ವಿಯಾಗಿ ಮುನ್ನಡೆಸಿದ್ದರು. ಗಾಂಧೀಜಿಯವರ ಪ್ರೇರಣೆಯಿಂದ ಸ್ವಾತಂತ್ರ್ಯ ಹೋರಾಟಕ್ಕೂ ಧುಮುಕಿದ್ದರು.

1964–65ರಲ್ಲಿ ಪಾಕಿಸ್ತಾನ ಯುದ್ಧದಲ್ಲಿ ಗೆದ್ದು ನಮ್ಮ ಶಕ್ತಿ ಏನೆಂಬುದನ್ನು ತೋರಿಸಿ ಕೊಟ್ಟಿದ್ದಾರೆ. ಅವರ ಆದರ್ಶಗಳನ್ನು ನಮ್ಮ ಯುವಜನತೆ ಅಳವಡಿಸಿಕೊಳ್ಳಬೇಕು ಎಂದು ಶಾಸಕರು ಹೇಳಿದರು

ಸ್ವಾತಂತ್ರ್ಯ ಹೋರಾಟಗಾರರಾದ ರೇವಣ್ಣ, ನಾಗರತ್ನಮ್ಮ ಜವರೇಗೌಡ, ಪ್ರೇಮಾವತಿ, ಗಿರಿಜಾ ಅಶ್ವಥ್‌ನಾರಾಯಣ್ ಅವರುಗಳನ್ನು ಸನ್ಮಾನಿಸಿ, ಗೌರವಿಸಲಾಯಿತು.

ಈ ಸಂದರ್ಭದಲ್ಲಿ 23ನೇ ವಾರ್ಡಿನ ಕಾಂಗ್ರೆಸ್ ಮುಖಂಡರಾದ ರಾಜೀವ್, ಮಹದೇವ್, ಶ್ರೀನಿವಾಸ್, ಸುಂದರ್ ಕುಮಾರ್, ಜ್ಞಾನೇಶ್, ನವೀನ್, ವಿಘ್ನೇಶ್ವರ ಭಟ್, ಲಕ್ಷ್ಮಿ, ಸುದರ್ಶನ್, ಮಂಜುಳಾ, ಮಂಗಳ ಮತ್ತಿತರ ಕಾರ್ಯಕರ್ತರು ಹಾಜರಿದ್ದರು.

ಇಡೀ ಜಗತ್ತೆ ಗಾಂಧಿ ಮಾರ್ಗಕ್ಕೆ ಮನ್ನಣೆ ನೀಡಿದೆ

ಮೈಸೂರು, ಅ. 2– ಮಹಾತ್ಮ ಗಾಂಧೀಜಿಯವರು ತೋರಿದ ಮಾರ್ಗವನ್ನು ಅನುಸರಿಸದೆ ನಾವು ಬದುಕಲು ಸಾಧ್ಯವಿಲ್ಲ ಎಂದು ಇಂದು ಜಗತ್ತೇ ಒಪ್ಪಿಕೊಂಡಿದೆ ಎಂದು ನಿವೃತ್ತ ಪ್ರಾಂಶುಪಾಲ ನಾಗರಾಜು ಹೇಳಿದರು.

ಮೈಸೂರು ನಗರದ ವಿಜಯನಗರ 2ನೇ ಹಂತದಲ್ಲಿರುವ ಸಮರ್ಥನಂ ವಿಶೇಷ ಶಾಲೆ ಹಾಸ್ಟೆಲ್ ಆವರಣದಲ್ಲಿ ನಡೆದ ಗಾಂಧಿ ಜಯಂತಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಜನ್ಮದಿನಾಚರಣೆಯ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.



154 ವರ್ಷಗಳ ನಂತರವೂ ಗಾಂಧೀಜಿ ಜೀವಂತವಾಗಿರುವುದು ಮಾತ್ರವಲ್ಲದೆ ಜಾಗತಿಕ ವೇದಿಕೆಯಲ್ಲಿ ಪ್ರಮುಖರಾಗಿದ್ದಾರೆ ಎಂಬುದು ದೊಡ್ಡ ವಿಷಯವಾಗಿದೆ. ಅವರು ಇಡೀ ಜಗತ್ತಿಗೆ ಸಕಾರಾತ್ಮಕ ಸಂದೇಶವನ್ನು ಸಾರಿದ್ದಾರೆ, ದಕ್ಷಿಣ ಆಫ್ರಿಕಾದಿಂದ ಭಾರತಕ್ಕೆ ಹಿಂದಿರುಗಿದ ಮೇಲೆ ಶ್ರೀಮಂತ ಉಡುಪುಗಳನ್ನು ಗಾಂಧೀಜಿ ಎಂದಿಗೂ ಧರಿಸಲಿಲ್ಲ. ಭಾರತದ ಅತ್ಯಂತ ಬಡ ಮನುಷ್ಯ ಒಪ್ಪಿಕೊಳ್ಳಬಹುದಾದ ಉಡುಪುಗಳನ್ನು ಮಾತ್ರ ಅವರು ಧರಿಸುತ್ತಿದ್ದರು. ಮನೆಯಲ್ಲಿಯೇ ನೇಯ್ದ ಖಾದಿ ಬಟ್ಟೆಗಳನ್ನು ಧರಿಸುವುದನ್ನು ಗಾಂಧೀಜಿ ಪ್ರೋತ್ಸಾಹಿಸುತ್ತಿದ್ದರು ಎಂದು ಹೇಳಿದರು. ಸಮರ್ಥನಂ ಸಂಸ್ಥೆ, ಮೈಸೂರು ವಿಭಾಗೀಯ ಸಂಯೋಜಕ ಎಂ. ಶಿವರಾಜು ಮಾತನಾಡಿ, ಮಹಾತ್ಮ ಗಾಂಧೀಜಿಯವರ ವಿಚಾರಗಳು ಕೇವಲ ಭಾರತಕ್ಕೆ ಮಾತ್ರವಲ್ಲದೇ ಇಡೀ ವಿಶ್ವಕ್ಕೆ ಅವಶ್ಯಕವಾಗಿವೆ. ಗಾಂಧೀಜಿಯವರು ಸತ್ಯ, ಅಹಿಂಸೆಯ ಮಾರ್ಗವನ್ನೇ ಸ್ವಾತಂತ್ರ್ಯ ಚಳವಳಿಗೆ ಅನುಸರಿಸಿದರು. ಶ್ರೀಮಂತ ಕುಟುಂಬದಲ್ಲಿ ಜನಿಸಿದರೂ, ಅತ್ಯಂತ ಸರಳತೆಯ ಜೀವನ ನಡೆಸಿದರು. ಪರಕೀಯರ ಮುಷ್ಟಿಯಲ್ಲಿದ್ದ ದೇಶಕ್ಕೆ ಸ್ವಾತಂತ್ರ್ಯ ಗಳಿಸುವುದು ಸುಲಭದ ಮಾತಾಗಿರಲಿಲ್ಲ. ಇಂತಹ ಕಠಿಣ ಪರಿಸ್ಥಿತಿಯಲ್ಲಿ, ಸತ್ಯಾಗ್ರಹದ ಮೂಲಕ, ಅಹಿಂಸೆಯ ಮಾರ್ಗದಲ್ಲಿ ಹೋರಾಟ ನಡೆಸಿ, ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟವರು ಗಾಂಧೀಜಿಯವರು. ವರ್ಷಾನುಗಟ್ಟಲೆ ನಡೆದ ಸ್ವಾತಂತ್ರ್ಯ ಚಳುವಳಿಯಲ್ಲಿ ಸಾವಿರಾರು ಜನರ ತ್ಯಾಗ ಬಲಿದಾನದಿಂದ, ಸ್ವಾತಂತ್ರ್ಯ ಗಳಿಕೆಯ ಜೊತೆಗೆ ಸದೃಢ ಪ್ರಜಾಪ್ರಭುತ್ವ ನಿರ್ಮಾಣ ಸಾಧ್ಯವಾಯಿತು ಎಂದು ತಿಳಿಸಿದರು.

ಶಾಲೆಯ ಮುಖ್ಯೋಪಾಧ್ಯಾಯಿನಿ ಭುವನಾರಂಭ, ವಿದ್ಯಾರ್ಥಿ ದೀಪು, ವಿಶೇಷ ಶಿಕ್ಷಕಿರಾದ ಪಿ. ಪದ್ಮ, ರಾಘವೇಂದ್ರ, ಸಿಬ್ಬಂದಿಗಳಾದ ಪವಿತ್ರ, ಮಂಜುಳ, ದರ್ಶಿನಿ, ಅನುಪಮ, ಶರೀಫ್ ಮತ್ತಿಗಟ್ಟಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಅಹಿಂದ ಸಂಘಟನೆ ವತಿಯಿಂದ ಮೈಸೂರಿನ ನಾರಾಯಣಶಾಸ್ತ್ರಿ ರಸ್ತೆಯಲ್ಲಿರುವ ಸ್ವಾತಂತ್ರ್ಯ ಹೋರಾಟಗಾರರ ಉದ್ಯಾನವನದಲ್ಲಿರುವ ಗಾಂಧಿ ಪ್ರತಿಮೆಗೆ ಮಾಲಾರ್ಪಣೆ ಮಾಡಲಾಯಿತು. ಈ ವೇಳೆ ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್, ಮಾಜಿ ಉಪ ಮೇಯರ್ ಮಹದೇವಪ್ಪ, ಮಂಚೇಗೌಡನ ಕೊಪ್ಪಲಿನ ರವಿ, ವರುಣ ಮಹದೇವ್, ರಾಜೀವ, ಕೇಬಲ್ ನಾಗರಾಜು, ವಿನಯ್ ಕಣಗಾಲ್, ಎಸ್.ಎನ್. ರಾಜೇಶ್, ಲೋಕೇಶ್, ಮಂಜು ಮತ್ತಿತರರು ಉಪಸ್ಥಿತರಿದ್ದರು.





ಮೈಸೂರು ಕುವೆಂಪುನಗರದ ವಿಶ್ವಮಾನವ ಜೋಡಿ ರಸ್ತೆಯಲ್ಲಿರುವ ನಾಗರಿಕ ವೇದಿಕೆಯ ಪೂರ್ಣಪ್ರಜ್ಞಾ ವಿದ್ಯಾ ಕೇಂದ್ರ ಶಾಲೆಯಲ್ಲಿ ಮಹಾತ್ಮಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರೀಯವರ ಹುಟ್ಟುಹಬ್ಬವನ್ನು ಆಚರಿಸಲಾಯಿತು. ಶಾಲಾ ಸಮಿತಿಯ ಅಧ್ಯಕ್ಷ ಜೆ. ಲೋಕೇಶ್, ನಾಗರಿಕ ವೇದಿಕೆ ಅಧ್ಯಕ್ಷ ಶ್ರೀರಂಗಯ್ಯ, ಕಾರ್ಯದರ್ಶಿ ಕುಳ್ಳೇಗೌಡ, ಮುಖ್ಯೋಪಾಧ್ಯಾಯಿನಿ ಶ್ಯಾಮಲಾ ದೇವಿ, ಶಿಕ್ಷಕಿಯರು, ಮಕ್ಕಳು ಉಪಸ್ಥಿತರಿದ್ದರು.

ಶ್ರಮದಾನ ಮಾಡಿ ಗಾಂಧಿ ಜಯಂತಿ ಆಚರಣೆ

ಮೈಸೂರು, ಅ. 2– ಮೈಸೂರು ಒಂಟಿಕೊಪ್ಪಲು ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ವಿದ್ಯಾರ್ಥಿಗಳು ಶ್ರಮದಾನ ಮಾಡುವ ಮೂಲಕ ಮಹಾತ್ಮ ಗಾಂಧಿಯವರ 154ನೇ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಿದರು.



ಕಾಲೇಜಿನ ವಿದ್ಯಾರ್ಥಿ–ವಿದ್ಯಾರ್ಥಿಗಳು, ಉಪನ್ಯಾಸಕರು ಮತ್ತು ಪ್ರಾಂಶುಪಾಲರು ಈ ಶ್ರಮದಾನದಲ್ಲಿ ಪಾಲ್ಗೊಂಡು ಕಾಲೇಜಿನ ಸುತ್ತಮುತ್ತಲ ಆವರಣದ ಗಿಡಗಂಟಿಗಳನ್ನು ತೆರವುಗೊಳಿಸಿದರು. ಕಸ ಕಡ್ಡಿಗಳನ್ನು ಗುಡಿಸಿ ಪರಿಸರವನ್ನು ಸ್ವಚ್ಛಗೊಳಿಸಿದರು. ತದನಂತರ ನಡೆದ ಮಹಾತ್ಮ ಗಾಂಧೀಜಿಯವರ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ವಿದ್ಯಾರ್ಥಿನಿಯರಾದ ಕೀರ್ತನ, ಸ್ಪಂದನ ಮತ್ತು ಅಮೂಲ್ಯರವರು ಕ್ರಮವಾಗಿ ಭಗವದ್ಗೀತೆ, ಬೈಬಲ್, ಕುರಾನ್ ಮುಂತಾದ ಪವಿತ್ರ ಗ್ರಂಥಗಳ ಪ್ರಮುಖ ಭಾಗ ಪಠನ ಮಾಡಿ, ಸರ್ವಧರ್ಮ ಪ್ರಾರ್ಥನೆಯನ್ನು ನಡೆಸಿಕೊಟ್ಟರು. ಮಹಾತ್ಮ ಗಾಂಧಿಯವರ ಜೀವನ ಮೌಲ್ಯಗಳ ಕುರಿತು ಹಿರಿಯ ಉಪನ್ಯಾಸಕರಾದ ಕುಮಾರ್ ಮತ್ತು ವಿದ್ಯಾರ್ಥಿನಿಯರು ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಸಿ.ಚಲುವಯ್ಯರವರು, ಬದಲಾದ ಕಾಲಘಟ್ಟದಲ್ಲಿ ಗಾಂಧೀಜಿಯವರ ಪ್ರಸ್ತುತತೆ ಕುರಿತು ವಿದ್ಯಾರ್ಥಿಗಳಿಗೆ ಹಿತವಚನ ನುಡಿದರು. ಉಪನ್ಯಾಸಕಿ ಮಂಜುಳ ಕಾರ್ಯಕ್ರಮವನ್ನು ನಿರೂಪಿಸಿದರು. ಕಾಲೇಜಿನ ಉಪನ್ಯಾಸಕರು ಮತ್ತು ಸಿಬ್ಬಂದಿ ವರ್ಗದವರು ಹಾಜರಿದ್ದರು.

ನ್ಯಾಯಾಲಯ ಮುಂಭಾಗ ಪೌರಕಾರ್ಮಿಕರನ್ನು ಸನ್ಮಾನಿಸುವ ಮೂಲಕ ಗಾಂಧಿ ಜಯಂತಿ ಆಚರಣೆ



ಮೈಸೂರು, ಅ. 2– ಮೈಸೂರಿನ ಜಯಕರ್ನಾಟಕ ಸಂಘಟನೆ ವತಿಯಿಂದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ 154ನೇ ಜಯಂತಿಯ ಅಂಗವಾಗಿ ಮೈಸೂರು ನ್ಯಾಯಾಲಯದ ಮುಂಭಾಗವಿರುವ ಮಹಾತ್ಮ ಗಾಂಧೀಜಿ ಪುತ್ಥಳಿಗೆ ಮಾಲಾರ್ಪಣೆ ಮಾಡಿ, ಪೌರಕಾರ್ಮಿಕರಾದ ಮಲ್ಲಿಗೆ.ಸಿ ಮತ್ತು ಜಿ.ಲಕ್ಷ್ಮಿ ಅವರನ್ನು ಸನ್ಮಾನಿಸುವ ಮೂಲಕ ಸ್ವಚ್ಛ ಭಾರತ, ಸ್ವಚ್ಛ ಮೈಸೂರು ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಜಯಕರ್ನಾಟಕ ಸಂಘಟನೆಯ ಮೈಸೂರು ಜಿಲ್ಲಾಧ್ಯಕ್ಷ ಶ್ರೀಧರ ನಾಯಕ ಮಾತನಾಡಿ, ಮಹಾತ್ಮ ಗಾಂಧೀಜಿ ದೇಶದ ಸ್ವಾತಂತ್ರ್ಯಕ್ಕಾಗಿ ಅಹಿಂಸಾ ಮಾರ್ಗದಲ್ಲಿ ಶಾಂತಿಯುತ ಹೋರಾಟ ನಡೆಸಿದರು. ವ್ಯಸನಮುಕ್ತ ಭಾರತಕ್ಕೆ ಜನಸಾಮಾನ್ಯರು ಕೈಜೋಡಿಸಬೇಕು. ಸ್ವದೇಶಿ ವಸ್ತುಗಳನ್ನು ಹೆಚ್ಚಾಗಿ ಬಳಸಬೇಕು. ಸ್ವಚ್ಛ ಭಾರತ ನಿರ್ಮಾಣದ ಕನಸು ಕಂಡವರು ಮಹಾತ್ಮ ಗಾಂಧೀಜಿ. ಹಾಗಾಗಿ ನಮ್ಮ ಮೈಸೂರು ದೇಶದಲ್ಲೇ ಸ್ವಚ್ಛನಗರಿ ಬಿರುದು ಪಡೆಯಲು ಪೌರಕಾರ್ಮಿಕರ ಪಾತ್ರ ಪ್ರಮುಖವಾದುದ್ದು. ಅವರನ್ನು ಸನ್ಮಾನಿಸುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ ಎಂದರು. ರಾಜ್ಯ ಸಂಘಟನಾ ಕಾರ್ಯದರ್ಶಿ ವಿಜಯಗೌಡ, ನಗರಪಾಲಿಕೆ ಸದಸ್ಯೆ ಸೌಮ್ಯ ಉಮೇಶ್, ಜಯಕರ್ನಾಟಕ ಸಂಘಟನೆಯ ರಾಜ್ಯ ಸಂಘಟನಾ ಕಾರ್ಯದರ್ಶಿ ವಿಜಯಗೌಡ, ಶ್ರೀನಿವಾಸ್, ರಾಘವೇಂದ್ರ, ಸಾಮಾಜಿಕ ಹೋರಾಟಗಾರ ಅಜಯ್ ಶಾಸ್ತ್ರಿ, ಉಪಾಧ್ಯಕ್ಷ ಕಾಂತರಾಜು, ನಗರಾಧ್ಯಕ್ಷ ಹರ್ಷ, ಕಾರ್ಯದರ್ಶಿಗಳಾದ ಮಂಜುನಾಥ್, ವರಲಕ್ಷ್ಮಿ, ಭಾಗ್ಯವತಿ, ರವಿಕುಮಾರ್, ಸಂಜಯ್ ಸಿಂಗ್, ಮಾದೇಶ್ ಮತ್ತಿತರರು ಉಪಸ್ಥಿತರಿದ್ದರು.

ಜಾಥಾ ಮೂಲಕ ವನ್ಯಜೀವಿ, ಪರಿಸರ ಸಂರಕ್ಷಣೆ ಸಂದೇಶ ಸಾರಿದ ವಿದ್ಯಾರ್ಥಿಗಳು

● ಮೈಸೂರು ಮೃಗಾಲಯದಿಂದ 69ನೇ ವನ್ಯಜೀವಿ ಸಪ್ತಾಹ ● ಛಾಯಾಚಿತ್ರ, ಚಿತ್ರಕಲಾ ಸ್ಪರ್ಧೆ: ಪ್ರದರ್ಶನದ ಮೂಲಕವೂ ಜಾಗೃತಿ

ಮೈಸೂರು,ಅ.2(ಎಂಟಿವೈ)– ಮೈಸೂರು ಮೃಗಾಲಯದ ವತಿಯಿಂದ ಸೋಮವಾರ ಮೈಸೂರಲ್ಲಿ 69ನೇ ವನ್ಯಜೀವಿ ಸಪ್ತಾಹದ ಅಂಗವಾಗಿ ಕಾಲ್ನಡಿ ಜಾಥದ ಮೂಲಕ ಪರಿಸರ ಹಾಗೂ ವನ್ಯಜೀವಿಗಳ ಸಂರಕ್ಷಣೆ ಕುರಿತಂತೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಯಿತು.

ಮೈಸೂರು ಅರಮನೆಯ ಕೋಟೆ ಆಂಜನೇಯಸ್ವಾಮಿ ದೇವಾಲಯದ ಮುಂಭಾಗ ಆಯೋಜಿಸಿದ್ದ ಜಾಥದಲ್ಲಿ ನಗರದ ವಿವಿಧ ಶಾಲೆಯ ನೂರಾರು ವಿದ್ಯಾರ್ಥಿಗಳು, ಪರಿಸರ ಪ್ರೇಮಿಗಳು, ಸ್ವಯಂಸೇವಕರು ಪಾಲ್ಗೊಂಡಿದ್ದರು. ಇದರಲ್ಲಿ ಹುಲಿ ಹಾಗೂ ಕರಡಿ ವೇಷಧಾರಿಗಳು ತಮಟೆ ತಂಡದ ಕಲಾವಿದರು ಪಾಲ್ಗೊಂಡು ಗಮನ ಸೆಳೆದರು. ಅರಣ್ಯ ಇಲಾಖೆ ಸಿಬ್ಬಂದಿ, ಸ್ವಯಂ ಸೇವಕರು ಭಾಗವಹಿಸಿದ್ದರು.

ವಿದ್ಯಾರ್ಥಿಗಳು 'ಕಾಡು ಬೆಳೆಸಿ ನಾಡು ಉಳಿಸಿ, ಕಾಡಿದ್ದರೆ ನಾಡು, ಪ್ಲಾಸ್ಟಿಕ್ ಮುಕ್ತ ಪರಿಸರ, ವನ್ಯಜೀವಿಗಳಿಗೆ ತೊಂದರೆ ಕೊಡಬೇಡಿ, ಅರಣ್ಯ ಸಂರಕ್ಷಣೆ ನಮೆಲ್ಲರ ಹೊಣೆ, ಪ್ರಕೃತಿಯನ್ನು ಕಲುಷಿತ ಮಾಡಬೇಡಿ ಘೋಷಣಾ ಫಲಕ ಹಿಡಿದು ಸಾಗಿ ಗಮನ ಸೆಳೆದರು. ಹಾರ್ಡಿಂಗ್ ವೃತ್ತ, ಬಿ.ಎನ್.ರಸ್ತೆ, ಇಟ್ಟಿಗೆಗೂಡು ಮೂಲಕ ಮೃಗಾಲಯವನ್ನು ತಲುಪಿದ ವಿದ್ಯಾರ್ಥಿಗಳು ಅಲ್ಲಿನ ಆ್ಯಂಪಿಥಿಯೇಟರ್‌ನಲ್ಲಿ ಆಯೋಜಿಸಿದ್ದ ವನ್ಯಜೀವಿಗಳ ಛಾಯಾಚಿತ್ರ ಪ್ರದರ್ಶನ ಹಾಗೂ ಮೃಗಾಲಯದ ಪ್ರಾಣಿ–ಪಕ್ಷಿಗಳನ್ನು ಕಣ್ತುಂಬಿಕೊಂಡರು. ಜಾಥಗೆ ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ ಚಾಲನೆ ನೀಡಿ ಮಾತನಾಡಿ, ವನ್ಯಜೀವಿ ಸಂರಕ್ಷಣೆ ಕುರಿತಂತೆ ಜನರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ವನ್ಯಜೀವಿ ಸಪ್ತಾಹದಲ್ಲಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಿ ವನ್ಯಜೀವಿಗಳ ಮಹತ್ವ ಸಾರಲಾಗುತ್ತಿದೆ. ಜೊತೆಗೆ ಮೈಸೂರು ಮೃಗಾಲಯದ ವತಿಯಿಂದ ಅರ್ಥಪೂರ್ಣ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಶ್ಲಾಘಿಸಿದರು.



ಛಾಯಾಚಿತ್ರ ಪ್ರದರ್ಶನ: ವನ್ಯಜೀವಿ ಸಪ್ತಾಹದ ಅಂಗವಾಗಿ ಮೈಸೂರು ಮೃಗಾಲಯದಲ್ಲಿ ವನ್ಯಜೀವಿ ಛಾಯಾಚಿತ್ರ ಸ್ಪರ್ಧೆ ಆಯೋಜಿಸಲಾಗಿತ್ತು. ಎಕ್ಸ್–ಸಿಟು ವಿಭಾಗದಲ್ಲಿ 46 ಛಾಯಾಚಿತ್ರಗಳು, ಇನ್–ಸಿಟು ವಿಭಾಗದಲ್ಲಿ 82 ಛಾಯಾಚಿತ್ರ ಸೇರಿದಂತೆ ಒಟ್ಟು 128 ಛಾಯಾಚಿತ್ರಗಳನ್ನು 52 ಛಾಯಾಗ್ರಾಹಕರು ಸಲ್ಲಿಸಿದ್ದರು. ಈ ಛಾಯಾಚಿತ್ರವನ್ನು ಪ್ರದರ್ಶನವನ್ನು ಡಿಸಿ, ಇನ್ನಿತರೆ ಅಧಿಕಾರಿಗಳು, ವಿದ್ಯಾರ್ಥಿಗಳು, ಪ್ರವಾಸಿಗರು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು. ವಿದ್ಯಾರ್ಥಿಗಳು, ಸ್ವಯಂ ಸೇವಕರು ವನ್ಯಜೀವಿ ಸಂರಕ್ಷಣೆಯ ಪ್ರತಿಜ್ಞಾವಿಧಿ ಸ್ವೀಕರಿಸಿದರು.

ವಿಜೇತರು: ಡಾ.ಹೆಚ್.ವಿ. ಸಂತೃಪ್ತ್ ಹಾಗೂ ಯಶಸ್ ನಾರಾಯಣ್ ಮೌಲ್ಯಮಾಪನ ಮಾಡಿ, ಅತ್ಯುತ್ತಮ ಛಾಯಾಚಿತ್ರಗಳನ್ನು ಆಯ್ಕೆ ಮಾಡಿದರು. ಅವುಗಳಲ್ಲಿ ಮೃಗಾಲಯದ ಹೊರಗೆ ತೆಗೆದ ಪ್ರಾಣಿ–ಪಕ್ಷಿಗಳ ಚಿತ್ರ ವಿಭಾಗದಲ್ಲಿ ವರದನಾಯಕ ಟಿ.ಪಿ ಪ್ರಥಮ, ಉಮಾಶಂಕರ್ ಬಿ.ಎನ್ ದ್ವಿತೀಯ, ಶಿವಕುಮಾರ್ ಬಿ., ತೃತೀಯ, ಶಶಾಂಕ್ ಹೆಚ್.ಆರ್., ಮಧುಸೂನ್ ಎಸ್.ಆರ್. ಚಿರಾಗ್ ರಾಜ್ ಮತ್ತು ಸಾಗರ್ ಸುರೇಶ್ ಸಮಾಧಾನಕರ ಬಹುಮಾನಕ್ಕೆ ಭಾಜನರಾಗಿದ್ದಾರೆ.

ಮೃಗಾಲಯದಲ್ಲಿ ತೆಗೆದ ವನ್ಯಜೀವಿಗಳ ಛಾಯಾಚಿತ್ರ ವಿಭಾಗದಲ್ಲಿ ಬಿ.ಉಮೇಶ್ ಪ್ರಥಮ, ಎಂ.ಎಸ್.ಬಸವಣ್ಣ(ಅನುರಾಗ್ ಬಸವರಾಜ್) ದ್ವಿತೀಯ, ಎಂ.ಆರ್.ರೂಪೇಶ್ ತೃತೀಯ, ಗಿರಿಧರ್ ವಿ, ಜಿ.ಎಸ್.ರವಿಶಂಕರ್, ಎಸ್.ಆರ್. ಮಧುಸೂದನ್, ವಿಶ್ರುತ್.ಸಿ ಸಮಾಧಾನಕರ ಬಹುಮಾನಗಳನ್ನು ಪಡೆದಿದ್ದಾರೆ.

ಚಿತ್ರಕಲಾ ಸ್ಪರ್ಧೆ: ಶಾಲಾ ವಿದ್ಯಾರ್ಥಿಗಳಿಗಾಗಿ ಮೃಗಾಲಯದ ವತಿಯಿಂದ 5ನೇ ತರಗತಿಯಿಂದ ಪಿಯುಸಿವರೆಗಿನ ವಿದ್ಯಾರ್ಥಿಗಳಿಗೆ ಮೂರು ವಿಭಾಗದಲ್ಲಿ ಚಿತ್ರಕಲಾ ಸ್ಪರ್ಧೆ ಆಯೋಜಿಸಲಾಗಿತ್ತು. ಅದರಲ್ಲಿ 'ಭಾರತದ ದೊಡ್ಡ ಬೆಕ್ಕುಗಳನ್ನು ಉಳಿಸಿ', ದೊಡ್ಡ ಬೆಕ್ಕುಗಳನ್ನು ಹಾಗೂ ಅವುಗಳ ಆವಾಸ ಸ್ಥಾನ ಸಂರಕ್ಷಿಸಿ' ಮತ್ತು 'ಘರ್ಜನೆ ಮೌನವಾಗುವ ಮುನ್ನ ಕಾರ್ಯಪ್ರವೃತ್ತ ರಾಗೋಣ' ವಿಷಯದಲ್ಲಿ ಚಿತ್ರ ರಚನೆಗೆ ಸೂಚನೆ ನೀಡಲಾಗಿತ್ತು. ಈ ಸ್ಪರ್ಧೆಯಲ್ಲಿ 10ನೇ ತರಗತಿ ಹಾಗೂ ಪಿಯುಸಿ ವಿದ್ಯಾರ್ಥಿಗಳ ವಿಭಾಗದಲ್ಲಿ ಬಿ.ತೇಜಸ್ವಿನಿ ಪ್ರಥಮ, ಜೆ.ರೇಣು ದ್ವಿತೀಯ, ಎಂ.ಆರ್. ಕುಮಾರ್‌ನಾಯಕ್ ತೃತೀಯ ಬಹುಮಾನ, 7ರಿಂದ 9ನೇ ತರಗತಿ ವಿಭಾಗದಲ್ಲಿ ಶ್ರೇಯಸ್ ಅನಿಕೇತ್ ಜೋಶಿ ಪ್ರಥಮ, ಕೆ.ದೀಕ್ಷ ದ್ವಿತೀಯ, ಪೃಥ್ವಿ ಪೊನ್ನಪ್ಪ ಅಲಮೇಡ ತೃತೀಯ ಬಹುಮಾನ ಪಡೆದರೆ, 5 ಮತ್ತು 6ನೇ ತರಗತಿ ವಿಭಾಗದಲ್ಲಿ ಪತ್ರಲಿಕಾ ಮಹತ ಪ್ರಥಮ, ಕ್ಷಿತಿ ಎಸ್.ಪಾಟೀಲ್ ದ್ವಿತೀಯ ಹಾಗೂ ಮೊಹಮದ್ ಫಯಾಜ್ ಅನ್ಸಾರಿ ತೃತೀಯ ಬಹುಮಾನ ಪಡೆದರು. ಛಾಯಾಚಿತ್ರ ಹಾಗೂ ಚಿತ್ರಕಲಾ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಅ.8ರಂದು ನಡೆಯುವ ವನ್ಯಜೀವಿ ಸಪ್ತಾಹದ ಸಮಾರೋಪ ಸಮಾರಂಭದಲ್ಲಿ ಬಹುಮಾನ ವಿತರಿಸಲಾಗುತ್ತದೆ. ಈ ಸಂದರ್ಭದಲ್ಲಿ ಡಿಸಿಎಫ್‌ಗಳಾದ ಸೌರಭ್‌ಕುಮಾರ್, ಡಾ.ಬಸವರಾಜು, ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕ ಡಿ.ಮಹೇಶ್ ಕುಮಾರ್, ಸಹಾಯಕ ನಿರ್ದೇಶಕಿ ರೋಷಿಣಿ, ಆರ್‌ಎಫ್‌ಒ, ಡಿಆರ್‌ಎಫ್‌ಒ, ಗಾರ್ಡ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ತಿ.ನರಸೀಪುರ ಪುರಸಭೆ, ಅಂಗನವಾಡಿಯಲ್ಲಿ ಗಾಂಧಿ ಜಯಂತಿ

• ಗ್ರಾಮಗಳು ಅಭಿವೃದ್ಧಿಯಾದರೇ ದೇಶ ಅಭಿವೃದ್ಧಿ: ನಂಜುಂಡಸ್ವಾಮಿ • ದೇಶಕ್ಕೆ ಗಾಂಧಿ ಒಬ್ಬರೇ ಮಹಾತ್ಮ: ಕಿರಣ್





ತಿ.ನರಸೀಪುರ, ಅ.2– ಪಟ್ಟಣದ ಪುರಸಭಾ ಕಚೇರಿ ಹಾಗೂ ಸುಶೀಲಮ್ಮ ಕಾಲೋನಿಯ ಅಂಗನವಾಡಿಯಲ್ಲಿ ರಾಷ್ಟ್ರಪಿತ ಮಹಾತ್ಮಗಾಂಧೀಜಿ ಅವರ 154ನೇ ಜಯಂತಿಯನ್ನು ಸೋಮವಾರ ಆಚರಿಸಲಾಯಿತು.

ಪುರಸಭೆ: ಗ್ರಾಮಗಳ ಅಭಿವೃದ್ಧಿಯಾದರೇ ದೇಶ ಅಭಿವೃದ್ಧಿ ಹೊಂದಲಿದೆ ಎನ್ನುವ ಸರಳ ನೀತಿ ತಿಳಿಸಿಕೊಟ್ಟವರು ಮಹಾತ್ಮ ಗಾಂಧಿ ಎಂದು ಪುರಸಭಾ ಮಾಜಿ ಅಧ್ಯಕ್ಷ ಟಿ.ಎಂ.ನಂಜುಂಡಸ್ವಾಮಿ ತಿಳಿಸಿದರು.

ಪಟ್ಟಣದ ಪುರಸಭಾ ಕಚೇರಿಯಲ್ಲಿ ನಡೆದ ಗಾಂಧಿ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಮಾಜದ ಕಟ್ಟ ಕಡೆ ವ್ಯಕ್ತಿಯೂ ಘನತೆ ಮತ್ತು ಗೌರವದಿಂದ ಬಾಳಬೇಕು ಎನ್ನುವುದು ಗಾಂಧೀಜಿ ಅವರ ಆಶಯವಾಗಿತ್ತು ಹೀಗಾಗಿ ಸಮಾಜದ ಕಟ್ಟ ಕಡೆ ವ್ಯಕ್ತಿಯಂತೆ ಅರೆ ಬೆತ್ತಲೆಯಾಗಿ ಉಡುಪು ಧರಿಸುತ್ತಿದ್ದರು. ನುಡಿದಂತೆ ನಡೆಯುವುದು ಗಾಂಧಿ ಅವರ ಬದುಕಾಗಿತ್ತು ಎಂದರು.

ಮಹಾತ್ಮಗಾಂಧಿ ಅಪರೂಪದ ಸಂತರಾಗಿದ್ದರು. ಅವರ ಅಹಿಂಸಾ ಮಾರ್ಗದ ಸ್ವಾತಂತ್ರ್ಯ ಚಳವಳಿ ಭಿನ್ನವಾದದ್ದು. ನೆಹರು ಅವರು ಪ್ರಧಾನಿಯಾಗಿ ಪ್ರಮಾಣವಚನ ಸ್ವೀಕರಿಸುವ ದಿನ ಗಾಂಧಿಯವರು ದೆಹಲಿಯಲ್ಲಿ ಇರಲಿಲ್ಲ. ಬದಲಿಗೆ ಕೋಲ್ಕತ್ತಾದಲ್ಲಿ ದೇಶ ವಿಭಜನೆಯಿಂದಾದ ಅನಾಹುತಗಳಲ್ಲಿ ನೊಂದವರ ಕಣ್ಣೀರು ಒರೆಸುತ್ತಿದ್ದರು ಎಂದು ಅವರ ಸರಳತೆ ಮತ್ತು ಸೌಹಾರ್ದ ಬದುಕನ್ನು ತಿಳಿಸಿದರು.

ಈ ವೇಳೆ ಸದಸ್ಯರಾದ ಬಾದಾಮಿ ಮಂಜು. ಎಸ್.ಕೆ.ಕಿರಣ್, ಸಿಸ್ಟಮ್ ಸಿದ್ದು, ರೂಪ ಪರಮೇಶ್, ಮುಖ್ಯಾಧಿಕಾರಿ ವಸಂತ ಕುಮಾರಿ, ಮುಖಂಡರಾದ ಮಾದೇಶ್, ಹೇಮಂತ್ ಕುಮಾರ್, ಶ್ರೀಕಂತ, ನೌಕರ ರಾಜೇಂದ್ರ, ರವಿ ಮತ್ತಿತರಿದ್ದರು.

ಅಂಗನವಾಡಿ: ದೇಶಕ್ಕೆ ಗಾಂಧಿ ಒಬ್ಬರೇ ಮಹಾತ್ಮ. ಯಾವುದೇ ಪ್ರಚಾರ ಸಾಮಾಗ್ರಿ ಮತ್ತು ತಂತ್ರಜ್ಞಾನ ಇಲ್ಲದೇ ಕೇವಲ ಅಹಿಂಸೆ ಮತ್ತು ತಮ್ಮ ಬದುಕಿನ ಸರಳತೆಯಿಂದಲೇ ಮಹಾತ್ಮಗಾಂಧಿ ವಿಶ್ವದ ಮೂಲೆ ಮೂಲೆಗೆ ತಲುಪಿದರು ಎಂದು ಪುರಸಭಾ ಸದಸ್ಯ ಎಸ್.ಕೆ. ಕಿರಣ್ ಹೇಳಿದರು.

ಪಟ್ಟಣದ ಸುಶೀಲಮ್ಮ ಕಾಲೋನಿಯ ಅಂಗನವಾಡಿಯಲ್ಲಿ ನಡೆದ ಮಹಾತ್ಮ ಗಾಂಧೀಜಿ, ಲಾಲ್ ಬಹದ್ದೂರ್ ಶಾಸ್ತ್ರಿ ಜನ್ಮದಿನದಲ್ಲಿ ಮಾತನಾಡಿ, ಸಮಾಜದಲ್ಲಿ ಎಲ್ಲಾ ಜನರೂ ಶಾಂತಿ, ನೆಮ್ಮದಿಯಿಂದ ಇರಬೇಕು. ಜಾತಿ, ಧರ್ಮ ಎಂದು ಹೊಡೆದಾಡಬಾರದು. ದೇಶ ಇಬ್ಭಾಗವಾಗಬಾರದು ಎಂದು ಹೋರಾಡಿದರು ಎಂದರು.

ಪುರಸಭಾ ಸದಸ್ಯೆ ತೇಜಸ್ವಿನಿ ರಾಜು ಮಾತನಾಡಿ, ಜವಾಹರಲಾಲ್ ನೆಹರು ಅವರು ಸ್ವಾತಂತ್ರ್ಯ ನಂತರ ಮೊದಲ ಪ್ರಧಾನಿಯಾಗಿ ಅಧಿಕಾರ ಸ್ವೀಕರಿಸಿದ ಸಂದರ್ಭ ಮಹಾತ್ಮ ಗಾಂಧಿ ಕೋಲ್ಕತ್ತಾದಲ್ಲಿ ಸತ್ಯಾಗ್ರಹ ಮಾಡುತ್ತಿದ್ದರು. ಅಷ್ಟು ಹೊತ್ತಿಗೆ ದೇಶ ವಿಭಜನೆಯಾಗಿ ಬೆಂಕಿ ಹೊತ್ತಿಕೊಂಡಿತ್ತು. ಅದನ್ನು ಬಗೆಹರಿಸಲು ಸತ್ಯಾಗ್ರಹ ಮಾಡಿದರು. ಜಗತ್ತಿನ 148 ದೇಶಗಳಲ್ಲಿ ಅವರ ಪ್ರತಿಮೆಗಳಿವೆ. ಅವರು ಕೇವಲ ಭಾರತದ ನಾಯಕರಾಗಿರಲಿಲ್ಲ. ಜಗತ್ತಿನಲ್ಲಿಯೇ ಗೌರವಕ್ಕೆ ಪಾತ್ರರಾದ ವಿಶ್ವನಾಯಕರು. ಅಂಥವರ ಜನ್ಮದಿನವನ್ನು ಆಚರಣೆ ಮಾಡುತ್ತಿದ್ದೇವೆ. ಅವರ ಹೋರಾಟ, ಸತ್ಯ, ಧರ್ಮನಿಷ್ಠೆ ಎಲ್ಲವೂ ನಮಗೆ ದಾರಿದೀಪವಾಗಲಿ ಹಾಗೂ ಸ್ಫೂರ್ತಿ ನೀಡಲಿ ಎಂದರು.

ಅಂಗನವಾಡಿ ಶಿಕ್ಷಕಿಯರಾದ ಪಾರ್ವತಿ, ರಾಧಾ ಮತ್ತಿತರರಿದ್ದರು.



ಮೂಗೂರಲ್ಲಿ ಶ್ರೀ ಶನೈಶ್ಚರ ಸ್ವಾಮಿಯ 67ನೇ ವಾರ್ಷಿಕೋತ್ಸವ ಅಂಗವಾಗಿ ಶ್ರೀ ಶನೈಶ್ವರ ಸ್ವಾಮಿಯ ಹೂವಿನ ಪಲ್ಲಕ್ಕಿ ಉತ್ಸವವು ವಿಜೃಂಭಣೆಯಿಂದ ನಡೆಯಿತು.

ಗಾಂಧಿಜೀ ತತ್ವಾದರ್ಶಗಳನ್ನು ಮೈಗೂಡಿಸಿಕೊಳ್ಳಿ

ಪಟ್ಟಣ ಪಂಚಾಯತ್ ಅಧ್ಯಕ್ಷೆ ರಾಧಿಕಾ ಶ್ರೀನಾಥ್ ಸಲಹೆ



ಸರಗೂರು, ಅ.2– ಹಳ್ಳಿಗಳ ಅಭಿವೃದ್ಧಿ ಕನಸು ಕಂಡಿದ್ದ ಮಹಾತ್ಮ ಗಾಂಧೀಜಿ ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಪಟ್ಟಣ ಪಂಚಾಯತ್ ಅಧ್ಯಕ್ಷೆ ರಾಧಿಕಾ ಶ್ರೀನಾಥ್ ಸಲಹೆ ನೀಡಿದರು.

ಪಟ್ಟಣದ ಪಟ್ಟಣ ಪಂಚಾಯತ್ ಆವರಣದಲ್ಲಿ ಆಯೋಜಿಸಿದ್ದ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಅಹಿಂಸೆ ಮೂಲಕ ದೇಶಕ್ಕೆ ಸಾತಂತ್ರ್ಯ ತಂದು ಕೊಟ್ಟ ಮಹಾತ್ಮ ಗಾಂಧೀಜಿ ಅವರ ತತ್ವಾದರ್ಶಗಳನ್ನು ಪ್ರತಿಯೊಬ್ಬರೂ ಮೈಗೂಡಿಸಿಕೊಳ್ಳಬೇಕು. ಅವರು ಹಾಕಿಕೊಟ್ಟ ಹಾದಿಯಲ್ಲಿ ಪ್ರತಿಯೊಬ್ಬರೂ ಸಾಗಬೇಕು ಎಂದು ತಿಳಿಸಿದರು. ಗಾಂಧೀಜಿ ಅಹಿಂಸೆ ಮಾರ್ಗ ಅನುಸರಿಸುತ್ತಿದ್ದರಿಂದ ಅವರ ಜನ್ಮ ದಿನಾಚರಣೆಯನ್ನು ಅಂತರ ರಾಷ್ಟ್ರೀಯ ಅಹಿಂಸೆ ದಿನ ಎಂದು ಆಚರಿಸಲಾಗುವುದು. ಗಾಂಧೀಜಿಯವರು ಗ್ರಾಮೀಣ ಭಾಗಗಳ ಅಭಿವೃದ್ಧಿ ಜೊತೆಗೆ ನಗರಸಭೆ, ಪುರಸಭೆಗಳ ಅಭಿವೃದ್ಧಿಗೆ ಹೆಚ್ಚಿನ ಪ್ರಾಮುಖ್ಯತೆ ನೀಡಿದ್ದರು ಎಂದರು.

ಕಾರ್ಯಕ್ರಮದಲ್ಲಿ ಸ್ಥಾಯಿ ಸಮಿತಿ ಅಧ್ಯಕ್ಷೆ ಉಮಾ, ಸದಸ್ಯರಾದ ಶ್ರೀನಿವಾಸ್, ನೂರಾಳಸ್ವಾಮಿ, ಚಲುವಕೃಷ್ಣ ಸಣ್ಣತಾಯಮ್ಮ ಮುಖಂಡರಾದ ನವೀನ್, ಪುಟ್ಟ ಹನುಮಯ್ಯ ಸ್ವಾಮಿ, ಪಪಂ ಸಿಬ್ಬಂದಿಗಳಾದ ಸಂತೋಷ್, ರಾಮು, ಆರಾಧ್ಯ, ಶಿವಪ್ರಸಾದ್, ಅನೀತಾ, ರಜನಿ, ರಂಜಿತಾ, ಮೇಘನಾ, ಪಳನಿಸ್ವಾಮಿ, ಅರ್ಜನ್, ಸತೀಶ್, ನಾಗೇಶ್ ಮತ್ತು ಪೌರ ಕಾರ್ಮಿಕರು ಹಾಜರಿದ್ದರು.

ಗಾಂಧಿ, ಶಾಸ್ತ್ರಿ ಜಯಂತಿ: ಖೈದಿಗಳಿಗೆ ಅನ್ನಸಂತರ್ಪಣೆ



ನಂಜನಗೂಡು, ಅ.2– ನಗರದ ಕಾರಾಗೃಹದಲ್ಲಿರುವ ಖೈದಿಗಳಿಗೆ ಅನ್ನ ಸಂತರ್ಪಣೆ ಮಾಡುವ ಮೂಲಕ ಮಾಜಿ ಶಾಸಕ ಬಿ.ಹರ್ಷವರ್ಧನ್ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿ ಆಚರಿಸಿದರು.

ಸೋಮವಾರ ತಮ್ಮ ಬೆಂಬಲಿಗರೊಂದಿಗೆ ಜೈಲಿನ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಅವರು ಬಳಿಕ ಖೈದಿಗಳಿಗೆ ಅನ್ನಸಂತರ್ಪಣೆ ನಡೆಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿ, ಪ್ರತಿವರ್ಷ ಗಾಂಧಿ ಜಯಂತಿಯಂದು ಜೈಲಿನ ಖೈದಿಗಳಿಗೆ ಅನ್ನ ಸಂತರ್ಪಣೆ ನಡೆಸುತ್ತಿದೆ. ಈ ವರ್ಷವೂ ಖೈದಿಗಳನ್ನು ಭೇಟಿ ಮಡಿ ಗಾಂಧೀಜೀಯವರ ಅಹಿಂಸೆ, ಆದರ್ಶಗಳನ್ನು ಪಾಲಿಸುವಂತೆ ತಿಳಿಸಿದ್ದೇನೆ ಎಂದರು.

ಈ ಸಂದರ್ಭ ನಗರಸಭೆ ಮಾಜಿ ಅಧ್ಯಕ್ಷ ಮಹದೇವಸ್ವಾಮಿ, ಬಿಜೆಪಿ ಗ್ರಾಮಾಂತರ ಮಂಡಲ ಅಧ್ಯಕ್ಷ ಮಹೇಶ್, ನಗರಾಧ್ಯಕ್ಷ ಶ್ರೀನಿವಾಸರೆಡ್ಡಿ, ವಿನಯ್ ಕುಮಾರ್, ಶಂಕರಪ್ಪ, ಗೋವರ್ಧನ್ ಮತ್ತಿತರರಿದ್ದರು.

ಬದನವಾಳು ಮೂಲ ಸೌಕರ್ಯಕ್ಕೆ ಕ್ರಮ: ದರ್ಶನ್



ನಂಜನಗೂಡು, ಅ.2– ಬದನವಾಳು ಖಾದಿ ಕೇಂದ್ರದ ಆವರಣದಲ್ಲಿ ಕಟ್ಟಡ ದುರಸ್ಥಿ, ಕಾಂಪೌಂಡ್ ಸೇರಿದಂತೆ ಅಗತ್ಯ ಮೂಲ ಸೌಕರ್ಯಗಳಿಗೆ ಸರ್ಕಾರದ ಗಮನ ಸೆಳೆದು ಶೀಘ್ರ ಅಭಿವೃದ್ಧಿ ಕಾರ್ಯ ಕೈಗೊಳ್ಳುವುದಾಗಿ ಶಾಸಕ ದರ್ಶನ್ ಧ್ರುವನಾರಾಯಣ್ ತಿಳಿಸಿದರು.

ಗಾಂಧಿ ಜಯಂತಿ ಹಾಗೂ ಭಾರತ್ ಜೋಡೋ ಯಾತ್ರೆ ನೆನಪಿನಾರ್ಥ ಬದನವಾಳಿನಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸತ್ಯ ಹಾಗೂ ಅಹಿಂಸೆಯ ಕಡೆಗೆ ನಮ್ಮ ನಡಿಗೆ ಎಂಬ ಧ್ಯೇಯ ವಾಕ್ಯದೊಂದಿಗೆ ಗಾಂಧಿ ಜಯಂತಿಯಂದು ನಂಜನಗೂಡಿನಿಂದ ಬದನವಾಳುವರೆಗೆ 12 ಕಿಮೀ ಪಾದಯಾತ್ರೆ ಮಾಡಲಾಗಿದ್ದು, ಆ ಮೂಲಕ ಕಳೆದ ವರ್ಷ ಇದೇ ದಿನ ಕಾಂಗ್ರೆಸ್ ವರಿಷ್ಠ ರಾಹುಲ್ ಗಾಂಧಿ ಭಾರತ್ ಜೋಡೋ ಯಾತ್ರೆ ಮೂಲಕ ಬದನವಾಳಿನಲ್ಲಿ ಭಾಗಿಯಾಗಿದ್ದ ಕ್ಷಣಗಳನ್ನು ಸ್ಮರಿಸಲಾಗಿದೆ. ಇನ್ನು ಬದನವಾಳು ಗ್ರಾಮ ಐತಿಹಾಸಿಕ ಹಿನ್ನೆಲೆ ಹೊಂದಿದ್ದು ಸ್ವಾತಂತ್ರ್ಯ ಪೂರ್ವದಲ್ಲೇ ಮಹಾತ್ಮ ಗಾಂಧೀಜಿಯವರು ಬದನವಾಳಿಗೆ ಭೇಟಿ ನೀಡಿ ಜನರಿಗೆ ಸ್ವಯಂ ಉದ್ಯೋಗಕ್ಕೆ ಸ್ಫೂರ್ತಿ ತುಂಬಿದ್ದರು. ಗಾಂಧೀಜಿಯವರ ಆದರ್ಶಗಳನ್ನು ಮೈಗೂಡಿಸಿಕೊಂಡು ಅಹಿಂಸೆ ಮಾರ್ಗದಲ್ಲಿ ಮುನ್ನಡೆಯುವ ಮೂಲಕ ಸಮಾಜವನ್ನು ಸರ್ವ ಜನಾಂಗದ ಶಾಂತಿಯ ತೋಟವನ್ನಾಗಿ ರೂಪಿಸಲು ಎಲ್ಲರ ಜೊತೆ ಕೈಜೋಡಿಸುವುದಾಗಿ ಹೇಳಿದರು.

ಇದೇ ವೇಳೆ ನಿವೃತ್ತ ಪ್ರಾಧ್ಯಾಪಕ ಪ್ರೊ.ಕೆ.ಟಿ. ವೀರಪ್ಪ ಮುಖ್ಯ ಭಾಷಣ ಮಾಡಿದರು. ಸಮಾರಂಭದಲ್ಲಿ ಶಾಸಕ ಗಣೇಶ್ ಪ್ರಸಾದ್, ಮಾಜಿ ಶಾಸಕ ಕಳಲೆ ಕೇಶಮೂರ್ತಿ, ನಂಜುಂಡಸ್ವಾಮಿ, ಧೀರನ್ ಧ್ರುವನಾರಾಯಣ್, ಕಾಂಗ್ರೆಸ್ ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ಪುಷ್ಪಾ ಅಮರ್‌ನಾಥ್, ಜಿಲ್ಲಾಧ್ಯಕ್ಷೆ ಲತಾ ಸಿದ್ಧಶೆಟ್ಟಿ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಕಾವೇರಪ್ಪ, ಎಸ್.ಸಿ.ಬಸವರಾಜು, ಬಿ.ಕೆ. ರವಿಕುಮಾರ್, ಹಿರೇಹಳ್ಳಿ ಸೋಮೇಶ್, ಜಿಪಂ ಮಾಜಿ ಸದಸ್ಯ ಕೆ.ಮಾರುತಿ, ತಾಪಂ ಮಾಜಿ ಅಧ್ಯಕ್ಷ ಬಿ.ಎಂ.ನಾಗೇಶ್ ರಾಜ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಕುರಹಟ್ಟಿ ಮಹೇಶ್, ಸಿ.ಎಂ.ಶಂಕರ್, ಶ್ರೀಕಂಠ ನಾಯಕ ಇನ್ನಿತರರಿದ್ದರು.

ಅಭಿವೃದ್ಧಿ ಕಾರ್ಯಗಳಿಗೆ ಬೆನ್ನೆಲುಬಾಗಿ ನಿಲ್ಲುತ್ತೇನೆ

ಅಭಿನಂದನಾ ಕಾರ್ಯಕ್ರಮದಲ್ಲಿ ಶಾಸಕ ಅನಿಲ್ ಚಿಕ್ಕಮಾದು



ಹೆಚ್.ಡಿ.ಕೋಟೆ, ಅ.2– ಗ್ರಾಪಂ ಅಧ್ಯಕ್ಷರು, ಉಪಾಧ್ಯಕ್ಷರ ಅಭಿವೃದ್ಧಿ ಕಾರ್ಯಗಳಿಗೆ ಬೆನ್ನೆಲುಬಾಗಿ ನಿಲ್ಲುತ್ತೇನೆ ಎಂದು ಶಾಸಕ ಅನಿಲ್ ಚಿಕ್ಕಮಾದು ತಿಳಿಸಿದರು.

ಪಟ್ಟಣದ ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಹೆಚ್.ಡಿ.ಕೋಟೆ, ಸರಗೂರು ತಾಲೂಕು ನಾಯಕ ಸಮಾಜದ ವತಿಯಿಂದ ಆಯೋಜಿಸಿದ್ದ ನಾಯಕ ಸಮಾಜದ ನೂತನ ಅಧ್ಯಕ್ಷ, ಉಪಾಧ್ಯಕ್ಷರ ಅಭಿನಂದನಾ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ನನ್ನ ತಂದೆ ದಿ.ಚಿಕ್ಕಮಾದು ಅವರ ಆಸೆಯಂತೆ ತಾಲೂಕಿನಲ್ಲಿ ಸದ್ಯದಲ್ಲೇ ವಾಲ್ಮೀಕಿ ಭವನ ಉದ್ಘಾಟನೆಯಾಗಲಿದ್ದು, ಅಲ್ಲಿ ಸಾಮೂಹಿಕ ವಿವಾಹ ಆಯೋಜಿಸುವ ಮೂಲಕ ಸಮುದಾಯದವರಿಗೆ ಅನುಕೂಲ ಕಲ್ಪಿಸಲಾಗುವುದು ಎಂದರು.

ಗ್ರಾಪಂ ಅಧ್ಯಕ್ಷರು, ಉಪಾಧ್ಯಕ್ಷರು ಪಕ್ಷಾತೀತವಾಗಿ ನಿಮ್ಮ ಭಾಗದ ಯಾವುದೇ ಅಭಿವೃದ್ಧಿ ಕೆಲಸಗಳ ಬಗ್ಗೆ ನನ್ನೊಟ್ಟಿಗೆ ಚರ್ಚಿಸಿ ಅಭಿವೃದ್ಧಿ ಕಾರ್ಯಗಳನ್ನು ಮಾಡಲು ಮುಂದಾಗಿ ಎಂದು ಸಲಹೆ ನೀಡಿದರು.

ಇದೇ ವೇಳೆ ನಾಯಕ ಸಮುದಾಯದಿಂದ ಆಯ್ಕೆಯಾಗಿರುವ ತಾಲೂಕಿನ 13 ಗ್ರಾಪಂಗಳ ಅಧ್ಯಕ್ಷರು, 9 ಗ್ರಾಪಂ ಉಪಾಧ್ಯಕ್ಷರನ್ನು ಸನ್ಮಾನಿಸಲಾಯಿತು. ಬಳಿಕ ಶ್ರೀನಿವಾಸ ದತ್ತಿ ಪ್ರಶಸ್ತಿ ವಿಜೇತ 'ಮೈಸೂರು ಮಿತ್ರ' ವರದಿಗಾರ ಬೀಚನಹಳ್ಳಿ ಮಂಜು ಮತ್ತು ಎಂ.ಎಸ್.ರಾಮಕೃಷ್ಣಯ್ಯ ಸ್ಮಾರಕ ಪ್ರಶಸ್ತಿ ವಿಜೇತ ಆಂದೋಲನ ಪತ್ರಿಕೆ ವರದಿಗಾರ ಮಂಜು ಕೋಟೆ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಪಂ ಮಾಜಿ ಸದಸ್ಯ ಚಿಕ್ಕವೀರ ನಾಯಕ, ನಾಯಕ ಸಮುದಾಯದ ಮುಖಂಡ ಶಂಭುಲಿಂಗ ನಾಯಕ, ಸರಗೂರು ಪಪಂ ಸದಸ್ಯ ಶ್ರೀನಿವಾಸ್, ಚಿಕ್ಕಮಾದು ಅಭಿಮಾನಿ ಬಳಗದ ತಾಲೂಕು ಅಧ್ಯಕ್ಷ ರಾಜನಾಯಕ, ತಾಲೂಕು ನಾಯಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ನಾಗರಾಜ್, ತಾಪಂ ಸದಸ್ಯರಾದ ಅಂಕನಾಯಕ, ಬಿ.ಸಿ.ರಾಜು, ಗ್ರಾಪಂ ಅಧ್ಯಕ್ಷರಾದ ಮಹೇಶ್ ನಾಯಕ, ಚೆಲುವಪ್ಪ, ಜಯಮ್ಮ, ಸೌಭಾಗ್ಯ, ವಸಂತಮ್ಮ, ಚೆನ್ನಮ್ಮ, ಚಿಕ್ಕಲಮ್ಮ, ಜಯರಾಮ್, ಭಾಗ್ಯ, ಶೈಲೇಂದ್ರ, ಉಪಾಧ್ಯಕ್ಷರಾದ ನಾಗರಾಜು, ಪ್ರೇಮ್ ಕುಮಾರ್, ಮಹದೇವಮ್ಮ, ನಾಗರತ್ನ, ಬಸವಲಿಂಗಮ್ಮ, ಚೆನ್ನನಾಯಕ ಸೇರಿದಂತೆ ಇನ್ನಿತರರಿದ್ದರು.

ಕಾವೇರಿ ವಿಚಾರ ಮಾತನಾಡುವ ಧೈರ್ಯ ರಾಜ್ಯದ ಸಂಸದರಿಗಿಲ್ಲ

ಶಿಕ್ಷಣ ಸಚಿವ ಮಧು ಬಂಗಾರಪ್ಪ



ಹುಣಸೂರು, ಅ.2– ರಾಜ್ಯದಲ್ಲಿ ಉದ್ಭವಿಸಿರುವ ಕಾವೇರಿ ವಿಚಾರವಾಗಿ ಪ್ರಧಾನಿ ಮೋದಿ ಎದುರು ಲೋಕಸಭೆಯಲ್ಲಿ ಮೇಜು ಕುಟ್ಟಿ ಮಾತನಾಡುವ ಧೈರ್ಯ ನಮ್ಮ ರಾಜ್ಯದ ಸಂಸದರಿಗಿಲ್ಲ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಛೇಡಿಸಿದರು.

ಪಟ್ಟಣದಲ್ಲಿ ಮಾಜಿ ಶಾಸಕ ಹೆಚ್.ಪಿ.ಮಂಜುನಾಥ್ ಮನೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜೆಡಿಎಸ್–ಬಿಜೆಪಿ ಒಂದಾದರೂ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಹೆಚ್ಚಿನ ಸ್ಥಾನ ಗ್ಯಾರಂಟಿ ಸಿಗಲಿದ್ದು, ಎರಡೂ ಪಕ್ಷಗಳನ್ನು ಸೋಲಿಸಲು ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಒಂದೇ ಸಾಕು ಎಂದರು.

ನಮ್ಮ ಗ್ಯಾರಂಟಿ ಯೋಜನೆ ಪಡೆಯಲು ಮೊದಲು ಕ್ಯೂ ನಿಂತವರು ಇವರೇ, ಇವರು ಏನೇ ಹೇಳಲಿ ಮತದಾರರನ್ನು ಇವರು ಸರಿಯಾಗಿ ನಡೆಸಿಕೊಂಡಿಲ್ಲ. ಅವರಿಗೆ ಮತ ಹಾಕಿದವರು ಸಹ ಈಗ ಕಾಂಗ್ರೆಸ್ ಕಾರ್ಯಕ್ರಮಕ್ಕೆ ಮನಸೋತು ಬದಲಾಗಿದ್ದಾರೆ. ಪಕ್ಷಾತೀತವಾಗಿ ಎಲ್ಲರಿಗೂ ಭಾಗ್ಯ ಕೊಟ್ಟಿದ್ದೇವೆ. ಹೀಗಾಗಿ ಅವರು ಏನೇ ಒಂದಾದರೂ ಮತದಾರ ನಂಬುವ ಸ್ಥಿತಿಯಲ್ಲಿಲ್ಲ. ನಾವು ನೀಡಿದ್ದ ಎಲ್ಲಾ ಗ್ಯಾರಂಟಿಗಳನ್ನು ಅನುಷ್ಠಾನಗೊಳಿಸಿದ್ದೇವೆ. ಮತದಾರರು ಅವರಿಗೆ ಮುಂದಿನ ಲೋಕಸಭಾ ಚುನಾವಣೆಯಲ್ಲಿ ತಕ್ಕಪಾಠ ಕಲಿಸಲಿದ್ದಾರೆ ಎಂದರು.

ಮೋದಿ ಎದುರು ಮಾತನಾಡುವ ತಾಕತ್ತು ಸಂಸದರಿಗಿಲ್ಲ: ರಾಜ್ಯದಲ್ಲಿ ಉದ್ಭವಿಸಿರುವ ಕಾವೇರಿ ವಿಚಾರವಾಗಿ ರಾಜ್ಯದ ಸಂಸದರು ಕೇಂದ್ರ ಸರ್ಕಾರದ ಮೇಲೆ ಒತ್ತಡ ಹಾಕುತ್ತಿಲ್ಲ. ಅವರನ್ನು ವಿಶ್ವಾಸಕ್ಕೆ ತೆಗೆದುಕೊಂಡಿಲ್ಲವೆಂಬುದು ಸಬೂಬು ಅಷ್ಟೆ. ಮತ್ತವರ ಜವಾಬ್ದಾರಿ ಇನ್ನೇನು ಎಂದು ಪ್ರಶ್ನಿಸಿ. ಮೋದಿ ಪ್ರಚಾರದಿಂದ ಗೆದ್ದ ಸಂಸದರು ಮೋದಿ ಎದುರು ಮಾತನಾಡುವ ಧೈರ್ಯ ತೋರುತ್ತಿಲ್ಲ. ಹಿಂದೆ ಮೋದಿ ಪ್ರಚಾರದಿಂದ ಗೆದ್ದಿದ್ದ ಶಾಸಕರು ಕಳೆದ ಚುನಾವಣೆಯಲ್ಲಿ ಮನೆಯತ್ತ ಮುಖ ಮಾಡಿದ್ದಾರೆ. ಲೋಕಸಭೆ ಚುನಾವಣೆಯಲ್ಲೂ ಇದು ಮರುಕಳಿಸಲಿದೆ ಎಂದು ಕಾವೇರಿ ವಿಚಾರದಲ್ಲಿ ಆರೋಪಿಸುತ್ತಿರುವ ವಿರೋಧ ಪಕ್ಷಗಳವರಿಗೆ ಟಾಂಗ್ ನೀಡಿದರು. ಈ ವಿಚಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ದಿಟ್ಟ ನಿರ್ಧಾರ ತೆಗೆದುಕೊಳ್ಳುವ ನಾಯಕರು. ಇದನ್ನು ಪರಿಹರಿಸುವ ಭಾತಿ ಇವರಲ್ಲಿದೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ತಂದೆ ಬಂಗಾರಪ್ಪ ಬಗ್ಗೆ ಹಗುರ ಮಾತು ಸಲ್ಲ: ಇತ್ತೀಚೆಗೆ ಮಂಡ್ಯದಲ್ಲಿ ಮಾಜಿ ಮುಖ್ಯಮಂತ್ರಿಯೊಬ್ಬರು ತಂದೆ ಬಂಗಾರಪ್ಪಾಜಿ ಬಗ್ಗೆ ಹಗುರವಾಗಿ ಮಾತ ನಾಡಿದ್ದಾರೆ. ಅವರ ಅವಧಿಯ ಕಾವೇರಿ ಹೋರಾಟದಲ್ಲಿ ಹಲವಾರು ಮಂದಿ ಸಾವನ್ನಪ್ಪಿದ್ದರೆಂದು ಆರೋಪಿಸಿದ್ದಾರೆ. ಹೋರಾಟವೆಂದರೆ ಪುಕ್ಕಟ್ಟೆ ಬರಲ್ಲ. ಹೋರಾಟಗಾರರು ರಕ್ತ ಕೊಟ್ಟೇವು ನೀರು ಕೊಡಲ್ಲವೆಂಬುದು ಸುಳ್ಳೇ? ಆ ಸಂದರ್ಭ ತಂದೆ ಯವರು ದಿಟ್ಟತನ ಪ್ರದರ್ಶಿಸಿದರು. ಆರೋಪ ಮಾಡಿದಾಕ್ಷಣ ಬಂಗಾರಪ್ಪ ಅವರು ಜನರ ಹೃದಯದಿಂದ ಹೋಗಲ್ಲವೆಂದು ತಿರುಗೇಟು ನೀಡಿದರು. ಮುಖ್ಯಮಂತ್ರಿ ತೆಗೆದುಕೊಳ್ಳುವ ನಿರ್ಧಾರಕ್ಕೆ ನಾವೆಲ್ಲ ಬದ್ಧರೆಂದು ಸ್ಪಷ್ಟಪಡಿಸಿದರು.

ಪ್ರಶ್ನಿಸುವ ಅಧಿಕಾರ ಎಲ್ಲರಿಗೂ ಸಿಗಬೇಕು: ನಿಮ್ಮ ಪಕ್ಷದ ಹಿರಿಯ ಶಾಸಕ ಶ್ಯಾಮನೂರು ಶಿವಶಂಕರಪ್ಪರಂತಹ ಮೂರ್‍ನಾಲ್ಕು ಹಿರಿಯ ಶಾಸಕರು ನಾಯಕತ್ವದ ಬಗ್ಗೆ ಮಾತನಾಡುತ್ತಿದ್ದಾರಲ್ಲಾ ಎಂಬ ಪ್ರಶ್ನೆಗೆ ನಮ್ಮಲ್ಲಿ ಯಾರು ಬೇಕಾದರೂ ಪ್ರಶ್ನಿಸಬಹುದು. ಅದನ್ನು ಪರಾಮರ್ಶಿಸುವ ಹಕ್ಕು ಹೈಕಮಾಂಡ್‌ಗೆ ಇದೆ. ಆದರೆ ಆ ಪಕ್ಷಗಳಲ್ಲಿ ಹೈಕಮಾಂಡ್ ಎದುರು ನಿಂತು ಮಾತನಾಡುವ ಧೈರ್ಯ ಒಬ್ಬರಲ್ಲೂ ಇಲ್ಲವೆಂದು ಛೇಡಿಸಿದರು.

ಗೋಷ್ಠಿಯಲ್ಲಿ ವಿರಾಜಪೇಟೆ ಶಾಸಕ ಪೊನ್ನಣ್ಣ, ಮಾಜಿ ಶಾಸಕ ಹೆಚ್.ಪಿ. ಮಂಜುನಾಥ್, ರಾಜ್ಯ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಡಾ.ಪುಷ್ಪ ಅಮರ್‌ನಾಥ್ ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ



ಪದ್ಮ ಚಿತ್ರಮಂದಿರ	(ದೂ: 2521923)
ಚಂದ್ರಮುಖಿ–2 (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಬಾನದಾರಿಯಲ್ಲಿ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಫುಕ್ರೆ 3 (ಹಿ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಚಂದ್ರಮುಖಿ–2 (ತ)	4 ಪ್ರದರ್ಶನಗಳು
ಗಾಯಿತ್ರಿ	
ಸಪ್ತಸಾಗರದಾಚೆ ಎಲ್ಲೋ (ಕ)	4 ಪ್ರದರ್ಶನಗಳು
ರಾಜ್‌ಕಮಲ್	
ಸ್ಕಂದ (ತೆ)	4 ಪ್ರದರ್ಶನಗಳು
ಸಂಗಂ	
ಚಂದ್ರಮುಖಿ–2 (ತ)	4 ಪ್ರದರ್ಶನಗಳು
ಲಿಡೋ	
ಟೋಬಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಇರೈವನ್(ತ)	4 ಪ್ರದರ್ಶನಗಳು
ಪ್ರಭಾ	
ಸ್ಕಂದ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್ ದೂ : 4240422/4241800

ಸ್ಕ್ರೀನ್ 1	ದಿಗ್ವಿಜಯ (ಕ): ಬೆ.10.40ಕ್ಕೆ, ಸಪ್ತಸಾಗರದಾಚೆ ಎಲ್ಲೋ (ಕ): ಮ.1.10ಕ್ಕೆ, ರಾ.7.10ಕ್ಕೆ, ರಾ.10ಕ್ಕೆ, ಜವಾನ್ (ಹಿಂ): ಸಂ.4ಕ್ಕೆ.
ಸ್ಕ್ರೀನ್ 2	ತತ್ಸಮ ತದ್ಭವ (ಕ): ಬೆ.11.30ಕ್ಕೆ, ಒಲವೇ ಮಂದಾರ 2 (ಕ): ಮ.2ಕ್ಕೆ, ಡೆಮಾನ್ (ತ): ಸಂ.4.30ಕ್ಕೆ, ಸುಖೀ (ಹಿಂ): ರಾ.7ಕ್ಕೆ, ರಾ.9.50ಕ್ಕೆ.
ಸ್ಕ್ರೀನ್ 3	ಎಕ್ಸ್‌ಪೆಂಡಬಲ್ಸ್ (ಇಂ): ಬೆ.11.30ಕ್ಕೆ, ರಾ.9.40ಕ್ಕೆ, ದಿ ನನ್ 2 (ಇಂ): ಮ.1.45ಕ್ಕೆ, ದಿ ಗ್ರೇಟ್ ಇಂಡಿಯನ್ ಫ್ಯಾಮಿಲಿ (ಹಿಂ): ಸಂ.4.30ಕ್ಕೆ, ರಾ.7ಕ್ಕೆ.
ಸ್ಕ್ರೀನ್ 4	ಜವಾನ್ (ಹಿಂ): ಬೆ.9.50ಕ್ಕೆ, ಮ.1ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸಪ್ತ ಸಾಗರದಾಚೆ ಎಲ್ಲೋ (ಕ): ಸಂ.4.15ಕ್ಕೆ.

ಐನಾಕ್ಸ್ ಮೂವೀಸ್ ದೂ : 2533444 / 2433456

ಸ್ಕ್ರೀನ್ 1	ಜವಾನ್ (ಹಿಂ): ಬೆ.10.40ಕ್ಕೆ, ಸಂ.4.35ಕ್ಕೆ, ರಾ.10.30ಕ್ಕೆ, ದಿ ಎಕ್ಸ್‌ಪೆಂಡಬಲ್ಸ್ (ಇಂ): ಮ.2.10ಕ್ಕೆ, ರಾ.8.05ಕ್ಕೆ.
ಸ್ಕ್ರೀನ್ 2	ಸಪ್ತ ಸಾಗರದಾಚೆ ಎಲ್ಲೋ (ಕ): ಬೆ.10.50ಕ್ಕೆ, ಜವಾನ್ (ಹಿಂ): ಮ.1.50ಕ್ಕೆ, ಸಂ.5.25ಕ್ಕೆ, ರಾ.9ಕ್ಕೆ.
ಸ್ಕ್ರೀನ್ 3	ಜವಾನ್ (ಹಿಂ): ಬೆ.9.10ಕ್ಕೆ, ಮ.12.45ಕ್ಕೆ, ದಿ ಎಕ್ಸ್‌ಪೆಂಡಬಲ್ಸ್ (ಇಂ): ಸಂ.4.20ಕ್ಕೆ, ರಾ.9.50ಕ್ಕೆ, ಸಪ್ತ ಸಾಗರದಾಚೆ ಎಲ್ಲೋ (ಕ): ಸಂ.6.50ಕ್ಕೆ.
ಸ್ಕ್ರೀನ್ 4	ಜವಾನ್ (ಹಿಂ): ಬೆ.10ಕ್ಕೆ, ದಿ ಗ್ರೇಟ್ ಇಂಡಿಯನ್ ಫ್ಯಾಮಿಲಿ (ಹಿಂ): ಮ.1.50ಕ್ಕೆ, ರಾ.7.30ಕ್ಕೆ, ರಾ.10ಕ್ಕೆ, ಮಾರ್ಕ್ ಆಂಟೋನಿ (ತ): ಸಂ.4.20ಕ್ಕೆ.

ಮೈಸೂರು ವಿಷನ್ ಸಿನಿಮಾ ದೂ : 0821–2973519

ಸ್ಕ್ರೀನ್ 1	ಪರಿಶುದ್ಧಂ (ಕ): ಬೆ.10.30ಕ್ಕೆ, ಹನಿಮೂನ್ ಇನ್ ಬ್ಯಾಂಕಾಕ್(ಕ): ಮ.1.30ಕ್ಕೆ, ಧ್ವಂದ್ವ (ಕ): ಸಂ.4.20ಕ್ಕೆ, ಬನ್ ಟೀ (ಕ): ಸಂ.6.45ಕ್ಕೆ, ಸಪ್ತ ಸಾಗರದಾಚೆ ಎಲ್ಲೋ (ಕ): ರಾ.9.15ಕ್ಕೆ.
ಸ್ಕ್ರೀನ್ 2	ಜವಾನ್ (ಹಿಂ): ಸಂ.4.15ಕ್ಕೆ, ರಾ.9.15ಕ್ಕೆ.
ಸ್ಕ್ರೀನ್ 3	ದಿ ನನ್ 2 (ಇಂ): ಸಂ.4.45ಕ್ಕೆ, ಜವಾನ್ (ಹಿಂ): ರಾ.7ಕ್ಕೆ.
ಸ್ಕ್ರೀನ್ 4	ಜವಾನ್ (ಹಿಂ): ಬೆ.10.30ಕ್ಕೆ, ಸಪ್ತ ಸಾಗರದಾಚೆ ಎಲ್ಲೋ (ಕ): ಮ.1.45ಕ್ಕೆ, ಸಂ.4.45ಕ್ಕೆ, ದಿ ನನ್ 2 (ಇಂ): ರಾ.7.35ಕ್ಕೆ.

ಪಿವಿಆರ್ ಸಿನಿಮಾಸ್ ಮೊ.ನಂ: 8951357139
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಜೈಲರ್ (ತ): ಬೆ.8.35ಕ್ಕೆ, ಬೆ.11.40ಕ್ಕೆ, ಮ.3.40ಕ್ಕೆ, ಸಂ.6.45ಕ್ಕೆ, ರಾ.10.30ಕ್ಕೆ, **ಜೈಲರ್** (ಕ): ಬೆ.8.25ಕ್ಕೆ, ಮ.3.10ಕ್ಕೆ, **ಓಎಂಜಿ 2** (ಹಿಂ): ಬೆ.8.20ಕ್ಕೆ, ಬೆ.11.50ಕ್ಕೆ, ಸಂ.6.40ಕ್ಕೆ, ರಾ.10.15ಕ್ಕೆ, **ಗದರ್ 2** (ಹಿಂ): ಮ.12.05ಕ್ಕೆ, ಮ.3.10ಕ್ಕೆ, ರಾ.7.10ಕ್ಕೆ, ರಾ.10ಕ್ಕೆ, **ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ** (ಕ): ರಾ.9.45ಕ್ಕೆ, **ಆಚಾರ್ & ಕೋ** (ಕ): ಮ.3.55ಕ್ಕೆ, **ಕೌಸಲ್ಯ ಸುಪ್ರಜಾ ರಾಮ** (ಕ): ಮ.3.25ಕ್ಕೆ, ರಾ.10.30ಕ್ಕೆ, **ನಮೋ ಭೂತಾತ್ಮ** (ಕ): ಬೆ.11.55ಕ್ಕೆ, **ರಾಖಿ ಔರ್ ರಾಣಿ** (ಹಿಂ): ಬೆ.9.20ಕ್ಕೆ, ಸಂ.6.20ಕ್ಕೆ, ರಾ.9.50ಕ್ಕೆ, **ಓಪನ್‌ಹೈಮರ್** (ಇಂ): ಸಂ.6.35ಕ್ಕೆ, **ಭೋಳಾ ಶಂಕರ್** (ತೆ): ಬೆ.9.05ಕ್ಕೆ, ಮ.12.30ಕ್ಕೆ, ಮ.2.55ಕ್ಕೆ, ಸಂ.6.20ಕ್ಕೆ, **ಮೆಗ್ 2** (ಇಂ): ಮ.12.50ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ವಿದ್ಯುತ್ ತಂತಿ ತುಳಿದು ಆನೆ ಸಾವು



ಹೆಚ್.ಡಿ.ಕೋಟೆ, ಅ.2– ಜಮೀನಿಗೆ ಅಕ್ರಮವಾಗಿ ಅಳವಡಿಸಿದ್ದ ವಿದ್ಯುತ್ ತಂತಿ ತುಳಿದು ಆನೆ ಸಾವನ್ನಪ್ಪಿರುವ ಘಟನೆ ತಾಲೂಕಿನ ಗೌಡಿಮಾಚನಾಯಕನಹಳ್ಳಿ ಗ್ರಾಮದಲ್ಲಿ ಸೋಮವಾರ ನಡೆದಿದೆ.

ಗ್ರಾಮದ ಸರ್ವೇ ನಂ.3ರಲ್ಲಿರುವ ಜಮೀನಿಗೆ ಅಕ್ರಮವಾಗಿ ಅಳವಡಿಸಿದ್ದ ವಿದ್ಯುತ್ ತಂತಿ ತುಳಿದು 25 ವರ್ಷದ ಆನೆ (ಮಕಣ) ಮೃತ ಪಟ್ಟಿದ್ದು, ಈ ಸಂಬಂಧ ಅರಣ್ಯಾಧಿಕಾರಿಗಳು ಪಟ್ಟಣದ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ತನಿಖೆ ಕೈಗೊಂಡಿದ್ದಾರೆ. ಆನೆ ಮರಣೋತ್ತರ ಪರೀಕ್ಷೆ ನಡೆಸಿದ ಪಶು ವೈದ್ಯ ಡಾ.ರಮೇಶ್ ಆನೆ ಸಾವಿಗೆ ವಿದ್ಯುತ್ ಸ್ಪರ್ಶವೇ ಕಾರಣ ಎಂದು 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ಸ್ಥಳಕ್ಕೆ ವೃತ್ತ ನಿರೀಕ್ಷಕ ಶಬ್ಬೀರ್ ಹುಸೇನ್, ಲಕ್ಷ್ಮಿಕಾಂತ್, ಎಸ್ಐ ಪ್ರಕಾಶ್, ಸುರೇಶ್ ನಾಯಕ್, ಎಸಿಎಫ್ ರಂಗಸ್ವಾಮಿ, ಆರ್‌ಎಫ್‌ಓ ಹರ್ಷಿತ್, ಪ್ರಾದೇಶಿಕ ವಿಭಾಗದ ಎಸಿಎಫ್ ಲಕ್ಷ್ಮಿಕಾಂತ್, ಪ್ರಾದೇಶಿಕ ವಲಯ ಅರಣ್ಯಾಧಿಕಾರಿ ಪೂಜಾ, ಸಿಬ್ಬಂದಿ ಹಾಜರಿದ್ದರು.



ಬೆಂಗಳೂರಿನಲ್ಲಿ ನಡೆದ ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್‌ನ ಸರ್ವ ಸದಸ್ಯರ ಮಹಾಸಭೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಬ್ಯಾಂಕ್ ಅತೀ ಹೆಚ್ಚು ನಿಶ್ಚಿತ ಠೇವಣಿ ಸಂಗ್ರಹಿಸಿ ರಾಜ್ಯದಲ್ಲೇ 2ನೇ ಸ್ಥಾನ ಪಡೆದ ಹಿನ್ನೆಲೆಯಲ್ಲಿ ಜಿಲ್ಲಾ ನಿರ್ದೇಶಕ ಹಾಗೂ ತಿ.ನರಸೀಪುರ ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಕೆಂಪಯ್ಯನಹುಂಡಿ ಎಂ.ಮಹ ದೇವಣ್ಣ ಹಾಗೂ ಜಿಲ್ಲಾ ವ್ಯವಸ್ಥಾಪಕಿ ರಶ್ಮಿತ ಅವರಿಗೆ ಬ್ಯಾಂಕ್ ರಾಜ್ಯಾಧ್ಯಕ್ಷರೂ ಆದ ತಿಪಟೂರು ಶಾಸಕ ಕೆ.ಷಡಕ್ಷರಿ ಪ್ರಶಸ್ತಿ ಪ್ರದಾನ ಮಾಡಿದರು.

ಗಾಂಧಿ ಜಯಂತಿ: ರಾಜ್‌ಘಾಟ್‌ನಲ್ಲಿ ರಾಷ್ಟ್ರಪಿತನಿಗೆ ಪುಷ್ಪ ನಮನ ಸಲ್ಲಿಸಿದ ಪ್ರಧಾನಿ ಮೋದಿ, ದ್ರೌಪದಿ ಮುರ್ಮು





ನವದೆಹಲಿ: ರಾಷ್ಟ್ರಪಿತ ಮಹಾತ್ಮ ಗಾಂಧಿ ಜನ್ಮ ದಿನಾಚರಣೆ ಹಿನ್ನೆಲೆಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ರಾಷ್ಟ್ರಪತಿ ದ್ರೌಪದಿ ಮುರ್ಮು ಸೇರಿದಂತೆ ಹಲವು ಗಣ್ಯರು ದೆಹಲಿಯ ರಾಜ್‌ಘಾಟ್‌ನಲ್ಲಿ ಮಹಾತ್ಮಾ ಗಾಂಧಿ ಸಮಾಧಿಗೆ ಪುಷ್ಪ ನಮನ ಸಲ್ಲಿಸಿದರು.

ಇದೇ ವೇಳೆ ರಾಜ್‌ಘಾಟ್‌ನಲ್ಲಿ ಕಾಂಗ್ರೆಸ್ ಮುಖಂಡ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ ಹಾಗೂ ಪಕ್ಷದ ಇತರ ಮುಖಂಡರು ಪುಷ್ಪ ನಮನ ಸಲ್ಲಿಸಿದರು.

ಇದಕ್ಕೂ ಮುನ್ನ ಸಾಮಾಜಿಕ ಜಾಲತಾಣ ಟ್ವಿಟರ್‌ನಲ್ಲಿ ಟ್ವೀಟ್ ಮಾಡಿದ್ದ ಮೋದಿಯವರು, ಗಾಂಧಿ ಜಯಂತಿಯ ವಿಶೇಷ ಸಂದರ್ಭದಲ್ಲಿ ನಾನು ಮಹಾತ್ಮ ಗಾಂಧಿ ಅವರಿಗೆ ನಮಸ್ಕರಿಸುತ್ತೇನೆ. ಅವರ ಕಾಲಾತೀತ ಬೋಧನೆಗಳು ನಮ್ಮ ಹಾದಿಯನ್ನು ಬೆಳಗಿಸುತ್ತಲೇ ಇರುತ್ತವೆ. ಅವರ ಕನಸುಗಳನ್ನು ನನಸಾಗಿಸಲು ನಾವು ಯಾವಾಗಲೂ ಕೆಲಸ ಮಾಡೋಣ, ಎಲ್ಲರೂ ಏಕತೆ ಮತ್ತು ಸೌಹಾರ್ದತೆಯನ್ನು ಬೆಳೆಸಿಕೊಳ್ಳಲಿ ಎಂದು ಹೇಳಿದ್ದರು.

ಮಹಾತ್ಮ ಗಾಂಧಿಯವರ ಅಹಿಂಸೆ ಮತ್ತು ಸಹಿಷ್ಣುತೆಯ ಮೌಲ್ಯಗಳನ್ನು ಗೌರವಿಸಲು ಈ ದಿನವನ್ನು ಅಂತಾರಾಷ್ಟ್ರೀಯ ಅಹಿಂಸಾ ದಿನವನ್ನಾಗಿ ಆಚರಿಸಲಾಗುತ್ತದೆ ಎಂದು ತಿಳಿಸಿದ್ದಾರೆ.

ಉತ್ತರಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಟ್ವೀಟ್ ಮಾಡಿ, ರಾಷ್ಟ್ರಪಿತ ಮಹಾತ್ಮ ಗಾಂಧಿ ಅವರಿಗೆ ನನ್ನ ನಮನಗಳು, ರಾಜ್ಯದ ಜನತೆಗೆ ಅಂತಾರಾಷ್ಟ್ರೀಯ ಅಹಿಂಸಾ ದಿನದ ಶುಭಾಶಯಗಳು, ಸತ್ಯ, ಅಹಿಂಸೆ, ಪ್ರೀತಿ ಮತ್ತು ಸ್ವಚ್ಛತೆಯ ಮೌಲ್ಯಗಳನ್ನು ಮೈಗೂಡಿಸಿಕೊಂಡು ರಾಮರಾಜ್ಯ ಪರಿಕಲ್ಪನೆಯೊಂದಿಗೆ ದೇಶ ಹಾಗೂ ಸಮಾಜದ ಅಭಿವೃದ್ಧಿಯಲ್ಲಿ ನಿರಂತರವಾಗಿ ಮುನ್ನಡೆಯಲು ಸಂಕಲ್ಪ ಮಾಡೋಣ ಎಂದಿದ್ದಾರೆ.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರಾಗಿ ಎನ್.ಜಯರಾಂ ನೇಮಕ

ಬೆಂಗಳೂರು: ಹಿರಿಯ ಐಎಎಸ್ ಅಧಿಕಾರಿ, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಅಧ್ಯಕ್ಷ ಎನ್.ಜಯರಾಂ ಅವರನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ (ಬಿಡಿಎ) ಆಯುಕ್ತರನ್ನಾಗಿ ವರ್ಗಾವಣೆ ಮಾಡಲಾಗಿದೆ. ಜಯರಾಮ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕಾರ್ಯದರ್ಶಿಯೂ ಆಗಿದ್ದಾರೆ. ಬಿಡಿಎ ಆಯುಕ್ತರಾಗಿದ್ದ ಜಿ.ಕುಮಾರ ನಾಯಕ್ ಅವರ ವಯೋನಿವೃತ್ತಿಯಿಂದ ತೆರವಾದ ಸ್ಥಾನಕ್ಕೆ ಜಯರಾಮ್ ಅವರನ್ನು ನಿಯೋಜಿಸಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಸೋಮವಾರ ಆದೇಶ ಹೊರಡಿಸಿದೆ. ನಿವೇಶನ ಹಂಚಿಕೆ ಪ್ರಕರಣದಲ್ಲಿ ನ್ಯಾಯಾಲಯದ ಆದೇಶಗಳನ್ನು ಪಾಲಿಸದ ಅಧಿಕಾರಿಯನ್ನು ವಜಾಗೊಳಿಸುವಂತೆ ಸುಪ್ರೀಂಕೋರ್ಟ್ ಆದೇಶಿಸಿದ್ದ ಹಿನ್ನೆಲೆಯಲ್ಲಿ ಬಿಡಿಎ ಆಯುಕ್ತರಾಗಿದ್ದ ಎಂ.ಬಿ.ರಾಜೇಶ್‌ಗೌಡ ಅವರನ್ನು ಹಿಂದಿನ ಬಿಜೆಪಿ ಸರ್ಕಾರ 2022ರ ಆ.22ರಂದು ವರ್ಗಾವಣೆ ಮಾಡಿತ್ತು. ಆ ಹುದ್ದೆಯನ್ನು ಇಂಧನ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯಾಗಿದ್ದ ಜಿ.ಕುಮಾರನಾಯಕ್ ಅವರಿಗೆ ಹೆಚ್ಚುವರಿಯಾಗಿ ನೀಡಿತ್ತು. ಬಳಿಕ ಇದೇ ಫೆ.11ರಂದು ಆಯುಕ್ತರನ್ನಾಗಿ ವರ್ಗಾವಣೆ ಮಾಡಿ ಆದೇಶ ಹೊರಡಿಸಿತ್ತು. ಕುಮಾರನಾಯಕ್ ನಿವೃತ್ತರಾಗುತ್ತಿದ್ದಂತೆ, ಆ ಹುದ್ದೆಯ ಮೇಲೆ ಕೆಲವು ಹಿರಿಯ ಐಎಎಸ್ ಅಧಿಕಾರಿಗಳು ಕಣ್ಣಿಟ್ಟಿದ್ದರು. ಮೈಸೂರು ಪ್ರಾದೇಶಿಕ ವಿಭಾಗದ ಆಯುಕ್ತರಾಗಿದ್ದ, ಇತ್ತೀಚೆಗಷ್ಟೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಕಾರ್ಯದರ್ಶಿಯಾಗಿ ವರ್ಗಾವಣೆಗೊಂಡಿರುವ ಜಿ.ಸಿ.ಪ್ರಕಾಶ್ ಮತ್ತು ಬಿಡಿಎ ಆಯುಕ್ತರಾಗಿ ಕರ್ತವ್ಯ ನಿರ್ವಹಿಸಿದ್ದ ಎಂ.ಬಿ.ರಾಜೇಶ್‌ಗೌಡ ಕೂಡ ಈ ಹುದ್ದೆಯ ನಿರೀಕ್ಷೆಯಲ್ಲಿದ್ದರು ಎಂದು ಗೊತ್ತಾಗಿದೆ. ಕೆಲವರು ಹುದ್ದೆ ಗಿಟ್ಟಿಸಿಕೊಳ್ಳಲು ತೀವ್ರ ಒತ್ತಡ ಹೇರಿದ್ದರು ಎಂದೂ ಹೇಳಲಾಗಿದೆ. ಜಯರಾಮ್ ಅವರು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ), ಮೈಸೂರು ನಗರಪಾಲಿಕೆ ಆಯುಕ್ತರಾಗಿ ಕಾರ್ಯನಿರ್ವಹಿಸಿದ್ದರು. ಬೆಳಗಾವಿ ಜಿಲ್ಲಾಧಿಕಾರಿಯಾಗಿ ಅವರ ದಕ್ಷ ಸೇವೆ ಖಾಲಿ ಪ್ರಶಂಸೆಗೆ ಪಾತ್ರವಾಗಿತ್ತು.



ಶಿವಮೊಗ್ಗದಲ್ಲಿ ಈದ್ ಮಿಲಾದ್ ಮೆರವಣಿಗೆ ವೇಳೆ ಗಲಭೆ

ಸದ್ಯ ಪರಿಸ್ಥಿತಿ ಶಾಂತಿಯುತ: ಪೊಲೀಸರು

ಶಿವಮೊಗ್ಗ: ಈದ್ ಮಿಲಾದ್ ಮೆರವಣಿಗೆ ವೇಳೆ ಕಲ್ಲು ತೂರಾಟ ನಡೆದಿದೆ ಎಂದು ಉದ್ರಿಕ್ತಗೊಂಡ ಗುಂಪೊಂದು ಹಿಂಸಾಚಾರ ನಡೆಸಿದ ನಂತರ ನಿಷೇಧಾಜ್ಞೆ ಜಾರಿಗೊಳಿಸಿರುವ ಶಿವಮೊಗ್ಗದ ರಾಗಿಗುಡ್ಡ ಪ್ರದೇಶದಲ್ಲಿ ಪರಿಸ್ಥಿತಿ ಈಗ ಶಾಂತಿಯುತವಾಗಿದ್ದು, ನಿಯಂತ್ರಣದಲ್ಲಿದೆ ಎಂದು ಪೊಲೀಸರು ಸೋಮವಾರ ತಿಳಿಸಿದ್ದಾರೆ.

ಭಾನುವಾರ ಕಲ್ಲು ತೂರಾಟದ ಘಟನೆ ನಡೆದ ಹಿನ್ನೆಲೆಯಲ್ಲಿ ಸ್ಥಳದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿತ್ತು. ಸದ್ಯ ಪರಿಸ್ಥಿತಿ ನಿಯಂತ್ರಣದಲ್ಲಿದೆ ಎಂದು ಶಿವಮೊಗ್ಗ ಪೊಲೀಸ್ ವರಿಷ್ಠಾಧಿಕಾರಿ ಜಿ ಕೆ ಮಿಥುನ್‌ಕುಮಾರ್ ತಿಳಿಸಿದ್ದಾರೆ.

ಘಟನೆಯಲ್ಲಿ ಪೊಲೀಸರು ಸೇರಿದಂತೆ ಕೆಲವರಿಗೆ ಗಾಯಗಳಾಗಿದ್ದು, ಕೆಲವು ಆಸ್ತಿಪಾಸ್ತಿಗಳಿಗೆ ಹಾನಿಯಾಗಿದೆ. ಗಾಯಗಳು ಮತ್ತು ಆಸ್ತಿ ಹಾನಿಗೊಳಗಾದವರಿಗೆ ದೂರು ಸಲ್ಲಿಸಲು ಹೇಳಿದ್ದೇವೆ. ಘಟನೆಯಲ್ಲಿ ಭಾಗಿಯಾದ ಕೆಲವರನ್ನು ನಾವು ಈಗಾಗಲೇ ರಕ್ಷಿಸಿದ್ದೇವೆ. ವೀಡಿಯೋಗ್ರಫಿ, ಸಿಸಿಟಿವಿ ಕ್ಯಾಮೆರಾ ಮತ್ತು ಡ್ರೋನ್ ಕ್ಯಾಮರಾ ಪರಿಶೀಲಿಸುತ್ತಿದ್ದು, ಗಲಭೆಯಲ್ಲಿ ಭಾಗಿಯಾದವರ ವಿರುದ್ಧ ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು ಎಂದರು.

ಕಾನೂನು ಸುವ್ಯವಸ್ಥೆ ಕಾಪಾಡಲು ಕರ್ನಾಟಕ ರಾಜ್ಯ ಮೀಸಲು ಪೊಲೀಸ್ (ಕೆಎಸ್‌ಆರ್‌ಪಿ), ಕ್ಷಿಪ್ರ ಕಾರ್ಯಾಚರಣೆ ಪಡೆಯ (ಆರ್‌ಎಎಫ್) ಒಂದು ತುಕಡಿ, 900 ಗೃಹ ರಕ್ಷಕರು, 2,000 ಪೊಲೀಸ್ ಸಿಬ್ಬಂದಿ ಮತ್ತು ಹಿರಿಯ ಅಧಿಕಾರಿಗಳು ಸೇರಿದಂತೆ ಸಾಕಷ್ಟು ಸಿಬ್ಬಂದಿ ನಿಯೋಜಿಸಲಾಗಿದ್ದು, ಸಾಕಷ್ಟು ಬಂದೋಬಸ್ತ್ ಮಾಡಿದ್ದೇವೆ. ಶಿವಮೊಗ್ಗ ನಗರದಲ್ಲಿ ಯಾವುದೇ ಸಮಸ್ಯೆ ಉಂಟಾಗುವುದಿಲ್ಲ ಮತ್ತು ಪರಿಸ್ಥಿತಿ ಶಾಂತಿಯುತವಾಗಿದೆ ಎಂದು ಹೇಳಿದರು.

ಮಾಲೀಕನ ಅಂತಿಮ ಯಾತ್ರೆಯಲ್ಲಿ ಸಾಗಿದ 60 ಬಸ್‌ಗಳು!



ಮೈಸೂರು,ಅ.2(ಪಿಎಂ)– ಮಂಗಳೂರು ನಗರದ ಕದ್ರಿ ಕಂಬಳದ ನಿವಾಸಿ, ಮಹೇಶ್ ಮೋಟಾರ್ಸ್ ಬಸ್ ಮಾಲೀಕ ಪ್ರಕಾಶ್ ಶೇಖ (45) ಭಾನುವಾರ ತಮ್ಮ ನಿವಾಸದಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಶರಣಾಗಿದ್ದು, ಸೋಮವಾರ ಅವರ ಒಡೆತನದ 60 ಬಸ್‌ಗಳು ಮೃತರ ಅಂತಿಮ ಯಾತ್ರೆಯಲ್ಲಿ ಸಾಗಿದ ದೃಶ್ಯಾವಳಿಯ ವಿಡಿಯೋ ವೈರಲ್ ಆಗಿದೆ.

ಮೃತರ ಪಾರ್ಥಿವ ಶರೀರದ ಅಂತಿಮ ಯಾತ್ರೆಯಲ್ಲಿ ಸಾಲು ಸಾಲು ಬಸ್‌ಗಳು ರಸ್ತೆಯಲ್ಲಿ ಸಾಗುತ್ತಿದ್ದ ದೃಶ್ಯ ದುಃಖದ ಭಾವಲೋಕವನ್ನು ಅನಾವರಣಗೊಳಿಸಿತು. ಅನ್ನ ಹಾಕಿದ ಮಾಲೀಕ ಇನ್ನಿಲ್ಲ ಎಂಬ ನೋವು ಬಸ್‌ಗಳ ಸಿಬ್ಬಂದಿಯಲ್ಲಿ ತುಂಬಿರುವುದು ಗೋಚರಿಸುತ್ತಿತ್ತು.